ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | 46 | ಸೆಪ್ಟೆಂಬರ್ 9 ಮಂಗಳವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 143 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಭಾನುವಾರ ರಾತ್ರಿ ಗಣೇಶಮೂರ್ತಿ ಮೆರವಣಿಗೆ ವೇಳೆ ಕಲ್ಲು ತೂರಾಟ ಪ್ರಕರಣ ಖಂಡಿಸಿ ಸೋಮವಾರ ಪ್ರತಿಭಟನಾ ರ್‍ಯಾಲಿ ವೇಳೆಯೂ ಕಲ್ಲು ತೂರಿ, ಬಾವುಟ ಕಿತ್ತೆಸೆದು ಆಕ್ರೋಶ

ಮದ್ದೂರಲ್ಲಿ ಲಾಠಿ ಚಾರ್ಜ್; ಉದ್ವಿಗ್ನ ಪರಿಸ್ಥಿತಿ

● ಪರಿಸ್ಥಿತಿ ನಿಯಂತ್ರಿಸಲು ಪೊಲೀಸರ ಹರಸಾಹಸ ● ಮೂರು ಸಾವಿರಕ್ಕೂ ಅಧಿಕ ಹಿಂದೂಪರ ಕಾರ್ಯಕರ್ತರು ಭಾಗಿ, ● ಬಂಧಿತ 22 ಮಂದಿ ನ್ಯಾಯಾಂಗ ಬಂಧನಕ್ಕೆ ● ಎಡಿಜಿಪಿ ಜಿತೇಂದ್ರ, ಡಿಐಜಿಪಿ ಬೋರಲಿಂಗಯ್ಯ ಸ್ಥಳದಲ್ಲೇ ಮೊಕ್ಕಾಂ ● ಹೋರಾಟದಲ್ಲಿ ಭಾಗಿಯಾದ ಪ್ರತಾಪ್‌ಸಿಂಹ, ನಿಖಿಲ್ ಕುಮಾರಸ್ವಾಮಿ ● ಕಿಡಿಗೇಡಿಗಳ ವಿರುದ್ಧ ಕ್ರಮದ ಭರವಸೆ; ಪ್ರತಿಭಟನೆ ಸ್ಥಗಿತ ● ಇಂದೂ ಮದ್ದೂರು ಬಂದ್‌ಗೆ ಕರೆ; ಸ್ಥಳೀಯ ಶಾಸಕ ಉದಯ್ ಲಂಡನ್ ಪ್ರವಾಸ!



ಸೋಮವಾರ ಉದ್ರಿಕ್ತ ಗುಂಪನ್ನು ಚದುರಿಸಲು ಪೊಲೀಸರು ಲಾಠಿ ಪ್ರಹಾರ ನಡೆಸಿದರು. ಕೆಳಚಿತ್ರದಲ್ಲಿ ಲಾಠಿ ಏಟಿನಿಂದ ಕುಸಿದು ಬಿದ್ದ ಯುವತಿಯ ಆಕ್ರಂದನ.

ಮದ್ದೂರು, ಸೆ.8 (ಮೋಹನ್‌ರಾಜ್)– ಮಂಡ್ಯ ಜಿಲ್ಲೆಯ ಮದ್ದೂರು ನಗರದಲ್ಲಿ ಕಳೆದ ರಾತ್ರಿ ಗಣೇಶಮೂರ್ತಿ ಮೆರವಣಿಗೆ ವೇಳೆ ನಡೆದಿದ್ದ ಕಲ್ಲು ತೂರಾಟ ಖಂಡಿಸಿ, ಇಂದು ನಿಷೇಧಾಜ್ಞೆ ನಡುವೆಯೂ ಹಿಂದೂಪರ ಸಂಘಟನೆಗಳು ಕರೆ ನೀಡಿದ್ದ ಬೃಹತ್ ಪ್ರತಿಭಟನಾ ರ್‍ಯಾಲಿಯ ಸಂದರ್ಭದಲ್ಲಿ ಅನ್ಯ ಧರ್ಮದ ಧಾರ್ಮಿಕ ಕೇಂದ್ರದ ಮೇಲೆ ಕಲ್ಲು ತೂರಾಟ ನಡೆಸಲಾಗಿದ್ದು, ಅಲ್ಲಿದ್ದ ಹಸಿರು ಬಾವುಟ ತೆಗೆದು ಕೇಸರಿ ಬಾವುಟ ಹಾರಿಸಿದ್ದಾರೆ. ಈ ಸಂದರ್ಭಗಳಲ್ಲಿ ಪೊಲೀಸರು ಪರಿಸ್ಥಿತಿ ನಿಯಂತ್ರಿಸಲು ಮೂರ್‍ನಾಲ್ಕು ಬಾರಿ ಲಾಠಿ ಪ್ರಹಾರ ನಡೆಸಿದ್ದು, ಮಹಿಳೆಯರೂ ಸೇರಿ ಹಲವರು ಗಾಯಗೊಂಡಿದ್ದಾರೆ.

ವಿವರ: ನಗರದಾದ್ಯಂತ ನಿಷೇಧಾಜ್ಞೆ ಜಾರಿಯಲ್ಲಿದ್ದರೂ ಲೆಕ್ಕಿಸದ ಸ್ಥಳೀಯ ನಾಗರಿಕರು, ಮಹಿಳೆಯರು ಹಾಗೂ ಹಿಂದೂಪರ ಕಾರ್ಯಕರ್ತರು ಬಂದ್‌ಗೆ ಕರೆ ನೀಡಿದ್ದರು. ನಿನ್ನೆ ಗಣೇಶ ಮೂರ್ತಿ ವಿಸರ್ಜನೆ ವೇಳೆ ಕಲ್ಲು ತೂರಾಟ ನಡೆಸಿದ್ದ ಹಿನ್ನೆಲೆಯಲ್ಲಿ ರಾತ್ರಿಯಿಡೀ ಆಕ್ರೋಶಗೊಂಡಿದ್ದ ಪ್ರತಿಭಟನಾಕಾರರು ಇಂದು ಬೆಳಿಗ್ಗೆ ಪ್ರತಿಭಟನೆಗಿಳಿದರು.

22 ಮಂದಿ ಬಂಧನ: ಸೋಮವಾರ ಬೆಳಗ್ಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಮದ್ದೂರಿಗೆ ಆಗಮಿಸಿ, ಪರಿಸ್ಥಿತಿ ಅವಲೋಕನ ನಡೆಸಿದರು. ಸ್ಥಳೀಯ ತಹಸೀಲ್ದಾರ್ ಇಂದು (ಸೋಮವಾರ) ಬೆಳಗ್ಗೆ 6ಗಂಟೆಯಿಂದ ರಾತ್ರಿ 12 ಗಂಟೆಯವರೆಗೆ ನಿಷೇಧಾಜ್ಞೆ ಜಾರಿಗೊಳಿಸಿದ್ದಾರೆ. ಭಾನುವಾರ ನಡೆದ ಕಲ್ಲು ತೂರಾಟ ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ 25 ರಿಂದ 30 ವರ್ಷ ವಯೋಮಾನದ 22 ಮಂದಿಯನ್ನು ಬಂಧಿಸಿ, ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿ ಅವರನ್ನು ನ್ಯಾಯಾಂಗ ಬಂಧನಕ್ಕೆ ಒಳಪಡಿಸಲಾಗಿದೆ. ಮತ್ತಷ್ಟು ಮಂದಿಯ ಬಂಧನಕ್ಕೆ ಕ್ರಮ ಕೈಗೊಳ್ಳಲಾಗಿದೆ. ■6ನೇ ಪುಟಕ್ಕೆ





ಇಂದೂ ಮದ್ದೂರು ಬಂದ್‌ಗೆ ಕರೆ

ಗಣೇಶ ಮೂರ್ತಿ ಮೆರವಣಿಗೆ ವೇಳೆ ಆದ ಗಲಭೆ ಖಂಡಿಸಿ ಸೋಮವಾರ ಮದ್ದೂರು ಬಂದ್‌ಗೆ ಕರೆ ನೀಡಿದ್ದ ಹಿಂದೂಪರ ಮುಖಂಡರು ಮಂಗಳವಾರವೂ ಮದ್ದೂರು ನಗರ ಬಂದ್‌ಗೆ ಕರೆ ನೀಡಿದ್ದಾರೆ.

ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿರುವ ಹೋರಾಟಗಾರರು, ಮಂಗಳವಾರ ನಗರದ ವಿವಿಧೆಡೆ ಪ್ರತಿಷ್ಠಾಪಿಸಿರುವ ಗಣೇಶ ಮೂರ್ತಿಗಳ ಸಾಮೂಹಿಕ ವಿಸರ್ಜನೆಗೆ ತೀರ್ಮಾನಿಸಿದ್ದು, ಪೊಲೀಸರು ಅನುಮತಿ ನೀಡುವರೇ ಎಂಬುದು ಪ್ರಶ್ನೆಯಾಗಿದ್ದು, ನಾಳೆಯೂ ಸಹ 144 ಸೆಕ್ಷನ್ ಜಾರಿಯಾಗುವ ಸಾಧ್ಯತೆ ಇದೆ.

ಮಂಗಳವಾರವೂ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳ ಮತ್ತಷ್ಟು ನಾಯಕರು ಭೇಟಿ ನೀಡುವ ಸಾಧ್ಯತೆ ಇದ್ದು, ಮದ್ದೂರು ನಗರ ಬೂದಿ ಮುಚ್ಚಿದ ಕೆಂಡದಂತಿದೆ.

ಮಸೀದಿಯೊಳಗೆ ಕಲ್ಲುಗಳು ಹೇಗೆ ಬಂದವು?: ತನಿಖೆಗೆ ಪ್ರತಾಪ್ ಸಿಂಹ ಆಗ್ರಹ

ಗೃಹ ಸಚಿವರು, ಜಿಲ್ಲಾ ಉಸ್ತುವಾರಿ ಸಚಿವರು ಹೊಣೆ ಹೊರಬೇಕು: ನಿಖಿಲ್



ಮದ್ದೂರು, ಸೆ.8– ತಮ್ಮ ಪಾಡಿಗೆ ಯುವಕರು ಗಣೇಶ ಮೂರ್ತಿ ವಿಸರ್ಜನೆ ಮಾಡಲು ಮೆರವಣಿಗೆ ಹೋಗುತ್ತಿದ್ದಾಗ ಮಸೀದಿ ಬಳಿ ಮೆರವಣಿಗೆ ಮೇಲೆ ಕಲ್ಲು ತೂರಾಟ ಮಾಡಲಾಗಿದೆ. ಮಸೀದಿಯೊಳಗೆ ಕಲ್ಲು ಹೇಗೆ ಬಂತು? ತಂದವರು ಯಾರು? ಈ ಬಗ್ಗೆ ಸಮಗ್ರ ತನಿಖೆ ನಡೆಸುವಂತೆ ಸರ್ಕಾರವನ್ನು ಮಾಜಿ ಸಂಸದ ಪ್ರತಾಪ್ ಸಿಂಹ ಒತ್ತಾಯಿಸಿದ್ದಾರೆ.

ನಗರದ ತಾಲೂಕು ಪಂಚಾಯಿತಿಗೆ ಹಿಂದೂಪರ ಕಾರ್ಯಕರ್ತರು ಮುತ್ತಿಗೆ ಹಾಕಿದ್ದ ಸಂದರ್ಭದಲ್ಲಿ ನೆರೆದಿದ್ದ ಜನಸ್ತೋಮವನ್ನುದ್ದೇಶಿಸಿ ಮಾತನಾಡಿದ ಅವರು, ಹೆಣ್ಣು ಮಕ್ಕಳ ಮೇಲೆ ಲಾಠಿ ಪ್ರಹಾರ ಮಾಡಿದವರ ವಿರುದ್ಧ ಕ್ರಮ ಆಗಬೇಕು. ನಮ್ಮ ಹುಡುಗರು ಯಾರೂ ಕಲ್ಲು ಹೊಡೆಯುವ ಸಂಸ್ಕೃತಿಯವರಲ್ಲ. ಆ ಮಸೀದಿಯ ಮುಖ್ಯಸ್ಥನನ್ನು ಬಂಧಿಸಬೇಕು. ಜೊತೆಗೆ ಮಸೀದಿಯನ್ನು ಸೀಜ್ ಮಾಡುವ ಭರವಸೆ ನೀಡಿದರೆ ಪ್ರತಿಭಟನೆ ಕೈಬಿಡುತ್ತೇವೆ ಎಂದರು.

ಸಿದ್ದರಾಮಯ್ಯ ಮೊದಲ ಬಾರಿ ಸಿಎಂ ಆದಾಗ ಚಾಮುಂಡಿಗೆ ಅವಮಾನ ಮಾಡಿದ್ದರು. ಮಹಿಷಾ ದಸರಾ ಮಾಡಲು ಮುಂದಾಗಿದ್ದರು, ಅದನ್ನ ಮೆಟ್ಟಿ ನಿಂತಿದ್ದೇವೆ. ಇದೇ ರೀತಿ ಇಲ್ಲಿಯೂ ಹೋರಾಟಗಳು ಆಗಬೇಕೆಂದು ಒತ್ತಾಯಿಸಿದರು. ಈ ವೇಳೆ ಕರ್ನಾಟಕಕ್ಕೆ ■6ನೇ ಪುಟಕ್ಕೆ


ಗಲಭೆ ಹಿಂದೆ ರಾಜಕೀಯ ಇರಬಹುದು!



ಚಲುವರಾಯಸ್ವಾಮಿ

ಮದ್ದೂರು, ಸೆ.8– ಪಟ್ಟಣದಲ್ಲಿ ಗಣಪತಿ ಮೆರವಣಿಗೆ ವೇಳೆ ನಡೆದ ಕಲ್ಲು ತೂರಾಟ ಹಾಗೂ ಘರ್ಷಣೆ ಸಂಬಂಧ 22 ಮಂದಿಯನ್ನು ಬಂಧಿಸಲಾಗಿದೆ ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದರು. ಇಲ್ಲಿನ ಪ್ರವಾಸಿಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಘಟನೆ ಸಂಬಂಧ ಅಧಿಕಾರಿಗಳಿಂದ ಸಂಪೂರ್ಣ ಮಾಹಿತಿ ಪಡೆಯಲಾಗಿದೆ ಗಣಪತಿ ವಿಸರ್ಜನೆ ಸಂದರ್ಭ ಉಂಟಾಗಿರುವ ಗಲಭೆ ಹಿಂದೆ ರಾಜಕೀಯ ಉದ್ದೇಶವಿರಬಹುದು ಎಂಬ ಸಂಶಯವಿದೆ. ಉದ್ದೇಶಪೂರ್ವಕವಾಗಿ ಘಟನೆ ■6ನೇ ಪುಟಕ್ಕೆ

ಉಪರಾಷ್ಟ್ರಪತಿ ಚುನಾವಣೆ ಇಂದು





ರಾಧಾಕೃಷ್ಣನ್ ಸುದರ್ಶನ್ ರೆಡ್ಡಿ

ನವದೆಹಲಿ, ಸೆ.8– ನಾಳೆ (ಸೆ.9) ಉಪ ರಾಷ್ಟ್ರಪತಿ ಚುನಾವಣೆ ನಡೆಯಲಿದೆ.

ಎನ್‌ಡಿಎ ಅಭ್ಯರ್ಥಿಯಾಗಿ ಸಿ.ಪಿ. ರಾಧಾಕೃಷ್ಣನ್ ಮತ್ತು ವಿಪಕ್ಷಗಳ ಅಭ್ಯರ್ಥಿಯಾಗಿ ಬಿ.ಸುದರ್ಶನ್ ರೆಡ್ಡಿ ಸ್ಪರ್ಧಿಸಿದ್ದಾರೆ. ಸಿ.ಪಿ. ರಾಧಾಕೃಷ್ಣನ್, ರಾಜ್ಯಗಳು ಹಾಗೂ ರಾಜಧಾನಿ ದೆಹಲಿಯಲ್ಲಿ ಮೈತ್ರಿಕೂಟದ ಎಲ್ಲಾ ಸಂಸದರನ್ನು ಭೇಟಿ ಮಾಡುವ ಮೂಲಕ ತಮ್ಮ ಪ್ರಚಾರವನ್ನು ಮುಗಿಸಿದ್ದಾರೆ. ನಾಳೆ ಮತದಾನದಲ್ಲಿ ಯಾವುದೇ ಅಚ್ಚರಿಗಳು ಕಂಡುಬರುವುದಿಲ್ಲ ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ. ಬೆಳಗ್ಗೆ 10 ರಿಂದ ಸಂಜೆ 5ರವರೆಗೆ ಮತದಾನ ನಡೆಯಲಿದ್ದು, ಸಂಜೆ 6 ಗಂಟೆಗೆ ಮತ ಎಣಿಕೆ ಆರಂಭವಾಗಲಿದೆ.

ರಾಜ್ಯದಲ್ಲಿ ಮಳೆಯಿಂದ 550 ಕೋಟಿ ಬೆಳೆ ಹಾನಿ

ಇನ್ನೆರಡು ದಿನದಲ್ಲಿ ರೈತರಿಗೆ ಪರಿಹಾರ: ಮುಖ್ಯಮಂತ್ರಿ ಸಿದ್ದರಾಮಯ್ಯ



ಸಿದ್ದರಾಮಯ್ಯ

ಬೆಂಗಳೂರು, ಸೆ. 8(ಕೆಎಂಶಿ)– ರಾಜ್ಯದಲ್ಲಿ ಬಿದ್ದ ಭಾರಿ ಮಳೆಯಿಂದ 550 ಕೋಟಿ ರೂ. ಬೆಳೆ ನಷ್ಟವಾಗಿದ್ದು, ಇನ್ನೆರಡು ವಾರದಲ್ಲಿ ಬೆಳೆ ಕಳೆದುಕೊಂಡ ರೈತರಿಗೆ ಪರಿಹಾರ ನೀಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಅತಿವೃಷ್ಟಿಯಿಂದ ಉಂಟಾದ ಹಾನಿ ಹಾಗೂ ತೆಗೆದುಕೊಂಡ ಕ್ರಮಗಳ ಬಗ್ಗೆ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೃಷಿ ಮತ್ತು ಕಂದಾಯ ಇಲಾಖಾ ಅಧಿಕಾರಿಗಳು ಜಂಟಿಯಾಗಿ ಸಮೀಕ್ಷೆ ನಡೆಸಿದ್ದಾರೆ.

ಸಮೀಕ್ಷಾ ವರದಿ ಬಂದ ತಕ್ಷಣವೇ ಎನ್‌ಡಿಆರ್‌ಎಫ್ ಮಾರ್ಗಸೂಚಿಯಡಿ ಪರಿಹಾರ ನೀಡಲಾಗುವುದು, ಒಂದು ವೇಳೆ ಹೆಚ್ಚಿನ ಪರಿಹಾರ ನೀಡಬೇಕೆಂದಾದಲ್ಲಿ ಸಂಪುಟ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗುವುದು. ಅಂದಾಜಿನ ಪ್ರಕಾರ 550 ಕೋಟಿ ರೂ.ನಷ್ಟು ಬೆಳೆ ನಷ್ಟ ಆಗಿದೆ, ಇನ್ನು 10 ದಿನಗಳಲ್ಲಿ ಸಮೀಕ್ಷಾ ಕಾರ್ಯ ■6ನೇ ಪುಟಕ್ಕೆ

ಬಿಜೆಪಿಯಿಂದ ಸಮಾಜದ ಸ್ವಾಸ್ಥ್ಯ ಹಾಳು...

ಬೆಂಗಳೂರು, ಸೆ. 8(ಕೆಎಂಶಿ)–ಬಿಜೆಪಿ ಅನವಶ್ಯಕವಾಗಿ ಪ್ರಚೋದನೆ ಮಾಡಿ ಸಮಾಜದ ಸ್ವಾಸ್ಥ್ಯ ಕೆಡಿಸುವುದರಲ್ಲಿ ನಿಸ್ಸೀಮರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ಕಿಡಿಕಾರಿದ್ದಾರೆ. ಮದ್ದೂರು ಘಟನೆಗೆ ಸಂಬಂಧಿಸಿದಂತೆ ಬಿಜೆಪಿ ಮತ್ತು ಜೆಡಿಎಸ್ ಆರೋಪದಲ್ಲಿ ಹುರುಳಿಲ್ಲ. ಅನಗತ್ಯವಾಗಿ ಗುಂಪು ಸೇರಿ ಗಲಾಟೆ ಮಾಡಿಸಲು ಅವರೇ ಹೊರಟಿದ್ದಾರೆ ಎಂದು ದೂರಿದರು. ಗಲಾಟೆ ಮಾಡಿಸುವವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳುತ್ತೇವೆ, ಮದ್ದೂರು ವಿಷಯದಲ್ಲಿ ಪೊಲೀಸರು ಸರಿಯಾಗಿ ನಡೆದುಕೊಂಡಿದ್ದಾರೆ. ಯಾವುದೇ ತಪ್ಪು ಮಾಡಿಲ್ಲ ಎಂದು ಸಮರ್ಥಿಸಿಕೊಂಡರು.

ಮುಸ್ಲೀಮರಾಗಲೀ, ಹಿಂದೂಗಳಾಗಲೀ ತಪ್ಪು ಯಾರೇ ಮಾಡಿದರೂ ತಪ್ಪೆ. ಈಗಾಗಲೇ 21 ಮಂದಿಯನ್ನು ಬಂಧಿಸಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ವರದಿ ನೀಡಿದ ನಂತರ ಯಾವ ತನಿಖೆ ನಡೆಸಬೇಕೆಂಬ ಬಗ್ಗೆ ಸರ್ಕಾರ ತೀರ್ಮಾನ ಕೈಗೊಳ್ಳಲಿದೆ ಎಂದರು.

ನ್ಯಾ. ಪಿ.ಎನ್.ದೇಸಾಯಿ ಆಯೋಗದ ಮುಡಾ ಹಗರಣ ತನಿಖೆ ಅಂತ್ಯ

■ ನ್ಯಾ. ದೇಸಾಯಿ ಆಯೋಗಕ್ಕೆ ಒದಗಿಸಿದ್ದ ಸೌಲಭ್ಯ ವಾಪಸ್ ■ ಕುಮಾರಕೃಪಾ ಅತಿಥಿ ಗೃಹದ ಕಚೇರಿ ತೆರವು ■ ಈ ತನಿಖೆಗೆ ಆದ ವೆಚ್ಚ ಬರೋಬ್ಬರಿ 5 ಕೋಟಿ



ಮೈಸೂರು, ಸೆ.8(ಆರ್‌ಕೆ)– ಈ ಹಿಂದೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಲ್ಲಿ ನಡೆದಿದೆ ಎನ್ನಲಾದ ಅಕ್ರಮವಾಗಿ ನಿವೇಶನ ಮಂಜೂರಾತಿ ಪ್ರಕರಣಕ್ಕೆ ಸಂಬಂಧಿಸಿದ ತನಿಖೆ ಪೂರ್ಣಗೊಂಡಿದ್ದು, ಹಾಗಾಗಿ ನ್ಯಾ. ಪಿ.ಎನ್. ದೇಸಾಯಿ ಆಯೋಗಕ್ಕೆ ಒದಗಿಸಲಾಗಿದ್ದ ಸೌಲಭ್ಯವನ್ನು ಈಗ ವಾಪಸ್ ಪಡೆಯಲಾಗಿದೆ.

ಬೆಂಗಳೂರಿನ ಕುಮಾರ ಕೃಪಾ ಅತಿಥಿ ಗೃಹದಲ್ಲಿ ಕಚೇರಿ ತೆರೆದು ಪ್ರಾಧಿಕಾರದಿಂದ ದೇಸಾಯಿ ಆಯೋಗಕ್ಕೆ ಪ್ರಕರಣದ ತನಿಖೆಗೆ ಅಗತ್ಯವಿದ್ದ ದಾಖಲೆ–ಮಾಹಿತಿಯನ್ನು ಒದಗಿಸಲಾಗಿತ್ತು. ಮುಡಾ ಹಗರಣ ಬಯಲಾಗುತ್ತಿದ್ದಂತೆ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಅವರು 2024ರ ಜುಲೈ 2 ರಂದು ಮೈಸೂರಿಗೆ ವಿಶೇಷ ವಿಮಾನದಲ್ಲಿ ಬಂದು, ತರಾತುರಿಯಲ್ಲಿ ಮುಡಾ ಅಧಿಕಾರಿಗಳೊಂದಿಗೆ ಹಗರಣ ಸಂಬಂಧ ತುರ್ತು ಸಭೆ ನಡೆಸಿದ್ದರು. ಅದೇ ದಿನ ಸಂಜೆ ಅವರು ಬೆಂಗಳೂರಿಗೆ ವಾಪಸ್ಸಾಗುತ್ತಿದ್ದಂತೆ ಮುಡಾ ನಿವೇಶನ ಮಂಜೂರಾತಿ ಹಗರಣ ಸಂಬಂಧ ತನಿಖೆಗೆ ನಿವೃತ್ತ ಹೈಕೋರ್ಟ್ ನ್ಯಾಯಮೂರ್ತಿ ಪಿ.ಎನ್. ದೇಸಾಯಿ ನೇತೃತ್ವದ ಆಯೋಗವನ್ನು ರಚಿಸಿ, ಸರ್ಕಾರ ಆದೇಶ ಹೊರಡಿಸಿತ್ತು.

ತದನಂತರ ಆಯೋಗಕ್ಕೆ ಬೆಂಗಳೂರಿನ ಕುಮಾರ ಕೃಪಾ ಅತಿಥಿ ಗೃಹದಲ್ಲಿ ಕಚೇರಿ ವ್ಯವಸ್ಥೆ ಮಾಡಲಾಗಿತ್ತು ಅಲ್ಲಿಗೇ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಪೀಠೋಪಕರಣ, ಕಂಪ್ಯೂಟರ್–ಲ್ಯಾಪ್‌ಟಾಪ್, ಪ್ರಿಂಟರ್‌ಗಳು ■6ನೇ ಪುಟಕ್ಕೆ

ನಾಳೆಯಿಂದ ದಸರಾ ಮುನ್ನುಡಿ 'ಯುವ ಸಂಭ್ರಮ'; ಸಂಗೀತ, ನೃತ್ಯ ಝೇಂಕಾರ

ಯುವ ಸಂಭ್ರಮದ ಶೀರ್ಷಿಕೆ ಗೀತೆ ಬಿಡುಗಡೆ; ಮೊದಲ ಬಾರಿಗೆ ಉತ್ಸವಕ್ಕೆ ಶೀರ್ಷಿಕೆ ಗೀತೆ ತೋರಣ



ಬಿ.ಎಂ.ಹ್ಯಾಬಿಟ್ಯಾಟ್ ಮಾಲ್‌ನ ಡಿಆರ್‌ಸಿ ಮಲ್ಟಿಪ್ಲೆಕ್ಸ್‌ನ ಸ್ಕ್ರೀನ್ 4ರಲ್ಲಿ ಯುವ ಸಂಭ್ರಮ ಶೀರ್ಷಿಕೆ ಗೀತೆ ಬಿಡುಗಡೆಗೂ ಮುನ್ನ ಗೀತೆಯ ಸಾಹಿತ್ಯ ಇರುವ ಪೋಸ್ಟರ್ ಪ್ರದರ್ಶಿಸಲಾಯಿತು.

ಮೈಸೂರು, ಸೆ.8(ಪಿಎಂ)– ದಸರಾ ಮಹೋತ್ಸವದ ಮುನ್ನುಡಿಯಾದ ಸಾಂಸ್ಕೃತಿಕ ಸಡಗರ 'ಯುವ ಸಂಭ್ರಮ'ಕ್ಕೆ ಕ್ಷಣಗಣನೆ ಆರಂಭವಾಗಿದ್ದು, ಯುವ ಸಂಭ್ರಮ ಉಪಸಮಿತಿ ವತಿಯಿಂದ ಸೋಮವಾರ ಯುವ ಸಂಭ್ರಮದ ಶೀರ್ಷಿಕೆ ಗೀತೆಯನ್ನು ಅಧಿಕೃತವಾಗಿ ಬಿಡುಗಡೆ ಮಾಡಲಾಯಿತು.

ಹತ್ತು–ಹಲವು ವರ್ಷಗಳಿಂದ ದಸರಾ ಮಹೋತ್ಸವದ ಭಾಗವಾಗಿ ಯುವ ಸಮೂಹದ ಪ್ರತಿಭಾನ್ವೇಷಣೆಗೆ ವೇದಿಕೆ ಕಲ್ಪಿಸುತ್ತಿರುವ ಯುವ ಸಂಭ್ರಮಕ್ಕೆ ಇದೇ ಮೊದಲ ಬಾರಿಗೆ ಶೀರ್ಷಿಕೆ ಗೀತೆಯ ಸೊಗಸು ಸೇರ್ಪಡೆಗೊಂಡಿದೆ. ಮೈಸೂರಿನ ಜಯಲಕ್ಷ್ಮೀಪುರಂನ ಬಿ.ಎಂ.ಹ್ಯಾಬಿಟೆಟ್ ಮಾಲ್‌ನಲ್ಲಿರುವ ಡಿಆರ್‌ಸಿ ಮಲ್ಟಿಪ್ಲೆಕ್ಸ್‌ನ ಸ್ಕ್ರೀನ್ 4ರಲ್ಲಿ ಯುವ ಸಂಭ್ರಮದ 'ಹೆಜ್ಜೆ ಜೊತೆ ಹೆಜ್ಜೆ ಸೇರಿದೆ...' ಶೀರ್ಷಿಕೆಯ ಗೀತೆ ಅನಾವರಣಗೊಳಿಸಲಾಯಿತು. ಇಲ್ಲಿನ ಬೆಳ್ಳಿತೆರೆಯಲ್ಲಿ ಎರಡು ಬಾರಿ ಪ್ರದರ್ಶಿಸುವ ಮೂಲಕ ಅಧಿಕೃತವಾಗಿ ಬಿಡುಗಡೆಗೊಳಿಸಲಾಯಿತು.

ಸೋಮಶೇಖರ್ ಜಿಗಣಿ ಮತ್ತು ಮನೋಜ್ ಸೌಗಂದ್ ಅವರ ಸಾಹಿತ್ಯ ಹಾಗೂ ನೀತು ನಿನಾದ ಅವರ ಸಂಗೀತದ ಯುವ ಸಂಭ್ರಮ ಶೀರ್ಷಿಕೆ ಗೀತೆಯು ಖ್ಯಾತ ಗಾಯಕ ವಿಜಯ್ ಪ್ರಕಾಶ್ ಅವರ ಕಂಠಸಿರಿಯಲ್ಲಿ ಮೂಡಿಬಂದಿದೆ. ಇದೊಂದು ವಿಡಿಯೋ ಗೀತೆಯಾಗಿದ್ದು, ವಿಜಯ್ ಪ್ರಕಾಶ್ ಹಾಡುವ ದೃಶ್ಯದೊಂದಿಗೆ ಈ ಹಿಂದಿನ ಯುವ ಸಂಭ್ರಮದ ದೃಶ್ಯ ಗಳನ್ನು ಅಳವಡಿಸಲಾಗಿದೆ. ಮೈಸೂರಿನ ಮಾನಸ ಗಂಗೋತ್ರಿಯ ಬಯಲು ರಂಗಮಂದಿರದಲ್ಲಿ ಯುವ ಸಂಭ್ರಮವು ಸೆ.10ರಿಂದ 18ರವರೆಗೆ ನಡೆಯಲಿದ್ದು, ಪ್ರತಿದಿನ ಸಂಜೆ 4ರಿಂದ ರಾತ್ರಿ 10.30ರವರೆಗೆ ವಿವಿಧ ಕಾಲೇಜು ತಂಡಗಳು ಸಮೂಹ ನೃತ್ಯ ಪ್ರದರ್ಶನ ನೀಡಲಿವೆ. ಈಗಾಗಲೇ ಬಯಲು ರಂಗಮಂದಿರದಲ್ಲಿ ವೇದಿಕೆ ಸಜ್ಜುಗೊಳಿಸುವ ಕಾರ್ಯ ಭರದಿಂದ ಸಾಗಿದ್ದು, ರಂಗಮಂದಿರದ ರಸ್ತೆಯಲ್ಲಿ ವಿದ್ಯುತ್ ದೀಪಾಲಂಕಾರದ ಮೆರುಗು ಈಗಾಗಲೇ ಕಂಗೊಳಿಸುತ್ತಿದೆ.

500 ಕಾಲೇಜು ತಂಡ ಭಾಗಿ: ಶೀರ್ಷಿಕೆ ಗೀತೆ ಬಿಡುಗಡೆ ನಂತರ ಉಪಸಮಿತಿ ಕಾರ್ಯಾಧ್ಯಕ್ಷರೂ ಆದ ಮೈಸೂರು ಉಪ ವಿಭಾಗಾಧಿಕಾರಿ ಆಶಪ್ಪ ಮಾತನಾಡಿ, ರಾಜ್ಯದ ಎಲ್ಲಾ ಜಿಲ್ಲೆಗಳಿಂದ 450ರಿಂದ 500 ಕಾಲೇಜು ತಂಡಗಳು ಭಾಗವಹಿಸಲಿವೆ. ಉಪಸಮಿತಿಯಿಂದ 40ಕ್ಕೂ ಹೆಚ್ಚು ವಿಷಯಗಳನ್ನು ನೀಡಲಾಗಿದೆ. ಅದರನ್ವಯದ ಹಾಡು ಮತ್ತು ಸಂಗೀತಕ್ಕೆ ತಂಡಗಳಿಂದ ಸಾಮೂಹಿಕ ನೃತ್ಯಗಳು ಪ್ರದರ್ಶನಗೊಳ್ಳಲಿವೆ ಎಂದು ತಿಳಿಸಿದರು. ■6ನೇ ಪುಟಕ್ಕೆ



ಯುವ ಸಂಭ್ರಮ ನಡೆಯುವ ಮಾನಸ ಗಂಗೋತ್ರಿಯ ಬಯಲು ರಂಗಮಂದಿರದ ರಸ್ತೆಯು ವಿಶಿಷ್ಟ ವಿದ್ಯುತ್ ದೀಪಾಲಂಕಾರದಿಂದ ಕಂಗೊಳಿಸುತ್ತಿರುವುದು.

ಸನ್ಮಾನ



ಮೈಸೂರಿನ ಭೀಮ ಬಲ ಬಳಗದಿಂದ ನಡೆದ ಅಯ್ಯನ್ ಕಾಳಿಯವರ 162ನೇ ಜನ್ಮದಿನಾಚರಣೆಯಲ್ಲಿ ನಿವೃತ್ತ ಪ್ರಾಧ್ಯಾಪಕರಾದ ಪ್ರೊ.ಮಲ್ಲಿಕಾರ್ಜುನಸ್ವಾಮಿ, ಡಾ.ಕೃಷ್ಣಯ್ಯ ಹಾಗೂ ಚಂದ್ರಮೌಳಿ ಅವರನ್ನು ಸನ್ಮಾನಿಸಲಾಯಿತು.

ಕೈಗಾರಿಕಾ ಉದ್ದೇಶಕ್ಕೆ ವಶಪಡಿಸಿಕೊಂಡ ಭೂಮಿ ಪರಿಹಾರ ವಿತರಣೆಯಲ್ಲಿ ಅಕ್ರಮ; ತನಿಖೆಗೆ ಆಗ್ರಹಿಸಿ ರೈತರ ಪ್ರತಿಭಟನೆ

ಮೈಸೂರು, ಸೆ.8(ಎಂಕೆ)– ನಂಜನಗೂಡು ತಾಲೂಕು ಇಮ್ಮಾವು ಗ್ರಾಮದಲ್ಲಿ ಕೈಗಾರಿಕಾ ಪ್ರದೇಶಾಭಿವೃದ್ಧಿಗಾಗಿ ಭೂಮಿ ನೀಡಿದ ರೈತರಿಗೆ ಎಕ್ಸ್‌ಗ್ರೇಷಿಯಾ (ಅನುಕಂಪದ ಆಧಾರದ ಮೇಲೆ ನೀಡುವ ಪರಿಹಾರ ಹಣ) ಪಾವತಿಸಲು ಬಿಡುಗಡೆ ಮಾಡಿರುವ ಹಣ ವಿತರಣೆಯಲ್ಲಿ ಅಕ್ರಮ ನಡೆದಿರುವ ಕುರಿತ ತನಿಖೆಯನ್ನು ವಿಳಂಬ ಮಾಡುತ್ತಿರುವುದನ್ನು ಖಂಡಿಸಿ ಕರ್ನಾಟಕ ರಾಜ್ಯ ರೈತ ಸಂಘದ ವತಿಯಿಂದ ಸೋಮವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರಿನ ಸಿದ್ಧಾರ್ಥನಗರದಲ್ಲಿರುವ ಜಿಲ್ಲಾಧಿಕಾರಿ ಕಚೇರಿ ಎದುರು ಜಮಾವಣೆಗೊಂಡ ನೂರಾರು ರೈತರು, ಇಮ್ಮಾವು ಗ್ರಾಮದ ಸರ್ವೆ ನಂ.390 ರಿಂದ 430ರವರೆಗಿನ ಭೂಮಿಯಲ್ಲಿ ಸ್ವಾಧೀನದಲ್ಲಿದ್ದ ರೈತರಿಗೆ ಎಕ್ಸ್ ಗ್ರೇಷಿಯಾ ಪಾವತಿಸಲು ಬಿಡುಗಡೆ ಮಾಡಿರುವ ಹಣ ವಿತರಣೆಯಲ್ಲಿ ಅಕ್ರಮ ನಡೆದಿರುವ ಸಂಬಂಧ ತನಿಖೆ ನಡೆಸುವಂತೆ ಕರ್ನಾಟಕ ರಾಜ್ಯ ರೈತ ಸಂಘ 125 ದಿನಗಳಿಂದ ಹೋರಾಟ ನಡೆಸುತ್ತಿದ್ದರೂ ನ್ಯಾಯ ದೊರಕಿಲ್ಲ ಎಂದು ಕಿಡಿಕಾರಿದರು.

ಸಮಗ್ರ ತನಿಖೆ ನಡೆಸಿ ವರದಿ ಸಲ್ಲಿಸಲು ತನಿಖಾಧಿಕಾರಿಗಳನ್ನು ನೇಮಿಸಿ ಎರಡು ತಿಂಗಳಾದರೂ ವರದಿ ಸಲ್ಲಿಕೆಯಾಗಿಲ್ಲ. ಅಕ್ರಮ ವ್ಯವಹಾರದಲ್ಲಿ ನಂಜನಗೂಡು ತಾಲೂಕು ತಹಸೀಲ್ದಾರ್ ಭಾಗಿಯಾಗಿರುವ ಬಗ್ಗೆ ಮೇಲ್ನೋಟಕ್ಕೆ ಕಂಡುಬಂದಿದ್ದರೂ ಅವರ ವಿರುದ್ಧ ಇದುವರೆವಿಗೂ ಯಾವುದೇ ಕ್ರಮವನ್ನು ಕೈಗೊಂಡಿರುವುದಿಲ್ಲ ಎಂದು ತೀವ್ರ ಅಸಮಾಧಾನ ಹೊರಹಾಕಿದರು.

ತನಿಖೆ ಚುರುಕುಗೊಳಿಸಿ, ತನಿಖಾ ವರದಿಯನ್ನು ಸಾರ್ವಜನಿಕವಾಗಿ ಬಿಡುಗಡೆ ಮಾಡಬೇಕು. ಭೂಮಿ ನೀಡಿದ ರೈತರಿಗೆ ಪರಿಹಾರ ಮತ್ತು ಖಾಯಂ ಹುದ್ದೆ ನೀಡಬೇಕು. ಕೂಡಲೇ ಅಕ್ರಮದಲ್ಲಿ ಭಾಗಿಯಾಗಿರುವ ನಂಜನಗೂಡು ತಹಸೀಲ್ದಾರ್ ಅವರನ್ನು ಅಮಾನತು ಮಾಡಬೇಕು ಎಂದು ಆಗ್ರಹಿಸಿ, ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಕರ್ನಾಟಕ ರಾಜ್ಯ ರೈತ ಸಂಘದ ವಿಭಾಗೀಯ ಸಂಘಟನಾ ಕಾರ್ಯದರ್ಶಿ ಹೊಸಕೋಟೆ ಬಸವರಾಜು, ಪ್ರಧಾನ ಕಾರ್ಯದರ್ಶಿ ಪಿ.ಮರಂಕಯ್ಯ, ಉಗ್ರನರಸಿಂಹೇಗೌಡ, ಕರುಣಾಕರನ್, ಪ್ರೇಮತಾಜು, ನಾಗಹಳ್ಳಿ ವಿಜೇಂದ್ರ, ಆನಂದೂರು ಪ್ರಭಾಕರ್, ರಾಜಣ್ಣ, ರವಿ, ದೊರೆಸ್ವಾಮಿ, ರಾಘವೇಂದ್ರ, ಚಂದ್ರಶೇಖರ್ ಮತ್ತಿತರರು ಹಾಜರಿದ್ದರು.



ಕರ್ನಾಟಕ ರಾಜ್ಯ ರೈತ ಸಂಘದ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಸೋಮವಾರ ಪ್ರತಿಭಟನೆ ನಡೆಸಲಾಯಿತು.

ನಗರ ಸಂಕೀರ್ತನೆ, ನಕ್ಷತ್ರ ಹೋಮದೊಂದಿಗೆ 64ನೇ ಪಾರಂಪರಿಕ ಸಂಗೀತೋತ್ಸವಕ್ಕೆ ತೆರೆ

ಮೈಸೂರು, ಸೆ. 8–ಮೈಸೂರಿನ ವಿ.ವಿ. ಮೊಹಲ್ಲಾ ಎಂಟನೇ ಕ್ರಾಸಿನ ಎಸ್‌ಪಿವಿಜಿಎಂಸಿ ಟ್ರಸ್ಟ್ ವತಿಯಿಂದ ಕಳೆದ ಹನ್ನೆರಡು ದಿನಗಳಿಂದ ನಡೆಯುತ್ತಿದ್ದ 64ನೇ ಪಾರಂಪರಿಕ ಸಂಗೀತೋತ್ಸವಕ್ಕೆ ಸೋಮವಾರ ತೆರೆಬಿದ್ದಿತು.

ರಘುಲೀಲಾ ಸಂಗೀತ ಮಂದಿರದ ಸುನೀತಾ ಚಂದ್ರಕುಮಾರ್ ನೇತೃತ್ವದಲ್ಲಿ ನಗರ ಸಂಕೀರ್ತನೆ, ವೇದ ವಿದ್ವಾಂಸರಾದ ಚೆಳ್ಳಕೆರೆ ಸಹೋದರರ ನೇತೃತ್ವದಲ್ಲಿ ನಕ್ಷತ್ರ ಹೋಮ, ಪೂರ್ಣಾಹುತಿ, ಮಹಾಮಂಗಳಾರತಿ ನೆರವೇರಿತು. ನಂತರ ಎಲ್ಲರಿಗೂ ಪ್ರಸಾದ ವಿನಿಯೋಗಿಸಲಾಯಿತು.

ಟ್ರಸ್ಟ್ ಅಧ್ಯಕ್ಷ ಎಂ.ಜಗನ್ನಾಥ ಶೆಣೈ, ಉಪಾಧ್ಯಕ್ಷ ಟಿ.ಎಸ್.ವೇಣುಗೋಪಾಲ್, ಕಾರ್ಯದರ್ಶಿ ಸಿ.ಆರ್.ಹಿಮಾಂಶು, ಖಜಾಂಚಿ ಆರ್.ಗುರುರಾಜ್, ಟ್ರಸ್ಟಿಗಳಾದ ಶೈಲಜಾ, ಅಮರೇಶ ದಾಸ್, ಎಂ.ಕೆ.ಶ್ರೀಧರ್, ವಸಂತ್, ಸಿ. ಚಲುವರಾಜ್ ಮೊದಲಾದವರು ಇದ್ದರು.

ಕಳೆದ ಹನ್ನೆರಡು ದಿನಗಳಿಂದ ಹಲವಾರು ಖ್ಯಾತನಾಮರು ಪ್ರತಿದಿನ ಸಂಜೆ ಸಂಗೀತ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಪ್ರಾಯೋಜಕತ್ವ ಇತ್ತು. ಈ ಟ್ರಸ್ಟ್ ಕಳೆದ 63 ವರ್ಷಗಳಿಂದಲೂ ಪಾರಂಪರಿಕ ಸಂಗೀತೋತ್ಸವವನ್ನು ನಡೆಸಿಕೊಂಡು ಬರುತ್ತಿರುವ ಹೆಗ್ಗಳಿಕೆ ಹೊಂದಿದೆ.

ಮೈಸೂರು ದಸರಾಗೆ ಆಹ್ವಾನ...



ವಿಶ್ವ ವಿಖ್ಯಾತ ನಾಡಹಬ್ಬ ಮೈಸೂರು ದಸರಾ ಮಹೋತ್ಸವಕ್ಕೆ ವಿಧಾನಪರಿಷತ್ ಸದಸ್ಯ ಕೆ.ವಿವೇಕಾನಂದ ಅವರಿಗೆ ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಶ್ರೀಮತಿ ರೂಪಾ ಅಧಿಕೃತ ಆಹ್ವಾನ ನೀಡಿದರು.


ನಾಳೆ ಯುವ ಸಂಭ್ರಮ ಉದ್ಘಾಟನೆ

ವಿಶೇಷ ಆಹ್ವಾನಿತರಾಗಿ ನಟ ಯುವ ರಾಜ್‌ಕುಮಾರ್, ನಟಿ ಅಮೃತಾ ಅಯ್ಯಂಗಾರ್ ಭಾಗಿ

ಮೈಸೂರು,ಸೆ.8–ಮೈಸೂರು ದಸರಾ ಮಹೋತ್ಸವ–2025ರ ಯುವ ಸಂಭ್ರಮ ಉಪ ಸಮಿತಿ ವತಿಯಿಂದ ಸೆ.10ರಿಂದ 17ರವರೆಗೆ ಸಂಜೆ 4 ಗಂಟೆಗೆ ಮಾನಸ ಗಂಗೋತ್ರಿಯ ಬಯಲು ರಂಗಮಂದಿರದಲ್ಲಿ ಯುವ ಸಂಭ್ರಮ ಕಾರ್ಯಕ್ರಮ ಆಯೋಜಿಸಲಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಸೆ.10 ರಂದು ಸಂಜೆ 4 ಗಂಟೆಗೆ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ವಿಶೇಷ ವಿಶೇಷ ಆಹ್ವಾನಿತರಾಗಿ ನಟ ಯುವ ರಾಜ್‌ಕುಮಾರ್, ನಟಿ ಅಮೃತಾ ಅಯ್ಯಂಗಾರ್ ಭಾಗವಹಿಸಲಿದ್ದಾರೆ.

ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ ಅಧ್ಯಕ್ಷತೆ ವಹಿಸಲಿದ್ದಾರೆ. ಪಶು ಸಂಗೋಪನೆ ಮತ್ತು ರೇಷ್ಮೆ ಇಲಾಖೆ ಸಚಿವ ಕೆ.ವೆಂಕಟೇಶ್, ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ–ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ಸಂಗಪ್ಪ ತಂಗಡಗಿ, ಶಾಸಕರಾದ ಅನಿಲ್‌ಕುಮಾರ್, ಸಿ.ಪುಟ್ಟರಂಗಶೆಟ್ಟಿ, ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತದ ಅಧ್ಯಕ್ಷ ಎ.ಬಿ.ರಮೇಶ್ ಬಂಡಿಸಿದ್ದೇಗೌಡ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಡಾ.ಪುಷ್ಪ ಅಮರನಾಥ್ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ.ಮಾನಸ ಗೌರವ ಉಪಸ್ಥಿತರಿರಲಿದ್ದಾರೆ.





ನಟ ಯುವ ರಾಜ್‌ಕುಮಾರ್ ನಟಿ ಅಮೃತಾ ಅಯ್ಯಂಗಾರ್

ವಾಲಿಬಾಲ್ ಪಂದ್ಯಾವಳಿ...



ಶಾಲಾ ಶಿಕ್ಷಣ ಇಲಾಖೆ ಮೈಸೂರು ಉತ್ತರ ವಲಯದಲ್ಲಿ ಆಯೋಜಿಸಿದ್ದ ನಾಗರಹೊಳೆ ವಲಯದ ಬಾಲಕಿಯರ ವಿಭಾಗದ ವಾಲಿಬಾಲ್ ಪಂದ್ಯಾವಳಿಯಲ್ಲಿ ಬೃಂದಾವನ ಪ್ರೌಢಶಾಲೆ ಬಾಲಕಿಯರ ವಿಭಾಗದಲ್ಲಿ ಪ್ರಥಮ ಮತ್ತು ಬಾಲಕರ ವಿಭಾಗದ ವಾಲಿಬಾಲ್‌ನಲ್ಲಿ ದ್ವಿತೀಯ ಸ್ಥಾನ ಗಳಿಸಿದೆ. ತಂಡಗಳೊಂದಿಗೆ ಸಂಸ್ಥೆ ಕಾರ್ಯದರ್ಶಿ ಶಿವಸುಂದರ ಸತ್ಯೇಂದ್ರ, ಟ್ರಸ್ಟಿ ರಮೇಶ್, ಬಾಲಕಿಯರ ತಂಡದ ಮೇಲ್ವಿಚಾರಕಿ ಶ್ರೀಮತಿ ಚಿಂತಾಮಣಿ, ಉತ್ತರ ವಲಯದ ಸಹ ಶಿಕ್ಷಕ ಸಂಘದ ಅಧ್ಯಕ್ಷ ಟಿ.ಎಸ್.ಗೋಪಿನಾಥ್, ದೈಹಿಕ ಶಿಕ್ಷಣ ಶಿಕ್ಷಕ ವೇಣುಗೋಪಾಲ್, ತಂಡದ ಮೇಲ್ವಿಚಾರಕ ಶಂಕರಾನಂದ ನಾಯ್ಕ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರು ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ

ಮೈಸೂರು,ಸೆ.8–2025–26ನೇ ಸಾಲಿನ ಮೈಸೂರು ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟವನ್ನು ಸೆ.10, 11ರಂದು ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ನಡೆಸಲಾಗುವುದು. ಮೈಸೂರು ಜಿಲ್ಲೆಯ 9 ತಾಲೂಕುಗಳಲ್ಲಿ ನಡೆದ ತಾಲೂಕು ಮಟ್ಟದ ದಸರಾ ಕ್ರೀಡಾಕೂಟದ ವೈಯಕ್ತಿಕ ಸ್ಪರ್ಧೆಯಲ್ಲಿ ಭಾಗವಹಿಸಿ ಪ್ರಥಮ ಮತ್ತು ದ್ವಿತೀಯ ಸ್ಥಾನ, ಗುಂಪು ಕ್ರೀಡೆಗಳಲ್ಲಿ ಪ್ರಥಮ ಸ್ಥಾನ ಪಡೆದವರು ಮೈಸೂರು ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸಲು ಅರ್ಹರಾಗಿರುತ್ತಾರೆ.

ಪುರುಷರ ಅಥ್ಲೆಟಿಕ್ಸ್: 100 ಮೀ, 200 ಮೀ, 400 ಮೀ, 800 ಮೀ, 1500 ಮೀ, 5000 ಮೀ. ಓಟ, 10000 ಮೀ. ಓಟ, ಉದ್ದ ಜಿಗಿತ, ಎತ್ತರ ಜಿಗಿತ, ಗುಂಡು ಎಸೆತ, ಟ್ರಿಪಲ್ ಜಂಪ್, ಜಾವಲೀನ್ ಥ್ರೋ, ಡಿಸ್ಕಸ್ ಥ್ರೋ, 110 ಮೀ. ಹರ್ಡಲ್ಸ್, 4x100 ಮೀ. ರಿಲೇ, 4x400 ಮೀ ರಿಲೇ ಇರುತ್ತದೆ.

ಮಹಿಳೆಯರ ಅಥ್ಲೆಟಿಕ್ಸ್: 100 ಮೀ, 200 ಮೀ, 400 ಮೀ, 800 ಮೀ, 1500 ಮೀ, 3000 ಮೀ. ಓಟ, ಉದ್ದ ಜಿಗಿತ, ಎತ್ತರ ಜಿಗಿತ, ಗುಂಡು ಎಸೆತ, ಟ್ರಿಪಲ್ ಜಂಪ್, ಜಾವಲೀನ್ ಥ್ರೋ, ಡಿಸ್ಕಸ್ ಥ್ರೋ, 100 ಮೀ. ಹರ್ಡಲ್ಸ್, 4x100 ಮೀ. ರಿಲೇ, 4x400 ಮೀ. ರಿಲೇ ಇರುತ್ತದೆ.

ವಾಲಿಬಾಲ್, ಫುಟ್ಬಾಲ್, ಖೋ–ಖೋ, ಕಬಡ್ಡಿ, ಬಾಸ್ಕೆಟ್ ಬಾಲ್, ಕುಸ್ತಿ, ಬ್ಯಾಡ್ಮಿಂಟನ್, ಹಾಕಿ, ಹ್ಯಾಂಡ್ ಬಾಲ್, ಟೇಬಲ್ ಟೆನ್ನಿಸ್, ಥ್ರೋಬಾಲ್, ಬಾಲ್ ಬ್ಯಾಡ್ಮಿಂಟನ್ ಇರುತ್ತದೆ. ಯೋಗಾಸನ (ಪಾದ ಹಸ್ತಾಸನ, ಅರ್ಕಣ ಧನುರಾಸನ, ಊರ್ಧ್ವ ಧನುರಾಸನ, ಅರ್ಧ ಮತ್ಸ್ಯೇಂದ್ರಾಸನ) ವನ್ನು ಜಿಲ್ಲಾ ಮಟ್ಟದಲ್ಲಿ ಆಯ್ಕೆ ಮಾಡಲಾಗುತ್ತಿರುವ ಕ್ರೀಡೆಗಳ ವಿವರ ಟೆನ್ನಿಸ್ ಹಾಗೂ ನೆಟ್ ಬಾಲ್ ಈಜು (ಪುರುಷರು, ಮಹಿಳೆಯರು) 100, 200, 400 ಮೀ. ಫ್ರೀ ಸ್ಟೈಲ್, 100, 200 ಮೀ. ಬ್ಯಾಕ್ ಸ್ಟ್ರೋಕ್, 100, 200 ಮೀ. ಬ್ರೆಸ್ಟ್ ಸ್ಟ್ರೋಕ್, 100 ಮೀ. ಬಟರ್ ಫ್ಲೈ, 200 ಮೀ. ಇಂಡಿವಿಜುಯಲ್ ಮಿಡ್ಲೆ, 4 x100 ಮೀ. ಫ್ರೀ ಸ್ಟೈಲ್ ರಿಲೇ ನಡೆಸಲಾಗುತ್ತದೆ. ಮಾಹಿತಿಗೆ ದೂ. 0821–2564179.

ಶ್ರೀ ರಾಮಾನುಜ ಅಭ್ಯುದಯ ಸಹಕಾರ ಸಂಘದ ಸರ್ವ ಸದಸ್ಯರ ಸಭೆ



ಶ್ರೀ ರಾಮಾನುಜ ಅಭ್ಯುದಯ ಸಹಕಾರ ಸಂಘದ 7ನೇ ಸರ್ವ ಸದಸ್ಯರ ಮಹಾಸಭೆಯು ಅಧ್ಯಕ್ಷ ಎಚ್.ಕೆ.ರಾಜಗೋಪಾಲನ್ ಅಧ್ಯಕ್ಷತೆಯಲ್ಲಿ ಸರಸ್ವತಿಪುರಂನಲ್ಲಿರುವ ರೋಟರಿ ಮೈಸೂರು ವೆಸ್ಟ್ ಸಭಾಂಗಣದಲ್ಲಿ ನಡೆಯಿತು. ಈ ವೇಳೆ ಸಂಘದ ಹಿರಿಯ ಸದಸ್ಯರನ್ನು ಗೌರವಿಸಲಾಯಿತು. ಸಂಘದ ನಿರ್ದೇಶಕರಾದ ರಾಮಸ್ವಾಮಿ, ಪುಟ್ಟಸ್ವಾಮಿ, ಕೆ.ಆರ್.ಯೋಗನರಸಿಂಹನ್, ಶ್ರೀನಿವಾಸ್ ಪ್ರಸಾದ್, ಯತಿರಾಜ್ ಸಂಪತ್‌ಕುಮಾರನ್, ಅರುಣ್, ಕೇಶವಮೂರ್ತಿ, ಅನಂತ ಕೃಷ್ಣ, ಚಕ್ರಪಾಣಿ, ಕೆ.ಎಸ್.ಆಂಡಾಳ್, ಅನುರಾಧ, ಶಾಂತರಾಮ್, ಕಾರ್ಯದರ್ಶಿ ಮಹಾಲಕ್ಷ್ಮಿ, ಕೇಶವ್ ಉಪಸ್ಥಿತರಿದ್ದರು.

ಮೈಸೂರಿನ ಒಡನಾಡಿ ಸಂಸ್ಥೆಗೆ ರಾಜ್ಯ ಗುಪ್ತಚರ ಅಧಿಕಾರಿಗಳು ಭೇಟಿ

ಮೂರು ವರ್ಷದ ಆಡಿಟ್ ವರದಿ ಸಂಗ್ರಹ

ಮೈಸೂರು,ಸೆ.8(ಬಿಎಲ್‌ಯು)– ಮೈಸೂರಿನ ಒಡನಾಡಿ ಸೇವಾ ಸಂಸ್ಥೆಯಿಂದ ರಾಜ್ಯ ಗುಪ್ತಚರ ಇಲಾಖೆ ಅಧಿಕಾರಿಗಳು ಲೆಕ್ಕಪತ್ರದ ಮಾಹಿತಿ ಪಡೆದಿದ್ದಾರೆ.

ನಗರದ ಒಡನಾಡಿ ಸೇವಾ ಸಂಸ್ಥೆಗೆ ಶನಿವಾರ ಭೇಟಿ ನೀಡಿದ್ದ ರಾಜ್ಯ ಗುಪ್ತಚರ ಇಲಾಖೆ ಅಧಿಕಾರಿಗಳು, 3 ವರ್ಷದ ಆಡಿಟ್ ವಿವರ ಕೇಳಿದ್ದಾರೆ. ಒಡನಾಡಿ ಸಂಸ್ಥೆ ಸಂಸ್ಥಾಪಕರಾದ ಪರಶು ಹಾಗೂ ಸ್ಟ್ಯಾನ್ಲಿ, ಸಂಸ್ಥೆಯ 3 ವರ್ಷದ ಲೆಕ್ಕಪತ್ರದ ಸಂಪೂರ್ಣ ಮಾಹಿತಿಯನ್ನು ಗುಪ್ತಚರ ಇಲಾಖೆಗೆ ನೀಡಿದ್ದಾರೆ.

ಈ ಸಂಬಂಧ 'ಮೈಸೂರು ಮಿತ್ರ'ಗೆ ಪತ್ರಿಕ್ರಿಯೆ ನೀಡಿದ ಸ್ಟ್ಯಾನ್ಲಿ, ರಾಜ್ಯ ಗುಪ್ತಚರ ಇಲಾಖೆಯವರು ನಮಗೆ ಯಾವುದೇ ನೋಟಿಸ್ ನೀಡಿರಲಿಲ್ಲ. ದಿಢೀರನೆ ಬಂದು ಆಡಿಟ್ ವರದಿ ನೀಡುವಂತೆ ಕೇಳಿದರು. ಸಂಸ್ಥೆಗೆ ಸಂಬಂಧಿಸಿದ ಮೂರು ವರ್ಷದ ಲೆಕ್ಕಪತ್ರವನ್ನು ಅವರಿಗೆ ನೀಡಿದ್ದೇವೆ ಎಂದರು. ಧರ್ಮಸ್ಥಳದ ಬುರುಡೆ ಪ್ರಕರಣದಲ್ಲಿ ಸಾಕ್ಷಿ ಹೇಳಿರುವ ಮಂಡ್ಯದ ಕೆಂಪಮ್ಮ ಬಗ್ಗೆ ಕೂಡ ಮಾಹಿತಿ ಕೇಳಿದರು. ನಮಗೆ ತಿಳಿದಿರುವಷ್ಟು ವಿವರ ನೀಡಿದ್ದೇವೆ ಎಂದು ಸ್ಟ್ಯಾನ್ಲಿ ತಿಳಿಸಿದರು.

ಭಗೀರಥ ವಿಜಯ ಯಕ್ಷಗಾನ ಪ್ರದರ್ಶನ



ಮೈಸೂರು, ಸೆ.8–ನಗರದ ಹೊರವಲಯದ ಗದ್ದಿಗೆ ರಸ್ತೆಯಲ್ಲಿರುವ (ಬೋಗಾದಿ 9ನೇ ಕಿಮೀ) ಕೆ.ಹೆಮ್ಮನಹಳ್ಳಿ ಶ್ರೀ ಮಹಾಲಿಂಗೇಶ್ವರ ದೇವಾಲಯದಲ್ಲಿ ಶುಕ್ರವಾರ ಸೆಪ್ಟೆಂಬರ್ 5ರಂದು ಭಗೀರಥ ವಿಜಯ ಯಕ್ಷಗಾನ ಬಯಲಾಟ ಪ್ರದರ್ಶನ ನಡೆಯಿತು. ನೂರಾರು ಯಕ್ಷ ಪ್ರೇಮಿಗಳು, ಈ ಪ್ರದರ್ಶನವನ್ನು ಆಸ್ವಾದಿಸಿದರು.

ಸಂಜೆ 6 ಗಂಟೆಗೆ ಆರಂಭವಾದ ಯಕ್ಷಗಾನ, ರಾತ್ರಿ 11ಕ್ಕೆ ಮಂಗಲಗೊಂಡಿತು. ಹೊರಗೆ ತುಂತುರು ಮಳೆ, ಒಳಗೆ ಚೆಂಡೆ, ಮದ್ದಳೆ, ಭಾಗವತಿಕೆಯ ಅಬ್ಬರ–ಯಕ್ಷ ಪಾತ್ರಗಳು ಸೃಷ್ಟಿಸಿದ ನವರಸಗಳ ರಸದೌತಣ ನೋಡುಗರ ಮನಸೂರೆಗೊಂಡಿತು.

ದಕ್ಷಿಣ ಕನ್ನಡ ಜಿಲ್ಲೆಯ ಸುಪ್ರಸಿದ್ಧ ಶ್ರೀ ಧರ್ಮಸ್ಥಳ, ಕಟೀಲು ಹನುಮಗಿರಿಯ ಜನಪ್ರಿಯ ಕಲಾವಿದರ ತಂಡವನ್ನು ಒಳಗೊಂಡ ಶ್ರೀ ಮಹಾಗಣಪತಿ ಯಕ್ಷಗಾನ ಮಂಡಳಿ ನಿಡ್ಲೆ, ಧರ್ಮಸ್ಥಳ ಇವರು ಯಕ್ಷಗಾನ ಪ್ರದರ್ಶಿಸಿದರು. ಸಂಚಾಲಕರಾದ ಎಂ. ಗಣೇಶ ಹಾಗೂ ಅನಂತವರ್ಧನ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ನಿಧನ

ಕೆಳಪಂಡ ಬೊಳ್ಳಮ್ಮ ದೇವಯ್ಯ



ಮೈಸೂರು, ಸೆ. 8–ಮೈಸೂರಿನ ರಾಮಕೃಷ್ಣನಗರ ಐ ಬ್ಲಾಕ್ ನಿವಾಸಿ ದಿವಂಗತ ದೇವಯ್ಯ ಅವರ ಪತ್ನಿ ಕೆಳಪಂಡ ಬೊಳ್ಳಮ್ಮ ದೇವಯ್ಯ (88–ಇಟ್ಟೀರಾ) ಸೋಮವಾರ ಮಧ್ಯಾಹ್ನ ನಿಧನರಾದರು. ಮೃತರು ಸತೀಶ್ ದೇವಯ್ಯ, ಕಳಪಂಡ ಸ್ವಾತಿ ರಮೇಶ್, ಕಂಬೇರಂಡ ಶೀಲಾ ಬೋಪಯ್ಯ, ಆಶಾ ದೇವಯ್ಯ ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ಅಂತ್ಯಕ್ರಿಯೆ ಗೋಕುಲಂ ರುದ್ರಭೂಮಿಯಲ್ಲಿ ನಾಳೆ (ಸೆ.9) ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಬಿ.ಎಸ್.ನಾಗರಾಜರಾವ್

ಮೈಸೂರಿನ ದಟ್ಟಗಳ್ಳಿ ನಿವಾಸಿ ಹಾಗೂ ಎಂಎಫ್‌ಎಚ್‌ಓನ ನಿವೃತ್ತ ಅಧಿಕಾರಿ ಬಿ.ಎಸ್.ನಾಗರಾಜರಾವ್ (76) ಅವರು ಅನಾರೋಗ್ಯದಿಂದ ಭಾನುವಾರ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ಅಂತ್ಯಕ್ರಿಯೆ ಚಾಮುಂಡಿಬೆಟ್ಟ ತಪ್ಪಲಿನ ರುದ್ರಭೂಮಿಯಲ್ಲಿ ಸೋಮವಾರ ನೆರವೇರಿತು ಎಂದು ಕುಟುಂಬ ಮೂಲಗಳು ತಿಳಿಸಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

09.09.2025 ಮಂಗಳವಾರ, ಮಳೆ ನಕ್ಷತ್ರ: ಪುಬ್ಬ 31.08.2025 ರಿಂದ 13.09.2025
ವಿಶ್ವವಸು ನಾಮ ಸಂವತ್ಸರ, ದಕ್ಷಿಣಾಯಣ, ವರ್ಷ ಋತು, ಭಾದ್ರಪದ ಮಾಸ, ಶುಕ್ಲ ಪಕ್ಷ,
ತಿಥಿ: ಬಿದಿಗೆ, ನಕ್ಷತ್ರ: ಉತ್ತರಾಭಾದ್ರ, ರಾಹುಕಾಲ: ಮಧ್ಯಾಹ್ನ 3ರಿಂದ 4.30ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಗುದಗತ ರೋಗಗಳಾದ ಪೈಲ್ಸ್, ಮೂಲವ್ಯಾಧಿ, ಫಿಸ್ಟೂಲಾ/ಭಗಂದರ, ನಾಡಿವ್ರಣ, ಫಿಸರ್ ಮತ್ತು ಯಕೃತ್ತಿನ ಸಮಸ್ಯೆಗಳಿಗೆ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ರಿಂದ.

■ **ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರ :** ಅಂತರರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಗ್ರಂಥಿಶಾಸ್ತ್ರ ಮತ್ತು ಯೋಗ ಕುರಿತು ರಾಷ್ಟ್ರೀಯ ವಿಚಾರ ಸಂಕಿರಣ, ಉದ್ಘಾಟನೆ : ಆಯುಷ್ ಆಯುಕ್ತ ವಿಪಿನ್ ಸಿಂಗ್, ಗೌರವ ಅತಿಥಿಗಳು : ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆ ನಿವೃತ್ತ ನಿರ್ದೇಶಕರಾದ ಪದ್ಮಶ್ರೀ ಡಾ. ವಿಜಯಲಕ್ಷ್ಮಿ ದೇಶಮಾನೆ, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಅಧ್ಯಕ್ಷತೆ : ಎಂಎಂಸಿ ಮತ್ತು ಆರ್‌ಐ ಡೀನ್ ಮತ್ತು ನಿರ್ದೇಶಕರಾದ ಡಾ. ಕೆ.ಆರ್. ದಾಕ್ಷಾಯಿಣಿ, ಸ್ಥಳ: ಮಿಲೇನಿಯಮ್ ಪ್ಲಾಟಿನಂ ಸಭಾಂಗಣ, ಜೆ.ಕೆ. ಮೈದಾನ, ಬೆಳಗ್ಗೆ 9.30ಕ್ಕೆ.

■ **ಕಾವೇರಿ ಆಯುರ್ವೇದ ಆಸ್ಪತ್ರೆ:** ಯುವಕರ ಮಾನಸಿಕ ಆರೋಗ್ಯ ಜಾಗೃತಿ, ಗರ್ಭ ಸಂಸ್ಕಾರ, ನರುಳಿ ಮತ್ತು ಸೊಂಟ ನೋವಿಗೆ ಉಚಿತ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10ರಿಂದ.

■ **ಕೃಷ್ಣಮೂರ್ತಿಪುರಂ 1ನೇ ಮುಖ್ಯ ರಸ್ತೆ, 4ನೇ ಅಡ್ಡರಸ್ತೆಯಲ್ಲಿರುವ ಕಟ್ಟೆ ಬಳಗ :** 10ನೇ ವರ್ಷದ ಗಣೇಶೋತ್ಸವ ಬೆಳಿಗ್ಗೆ 10 ಗಂಟೆಗೆ ಶ್ರೀ ಮಹಾಗಣಪತಿ ಮೂರ್ತಿ ಪ್ರತಿಷ್ಠಾಪನೆ, ಸಂಜೆ 5.30ಕ್ಕೆ ಮಕ್ಕಳಿಗೆ ಮತ್ತು ಮಹಿಳೆಯರಿಗೆ ಕ್ರೀಡಾ ಸ್ಪರ್ಧೆ, ಸ್ಥಳ: ಕೃಷ್ಣಮೂರ್ತಿಪುರಂ.

■ **ರಾಮಸನ್ಸ್ ಬೊಂಬೆ ಮನೆ:** ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10 ರಿಂದ.

■ **ಮಹಾಜನ ಪ್ರಥಮ ದರ್ಜೆ ಕಾಲೇಜು :** ವಿದ್ಯಾರ್ಥಿ ಸಂಸತ್ ಮತ್ತು ಪ್ರತಿಭಾ ವೇದಿಕೆ ಉದ್ಘಾಟನೆ, ಉದ್ಘಾಟನೆ : ಚಲನಚಿತ್ರ ನಿರ್ದೇಶಕ ಟಿ.ಎಸ್. ನಾಗಾಭರಣ, ಅಧ್ಯಕ್ಷತೆ : ಮಹಾಜನ ಶಿಕ್ಷಣ ಸಂಸ್ಥೆ ಅಧ್ಯಕ್ಷ ಟಿ. ಮುರಳೀಧರ ಭಾಗವತ್, ಉಪಸ್ಥಿತರು : ಕಾರ್ಯದರ್ಶಿ ಡಾ. ಟಿ. ವಿಜಯಲಕ್ಷ್ಮಿ ಮುರಳೀಧರ್, ನಿರ್ದೇಶಕ ಡಾ. ಸಿ.ಕೆ. ರೇಣುಕಾರ್ಯ, ಕಾರ್ಯ ನಿರ್ವಾಹಕ ಅಧಿಕಾರಿ ಡಾ. ಎಸ್.ಆರ್. ರಮೇಶ್, ಪ್ರಿನ್ಸಿಪಾಲ್ ಡಾ. ಬಿ.ಆರ್. ಜಯಕುಮಾರಿ, ಸಂಚಾಲಕರಾದ ಎಂ. ನಾಗೇಶ, ಡಾ.ಪಿ.ಜಿ. ಪುಷ್ಪರಾಣಿ, ಸ್ಥಳ: ಡಾ. ಎಪಿಜೆ ಅಬ್ದುಲ್ ಕಲಾಂ ಸಭಾಂಗಣ, ಬೆಳಗ್ಗೆ 10.30ಕ್ಕೆ.

■ **ಪರಿವರ್ತನ ವಿವಿಧೋದ್ದೇಶ ಮಹಿಳಾ ಸೌಹಾರ್ದ ಸಹಕಾರಿ ನಿಯಮಿತ :** ಸರ್ವ ಸದಸ್ಯರ ವಾರ್ಷಿಕ ಮಹಾಸಭೆ, ಅಧ್ಯಕ್ಷತೆ : ಸಂಘದ ಅಧ್ಯಕ್ಷೆ ಶ್ರೀಮತಿ ಲಲಿತಾ ಕೆ.ಎಸ್., ಸ್ಥಳ: ದಿ ಮೈಸೂರು ಕೋ ಆಪರೇಟಿವ್ ಹೌಸಿಂಗ್ ಸೊಸೈಟಿ ಸಮುದಾಯ ಭವನ, ನಾಲಾ ಬೀದಿ, ಕೆ.ಆರ್. ಮೊಹಲ್ಲಾ, ಬೆಳಗ್ಗೆ 10.30ಕ್ಕೆ.

■ **ಮಹಾರಾಜ ಕಾಲೇಜು, ಮೈಸೂರು ವಿಶ್ವವಿದ್ಯಾನಿಲಯ ಅಧ್ಯಾಪಕರ ಬಳಗ :** ಶಿಕ್ಷಕರ ದಿನಾಚರಣೆ, ಮುಖ್ಯ ಅತಿಥಿಗಳು : ಶ್ರೀ ರಾಮಕೃಷ್ಣ ನೈತಿಕ ಮತ್ತು ಆಧ್ಯಾತ್ಮಿಕ ಶಿಕ್ಷಣ ಸಂಸ್ಥೆಯ ಸ್ವಾಮಿ ಮಹಾಮೇಧಾನಂದಜೀ, ಅಧ್ಯಕ್ಷತೆ : ಮಹಾರಾಜ ಕಾಲೇಜು ಪ್ರಿನ್ಸಿಪಾಲ್ ಪ್ರೊ. ಹೆಚ್.ಸಿ. ದೇವರಾಜೇಗೌಡ, ಉಪಸ್ಥಿತರು : ಆಡಳಿತಾಧಿಕಾರಿ ಪ್ರೊ. ಕೆ. ತಿಮ್ಮಯ್ಯ, ಬಳಗದ ಸಂಚಾಲಕ ಪ್ರೊ. ಎಸ್.ಟಿ. ರಾಮಚಂದ್ರ, ಡಾ. ಟಿ.ಕೆ. ಕೆಂಪೇಗೌಡ, ಸ್ಥಳ: ಕೊಠಡಿ ಸಂಖ್ಯೆ 21, ಹೊಸ ಕಟ್ಟಡ, ಮಹಾರಾಜ ಕಾಲೇಜು, ಮಧ್ಯಾಹ್ನ 3ಕ್ಕೆ.

■ **ವ್ಯವಸ್ಥಾಪಕರು :** ಮೈಸೂರು ಅರಮನೆ ಆಸ್ಥಾನ ಮೃದಂಗ ವಿದ್ವಾನ್ ಅವರ ಪುಣ್ಯ ಸಂಸ್ಮರಣೋತ್ಸವ (ಸಂಗೀತೋತ್ಸವ), ವಿದುಷಿ ಡಾ. ಕೃಪಾ ಪಡ್ಕೆ ಅವರ ನೃತ್ಯಗಿರಿ ಶಾಲೆ ವಿದ್ಯಾರ್ಥಿಗಳಿಂದ ನೃತ್ಯೋತ್ಸವ, ಶ್ರೀ ಸರಸ್ವತಿ ವಾದ್ಯ ವೃಂದದವರಿಂದ ಲಯನಾದ ತರಂಗ, ಸಂಗೀತ ವಾದ್ಯಗಳ ಪರಿಕಲ್ಪನೆ, ಬೊಟ್ಟಿಕೆರೆ ಪುರುಷೋತ್ತಮ ಪೂಂಜ ವಿರಚಿತ ನಾಗನಂದಿನಿ ತೆಂಕುತಿಟ್ಟು ಯಕ್ಷಗಾನ ಕಾರ್ಯಕ್ರಮ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಮುಖ್ಯ ಅತಿಥಿಗಳು : ಶ್ರೀ ಭೀಮೇಶ್ವರ ಜೋಷಿ ಮತ್ತು ಶ್ರೀಮತಿ ರಾಜಮ್ಮ, ಎಂ.ಆರ್. ರವೀಂದ್ರ, ವಿದ್ವಾನ್ ಡಾ. ಎಂ.ಆರ್. ಹನುಮಂತರಾಜು, ಉದ್ಯಮಿ ಡಾ. ಜಗನ್ನಾಥ್ ಶೆಣೈ, ಲಹರಿ ಕಂಪನಿಯ ವೇಲು, ವಿಜ್ಞಾನ ಸಾಹಿತಿ ಪ್ರೊ. ಎಸ್. ರಾಮಪ್ರಸಾದ್, ಆಳ್ವಾಸ್ ಪ್ರತಿಷ್ಠಾನದ ಡಾ. ಎಂ. ಮೋಹನ್ ಆಳ್ವ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಸುದರ್ಶನ್, ಡಾ. ಲಕ್ಷ್ಮೀನಾರಾಯಣ ಆರೋರಾ, ಸ್ಥಳ: ಕಲಾಮಂದಿರ, ಸಂಜೆ 4.30 ರಿಂದ.

■ **ಮುದ್ದುರಾಮ ಪ್ರತಿಷ್ಠಾನ :** ಶ್ರೀ ಸಿದ್ದೇಶ್ವರ ಮಹಾಸ್ವಾಮಿಗಳವರ ನೆನಪಿನ ಕಾರ್ಯಕ್ರಮ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ನುಡಿ ನಮನ : ಶ್ರೀ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿ, ಶ್ರೀ ಮಲ್ಲಯ್ಯ ಮಹಾಸ್ವಾಮೀಜಿ, ಉಪಸ್ಥಿತರು : ಪ್ರತಿಷ್ಠಾನ ಅಧ್ಯಕ್ಷ ಕೆ.ಸಿ. ಶಿವಪ್ಪ, ಅಧ್ಯಕ್ಷತೆ : ಮಾಜಿ ರಾಜ್ಯಸಭಾ ಸದಸ್ಯ ಬಸವರಾಜ ಪಾಟೀಲ ಸೇಡಂ, ಸ್ಥಳ: ನವಜ್ಯೋತಿ ಸಭಾಂಗಣ, ಜೆಎಸ್‌ಎಸ್ ಮಹಿಳಾ ಕಾಲೇಜು, ಸಂಜೆ 5ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಶ್ರದ್ಧೆಯ ಶಿಲ್ಪ – ಕರ್ನಾಟಕದ ಪ್ರಾಚೀನ ದೇವಾಲಯಗಳ ಪರಿಚಯ ಮಾಲಿಕೆ, ಲೇಖನ ಮತ್ತು ಪ್ರಸ್ತುತಿ: ಟಿ. ಎಸ್. ಗೋಪಾಲ್, ಪ್ರಾಯೋಜಕರು: ಅದಮ್ಯ ಚೇತನ ಫೌಂಡೇಶನ್, ಬೆಂಗಳೂರು, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ನಿತಿನ್ ರಾಜಾರಾಂ ಶಾಸ್ತ್ರೀ ಹಾಗೂ ಸದಾಶಿವಪಾಟೀಲ್, ವ್ಯಾಖ್ಯಾನ–ಡಾ. ಪ್ರದೀಪ್ ಕುಮಾರ್ ಹೆಬ್ರಿ, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ:ಎಂ. ಆರ್.ಶ್ರೀನಿವಾಸಮೂರ್ತಿಯವರ ರಂಗಣ್ಣನ ಕನಸಿನ ದಿನಗಳು ಕಾದಂಬರಿಯ ಬಾನುಲಿ ಓದು. ಪ್ರಸ್ತುತಿ : ಉಮೇಶ್. ಎಸ್.ಎಸ್., 8.30 ವಿಶೇಷ ಕಾರ್ಯಕ್ರಮ ಸರಣಿ ಆಕಾಶವಾಣಿ 90–ನೆನಪುಗಳ ಹೊತ್ತು ಕೃಷಿ ಕ್ಷೇತ್ರದಲ್ಲಿನ ಸಾಧನೆಗಾಗಿ ಮೈಸೂರು ಆಕಾಶವಾಣಿಯಿಂದ ಸನ್ಮಾನಿತರಾದ ಚಾಮರಾಜನಗರ ತಾಲೂಕು ನಾಗವಳ್ಳಿಯ ಸೈಯ್ಯದ್ ನಾಸಿರ್ ಅಹಮದ್ ಅವರೊಂದಿಗೆ ಸಂವಾದ ಇವರೊಂದಿಗೆ ಭಾಗವಹಿಸುತ್ತಾರೆ–ಎನ್. ಕೇಶವಮೂರ್ತಿ, 9.00 ಕರೆಗೊಂದು ಗೀತೆ– ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ನೇರಫೋನ್ ಇನ್ ಕಾರ್ಯಕ್ರಮ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಯು. ಶ್ರೀನಿವಾಸ್–ಮ್ಯಾಂಡೋಲಿನ್ ವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹೊಂಗಿರಣ ವಿಕಸಿತ ಹಾದಿಗೊಂದು ಸೋಪಾನ, ಪ್ರಸ್ತುತಿ– ಎಸ್. ಲಕ್ಷ್ಮೀನಾರಾಯಣ, ಆರ್. ಲೋಕೇಶ್ವರಿ ಹಾಗೂ ಬಿ. ಜಿ. ಕವಿತಾ

ಮಧ್ಯಾಹ್ನ: 12.05 ವನಿತಾ ವಿಹಾರ–ಮೈಸೂರಿನ ಹವ್ಯಾಸಿ ಸೈಕ್ಲಿಸ್ಟ್ ವೀಣಾ ಅಶೋಕ್ ಅವರೊಂದಿಗೆ ಮಾತುಕತೆ ಇವರೊಂದಿಗೆ, ಭಾಗವಹಿಸುತ್ತಾರೆ–ದಿಗ್ವಿಜಯ್ ಬಿ., 12.35 ದೇವರನಾಮ, 12.45 ಕನ್ನಡದಲ್ಲಿ ಭಾಷಣ, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು–ಶ್ರೀನಿವಾಸ ಉಡುಪ, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಎಂ. ತ್ಯಾಗರಾಜು – ಸಂತೂರ್ ವಾದನ, 4.00 ಕಥಾಕಾಲಕ್ಷೇಪ, 5.00 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ – ಕಿಸಾನ್‌ವಾಣಿ–ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ಮತ್ಸ ತರಂಗ–ಮೀನು ಸಾಕಾಣಿಕೆ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ ಪಂಜರದಲ್ಲಿ ಮೀನು ಕೃಷಿ ಕುರಿತು ಮಂಡ್ಯ ಜಿಲ್ಲೆ ಕೃಷ್ಣರಾಜಸಾಗರ ಮೀನುಗಾರಿಕಾ ಇಲಾಖೆಯ ಸಹಾಯಕ ನಿರ್ದೇಶಕರಾದ ಟಿ.ವಿ. ಶಿವಕುಮಾರ್ ಅವರೊಂದಿಗೆ ಸಂದರ್ಶನ, ಸಂದರ್ಶಕರು– ಎನ್.ಕೇಶವಮೂರ್ತಿ, 7.45 ಮೈಸೂರು ಜಂಕ್ಷನ್–ಸಾಪ್ತಾಹಿಕ ಸಂಚಿಕೆ. ಪ್ರಸ್ತುತಿ–ಬಿ. ದಿಗ್ವಿಜಯ್, 8.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ, ಅಮ್ಜದ್ ಅಲಿ ಖಾನ್–ಸರೋದ್ ವಾದನ, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ–ಲಯವಿನ್ಯಾಸ–ಉಮಯಾಲಪುರಂ ಕೆ. ಶಿವರಾಮನ್, 10.00 ಚೈತ್ರವನ–ಲಕ್ಷ್ಮೀಶನ ಜೈಮಿನಿ ಭಾರತದ ಸಮಗ್ರ ವಾಚನ ಹಾಗೂ ವ್ಯಾಖ್ಯಾನ, ಪ್ರಸ್ತುತಿ– ಡಾ. ಎ.ಎಸ್. ಶಂಕರನಾರಾಯಣ, 10.30 ಸವಿನೆನಪು

ಮೈಸೂರು ಮಿತ್ರ

ಮದ್ದೂರು ಗಲಾಟೆಗೆ ಕಾಂಗ್ರೆಸ್ ಸರ್ಕಾರವೇ ಕಾರಣ

● ಬಿಜೆಪಿ, ಜೆಡಿಎಸ್ ಆರೋಪ ● ಮ್ಯಾಜಿಸ್ಟೀರಿಯಲ್ ತನಿಖೆಗೆ ಆಗ್ರಹ ● ಈದ್ ಮಿಲಾದ್ ಮೆರವಣಿಗೆ ಶಾಂತಿಯುತವಾಗಿ ನಡೆಯಿತು; ಗಣೇಶೋತ್ಸವ ಮೆರವಣಿಗೆ ವೇಳೆ ಗದ್ದಲ ಏಕಾಯಿತು



ಬೆಂಗಳೂರು, ಸೆ. 8(ಕೆಎಂಶಿ)–ಮಂಡ್ಯ ಜಿಲ್ಲೆಯ ಮದ್ದೂರಿನಲ್ಲಿ ಗಣೇಶ ಮೆರವಣಿಗೆ ವೇಳೆ ಕಲ್ಲು ತೂರಾಟ ಘಟನೆಗೆ ಕಾಂಗ್ರೆಸ್ ನಡವಳಿಕೆ, ಅದರ ಆಡಳಿತವೇ ಕಾರಣ ಎಂದು ಜೆಡಿಎಸ್ ಮತ್ತು ಬಿಜೆಪಿ ತೀವ್ರ ತರಾಟೆಗೆ ತೆಗೆದುಕೊಂಡಿವೆ.

ರಾಜ್ಯದ ಕೆಲವು ಭಾಗಕ್ಕೆ ಮಾತ್ರ ಸೀಮಿತವಾಗಿದ್ದ ಇಂತಹ ಗಲಭೆ ಕಳೆದ ಎರಡು ವರ್ಷಗಳಿಂದ ಇಡೀ ರಾಜ್ಯಕ್ಕೆ ಹರಡಿ ಶಾಂತಿಯ ತೋಟಕ್ಕೆ ಬೆಂಕಿ ಹಚ್ಚುವ ಕೆಲಸ ಮಾಡುತ್ತಿದ್ದಾರೆ ಎಂದು ಕೆಂಡಕಾರಿದ್ದಾರೆ.

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್.ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಪ್ರತ್ಯೇಕ ಪತ್ರಿಕಾಗೋಷ್ಠಿ ಮತ್ತು ಹೇಳಿಕೆ ನೀಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಆಡಳಿತವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

ಹಿಂದೂಗಳು ಅಸಮಾಧಾನವಾಗುವ ರೀತಿ ಕಾಂಗ್ರೆಸ್ ಮಾಡುತ್ತಿದೆ. ಇದನ್ನು ನಾವು ರಾಜಕೀಯವಾಗಿ ಹೇಳುತ್ತಿಲ್ಲ. ರಾಜ್ಯದ ಹಲವೆಡೆ ಗಲಾಟೆ ಆಗಲು ಕಾಂಗ್ರೆಸ್ ಪಕ್ಷವೇ ಕಾರಣ. ಇದರಿಂದ ಆ ಪಕ್ಷದ ಅವನತಿ ಆರಂಭವಾಗಿದೆ ಎಂದು ವಾಗ್ದಾಳಿ ಮಾಡಿರುವ ನಾಯಕರು, ಕಳೆದ ಶುಕ್ರವಾರ ಈದ್ ಮಿಲಾದ್ ಆಚರಣೆ ವೇಳೆ ಮುಸ್ಲಿಂ ಸಮುದಾಯ ಮೆರವಣಿಗೆಗಳನ್ನು ನಡೆಸಿದೆ. ಆದರೆ, ಎಲ್ಲಿಯೂ ಕಲ್ಲು ತೂರಾಟ ಮತ್ತು ಗಲಭೆಗಳು ನಡೆದಿಲ್ಲ.

ಗಣೇಶ ವಿಸರ್ಜನೆ ವೇಳೆ ಮದ್ದೂರು ಅಷ್ಟೇ ಅಲ್ಲ, ರಾಜ್ಯದ ಕೆಲವು ಭಾಗಗಳಲ್ಲಿ ಈ ಸಮುದಾಯ ಕಲ್ಲು ತೂರಾಟ ನಡೆಸಿ ಹಿಂದೂಗಳನ್ನು ಕೆಣಕುವ ಕೆಲಸ ಮಾಡಿದ್ದಾರೆ. ಇದಕ್ಕೆ ಸರ್ಕಾರದ ಬೆಂಬಲವೇ ಕಾರಣ. ಕಳೆದ ಎರಡು ವರ್ಷಗಳಿಂದ ಕೈಕಟ್ಟಿ ಕುಳಿತುಕೊಳ್ಳುವಂತೆ ಪೊಲೀಸರನ್ನು ನಿಸ್ಸಹಾಯಕ ಮಾಡಿದೆ. ಇದು ಪೊಲೀಸರ ವೈಫಲ್ಯವಲ್ಲ, ಗುಪ್ತಚರ ಮತ್ತು ಸರ್ಕಾರದ ವೈಫಲ್ಯ ಎಂದು ಗುಡುಗಿದ್ದಾರೆ.

ಅಲ್ಪಸಂಖ್ಯಾತರನ್ನು ಓಲೈಕೆ ಮಾಡುವ ಏಕೈಕ ಉದ್ದೇಶದಿಂದ ಹಿಂದೂಗಳ ಮೇಲೆ ನಿರಂತರವಾಗಿ ದಬ್ಬಾಳಿಕೆ ನಡೆಯುತ್ತಿದೆ. ಈ ಘಟನೆ ಬಗ್ಗೆ ಮ್ಯಾಜಿಸ್ಟೀರಿಯಲ್ ತನಿಖೆ ನಡೆಸಬೇಕೆಂದು ಆಗ್ರಹಿಸಿದ್ದಾರೆ. ಜಾತ್ಯತೀತ ಸರ್ಕಾರದಲ್ಲಿ ಹಿಂದೂಗಳು ಎರಡನೇ ದರ್ಜೆ ಪ್ರಜೆಗಳಾಗಿದ್ದಾರೆ, ನಿಮ್ಮ ಬ್ರದರ್‌ಗಳು ನಿರಂತರವಾಗಿ ದಾಳಿ ಮಾಡುತ್ತಿದ್ದರೂ, ನೀವು ಕೈಕಟ್ಟಿ ಕುಳಿತಿದ್ದೀರಿ ಎಂದು ಆರೋಪಿಸಿದ್ದಾರೆ.

ಭಾರೀ ಬಂದೋಬಸ್ತ್‌ಗೆ ಆದೇಶ: ಕಿಡಿಗೇಡಿಗಳ ಬಂಧನಕ್ಕೂ ತಾಕೀತು

ಈ ಮಧ್ಯೆ, ಮದ್ದೂರು ಘಟನೆಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಪೊಲೀಸ್ ಮಹಾನಿರ್ದೇಶಕರನ್ನು ಸಂಪರ್ಕಿಸಿ ಹೆಚ್ಚಿನ ಬಿಗಿ ಬಂದೋಬಸ್ತ್ ವಹಿಸಿ ಕಿಡಿಗೇಡಿಗಳನ್ನು ಬಂಧಿಸುವಂತೆ ಆದೇಶಿಸಿದ್ದಾರೆ.

ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಅವರನ್ನು ಕರೆಸಿಕೊಂಡು ಘಟನೆ ಬಗ್ಗೆ ಮಾಹಿತಿ ಪಡೆದು, ಪರಿಸ್ಥಿತಿ ಶಾಂತಗೊಳ್ಳುವವರೆಗೆ ಮದ್ದೂರಿನಲ್ಲಿ ಬಿಡಾರ ಹೂಡುವಂತೆ ಸೂಚಿಸಿದ್ದಾರೆ.

ಮುಖ್ಯಮಂತ್ರಿ ಭೇಟಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಚಲುವರಾಯಸ್ವಾಮಿ, ಗಣೇಶ ಮೆರವಣಿಗೆ ವೇಳೆ ಮಸೀದಿ ಕಡೆಯಿಂದ ಕಲ್ಲುಗಳು ಎಸೆದ ಮಾಹಿತಿ ಇದೆ. ಈ ಬಗ್ಗೆ ವಿಚಾರಣೆ ನಂತರ 21 ಜನರನ್ನು ಬಂಧಿಸಲಾಗಿದೆ, ಯಾವ ಹಿಂದೂಗಳ ಮೇಲೂ ಕೇಸ್ ದಾಖಲಾಗಿಲ್ಲ. ಗಲಭೆ ನಡೆದ ಕೆಲವೇ ಗಂಟೆಗಳಲ್ಲಿ ತಪ್ಪಿತಸ್ಥರ ವಿರುದ್ಧ ಕ್ರಮ ತೆಗೆದುಕೊಳ್ಳಲಾಗಿದೆ ಎಂದರು.

ಘಟನೆ ನಡೆದ ತಕ್ಷಣ ಕ್ರಮ ತೆಗೆದುಕೊಂಡ ಪ್ರಕರಣ ಬೇರೆ ಯಾವುದೂ ಇಲ್ಲ. ಬಿಜೆಪಿ ಹಾಗೂ ಕೆಲವು ಜೆಡಿಎಸ್ ನಾಯಕರು ಪ್ರಚೋದಿಸುವ ಕೆಲಸ ಮಾಡುತ್ತಿದ್ದಾರೆ. ಇನ್ನಷ್ಟು ಬಿಗಿ ಕ್ರಮ ತೆಗೆದುಕೊಳ್ಳಲು ಹೇಳಬಹುದಿತ್ತು. ಅದು ಬಿಟ್ಟು ಕೋಮು ಗಲಭೆಗೆ ಪ್ರಚೋದನೆ ಕೊಡಬಾರದಿತ್ತು.

ಮದ್ದೂರಿನಲ್ಲಿ ಹಿಂದೆ ಎಂದೂ ಈ ರೀತಿ ಘಟನೆ ನಡೆದಿಲ್ಲ. ಹೊರಗಡೆಯಿಂದ ಬಂದು ಯಾರೋ ಗಲಭೆ ಮಾಡಿರಬಹುದು ಎಂಬ ಬಗ್ಗೆ ವಿಚಾರಣೆ ಮಾಡುತ್ತಿದ್ದೇವೆ. ಯಾವುದೇ ಸಮಾಜದವರಿದ್ದೂ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುತ್ತೇವೆ. ಬಿಜೆಪಿ, ಜೆಡಿಎಸ್ ರಾಜಕಾರಣದ ಮೂಲಕ ನಮ್ಮನ್ನು ಎದುರಿಸಲಾಗದೆ ಪ್ರಚೋದನೆ ಮಾಡುತ್ತಿದ್ದಾರೆ.

ನಾವು ಯಾರ ಓಲೈಕೆಯನ್ನೂ ಮಾಡುತ್ತಿಲ್ಲ, ಹಾಗಿದ್ದಿದ್ದರೆ 21 ಜನರ ಬಂಧನ ಏಕೆ ಮಾಡುತ್ತಿದ್ದೆವು. ಬಿಜೆಪಿ ಹಾಗೂ ಜೆಡಿಎಸ್ ನಾಯಕರಿಗೆ ಸರ್ಕಾರದ ಅಭಿವೃದ್ಧಿ ಯೋಜನೆಗಳನ್ನು ಸಹಿಸಿಕೊಳ್ಳಲು ಆಗುತ್ತಿಲ್ಲ, ಸದನದಲ್ಲಿ ನಮ್ಮನ್ನು ಎದುರಿಸಲೂ ಆಗೋದಿಲ್ಲ, ಆದ್ದರಿಂದ ಇಂತಹ ಘಟನೆಗಳು ನಡೆದಾಗ ಪ್ರಚೋದನೆ ಕೊಡುವ ಕೆಲಸ ಮಾಡುತ್ತಿದ್ದಾರೆ ಎಂದರು.

ಮದ್ದೂರು ಗಲಾಟೆಯಲ್ಲಿ ಹಿಂದೂ, ಮುಸ್ಲಿಂ ನೋಡಲ್ಲ; ತಪ್ಪು ಮಾಡಿದವರ ವಿರುದ್ಧ ಕ್ರಮ

ಸಿಎಂ ಸಿದ್ದರಾಮಯ್ಯ ಎಚ್ಚರಿಕೆ ಸಂದೇಶ



ಬೆಂಗಳೂರು, ಸೆ.8– ಮದ್ದೂರಿನಲ್ಲಿ ಗಣೇಶ ವಿಸರ್ಜನೆ ವೇಳೆ ನಡೆದ ಗಲಾಟೆಯಲ್ಲಿ ಈವರೆಗೆ 21 ಮಂದಿ ಬಂಧನ ಆಗಿದೆ ಇಂತಹ ಘಟನೆ ನಡೆದಾಗ ಹಿಂದೂ, ಮುಸ್ಲಿಂ ನೋಡುವುದಿಲ್ಲ. ಯಾರೇ ತಪ್ಪು ಮಾಡಿದರೂ ಅಂತಹವರ ವಿರುದ್ಧ ಕ್ರಮ ಆಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಸಿಎಂ ಗೃಹ ಕಚೇರಿ ಕೃಷ್ಣಾದಲ್ಲಿ ನಡೆದ ಸಭೆಯ ಬಳಿಕ ಅವರು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಮಸೀದಿ ಮುಂದೆ ಮೆರವಣಿಗೆ ಹೋಗುವಾಗ ಗಲಾಟೆ ಆಗಿದೆ. ಪೊಲೀಸರು ಲಘು ಲಾಠಿ ಪ್ರಹಾರ ಮಾಡಿದ್ದಾರೆ. ಸ್ಥಳದಲ್ಲಿ ಗುಂಪುಕಟ್ಟಿಕೊಂಡು ಗಲಾಟೆ ಮಾಡಲು ಶುರುಮಾಡಿದ್ದರು. ಪೊಲೀಸರು ಎಚ್ಚರಿಕೆ ನೀಡಿದ್ದರೂ ಹೋಗಿಲ್ಲ. ಹಾಗಾಗಿ ಲಘು ಲಾಠಿ ಚಾರ್ಜ್ ಮಾಡಲಾಗಿದೆ. 21 ಮಂದಿ ಬಂಧನ ಆಗಿದೆ ಎಂದು ವಿವರಿಸಿದರು.

ಯಾರು ತಪ್ಪು ಮಾಡಿದರೂ ಹಿಂದೂ, ಮುಸ್ಲಿಂ ಯಾರೇ ಮಾಡಲಿ ಕಾನೂನು ರೀತಿಯಲ್ಲಿ ಕ್ರಮ ಕೈಗೊಂಡಿದ್ದೇವೆ. ರಾಜ್ಯದಲ್ಲಿ ಎಲ್ಲೂ ಅಹಿತಕರ ಘಟನೆ ನಡೆದಿಲ್ಲ. ಮದ್ದೂರಿನಲ್ಲಿ ನಡೆದಿದೆ. ಈ ವರ್ಷ ನಾಗಮಂಗಲದಲ್ಲಿ ಯಾವುದೇ ಅಹಿತಕರ ಘಟನೆ ನಡೆದಿಲ್ಲ ಎಂದರು.

ಪೊಲೀಸರಿಂದ ತಪ್ಪು ಆಗಿಲ್ಲ: ಮದ್ದೂರಿನಲ್ಲಿ ನಡೆದ ಘಟನೆಯಲ್ಲಿ ಪೊಲೀಸರು ತಪ್ಪು ಮಾಡಿಲ್ಲ. ಕಾನೂನು ಪ್ರಕಾರ ನಡೆದುಕೊಂಡಿದ್ದಾರೆ. ಬಿಜೆಪಿ, ಜೆಡಿಎಸ್ ಅಥವಾ ಕಾಂಗ್ರೆಸ್ ತಪ್ಪು ಮಾಡಿದರೂ ತಪ್ಪು ತಪ್ಪೇ. ಬಿಜೆಪಿಗರು ಪ್ರಚೋದನೆ ಮಾಡುವುದರಲ್ಲಿ, ನೆಮ್ಮದಿ ಹಾಳು ಮಾಡುವುದರಲ್ಲಿ ನಿಸ್ಸೀಮರು. ಅನಗತ್ಯವಾಗಿ ಗುಂಪು ಸೇರಿ ಗಲಾಟೆ ಮಾಡುವುದು ಯಾರು? ಇದರ ಹಿಂದೆ ಯಾರೇ ಇದ್ದರೂ ಕಠಿಣ ಕ್ರಮ ಕೈಗೊಳ್ಳುತ್ತೇವೆ ಎಂದರು. ಸಂಪೂರ್ಣ ವರದಿ ಬಂದ ಬಳಿಕ ಕ್ರಮ ಕೈಗೊಳ್ಳುತ್ತೇವೆ ಎಂದು ತಿಳಿಸಿದರು.

ಶಾಂತಿ ಕಾಪಾಡಿ ಎಂದ ಪರಮೇಶ್ವರ್: ಕಲ್ಲು ತೂರಾಟ ಪ್ರಕರಣಕ್ಕೆ ಸಂಬಂಧಿಸಿ ಹಿಂದೂ ಸಂಘಟನೆಗಳು ಪ್ರತಿಭಟನೆ ಮಾಡುತ್ತಿದ್ದವು. ಪೊಲೀಸರು ಲಾಠಿ ಚಾರ್ಜ್ ಮಾಡಿದ್ದಾರೆ. ಪರಿಸ್ಥಿತಿ ಕೈ ಮೀರಿದರೆ ಪೊಲೀಸರು ಅವರದ್ದೇ ಆದ ಕ್ರಮ ಕೈಗೊಳ್ಳುತ್ತಾರೆ. ಅಹಿತಕರ ಘಟನೆ ನಡೆಯದಂತೆ ನೋಡಿಕೊಳ್ಳಿ, ಪ್ರತಿಭಟನೆ ಮಾಡಬೇಡಿ ಎಂದು ಗೃಹಸಚಿವ ಪರಮೇಶ್ವರ್ ಮನವಿ ಮಾಡಿದರು.

ಹಿಂದೂಗಳ ಮೇಲೆ ಲಾಠಿಚಾರ್ಜ್ ಯಾಕೆ?

ಕಲ್ಲೆಸೆದವರ ಮೇಲೆ ಪೊಲೀಸರು ಪೌರುಷ ತೋರಿಸಲಿ

ಶಾಸಕ ಡಾ.ಸಿ.ಎನ್.ಅಶ್ವಥ್ ನಾರಾಯಣ ಕಿಡಿ



ಮಂಡ್ಯ, ಸೆ.8–ಪೊಲೀಸರು ಹಿಂದೂಗಳ ಮೇಲೆ ಲಾಠಿಚಾರ್ಜ್ ಮಾಡುತ್ತಿದ್ದಾರೆ. ಅದರ ಬದಲು ಕಲ್ಲೆಸೆದವರ ಮೇಲೆ ಪೊಲೀಸರು ತಮ್ಮ ಪೌರುಷ ತೋರಿಸಲಿ ಎಂದು ಶಾಸಕ ಡಾ.ಸಿ.ಎನ್ ಅಶ್ವಥ್ ನಾರಾಯಣ ಕಿಡಿಕಾರಿದರು.

ಮದ್ದೂರು ಕಲ್ಲು ತೂರಾಟ ವಿಚಾರವಾಗಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನ್ಯಾಯಕ್ಕಾಗಿ ಪ್ರತಿಭಟಿಸಿದ ಹಿಂದೂಗಳ ಮೇಲೆ ಪೊಲೀಸರು ಲಾಠಿಚಾರ್ಜ್ ಮಾಡುತ್ತಿದ್ದಾರೆ. ಅದರ ಬದಲು ಕಲ್ಲೆಸೆದವರ ಮೇಲೆ ಪೊಲೀಸರು ತಮ್ಮ ಪೌರುಷ ತೋರಿಸಲಿ. ಪೊಲೀಸ್ ಇಲಾಖೆ ಸರ್ಕಾರದ ಓಲೈಕೆಗಷ್ಟೇ ಸೀಮಿತವಾಗಿದೆ. ಪೋಸ್ಟಿಂಗ್ ಸಲುವಾಗಿ ಪೊಲೀಸ್ ಇಲಾಖೆ ಓಲೈಕೆಗಿಳಿದಿದೆ. ಹೀಗಾಗಿ ಕಠಿಣ ಕ್ರಮ ಕೈಗೊಳ್ಳುತ್ತಿಲ್ಲ. ಈ ವ್ಯವಸ್ಥೆ ಮೇಲೆ ಜನರು ವಿಶ್ವಾಸ ಕಳ್ಕೊಂಡಿದ್ದಾರೆ. ರಾಜ್ಯದಲ್ಲಿ ಪೊಲೀಸ್ ವ್ಯವಸ್ಥೆ ಸತ್ತು ಹೋಗಿದೆ, ಅಮಾಯಕರು ಬಲಿಯಾಗ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ಅನ್ಯಧರ್ಮದ ವ್ಯಕ್ತಿಗಳು ಮತ್ತು ಸಮುದಾಯದವರು ಗಣೇಶೋತ್ಸವದ ಮೆರವಣಿಗೆ, ಹಿಂದೂ ಸಂಸ್ಕೃತಿ ಅರ್ಥಮಾಡಿಕೊಳ್ಳಬೇಕು. ಇತರ ಧರ್ಮದ ಆಚರಣೆಗೆ ಗೌರವ ಕೊಡಬೇಕು, ಒಪ್ಕೋಬೇಕು. ನಾವು ಇರಾನ್, ಪಾಕಿಸ್ತಾನ, ಸೌದಿಯಲ್ಲಿಲ್ಲ. ಭಾರತದಲ್ಲಿದ್ದೇವೆ. ಭಾರತದ ಸಂಸ್ಕೃತಿ, ಆಚರಣೆಗೆ ಅವಕಾಶವೇ ಇಲ್ಲದಂತಾಗಿದೆ. ಇದು ಪದೇ ಪದೆ ಅತಿರೇಕಕ್ಕೆ ಹೋಗುತ್ತಿದೆ. ಮೊನ್ನೆ ಇದೇ ಸ್ಥಳದಲ್ಲಿ ಈದ್ ಮಿಲಾದ್ ಮೆರವಣಿಗೆ ನಡೆದಿತ್ತು. ಆಗ ಹಿಂದೂಗಳು ಕಲ್ಲೆಸೆದಿದ್ದರಾ? ಎಂದು ಆಕ್ರೋಶ ಹೊರಹಾಕಿದರು.

ಆರೋಪಿಗಳಿಗೆ 14 ದಿನ ನ್ಯಾಯಾಂಗ ಬಂಧನ



ಆರೋಪಿಗಳನ್ನು ಪೊಲೀಸರು ಕರೆದೊಯ್ಯುತ್ತಿರುವುದು

ಮದ್ದೂರು, ಸೆ.8– ಗಣೇಶನ ಮೂರ್ತಿ ವಿಸರ್ಜನೆ ವೇಳೆ ಕಲ್ಲು ತೂರಾಟ ಪ್ರಕರಣಕ್ಕೆ ಸಂಬಂಧಿಸಿದಂತೆ ಇದುವರೆಗೂ 22 ಮಂದಿ ಆರೋಪಿಗಳನ್ನು ಬಂಧಿಸಲಾಗಿದ್ದು, ಅವರನ್ನು 14 ದಿನಗಳ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಆರೋಪಿಗಳ ಪೈಕಿ 14 ಮಂದಿ ಹೆಸರು ತಿಳಿದು ಬಂದಿದ್ದು, ಮಹಮ್ಮದ್ ಆವೇಜ್ @ ಮುಳ್ಳಿ ಮಹಮ್ಮದ್ ಇರ್ಫಾನ್ @ ಮಿಯಾ, ನವಾಜ್ ಖಾನ್ @ ನವಾಜ್, ಇಮ್ರಾನ್ ಪಾಷಾ @ ಇಮ್ರಾನ್, ಉಮರ್ ಫಾರೂಕ್ @ ಉಮರ್, ಸೈಯದ್ ದಸ್ತಗಿರ್ @ ಸಯ್ಯದ್ ರಶೀದ್, ಖಾಸಿಫ್ ಅಹಮದ್ @ ಖಾಸಿಫ್, ಅಹಮದ್ ಸಲ್ಮಾನ್ @ ಮುಕ್ಕುಲ್ಲಾ, ಮುಸವೀರ್ ಪಾಷಾ @ ಒಡೆಯ, ಕಲಾಂದರ್ ಖಾನ್, ಮಹಮದ್ ಅಜೀಜ್, ಇನಾಯತ್ ಪಾಷಾ, ಸುಮೇರ್ ಪಾಷಾ, ಮಹಮದ್ ಖಲೀಂ @ ಕೈಫ್ ಎಂದು ಗುರ್ತಿಸಲಾಗಿದ್ದು, ಬಂಧಿತರ ವಿರುದ್ಧ ಬಿಎನ್‌ಎಸ್ ಕಾಯ್ದೆ 189(2), 189(4), 121(2), 132 ಕೂಡ 190 ಅಡಿ ಪ್ರಕರಣ ದಾಖಲಾಗಿದೆ. ಇದರಲ್ಲಿ ಎಲ್ಲರೂ ಸ್ಥಳೀಯರು, ಇಬ್ಬರು ಮಾತ್ರ ಪಕ್ಕದ ಚನ್ನಪಟ್ಟಣದವರು ಎಂದು ತಿಳಿದುಬಂದಿದೆ.

ಆರೋಪಿಗಳನ್ನು ಪೊಲೀಸರು 2ನೇ ಅಪರ ಸಿವಿಲ್ ನ್ಯಾಯಾಧೀಶ ಗೋಪಾಲಕೃಷ್ಣ ಅವರ ಮುಂದೆ ಹಾಜರುಪಡಿಸಿದಾಗ 14 ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ ಎನ್ನಲಾಗಿದೆ.

ಸರ್ಕಾರಕ್ಕೆ ಮದ್ದೂರು ಗಲಭೆ ತಡೆಯೋ ಯೋಗ್ಯತೆಯೇ ಇಲ್ಲ

ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ತೀವ್ರ ಆಕ್ರೋಶ



ನವದೆಹಲಿ: ಮಂಡ್ಯದ ಮದ್ದೂರಿನಲ್ಲಿ ಗಣೇಶ ಮೆರವಣಿಗೆಗೆ ಮಸೀದಿಯಿಂದ ಕಲ್ಲು ತೂರಾಟ ನಡೆಸಿರುವುದು ಅಕ್ಷಮ್ಯ ಅಪರಾಧ. ಈ ಗಲಭೆಯನ್ನು ತಡೆಯುವ ಯೋಗ್ಯತೆಯೇ ರಾಜ್ಯ ಕಾಂಗ್ರೆಸ್ ಸರ್ಕಾರಕ್ಕಿಲ್ಲ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಕಿಡಿಕಾರಿದರು.

ದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಹಿಂದಿನ ಗಲಭೆ ಪ್ರಕರಣಗಳಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರ ಮತಾಂಧ ಶಕ್ತಿಗಳಿಗೆ ಪ್ರೋತ್ಸಾಹ ಕೊಡುವ ರೀತಿ ನಡೆದುಕೊಂಡಿದ್ದರಿಂದಲೇ ಇಂಥ ಕೃತ್ಯಗಳು ಮರುಕಳಿಸಲು ಕಾರಣ ಎಂದು ಆರೋಪಿಸಿದರು.

ಮದ್ದೂರಿನಲ್ಲಿ ಗಣೇಶ ವಿಸರ್ಜನೆ ಮೆರವಣಿಗೆ ವೇಳೆ ರಾಜ್ಯ ಸರ್ಕಾರ ಮುನ್ನೆಚ್ಚರಿಕೆ ವಹಿಸಿಲ್ಲ. ಹಾಗಾಗಿಯೇ ಕಲ್ಲು ತೂರಾಟ ನಡೆದಿದೆ. ಇನ್ನು, ಸೋಮವಾರ ಬೆಳಗ್ಗೆ ಗಣೇಶ ವಿಸರ್ಜನೆಗೆ ಮುಂದಾದ ಅಮಾಯಕರ ಮೇಲೆ ಪೊಲೀಸರು ಲಾಠಿ ಪ್ರಹಾರ ನಡೆಸಿದ್ದಾರೆ. ಇದೆಲ್ಲ ಸರ್ಕಾರದ ಹಿಂದೂ ವಿರೋಧಿ ಮಾನಸಿಕತೆಯನ್ನು ಸ್ಪಷ್ಟವಾಗಿ ತೋರಿಸುತ್ತದೆ ಎಂದು ಖಂಡಿಸಿದರು.

ಹಿಂದೂ ವಿರೋಧಿಗಳ ಮೇಲೆ ಕ್ರಮ ಕೈಗೊಳ್ಳುವ ಹಾಗೂ ಗಲಭೆ ತಡೆಯಲು ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವ ಯೋಗ್ಯತೆ ಇಲ್ಲ. ಈ ಸರ್ಕಾರ ಅಮಾಯಕರ ಮೇಲೆ, ಗಣೇಶ ಭಕ್ತರ ಮೇಲೆ ಲಾಠಿ ಪ್ರಹಾರ ಮಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.


ಪ್ರಕರಣ ಹಿಂಪಡೆದದ್ದೇ ಕಾರಣ: ಈ ಹಿಂದೆ ಪೊಲೀಸ್ ಠಾಣೆ ಸುಟ್ಟು ಪೊಲೀಸರನ್ನೇ ಕೊಲ್ಲಲು ಪ್ರಯತ್ನಿಸಿದಂತಹ ಪ್ರಕರಣವನ್ನೂ ರಾಜ್ಯ ಕಾಂಗ್ರೆಸ್ ಸರ್ಕಾರ ಹಿಂಪಡೆದಿದೆ. ಕೋಮು ಗಲಭೆಯಲ್ಲಿ ಪಿಎಫ್‌ಐ ಲಿಂಕ್ ಇರುವ ಅನೇಕ ಪ್ರಕರಣಗಳನ್ನು ಹಿಂಪಡೆದಿದೆ. ಹೀಗಾಗಿ ಮತಾಂಧ ಕಿಡಿಗೇಡಿಗಳಿಗೆ ಪ್ರೋತ್ಸಾಹ ಸಿಕ್ಕಂತಾಗಿದೆ. ಕಾಂಗ್ರೆಸ್ ಸರ್ಕಾರ ಒಂದು ಸಮುದಾಯದ ಓಲೈಕೆಗಿಳಿದ ಪ್ರತಿಫಲವಾಗಿ ಇಂತಹ ಘಟನೆಗಳು ಮರುಕಳಿಸುತ್ತಿವೆ ಎಂದು ಹರಿಹಾಯ್ದರು.

ಧಾರವಾಡದಲ್ಲೂ ಪೊಲೀಸರು ಸುಖಾ ಸುಮ್ಮನೆ ಲಾಠಿ ಬೀಸಿದರು: ಧಾರವಾಡದ ನರೇಂದ್ರ ಗ್ರಾಮದಲ್ಲಿ ಅತ್ಯಂತ ಶಾಂತವಾಗಿ ನಡೆಯುತ್ತಿದ್ದ ಗಣೇಶ ವಿಸರ್ಜನೆ ಮೆರವಣಿಗೆ ವೇಳೆ ಪೊಲೀಸ್ ಇನ್ಸ್‌ಪೆಕ್ಟರ್ ಒಬ್ಬರು ಹೀಗೆ ಲಾಠಿ ಬೀಸಿದ್ದಾರೆ. ಕೇಳಿದರೆ ಎರಡೆರಡು ಗಣೇಶ ಮೆರವಣಿಗೆ ಏಕಕಾಲಕ್ಕೆ ಬರುತ್ತಿದ್ದವು ಎಂದಿದ್ದಾರೆ. ಇದ್ಯಾವ ನೀತಿ? ಎರಡೆರಡು ಮೆರವಣಿಗೆ ಬರಬಾರದೇ ಎಂದು ಪ್ರಶ್ನಿಸಿದರು.

ನಮ್ಮದೇ ಸರ್ಕಾರವೆಂಬ ಭಾವನೆ: ರಾಜ್ಯದಲ್ಲಿ ನಮ್ಮದೇ ಸರ್ಕಾರವಿದೆ. ನಾವೇನೇ ಮಾಡಿದರೂ ನಡೆಯುತ್ತದೆ ಎಂಬ ಭಾವನೆ ಒಂದು ವರ್ಗದಲ್ಲಿ ಮೂಡಿದೆ. ಹಾಗಾಗಿ ಕಿಡಿಗೇಡಿಗಳು ಇಂಥ ದುಸ್ಸಾಹಸಕ್ಕೆ ಕೈ ಹಾಕುತ್ತಿದ್ದಾರೆ. ಸರ್ಕಾರ ಮತಾಂಧ ಶಕ್ತಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳದೆ, ಪ್ರಕರಣ ಹಿಂಪಡೆಯುವುದು ಮತ್ತು ಅದಕ್ಕೆ ಪ್ರೋತ್ಸಾಹಕ ರೀತಿ ನಡೆದುಕೊಳ್ಳುತ್ತಿರುವುದೇ ಇದಕ್ಕೆಲ್ಲ ಕಾರಣ ಎಂದು ವಾಗ್ದಾಳಿ ನಡೆಸಿದರು.

ಮದ್ದೂರು ಕೋಮು ಹಿಂಸಾಚಾರಕ್ಕೆ ಸಿಎಂ ಸಿದ್ದರಾಮಯ್ಯ ರಾಜ್ಯದ ಜನತೆ ಕ್ಷಮೆಯಾಚಿಸಬೇಕು

ವಿಪಕ್ಷ ನಾಯಕ ಆರ್.ಅಶೋಕ್ ಆಗ್ರಹ



ಬೆಂಗಳೂರು, ಸೆ.8– ಮದ್ದೂರಿನ ಕೋಮು ಹಿಂಸಾಚಾರದ ಬಗ್ಗೆ ಸಿಎಂ ಸಿದ್ದರಾಮಯ್ಯ ಅವರು ಕ್ಷಮೆಯಾಚಿಸಬೇಕೆಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಆಗ್ರಹಿಸಿದ್ದಾರೆ.

ಕಳೆದ ರಾತ್ರಿ ಮದ್ದೂರಿನಲ್ಲಿ ಗಣೇಶ ಮೆರವಣಿಗೆಯ ಸಂದರ್ಭದಲ್ಲಿ ಮದ್ದೂರು ಪಟ್ಟಣದಲ್ಲಿ ನಡೆದ ಕೋಮು ಹಿಂಸಾಚಾರದ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯದ ಜನರಿಗೆ ಕ್ಷಮೆಯಾಚಿಸಬೇಕೆಂದು ಎಂದರು.

ಕಾಂಗ್ರೆಸ್ ಸರ್ಕಾರದ ತುಷ್ಟೀಕರಣ ರಾಜಕೀಯದಿಂದ ದುಷ್ಕರ್ಮಿಗಳಿಗೆ ಗಲಾಟೆ ಮಾಡಲು ಧೈರ್ಯ ಬರುತ್ತಿದೆ. ಹಿಂದೂಗಳನ್ನು ಎರಡನೇ ದರ್ಜೆಯ ಪ್ರಜೆಗಳಾಗಿ ಪರಿಗಣಿಸುವ ಒಂದು ವಿಶಿಷ್ಟ ಪರಿಸ್ಥಿತಿ ಸೃಷ್ಟಿಯಾಗುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಧರ್ಮಸ್ಥಳ ದೇವಾಲಯ, ನಂತರ ಮೈಸೂರು ಚಾಮುಂಡೇಶ್ವರಿ ದೇವಿ ಈಗ ಮದ್ದೂರು ಘಟನೆ ಮೂಲಕ ದೇವರಿಗೆ ಅವಮಾನ ಮಾಡಿದ್ದಾರೆ, ಇದಕ್ಕೆ ಕ್ಷಮೆಯಾಚಿಸಬೇಕು ಎಂದರು.

ಮದ್ದೂರಿನಲ್ಲಿ ಗಣೇಶ ಮೆರವಣಿಗೆಯಲ್ಲಿ ಕಲ್ಲು ತೂರಿಸಿದ ಘಟನೆ ದೊಡ್ಡ ಪಿತೂರಿ. ಕಾಂಗ್ರೆಸ್ ತನ್ನ ನೀತಿಗಳು ಮತ್ತು ಹೇಳಿಕೆಗಳ ಮೂಲಕ ಇಂತಹ ಕೃತ್ಯಗಳನ್ನು ಪರೋಕ್ಷವಾಗಿ ಬೆಂಬಲಿಸುತ್ತಿದೆ ಎಂದು ಅವರು ಆರೋಪಿಸಿದರು. ಇದು ಒಂದು ಘೋರ ಕೃತ್ಯ, ಜನರು ಇದು ಕರ್ನಾಟಕವೇ ಅಥವಾ ಪಾಕಿಸ್ತಾನವೇ ಎಂಬ ಗೊಂದಲದ ಸ್ಥಿತಿಯಲ್ಲಿದ್ದಾರೆ. ಇದು ಕಳೆದ ಎರಡು ವರ್ಷಗಳಿಂದ ನಡೆಯುತ್ತಿದೆ. ಧರ್ಮಸ್ಥಳ ಮತ್ತು ಚಾಮುಂಡೇಶ್ವರಿ ದೇವಸ್ಥಾನದ ನಂತರ ಈಗ ಮದ್ದೂರು ಪಟ್ಟಣ ಸರದಿ ಎಂದು ಅಶೋಕ್ ಆರೋಪಿಸಿದರು.

ಗಣೇಶ ಮೆರವಣಿಗೆ ಸಾಗುವ ರಸ್ತೆ ಸಾರ್ವಜನಿಕರದ್ದು, ಇದು ಕರ್ನಾಟಕದ ಜನರಿಗೆ ಸೇರಿದ ರಸ್ತೆ, ಇದು ತೆರಿಗೆದಾರರ ರಸ್ತೆ, ಘರ್ಷಣೆಯನ್ನು ತಡೆಗಟ್ಟಲು ಸರ್ಕಾರ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕಿತ್ತು. ಈ ಘಟನೆ ಹಿಂದೆ ಹಿಂದೂಗಳನ್ನು ಗುರಿಯಾಗಿಸಲು ಮಂಡ್ಯ ಮತ್ತು ಮೈಸೂರಿನಲ್ಲಿ ಕುತಂತ್ರ ನಡೆಸಿರಬಹುದು. ಹಿಂದೂಗಳನ್ನು ವ್ಯವಸ್ಥಿತವಾಗಿ ಗುರಿಯಾಗಿಸಲಾಗುತ್ತಿದೆ ಎಂದರು.

ಸಾಮಾಜಿಕ ಜಾಲತಾಣದಲ್ಲಿ ನಿಮ್ಮ ಎಂಗೇಜ್‌ಮೆಂಟ್ ಎಷ್ಟಿದೆ: ಸಂಸದರಿಗೆ ನರೇಂದ್ರ ಮೋದಿ ಪ್ರಶ್ನೆ

● ಬಿಜೆಪಿ ಸಂಸದರಿಗೆ ಕಾರ್ಯಾಗಾರ ● 8 ತಿಂಗಳ ಚಟುವಟಿಕೆ ಟ್ರ್ಯಾಕ್ ಮಾಡಿ ಕಳಪೆ ಸಾಧನೆ ಮಾಡಿದವರಿಗೆ ಕ್ಲಾಸ್

ನವದೆಹಲಿ, ಸೆ.8– ಸಾಮಾಜಿಕ ಜಾಲತಾಣದಲ್ಲಿ ನಿಮ್ಮ ಎಂಗೇಜ್‌ಮೆಂಟ್ ಎಷ್ಟಿದೆ ಎಂದು ಸಂಸದರ ಬಳಿ ಪ್ರಧಾನಿ ನರೇಂದ್ರ ಮೋದಿ ವರದಿ ಕೇಳಿದ್ದಾರೆ.

ಸಂಸತ್ತಿನ ಗ್ರಂಥಾಲಯ ಕಟ್ಟಡದಲ್ಲಿ ಬಿಜೆಪಿ ಸಂಸದರಿಗೆ ಕಾರ್ಯಾಗಾರ ಆಯೋಜನೆಗೊಂಡಿತ್ತು. ಈ ಕಾರ್ಯಾಗಾರದಲ್ಲಿ ಸಾಮಾಜಿಕ ಜಾಲತಾಣದಲ್ಲಿ ಸಕ್ರಿಯವಾಗಿರುವುದು ಹೇಗೆ? ಅಭಿವೃದ್ಧಿ ಯೋಜನೆಗಳನ್ನು ಜನರಿಗೆ ತಲುಪಿಸುವುದು ಹೇಗೆ ಸೇರಿದಂತೆ ಪ್ರಮುಖ ರಾಷ್ಟ್ರೀಯ ವಿಷಯಗಳನ್ನು ಚರ್ಚಿಸಲಾಯಿತು ಎಂದು ವರದಿ ತಿಳಿಸಿವೆ.

ಸಂಸದರನ್ನು ಉದ್ದೇಶಿಸಿ ಮಾತನಾಡಿದ ಮೋದಿ, ಚುನಾವಣೆಗಳನ್ನು ಗೆಲ್ಲಲು ಅಭಿವೃದ್ಧಿ ಸಾಕಾಗುವುದಿಲ್ಲ. ಮತದಾರರೊಂದಿಗೆ ಸಂಪರ್ಕ ಸಾಧಿಸಲು ಮತ್ತು ಅವರೊಂದಿಗೆ ತೊಡಗಿಸಿಕೊಳ್ಳಲು ಇನ್‌ಸ್ಟಾಗ್ರಾಮ್‌ನಂತಹ ವೇದಿಕೆಗಳನ್ನು ಸಕ್ರಿಯವಾಗಿ ಬಳಸುವುದು ಬಹಳ ಮುಖ್ಯ ಎಂದು ಸಲಹೆ ನೀಡಿದರು.

ಸಭೆಯಲ್ಲಿದ್ದ ಎಲ್ಲಾ ಸಂಸದರಿಗೆ ಅವರ ಸಾಮಾಜಿಕ ಮಾಧ್ಯಮ ಚಟುವಟಿಕೆಯ ವರದಿಗಳನ್ನು ನೀಡಲಾಯಿತು. ಈ ವೇಳೆ ಸಾಮಾಜಿಕ ಮಾಧ್ಯಮದಲ್ಲಿ ನಿಷ್ಕ್ರಿಯರಾಗಿರುವ ಸಂಸದರಿಗೆ ಕ್ಲಾಸ್ ಮಾಡಲಾಯಿತು.



ಸಂಸತ್ತಿನ ಗ್ರಂಥಾಲಯ ಕಟ್ಟಡದಲ್ಲಿ ಬಿಜೆಪಿ ಸಂಸದರಿಗೆ ಆಯೋಜನೆಗೊಂಡಿದ್ದ ಕಾರ್ಯಾಗಾರ

ಉದಾಹರಣೆಗೆ ಒಂದು ತಿಂಗಳಲ್ಲಿ ಫೇಸ್‌ಬುಕ್‌ನಲ್ಲಿ ಯಾವುದೇ ಪೋಸ್ಟ್‌ಗಳನ್ನು ಮಾಡದ ಸಂಸದರನ್ನು 'ನಿಷ್ಕ್ರಿಯ' ಮತ್ತು ಕೆಂಪು ಎಂದು ಟ್ಯಾಗ್ ನೀಡಲಾಗಿತ್ತು. ಒಂದು ತಿಂಗಳಲ್ಲಿ 0–60 ಪೋಸ್ಟ್‌ಗಳನ್ನು ಹೊಂದಿರುವವರನ್ನು 'ಕಡಿಮೆ ಸಕ್ರಿಯ' ಮತ್ತು ಹಳದಿ ಎಂದು ಟ್ಯಾಗ್ ಮಾಡಲಾಗಿತ್ತು. 60 ಕ್ಕೂ ಹೆಚ್ಚು ಪೋಸ್ಟ್ ಮಾಡಿದವರನ್ನು 'ಸಕ್ರಿಯ' ಮತ್ತು ಹಸಿರು ಎಂದು ಟ್ಯಾಗ್ ಮಾಡಲಾಗಿತ್ತು.

ಕಾರ್ಯಾಗಾರದ ಸಮಯದಲ್ಲಿ ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಅವರು ಚುನಾಯಿತ ಪ್ರತಿನಿಧಿಗಳು ಸಾರ್ವಜನಿಕ ಸಂಪರ್ಕಕ್ಕಾಗಿ ಸಾಮಾಜಿಕ ಮಾಧ್ಯಮವನ್ನು ಹೇಗೆ ಬಳಸಬಹುದು ಎಂಬುದರ ಕುರಿತು ಪ್ರಸ್ತುತಿ ನೀಡಿದರು.

ಸರ್ಕಾರದ ಓಲೈಕೆ ರಾಜಕಾರಣವೇ ಮದ್ದೂರು ಗಲಭೆಗೆ ಕಾರಣ

ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಆರೋಪ



ನವದೆಹಲಿ, ಸೆ.8– ಕಾಂಗ್ರೆಸ್ ಸರ್ಕಾರದ ಓಲೈಕೆ ರಾಜಕಾರಣದಿಂದ ಮಂಡ್ಯದ ಮದ್ದೂರಿನಲ್ಲಿ ಗಣೇಶ ಮೆರವಣಿಗೆ ವೇಳೆ ಕಲ್ಲು ತೂರಾಟ ನಡೆದಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾಲಿ ಸಂಸದ ಬಸವರಾಜ ಬೊಮ್ಮಾಯಿ ಕಿಡಿಕಾರಿದ್ದಾರೆ.

ನವದೆಹಲಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಮದ್ದೂರಿನಲ್ಲಿ ನಡೆದ ಘಟನೆ ಪೂರ್ವ ನಿಯೋಜಿತ ಕೃತ್ಯವಾಗಿದೆ. ಮೊದಲೇ ಕಲ್ಲುಗಳನ್ನು ಶೇಖರಣೆ ಮಾಡಿ ಮೆರವಣಿಗೆ ವೇಳೆ ಕಲ್ಲೆಸೆದಿದ್ದಾರೆ. ಅಲ್ಲಿ ಪೊಲೀಸ್ ಇಲಾಖೆ ಹಾಗೂ ಸರ್ಕಾರದ ವೈಫಲ್ಯ ಎದ್ದು ಕಾಣುತ್ತಿದೆ. ಮ್ಯಾಜಿಸ್ಟ್ರೇಟ್ ತನಿಖೆ ಮಾಡಿ, ತಪ್ಪಿತಸ್ಥರಿಗೆ ಶಿಕ್ಷೆ ನೀಡಲಿ ಎಂದು ಆಗ್ರಹಿಸಿದ್ದಾರೆ.

ಪೊಲೀಸ್ ಇಲಾಖೆ ಸೂಕ್ತ ಬಂದೋಬಸ್ತ್ ಮಾಡಿಕೊಳ್ಳುವಲ್ಲಿ ಸಂಪೂರ್ಣ ವಿಫಲವಾಗಿದೆ. ಘಟನೆಯ ನಂತರ ಪೊಲೀಸರು ಸ್ಥಳಕ್ಕೆ ತೆರಳಿದ್ದಾರೆ. ಘಟನೆಯಲ್ಲಿ ಅಮಾಯಕರನ್ನು ಬಂಧಿಸಿದ್ದಾರೆ. ಇಂದು ಹಿಂದೂ ಸಂಘಟನೆಗಳು ಪ್ರತಿಭಟನೆ ಮಾಡಿದಾಗ ಅವರ ಮೇಲೆ ಪೊಲೀಸರು ವಿನಾಕಾರಣ ಲಾಠಿಚಾರ್ಜ್ ಮಾಡಿದ್ದಾರೆ. ಪೊಲೀಸರು ದಮನಕಾರಿ ನೀತಿ ಅನುಸರಿಸಿದ್ದಾರೆ ಎಂದು ಆರೋಪಿಸಿದ್ದಾರೆ.

ಸಂವಿಧಾನದ ಬಗ್ಗೆ ಬಹಳ ಮಾತನಾಡುವ ಸಿಎಂ ಸಿದ್ದರಾಮಯ್ಯ ಅವರೇ, ಸಂವಿಧಾನದಲ್ಲಿ ಎಲ್ಲಾ ಧರ್ಮೀಯರಿಗೆ ಅವರವರ ಧರ್ಮದ ಆಚರಣೆಗೆ ಅವಕಾಶ ಇದೆ. ಈದ್‌ಮಿಲಾದ್ ಹಬ್ಬವು ರಾಜ್ಯಾದ್ಯಂತ ಶಾಂತ ರೀತಿಯಿಂದ ನಡೆಯುತ್ತದೆ. ಆದರೆ, ಗಣೇಶನ ಹಬ್ಬದಲ್ಲಿ ಶಾಂತಿ ಕದಡಿ ಹಿಂಸಾತ್ಮಕವಾಗಿ ಮಾಡಬೇಕು ಎನ್ನುವ ಹುನ್ನಾರದಿಂದ ಈ ರೀತಿ ಮಾಡಿದ್ದಾರೆ ಆಕ್ರೋಶ ಹೊರಹಾಕಿದ್ದಾರೆ.

ಗಣೇಶನ ಹಬ್ಬದಲ್ಲಿ ಪೊಲೀಸರು ಪೂಜೆಗೆ, ಮೆರವಣಿಗೆಗೆ, ಸೌಂಡ್ ಸಿಸ್ಟಮ್‌ಗೆ ಎಲ್ಲದಕ್ಕೂ ನಿರ್ಬಂಧ ಹೇರುತ್ತಾರೆ. ಇದು ಸಂವಿಧಾನ ವಿರೋಧಿ ಅಲ್ಲವೇ? ಪೊಲೀಸರು ಎಲ್ಲ ಸಮುದಾಯಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಆಚರಣೆಗೆ ಅವಕಾಶ ನೀಡಬಹುದು. ಶಿವಮೊಗ್ಗ, ಚಿತ್ರದುರ್ಗ, ಉತ್ತರ ಕರ್ನಾಟಕ ಎಲ್ಲಾ ಕಡೆ ಶಾಂತ ರೀತಿಯಾಗಿ ಗಣೇಶೋತ್ಸವ ಮೆರವಣಿಗೆ ನಡೆದಿದೆ. ಮಂಡ್ಯದಲ್ಲಿ ಯಾಕೆ ಮಾಡಲು ಆಗಲಿಲ್ಲ. ಮಂಡ್ಯದಲ್ಲಿ ಪೊಲೀಸರು ಮತ್ತು ಸರ್ಕಾರದ ವೈಫಲ್ಯವಾಗಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಗೃಹ ಸಚಿವರ ಬೇಜವಾಬ್ದಾರಿ ಹೇಳಿಕೆ: ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ಘಟನೆಯನ್ನು ಬಹಳ ಹಗುರವಾಗಿ ತೆಗೆದುಕೊಂಡು, ಬೇಜವಾಬ್ದಾರಿಯಿಂದ ಮಾತನಾಡಿದ್ದಾರೆ. ಕಾನೂನು ಸುವ್ಯವಸ್ಥೆ ಕಲ್ಪಿಸುವುದು ಸರ್ಕಾರದ ಜವಾಬ್ದಾರಿ. ಅನವಶ್ಯಕವಾಗಿ ಬಿಜೆಪಿ ಮೇಲೆ ಆರೋಪ ಮಾಡುವುದನ್ನು ಬಿಟ್ಟು ನಿಷ್ಪಕ್ಷಪಾತವಾಗಿ ತಮ್ಮ ಕರ್ತವ್ಯ ಮಾಡುವುದನ್ನು ಕಲಿಯಲಿ, ಓಲೈಕೆ ರಾಜಕಾರಣ ಮಾಡುವುದರ ಪರಿಣಾಮದಿಂದಾಗಿ ಈ ಘಟನೆ ನಡೆದಿದೆ ಎಂದಿದ್ದಾರೆ.

ಸಮಾಜಘಾತುಕ ಶಕ್ತಿಗಳು ಏನು ಮಾಡಿದರೂ ನಡೆಯುತ್ತದೆ ಎನ್ನುವ ಭರವಸೆಯನ್ನು ಈ ಸರ್ಕಾರ ನೀಡಿದೆ. ಹೀಗಾಗಿ, ಕಾನೂನು ಮತ್ತು ಪೊಲೀಸರ ಭಯ ಇಲ್ಲದೆ ಅವರು ನಿರ್ಭೀತಿಯಿಂದ ಹಿಂಸಾತ್ಮಕ ಕೃತ್ಯಗಳನ್ನು ಮಾಡುತ್ತಿದ್ದಾರೆ. ಇದು ಅತ್ಯಂತ ಖಂಡನೀಯ. ಮಂಡ್ಯದಲ್ಲಿ ಶಾಂತಿ ನೆಲೆಸಬೇಕು. ಎಲ್ಲಾ ಧರ್ಮೀಯರು ತಮ್ಮ ಹಬ್ಬಗಳ ಆಚರಣೆಗೆ ಅವಕಾಶ ದೊರೆಯಬೇಕು ಎಂದು ಹೇಳಿದ್ದಾರೆ.

ನಕ್ಕರೆ ಅದೇ ಸ್ವರ್ಗ

ಗಂಡ : ಎಲ್ಲಿ ಕಣ್ಮರೆಯಾಗಿದ್ದೆ 4 ಗಂಟೆಯಿಂದ?
ಹೆಂಡತಿ : ಮಾಲ್‌ಗೆ ಹೋಗಿದ್ದೆ ಶಾಪಿಂಗ್ ಮಾಡಲು.
ಗಂಡ : ಏನೇನು ತಗೊಂಡೆ?
ಹೆಂಡತಿ : ಒಂದು ಹೇರ್ ಬ್ಯಾಂಡ್ ಮತ್ತು 45 ಸೆಲ್ಫೀ ಫೋಟೋಗಳು.

ಮೈಸೂರು ಮಿತ್ರ

ಮಂಗಳವಾರ, 9 ಸೆಪ್ಟೆಂಬರ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ......

ಯಾವ ವ್ಯಕ್ತಿ ಸ್ಪಷ್ಟವಾಗಿ, ಸ್ವಚ್ಛವಾಗಿ ನೇರವಾಗಿ ಮಾತನಾಡುತ್ತಾನೋ ಆತನ ಮಾತುಗಳು ತೀವ್ರವಾಗಿ, ಹರಿತವಾಗಿ ಅಥವಾ ಕಠೋರವಾಗಿಯೂ ಇರಬಹುದು. ಆದರೆ, ಆತನ ಮನಸ್ಸಿನಲ್ಲಿ ಯಾವುದೇ ಮೋಸವಿರುವುದಿಲ್ಲ. – ಶ್ರೀ ಸಿದ್ದೇಶ್ವರ ಸ್ವಾಮಿಗಳು.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ತುಂಬಿದ ಕೊಡ ತುಳುಕುವುದಿಲ್ಲ.

ನಿಮ್ಮ ಪತ್ರಗಳು

■ ಅಂತೂ ಇಂತೂ ಬರಲಿದೆ ಕ್ಯಾನ್ಸರಿಗೂ ಲಸಿಕೆ!

ಮಾನ್ಯರೆ,

ಕ್ಯಾನ್ಸರ್ ವಿರುದ್ಧ ರೋಗ ನಿರೋಧಕ ವ್ಯವಸ್ಥೆ ಅಭಿವೃದ್ಧಿಪಡಿಸುವ ವಿಶ್ವದ ಮೊದಲ ಕ್ಯಾನ್ಸರ್ ಲಸಿಕೆಯನ್ನು ರಷ್ಯಾದ ವಿಜ್ಞಾನಿಗಳು ಅಭಿವೃದ್ಧಿಪಡಿಸಿರುವುದು ಸ್ವಾಗತಾರ್ಹವಾಗಿದೆ. ಪರೀಕ್ಷೆ ವೇಳೆ ಇದು ಶೇ.100ರಷ್ಟು ಸುರಕ್ಷಿತ ಎಂದು ಹೇಳಲಾಗಿದ್ದು ಆ ದೇಶದ ಫೆಡರಲ್ ಸರ್ಕಾರದ ಒಪ್ಪಿಗೆ ಬಾಕಿ ಇದೆ ಎನ್ನಲಾಗಿದೆ. ಜಗತ್ತನ್ನು ಕಾಡುವ ಅತ್ಯಂತ ಭೀಕರ ರೋಗಗಳ ಪೈಕಿ ಒಂದೆನಿಸಿರುವ ಕ್ಯಾನ್ಸರ್ ಮಹಾಮಾರಿಯ ಹೆಡೆಮುರಿ ಕಟ್ಟುವ ಲಸಿಕೆಯೊಂದಕ್ಕೆ ವೈದ್ಯಕೀಯ ಜಗತ್ತು ಹಲವಾರು ದಶಕಗಳಿಂದ ಕಾತುರತೆಯಿಂದ ಎದುರು ನೋಡುತ್ತಿತ್ತು.

'ಎಂಟಿರೋಮಿಕ್ಸ್' ಎಂಬ ಹೆಸರಿನ ಈ ಲಸಿಕೆ ಪೂರ್ವ ಕ್ಲಿನಿಕಲ್ ಟ್ರಯಲ್‌ನಲ್ಲಿ ದೊಡ್ಡ ದೊಡ್ಡ ಟ್ಯೂಮರ್‌ಗಳನ್ನು ಹೊಂದಿರುವ ರೋಗಿಗಳ ಮೇಲೆ ಪ್ರಯೋಗ ಮಾಡಲಾಗಿದ್ದು, ಟ್ಯೂಮರ್‌ಗಳ ಗಾತ್ರವನ್ನು ಕುಗ್ಗಿಸುವಲ್ಲಿ ಮೇಲೆ ಹೇಳಲಾದ ವ್ಯಾಕ್ಸಿನ್ ಯಶಸ್ವಿಯಾಗಿದೆ ಎಂದು ರಷ್ಯಾದ ಫೆಡರಲ್ ಮೆಡಿಕಲ್ ಮತ್ತು ಬಯಾಲಾಜಿಕಲ್ ಏಜೆನ್ಸಿ ತಿಳಿಸಿದೆ ಎಂದು ರಷ್ಯಾದ ವಾರ್ತಾ ಸಂಸ್ಥೆಗಳು ವರದಿ ಮಾಡಿವೆ. ಪ್ರತಿವರ್ಷ ವಿಶ್ವಾದ್ಯಂತ ಕ್ಯಾನ್ಸರ್‌ನಿಂದ ಲಕ್ಷಾಂತರ ರೋಗಿಗಳು ಮರಣ ಹೊಂದುತ್ತಿದ್ದಾರೆ. ಬ್ಲಡ್ ಕ್ಯಾನ್ಸರ್, ಲಿವರ್ ಕ್ಯಾನ್ಸರ್, ಶ್ವಾಸಕೋಶದ ಕ್ಯಾನ್ಸರ್, ಚರ್ಮ ಕ್ಯಾನ್ಸರ್, ಸ್ತನ ಕ್ಯಾನ್ಸರ್, ಗರ್ಭಾಶಯದ ಕ್ಯಾನ್ಸರ್, ಗಂಟಲು ಕ್ಯಾನ್ಸರ್ ಸೇರಿದಂತೆ ವಿವಿಧ ರೀತಿಯ ಕ್ಯಾನ್ಸರ್‌ಗಳಿಂದ ಮನಕುಲ ಬಳಲಿ ಬೆಂಡಾಗಿದೆ. ಕ್ಯಾನ್ಸರ್ ಚಿಕಿತ್ಸೆಗಾಗಿ ಲಕ್ಷಾಂತರ ರೂಪಾಯಿಗಳನ್ನು ಖರ್ಚು ಮಾಡಿದರೂ ಸಹ ಬದುಕುವ ಸಂಭವ ಕಡಿಮೆ. ಈ ಹಿನ್ನೆಲೆಯಲ್ಲಿ ಕ್ಯಾನ್ಸರ್ ಲಸಿಕೆಯನ್ನು ಇಡೀ ವಿಶ್ವವೇ ಬರಮಾಡಿಕೊಳ್ಳಲು ಸಜ್ಜಾಗಿದೆ. **–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು.**

■ ಸರ್ವಧರ್ಮ ಸಹಬಾಳ್ವೆಯಿಂದ ವರ್ತಿಸಿ

ಮಾನ್ಯರೆ,



ಇತ್ತೀಚಿನ ಕೆಲವು ದಿನಗಳಿಂದ ಹೆಚ್ಚು ಚರ್ಚೆಗೆ ಗ್ರಾಸವಾಗಿರುವ ವಿಷಯ ಅಂದರೆ ಅದು ವಿಶ್ವ ವಿಖ್ಯಾತ ನಾಡಹಬ್ಬ ದಸರಾ ಉದ್ಘಾಟನೆಯ ವಿಚಾರವಾಗಿದೆ. ನಮ್ಮ ರಾಜಕೀಯ ನಾಯಕರು ನಾಡಹಬ್ಬ ದಸರಾಕ್ಕೆ ಧರ್ಮವನ್ನು ಬೆರೆಸಿ ಜನತೆಯಲ್ಲಿ ಧಾರ್ಮಿಕ ವೈಷಮ್ಯ ಬೆಳೆಯುವ ಹಾಗೆ ಚರ್ಚಿಸಲಾಗುತ್ತಿರುವುದು ತುಂಬಾ ವಿಷಾದನೀಯ. ನಮ್ಮ ರಾಜ್ಯದಲ್ಲಿ, ದೇಶದಲ್ಲಿ ಅನೇಕ ಸಮಸ್ಯೆಗಳಿವೆ. ನಿರುದ್ಯೋಗ ಸಮಸ್ಯೆಯಿಂದ ಯುವಜನರ ಜೀವನ ಚಿಂತಾಜನಕವಾಗಿದೆ. ರೈತರು ತಾವು ಎಷ್ಟೇ ಶ್ರಮಪಟ್ಟು ದುಡಿದರು ಸರಿಯಾದ ಪ್ರತಿಫಲ ಸಿಗದೇ ಸಾಲದ ಸುಳಿಯಲ್ಲಿ ಸಿಕ್ಕಾಕಿಕೊಂಡಿದ್ದಾರೆ. ಬಡ ಜನರಿಗೆ ಸರ್ಕಾರಿ ಆಸ್ಪತ್ರೆಯಲ್ಲಿ ಸರಿಯಾದ ಚಿಕಿತ್ಸೆ, ಔಷಧ ಸಿಗದೆ ಪರದಾಡುತ್ತಿದ್ದಾರೆ. ಬಡತನ, ಹಸಿವು, ಬೆಲೆ ಏರಿಕೆ, ಸಾಮಾಜಿಕ ಅಸಮಾನತೆ, ವೇತನ ತಾರತಮ್ಯ ಇಂತಹ ವಿಷಯಗಳ ಬಗ್ಗೆ ಹೆಚ್ಚು ಒತ್ತುಕೊಟ್ಟು ಸಮಸ್ಯೆ ಪರಿಹಾರದ ಬಗ್ಗೆ ಚರ್ಚಿಸುವುದು ಒಪ್ಪಿತ. ರಾಜ್ಯದ ಜನತೆ ನಿಮ್ಮನ್ನು ತಮ್ಮ ಪ್ರತಿನಿಧಿಯಾಗಿ ಕಳುಹಿಸಿರುವುದು ನೀವು ಧರ್ಮಾಂಧರಾಗಲೆಂದಲ್ಲ. ಇನ್ನಾದರೂ ರಾಜ್ಯದ ಜನಪ್ರತಿನಿಧಿಗಳು ಮತ್ತು ಜನರು ಸರ್ವಧರ್ಮ ಸಹಬಾಳ್ವೆಯಿಂದ ವರ್ತಿಸಿ ರಾಜ್ಯದ ಅಭಿವೃದ್ಧಿ ಕಾರ್ಯಗಳಿಗೆ ಹೆಚ್ಚು ಒತ್ತು ಕೊಡಬೇಕೆಂದು ನನ್ನ ಮನವಿ. **–ರಾಜು ಹೊಸವೀಡುಹುಂಡಿ**

■ ದಸರಾ ಜನಸಾಮಾನ್ಯರ ಜೊತೆಗೆ ಕೆಳವರ್ಗದ ಕಾರ್ಮಿಕರ ದಸರಾ ಆಗಲಿ

ಮಾನ್ಯರೆ,

ಮೈಸೂರು ನಗರದ ಮಾಜಿ ಮೇಯರ್ ಸಂದೇಶ್ ಸ್ವಾಮಿಯವರು ಪಾರಂಪರಿಕ ಹಾಗೂ ಇತಿಹಾಸಿಕ ದಸರಾ ಮಹೋತ್ಸವವನ್ನು ಜನಸಾಮಾನ್ಯರು ನೆಮ್ಮದಿಯಾಗಿ ವೀಕ್ಷಿಸಲು ಸೂಕ್ತ ವ್ಯವಸ್ಥೆ ಮಾಡಬೇಕೆಂದು ಜಿಲ್ಲಾಡಳಿತಕ್ಕೆ ಮನವಿ ಮಾಡಿದ್ದಾರೆ. (ಮಿತ್ರನ ವರದಿ ದಿ. 06.09.25.) ನಗರದ ಮಾಜಿ ಪ್ರಥಮ ಪ್ರಜೆಯ ಮನವಿಯನ್ನು ಸ್ವೀಕರಿಸಿ, ಅದರಂತೆಯೇ ನಮ್ಮ ನಗರದಲ್ಲಿ ನಿತ್ಯ ಕಾಯಕವಾಗಿಸಿಕೊಂಡಿರುವ ಪೌರಕಾರ್ಮಿಕರು, ಆಟೋ, ಟ್ಯಾಕ್ಸಿ ಚಾಲಕರು, ಆಶಾ ಕಾರ್ಯಕರ್ತೆಯರು, ಕೂಲಿ ಕಾರ್ಮಿಕರು ಇವರೆಲ್ಲರೂ ಕೂಡ ಸಂಭ್ರಮದಿಂದ ಕುಟುಂಬದವರ ಜೊತೆಗೂಡಿ ದಸರಾ ಹಾಗೂ ನಮ್ಮ ಮೈಸೂರಿನ ಹೆಮ್ಮೆಯ ದಸರಾ ಕಾರ್ಯಕ್ರಮ ಪಂಜಿನ ಕವಾಯಿತು ವೀಕ್ಷಿಸಲು 'ಉಚಿತ ಪಾಸ್'ಗಳನ್ನು ವಿತರಿಸಬೇಕೆಂದು ಜಿಲ್ಲಾಡಳಿತಕ್ಕೆ ಮನವಿ ಮಾಡುತ್ತೇವೆ. ಇನ್ನೊಂದು ವಿಚಾರವನ್ನು ಜನಸಾಮಾನ್ಯರ ಗಮನಕ್ಕೆ ತರಲು ಬಯಸುತ್ತೇನೆ. ಅದೇನೆಂದರೆ, ನಾನು ಕುಟುಂಬದೊಂದಿಗೆ ಕಳೆದ ಬಾರಿ (2023) ಇದ್ದಂತಹ ರಿಹರ್ಸಲ್ ಏರ್ ಶೋ ನೋಡಲು ತೆರಳಿದ್ದೆ. ಬನ್ನಿಮಂಟಪದ ಕವಾಯಿತು ಮೈದಾನಕ್ಕೆ ಪ್ರವೇಶಿಸಲು ಅಂದೂ ಕೂಡ ಪಾಸ್‌ಗಳ ಅಗತ್ಯ ಇತ್ತು. ನಮಗೆ ಪಾಸ್ ಅಗತ್ಯ ತಿಳಿದ ಅಪರಿಚಿತ ವ್ಯಕ್ತಿ ಬಂದು ನಾವು ಇದ್ದ ಮೂವರಿಗೆ ಒಟ್ಟು ರೂ. 1500 ತೆಗೆದುಕೊಂಡು ಪ್ರವೇಶ ದ್ವಾರದ ಬಳಿ ಹೋಗಿ ಎಂದು ಹೇಳಿದನು. ನಾವು ಪ್ರವೇಶ ದ್ವಾರದ ಬಳಿ ಹೋದಾಗ 2 ಗಂಟೆಗಳ ಮುಂಚೆ ಬರಬೇಕೆಂದು ನಮಗೆ ಪ್ರವೇಶ ನಿರಾಕರಿಸಿದರು. ಆದುದರಿಂದ ತರಾತುರಿಯಲ್ಲಿ ಯಾವುದೇ ಪಾಸ್‌ಗಳನ್ನು ಕೊಂಡುಕೊಳ್ಳಬೇಡಿ ಎಂದು ಮನವಿ.
–ಸೋಮಶೇಖರ್, ಇಲವಾಲ

■ ಶಾಲೆಗಳಲ್ಲಿ ವಾಟರ್ ಬೆಲ್ ಅನುಷ್ಠಾನ ಅನಿವಾರ್ಯ

ಮಾನ್ಯರೆ.

ಇತ್ತೀಚಿನ ದಿನಗಳಲ್ಲಿ ಪೋಷಕರು ಮಕ್ಕಳನ್ನು ಶಾಲೆಗಳಿಗೆ ಕಳುಹಿಸುವಾಗ ಅವರ ಊಟ ತಿಂಡಿಯ ಬಗ್ಗೆ ಗಮನ ಹರಿಸಿ ಲಂಚ್ ಬ್ಯಾಗ್ ಜೊತೆಯಲ್ಲಿ ನೀರಿನ ಬಾಟಲಿ ಕೂಡ ಕೊಟ್ಟು ಕಳುಹಿಸಿ ಕೊಡುತ್ತಾರೆ. ಆದರೆ ಊಟದ ಸಮಯದಲ್ಲಿ ಮಕ್ಕಳು ಊಟ ಮತ್ತು ನೀರಿನ ಬಗ್ಗೆ ಗಮನ ಹರಿಸದೆ ಅರ್ಧ–ಬರ್ಧ ತಿಂದು ನೀರನ್ನು ಕುಡಿಯದೆ ಕ್ಲಾಸ್‌ಗೆ ಹೊರಟು ಬಿಡುತ್ತಾರೆ. ಇದರಿಂದ ಅವರಲ್ಲಿ ನೀರಿನಾಂಶ ಕೊರತೆ ಕಂಡು ಬರಬಹುದು. ಈ ನಿಟ್ಟಿನಲ್ಲಿ ಶಿಕ್ಷಣ ಇಲಾಖೆ ಶಾಲಾ ಮಕ್ಕಳಿಗೆ ನೀರು ಕುಡಿಯಲು ಉತ್ತೇಜಿಸುವ ಸಲುವಾಗಿ ದಿನಕ್ಕೆ ಮೂರು ಬಾರಿ ವಾಟರ್ ಬೆಲ್ ಬಾರಿಸಿ ಮಕ್ಕಳು ನೀರು ಕುಡಿಯುವ ಕಾರ್ಯಕ್ರಮ ಜಾರಿಗೆ ತರಲು ಮುಂದಾಗಿರುವುದು ಶ್ಲಾಘನೀಯ. **–ಪಿ.ಸಿ.ಕಂಗಾಣಿ ಸೋಮು, ಕ್ಯಾತಮಾರನಹಳ್ಳಿ, ಮೈಸೂರು**



ಡಾ. ಗುಬ್ಬಿಗೂಡು ರಮೇಶ್
ಮೊ. 97429 34512

ದೀಪ ಸಾಲು

ತೆರಿಗೆ ನೀತಿ; ಟ್ರಂಪ್ ಪ್ರತಾಪ, ಮುಂದೆ ಪ್ರಲಾಪ!?

ಮಹಾ ಯುದ್ಧಗಳ ಕಾಲ ಮುಗಿದು ನಾಗರಿಕ ಸಮಾಜಗಳು, ಮಾನವೀಯ ಮೌಲ್ಯಗಳು ಸ್ಥಿರಗೊಳ್ಳುವ ಕಾಲದಲ್ಲಿ ನಾವಿದ್ದೇವೆ ಎಂದುಕೊಂಡಿದ್ದೆವು. ಆದರೆ ಈಗ ನಾವು safe ಎನ್ನುವ ಅಭಿಪ್ರಾಯ ಅಳಿಸಿಹೋಗುವ ಆತಂಕ ಮತ್ತು ಜಟಿಲತನದೊಂದಿಗೆ ವಿಶ್ವದ ಜನ ಸಂಕುಲ ಹೆಜ್ಜೆಯಿಟ್ಟಿದೆ.

ರಾಜಪ್ರಭುತ್ವದ ಜಾಗದಲ್ಲಿ ಪ್ರಜಾಪ್ರಭುತ್ವ ಪ್ರಜೆಗಳ ಕಲ್ಯಾಣಕ್ಕಾಗಿ ದುಡಿಯುವ ಹೊಸ ಆಶೋತ್ತರಗಳನ್ನು ಹೊತ್ತು ತಂದಿತ್ತು ನಿಜ. ಆದರೆ ದುರಾಡಳಿತ, ಅಧಿಕಾರದ ಲಾಲಸೆ, ಅಧಿಕ ಸಂಪತ್ತಿನ ಶೇಖರಣೆ, ಸ್ವಜನ ಪಕ್ಷಪಾತ, ದೂರಾಲೋಚನೆಗಳಿಲ್ಲದ ನಿರ್ಧಾರಗಳು, ಇಂದು ದೇಶ–ದೇಶಗಳನ್ನು ದೂರಮಾಡಿ ಕಂಗೆಡಿಸಿವೆ, ಪ್ರಜಾಪ್ರಭುತ್ವ ತನ್ನ ಆಶೋತ್ತರಗಳ ಆಳದಲ್ಲೇ ತನ್ನ ಅಸ್ತಿತ್ವ ಉಳಿಸಿಕೊಳ್ಳಲು ಅಲವತ್ತುಕೊಳ್ಳುವ ಸ್ಥಿತಿಯಲ್ಲಿ ಬೊಕ್ಕ ಬೋರಲಾಗುತ್ತಿದೆ. ಅದಕ್ಕೆ ಮುಖ್ಯ ಕಾರಣ ರಾಜತಾಂತ್ರಿಕ ಸಂಬಂಧಗಳ ಹಳಸುವಿಕೆ, ಆರ್ಥಿಕ ಬಿಕ್ಕಟ್ಟುಗಳು, ಕೊರೊನಾದ ಪರಿಣಾಮ, ಜಗತ್ತಿನ ಹಲವು ದೇಶಗಳಲ್ಲಿ ಜನ ಉದ್ಯೋಗ, ಕಳೆದುಕೊಂಡು ತಮ್ಮ ತಮ್ಮ ಉದ್ಯೋಗ ನೀತಿಯಲ್ಲಿ ಎಲ್ಲ ದೇಶಗಳು ತಾಪತ್ರಯ ಅನುಭವಿಸಿದವು.

ನ್ಯಾಟೊ ದೇಶಗಳ ಪಂಕ್ತಿ ಸೇರಿದ ಉಕ್ರೇನ್, ರಷ್ಯಾದೊಂದಿಗಿನ ಸಂಘರ್ಷಕ್ಕೆ ಇಳಿದು ಇಂದಿಗೂ ಅದನ್ನ ಕೊನೆ ಕಾಣಿಸಲಿಲ್ಲ. ತೈಲರಾಷ್ಟ್ರಗಳ ಸಮಸ್ಯೆ ಒಂದು ತೆರನಾದರೆ, ಅಮೆರಿಕ, ಚೀನಾಗಳು ವಿಶ್ವದ ದೊಡ್ಡಣ್ಣನ ಪಟ್ಟಕ್ಕೆ ಆಂತರಿಕವಾಗಿ ಲೆಕ್ಕಾಚಾರ ಹಾಕಿ ಹಗಲಿರುಳು ಹೋರಾಡುತ್ತಿವೆ. ವಸಾಹತುಶಾಹಿ ವ್ಯವಸ್ಥೆಗಳು ಜಗತ್ತಿನಾದ್ಯಂತ ದೇಶ ದೇಶಗಳ ಆಡಳಿತದ ಚುಕ್ಕಾಣಿ ಹಿಡಿದು ಆಕ್ರಮಣಕಾರಿ ನೀತಿಗಳನ್ನು ಅನುಸರಿಸುತ್ತಿದ್ದ ಕಾಲದಲ್ಲಿ ಸಂಘರ್ಷಗಳು ಹುಟ್ಟಿದವು. ಹೋರಾಟಗಳು ಮೈತಳೆದವು. ದೇಶಪ್ರೇಮ, ತ್ಯಾಗ ಬಲಿದಾನಗಳು ಮೈತಳೆದವು, ಫಲಿತಾಂಶ ಸ್ವಾತಂತ್ರ್ಯ ಸ್ವಾಯತ್ತತೆಗಳು ದೇಶವಾಸಿಗಳ ಕೈವಶಗೊಂಡು ರಾಷ್ಟ್ರಪ್ರೇಮ, ಪ್ರಜಾ ಪ್ರಭುತ್ವಗಳು ಹೊಸ ಹೊಂಗಿರಣದ ರೂಪದಲ್ಲಿ ಕಂಗೊಳಿಸಿದವು. ಆದರೆ ಇಂದು ಜಗತ್ತು ಸಂಕುಚಿತಗೊಂಡಿದೆ, ಮನುಷ್ಯ ಮನುಷ್ಯನನ್ನ, ದೇಶ–ದೇಶಗಳನ್ನ ನಂಬಿ ವ್ಯವಹರಿಸುವ ಸಂದರ್ಭಗಳಿಂದ ವಿಕಸಿತಗೊಳ್ಳದೆ ವಿಚಲಿತಗೊಳ್ಳುತ್ತಿವೆ. ಅಮೆರಿಕದಂತಹ ದೇಶ ಕೂಡ ಜಾರ್ಜ್ ವಾಷಿಂಗ್ಟನ್, ಥಿಯೋಡರ್ ರೊಸ್ವೆಲ್ಟ್, ಥಾಮಸ್ ಜೆಫರ್ಸನ್, ಸ್ಯಾಮ್ಯುಯಲ್ ಆಡಮ್ಸ್–ಹೀಗೆ ಅಮೆರಿಕನ್ನರ ದಾಸ್ಯವಿಮೋಚನೆಗೆ ಅಲ್ಲಿನ ಸ್ವಾತಂತ್ರ್ಯ ಸೇನಾನಿಗಳ ದಂಡೇ ಅಮೆರಿಕ ಸಂಸ್ಥಾನದ ತುಂಬಾ ಸ್ವಾತಂತ್ರ್ಯದ ಕಿಚ್ಚೆಬ್ಬಿಸಿ ವಸಾಹತುಶಾಹಿ ಸಾಮ್ರಾಜ್ಯದ ವಿರುದ್ಧ ಹೋರಾಡಿದ್ದು ಇತಿಹಾಸ. ಅಂದರೆ ವಿಶ್ವದ ಬಹುತೇಕ ದೇಶಗಳು ವಸಾಹತುಶಾಹಿ ವ್ಯವಸ್ಥೆ ವಿರುದ್ಧ ಹೋರಾಡಿ ವಿಮೋಚನೆಗೊಂಡು ದಾಸ್ಯಮುಕ್ತರಾಗಿ ಪ್ರಜಾಪ್ರಭುತ್ವದ ರುಚಿ ನೋಡಿದವರು. ಆರ್ಥಿಕ ಉದಾರೀಕರಣ, ಜಾಗತೀಕರಣ, ಸಂವಹನ ಪಂಥ ವಿಚಾರಗಳು ಜಗತ್ತನ್ನು ಪರಸ್ಪರ ಹತ್ತಿರಕ್ಕೆ ತಂದು ಜಗತ್ತನ್ನು ಚಿಕ್ಕದನ್ನಾಗಿಸಿದವು. ಅಲ್ಲಿಗೆ ವಿಶ್ವದ ನಡೆ ಅಭಿವೃದ್ಧಿ ಕಡೆ ಎಂಬಂತ ವಾತಾವರಣ ಸೃಷ್ಟಿಯಾಯಿತು. ಆದರೆ ಅಭಿವೃದ್ಧಿ ಹೆಸರಿನಲ್ಲಿ ಅಮೆರಿಕ, ಚೀನಾಗಳು ಪರಸ್ಪರ ಜಗತ್ತಿನ ದೊಡ್ಡ ಡಯಾಸಿನ ಮೇಲೆ ತಮ್ಮ ತಮ್ಮ ಅಸ್ತಿತ್ವದ ಹೆಗ್ಗುರುತಿಗಾಗಿ ಹವಣಿಸಿದ್ದು ಗುಟ್ಟಾಗಿ ಉಳಿಯಲಿಲ್ಲ.

ಜಪಾನ್ ಆಗಸ್ಟ್ 6.1945, ಆಗಸ್ಟ್ 9.1945ರಂದು ಹಿರೋಶಿಮ ಮತ್ತು ನಾಗಸಾಕಿಗಳ ಮೇಲಿನ ಅಣುಬಾಂಬಿನ ಯುದ್ಧದ ದಿನಗಳ ನಂತರ ಜಾಗತಿಕ ವಿದ್ಯಮಾನಗಳ ಸಹವಾಸವೇ ಸಾಕೆನ್ನುವಂತೆ ತಾನಾಯಿತು, ತನ್ನ ದೇಶದ ಆರ್ಥಿಕಾಭಿವೃದ್ಧಿಯಾಯಿತು ಎಂಬಂತೆ ಜಾಣನಡೆಯ ಕಡೆಗೆ ಹೆಜ್ಜೆಯಿಟ್ಟು ಬಿಟ್ಟಿತು. ಆದರೆ ವಿಶ್ವದ ಜಾಗತಿಕ ವಿಚಾರಗಳಲ್ಲಿ ಭಾರತ ಕೂಡ ತನ್ನ ತಟಸ್ಥ ನಿಲುವುಗಳಿಂದ ಸ್ವಾಭಿಮಾನಿ ನಿರ್ಧಾರಗಳಿಂದ ತನ್ನದೇ ಛಾಪಿನ ಪ್ರಜಾಪ್ರಭುತ್ವವಾದಿ ಮೌಲ್ಯಗಳಿಂದ ವಿಶ್ವದ ಗಮನ ಸೆಳೆಯಿತು. ಆದರೆ ಬದಲಾದ ಸಮಯದಲ್ಲಿ ಅಮೆರಿಕ ತನ್ನ ಸುಂಕನೀತಿಯಿಂದಾಗಿ ಭಾರತವನ್ನ ಟಾರ್ಗೆಟ್ಮಾಡಿ ತೆರಿಗೆ ಹೆಚ್ಚಿಸಿ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾರತದ ವಿರುದ್ಧ ಕಾಲುಕೆರೆದು, ಜಗಳಕ್ಕೆ ನಿಂತಂತೆ ಮಾಡಿದ್ದು ಜಾಗತಿಕ ರಾಜನೀತಿಯ ಉಲ್ಲಂಘನೆ. ಕನ್ನಡದಲ್ಲೊಂದು ಗಾದೆಯಿದೆ "ನನ್ನ ಶತೃವಿನ ಶತ್ರು ನನಗೆ ಮಿತ್ರ" ಅಂತ.

ಭಾರತ, ರಷ್ಯಾದಿಂದ ಕಚ್ಚಾತೈಲ ಖರೀದಿ ಮಾಡಿದರೆ ಅಮೆರಿಕದಿಂದ ಭಾರತಕ್ಕೆ ತೆರಿಗೆ ಬರೆ ಎನ್ನುವುದೇ ಅಮೆರಿಕದ ಸುಂಕ ನೀತಿ ಎಂದಾದರೆ ಅಮೆರಿಕದ ಫೈಟರ್ಜೆಟ್ ಯುದ್ಧ ವಿಮಾನಗಳ ಖರೀದಿ ಕಂಡು ರಷ್ಯಾ ಕೂಡ ಮುನಿಸಿಕೊಳ್ಳಬೇಕಲ್ಲ! ಅಂದರೆ ಆರ್ಥಿಕ ಉದಾರೀಕರಣ ಮತ್ತು ಜಾಗತೀಕರಣದ ಮಾರುಕಟ್ಟೆ ಮುಕ್ತವಾಗಿರಬೇಕು ಎಂಬ ಪ್ರಜಾಪ್ರಭುತ್ವದ ರಾಜನೀತಿಯ ಉಲ್ಲಂಘನೆ ಎಷ್ಟರಮಟ್ಟಿಗೆ ಸರಿ!



> ಭಾರತ ರಷ್ಯಾದಿಂದ ಕಚ್ಚಾತೈಲ ಖರೀದಿ ಮಾಡಿದರೆ ಅಮೆರಿಕದಿಂದ ಭಾರತಕ್ಕೆ ತೆರಿಗೆ ಬರೆ ಎನ್ನುವುದೇ ಅಮೆರಿಕದ ಸುಂಕನೀತಿ ಎಂದಾದರೆ ಅಮೆರಿಕದ ಫೈಟರ್ಜೆಟ್ ಯುದ್ಧ ವಿಮಾನಗಳ ಖರೀದಿ ಕಂಡು ರಷ್ಯಾ ಕೂಡ ಮುನಿಸಿಕೊಳ್ಳಬೇಕಲ್ಲ! ಅಂದರೆ ಆರ್ಥಿಕ ಉದಾರೀಕರಣ ಮತ್ತು ಜಾಗತೀಕರಣದ ಮಾರುಕಟ್ಟೆ ಮುಕ್ತವಾಗಿರಬೇಕು ಎಂಬ ಪ್ರಜಾಪ್ರಭುತ್ವದ ರಾಜನೀತಿ ಉಲ್ಲಂಘನೆ ಎಷ್ಟರಮಟ್ಟಿಗೆ ಸರಿ!

ಈಗ ಕಾಲ ಬದಲಾಗಿದೆ. ವಿಶ್ವದ ಎಲ್ಲಾ ದೇಶಗಳಲ್ಲೂ ಇಂದು ಭಾರತೀಯರಿದ್ದಾರೆ! ಅಮೆರಿಕದ ಭಾರತೀಯರು ಟ್ರಂಪ್ ತೆರಿಗೆ ನೀತಿಯನ್ನು ಆಂತರಿಕವಾಗಿಯೇ ವಿರೋಧಿಸಿದ್ದಾರೆ. ಜಗತ್ತಿನ ಯಜಮಾನಿಕೆ ವಹಿಸಿಕೊಳ್ಳುವ ಇರಾದೆಯಿರುವ ನಾಯಕತ್ವದ ದೇಶಗಳು ಯಾವತ್ತಿಗೂ ವ್ಯಾಪಾರ ವಹಿವಾಟಿನ ವಿಷಯದಲ್ಲಿ ತನ್ನ ಎಲ್ಲೆ ಮೀರಬಾರದು. ವಿಶ್ವಸ್ನೇಹಿ ಜಾಗತಿಕ ಸಂಬಂಧಗಳನ್ನ ಜಟಿಲಗೊಳಿಸಿಕೊಳ್ಳಬಾರದು, ಈಗೇನಾಗಿದೆ ನೋಡಿ!

ಗ್ರಾಮ ಪಂಚಾಯಿತಿ ರಾಜಕಾರಣದ ಥರ ವಿಶ್ವದಲ್ಲಿ ಅಷ್ಟಕ್ಕಷ್ಟೇ ಇದ್ದ ಚೀನಾದೊಂದಿಗೆ ಭಾರತ, ಎಂದಿನಂತೆ ಭಾರತದೊಂದಿಗೆ ರಷ್ಯಾ ವಿಶ್ವಮಟ್ಟದಲ್ಲಿ ಮೂರು ದೇಶಗಳ ಸಮಾಗಮ ಇವತ್ತು ದೊಡ್ಡ ಸುದ್ದಿ ಮತ್ತು ದೊಡ್ಡ ಚರ್ಚೆ. ಇಂಥಾ ಹೊತ್ತಿನಲ್ಲೇ ಉದ್ಯಮ, ಕೃಷಿ, ಮಾರುಕಟ್ಟೆ ದೇಸೀ ಉತ್ಪಾದನೆಗೆ ತಾಂತ್ರಿಕ ಸ್ಪರ್ಷಗಳು ಹರಿದುಬರುತ್ತದೆ. ಆದರೆ ವಿಶ್ವಭ್ರಾತೃತ್ವ –ಎನ್ನುವ ಪದ ಮಾರುಕಟ್ಟೆಯ ಈ ಯುಗದಲ್ಲಿ ಪೇಲವವಾಗಿ ಕಾಣುತ್ತಿದೆ. ವ್ಯಾಪಾರದ ತಿರುವು ಮತ್ತು ಪರಿವರ್ತನೆಗೆ ನಾಂದಿ ಹಾಡಿದ ಅಮೆರಿಕ ಅಧ್ಯಕ್ಷರ ನಿಲುವಳಿ ಬ್ರಿಕ್ಸ್ ಜಾಗತಿಕ ಸಂಘಟನೆಯ ಹುಟ್ಟು ಮತ್ತು ಅಭಿವೃದ್ಧಿಗೆ ಕಾರಣವಾಯಿತು, ಬ್ರಿಕ್ಸ್ ಎಂದರೆ (ಬ್ರೆಜಿಲ್, ರಷ್ಯಾ, ಭಾರತ, ಚೀನಾ, ದಕ್ಷಿಣ ಆಫ್ರಿಕ, ಆಸ್ಟ್ರೇಲಿಯ, ನ್ಯೂಜಿಲಾಂಡ್) ವೇಗವಾಗಿ ಅಭಿವೃದ್ಧಿ ಹೊಂದುತ್ತಿರುವ ಈ ದೇಶಗಳ ಗುಂಪು ನಾಳೆ ದಿನ ಅಮೆರಿಕದ ಡಾಲರ್ ಎದುರು ಸರಿಸಮನಾದ ಬೆಲೆ ಹೊಂದಿರುವ ಬ್ರಿಕ್ಸ್ ಕರೆನ್ಸಿಯನ್ನ ಹುಟ್ಟುಹಾಕಿದರೆ ವಿಶ್ವ ವ್ಯಾಪಾರದಲ್ಲಿ ಡಾಲರ್ ತನ್ನ ಈಗಿನ ವಿಶ್ವಮಾನ್ಯತೆಯನ್ನ ಕಳೆದುಕೊಳ್ಳುವ ಸಾಧ್ಯತೆಯಿರುತ್ತದೆ. ಈಗಾಗಲೇ ಇದಕ್ಕೆ ಪೂರಕವಾಗಿ (ಎನ್.ಡಿ.ಬಿ) ಅಂದರೆ ಬ್ರಿಕ್ಸ್ ಅಭಿವೃದ್ಧಿ ಬ್ಯಾಂಕ್, ಅಭಿವೃದ್ಧಿಶೀಲ ರಾಷ್ಟ್ರಗಳಿಗೆ ಹಣಕಾಸು ಸೇವೆಗಳನ್ನು ಒದಗಿಸುವ ಲಾಭರಹಿತ ಸಂಸ್ಥೆ ತಲೆಯೆತ್ತಿದೆ. ಬ್ರಿಕ್ಸ್ ಎಂಬ ದೇಶಗಳ ಗುಂಪನ್ನು ವಿವರಿಸಲು "S" ಪದವನ್ನು ಬಳಸಲಾಗುತ್ತಿದೆ.

ಯುನೈಟೆಡ್ ಸ್ಟೇಟ್ಸ್ ತನ್ನ ಕಾರ್ಯ ತಂತ್ರದ ಸ್ವಾಯತ್ತತೆ ಮತ್ತು ರಾಜಕೀಯ ವ್ಯವಸ್ಥೆಯನ್ನು ಬಳಸಿಕೊಂಡು ತನ್ನ ಸುಂಕನೀತಿಯನ್ನು ಪ್ರಕಟಪಡಿಸಿದ್ದೇ ಈ ಎಲ್ಲ ರೋಚಕತೆಗಳ ಸೃಷ್ಟಿಗೆ ಕಾರಣವಾಯ್ತು ಮತ್ತೆ ಮುಂದುವರೆದು ಯುನೈಟೆಡ್ ಸ್ಟೇಟ್ಸ್ ಬ್ರಿಕ್ಸ್ ದೇಶಗಳ Tech Man source ಅಂದರೆ IT Industryಯ ಮಾನವ ಸಂಪನ್ಮೂಲದ ಉದ್ಯೋಗ ಮತ್ತು ತೆರಿಗೆ ಪದ್ಧತಿಗಳನ್ನು ಪರಿಶೀಲಿಸುವ ಗೋಜಿಗೂ ಕೈ ಹಾಕಬಹುದು. ಅಂತಹ ಸಂದರ್ಭದಲ್ಲಿ ಬ್ರಿಕ್ಸ್ ದೇಶಗಳು ಯುನೈಟೆಡ್ ಸ್ಟೇಟ್ಸ್‌ನ ಭೌತಿಕ ಮತ್ತು ಉತ್ಪಾದಿತ ಉತ್ಪನ್ನಗಳ ಮಾರುಕಟ್ಟೆ ಮೇಲಿನ ಮಾರಾಟ ತೆರಿಗೆಯನ್ನ ಹೆಚ್ಚಿಸುವ ಸಾಹಸಕ್ಕೆ ಕೈಹಾಕಬಹುದು. McDonald's, K.F.C, Facebook, Domino's, Youtube, Google, Amazon ಇತ್ಯಾದಿಗಳ ಕ್ಯಾಪಿಟಲ್ ಗೇಯ್ನ್ಸ್ ಜಾಸ್ತಿ ಮಾಡಬಹುದು. ಬಳಕೆದಾರ ದೇಶಗಳಲ್ಲಿ ಜಾಗತಿಕ ಮಟ್ಟದಲ್ಲಿ ಜಾಗೃತಿಗೆ ಕೈ ಹಾಕಬಹುದು. ಈಗಾಗಲೇ ಈ–35 ಮೇಕ್‌ಇನ್ ಇಂಡಿಯಾದ ಕ್ಷೇತ್ರದಲ್ಲಿ ಜಾಗತಿಕ ನಾಯಕನಂತೆ ಹೊರಹೊಮ್ಮಿದ್ದು, ರಕ್ಷಣಾ ಕ್ಷೇತ್ರದ ರಫೇಲ್, ಫೈಟರ್–ಜೆಟ್‌ಗಳಂತಹ ಬಹುದೊಡ್ಡ ಯುದ್ಧ ವಿಮಾನಗಳ ಖರೀದಿಯನ್ನೂ ಬ್ರಿಕ್ಸ್ ದೇಶಗಳು ಅದರಲ್ಲೂ ಭಾರತ ಮರು ಪರಿಶೀಲಿಸಬಹುದು.

ಹೀಗೆ ಜಾಗತಿಕ ತಲ್ಲಣಗಳನ್ನು ಸೃಷ್ಟಿಸುವ ನಿರ್ಧಾರಗಳನ್ನು ತೆಗೆದುಕೊಳ್ಳುವಾಗ ಚೂರು ವಿವೇಕ ವ್ಯತ್ಯಾಸವಾದರು ಮಾರುಕಟ್ಟೆಯ ಸ್ವಾಯತ್ತ ಕೇಂದ್ರ ವಿರುದ್ಧ ದಿಕ್ಕಿನಲ್ಲಿ ಓಡುತ್ತದೆ. ಈಗಾಗಲೇ ಯುನೈಟೆಡ್ ಸ್ಟೇಟ್ಸ್‌ನ ಸೆನೆಟರ್‌ಗಳು, ರಾಜ್ಯಗಳ ಗೌರ್ನರ್‌ಗಳು, ಈ ಪ್ರತಿಕೂಲ ವ್ಯವಸ್ಥೆಯ ಪರಿಣಾಮಗಳ ಬಗ್ಗೆ ಚರ್ಚೆ ಪ್ರಾರಂಭಿಸಿದ್ದಾರೆ ಮತ್ತು ಬಿಕ್ಸ್‌ನ ಸದಸ್ಯ ರಾಷ್ಟ್ರ ಭಾರತದ ಬಗ್ಗೆ ಮತ್ತೆ ಮೆದು ಧೋರಣೆ ತಳೆಯುವ ಎಲ್ಲ ಲಕ್ಷಣಗಳು ಅಮೆರಿಕದಿಂದ ಕಾಣುತ್ತಿವೆ. ಇಂದಿನ ಪರಿಸ್ಥಿತಿಯಲ್ಲಿ ಅದು ಅನಿವಾರ್ಯ ಕೂಡ.

ಇನ್ನು ಆರ್ಥಿಕತೆಯ ಈ ಸಂಘರ್ಷ ಯುನೈಟೆಡ್ ಸ್ಟೇಟ್ಸ್‌ನಲ್ಲಿ ನೆಲೆಸಿರುವ ಭಾರತೀಯ ಪ್ರಜೆಗಳ ಮೇಲೂ ಪರಿಣಾಮ ಬೀರಿ ಮುಂದೆ ಗುಪ್ತಗಾಮಿನಿಯಾಗಿ ರಾಜಕಾರಣದ ಮೊಗಸಾಲೆಯನ್ನೂ ತಲುಪಬಹುದು. ಅದು ಹೇಗೇ ಇರಲಿ ಪ್ರಜಾಪ್ರಭುತ್ವದ ವಿಶ್ವ ವಿನೂತನ ವೈವಿಧ್ಯತೆಯನ್ನ ಮನುಷ್ಯ ಜಗತ್ತಿನಾದ್ಯಂತ, ಆರ್ಥಿಕ ಉದಾರತೆ ಮತ್ತು ಜಾಗತೀಕರಣದ ಜೊತೆ Enjoy ಮಾಡಬೇಕಾದ ಈ ದಿನಗಳಲ್ಲಿ ವಿಶ್ವಾಸದ ಕೊರತೆ ಎದುರಿಸಿದರೆ ಕರೆದು ಬುದ್ಧಿ ಹೇಳಬೇಕಾದ ದೊಡ್ಡವರಿಗೆ ಹೇಳುವವರಾರು? ಕೇಳುವವರಾರು?

ಆದರೆ ಬೆಕ್ಕಿನ ಕೊರಳಿಗೆ ಗಂಟೆ ಕಟ್ಟುವ ಮುನ್ನ ಒಂದು ಎಚ್ಚರಿಕೆ ನಡೆ ಖಂಡಿತಬೇಕಾಗುತ್ತದೆ. ಹೇಗೆ ಗೊತ್ತಾ ಒಬ್ಬ ಶ್ರೀಮಂತನ ಮನೆಯಲ್ಲಿ ಒಬ್ಬ ರಾತ್ರಿ ಕಾವಲುಗಾರ ಇದ್ದ. ಒಂದು ದಿನ ರಾತ್ರಿ ಅವನ ಕನಸಿನಲ್ಲಿ ಅವನ ಯಜಮಾನ ಹೊರಡಬೇಕಿದ್ದ ವಿಮಾನ ಅಪಘಾತಕ್ಕೀಡಾಗಿ ವಿಮಾನ ಸುಟ್ಟು ಭಸ್ಮವಾಗಿತ್ತು. ಬೆಳ್ಳಂಬೆಳಗ್ಗೆ ಆ ರಾತ್ರಿ ಕಾವಲುಗಾರ ತನ್ನ ಯಜಮಾನನ ಬಳಿಗೆ ಓಡೋಡಿ ಬಂದ. ತಾನು ನಿನ್ನೆ ರಾತ್ರಿ ಕಂಡ ಕನಸು, ಅದರಲ್ಲಿ ವಿಮಾನಾಪಘಾತದ ಸಂಗತಿಗಳನ್ನೆಲ್ಲಾ ತನ್ನ ಯಜಮಾನನಿಗೆ ವಿವರಿಸಿದ. ಯಜಮಾನನ ವಿಮಾನ ಪ್ರಯಾಣವನ್ನ ತಡೆ ಹಿಡಿದ. ಅವನ ಕನಸಿನಂತೆಯೇ ವಿಮಾನ ತಾಂತ್ರಿಕ ದೋಷದಿಂದ ಪತನವಾಯಿತು. ಆತ ತಾನು ಯಜಮಾನನ ಜೀವ ಉಳಿಸಿದೆ ಎಂಬ ಅಭಿಮಾನದಿಂದ ಯಜಮಾನನ ಕೃಪೆಗೆ ಪಾತ್ರನಾಗಲು ಯಜಮಾನನ ಬಳಿಗೆ ಮತ್ತೆ ಓಡೋಡಿ ಬಂದ. ಯಜಮಾನನಿಗೂ ಅವನ ಭವಿಷ್ಯ ನಿಜವಾಗಿದ್ದು ಕೇಳಿ, ನೋಡಿ ಸಂತೋಷವಾಗಿತ್ತು. ಅದಕ್ಕಾಗಿ ಆ ರಾತ್ರಿ ಕಾವಲುಗಾರನಿಗೆ ಬಹುಮಾನ ಕೊಡಬೇಕಲ್ಲ! ಅದಕ್ಕಾಗಿ ಆತನನ್ನು ಕರೆದು ಯಜಮಾನ ತನ್ನ ಕೈಗಳಲ್ಲಿದ್ದ ಎರಡೂ ಪಾಕೇಟುಗಳನ್ನು ಕೊಟ್ಟ, ಬಲಗೈಯಲ್ಲಿ ಕೊಟ್ಟ ಪಾಕೇಟಿನಲ್ಲಿ ಕಂತೆ ಕಂತೆ ಹಣ ಇತ್ತು ಅದು ಯಜಮಾನನ ಜೀವ ಉಳಿಸಿದ್ದಕ್ಕೆ ಕೊಟ್ಟ ಬಹುಮಾನದ ಹಣ. ಎಡಗೈಯಲ್ಲಿ ಕೊಟ್ಟ ಮತ್ತೊಂದು ಕವರಿನಲ್ಲಿ ಆತನನ್ನು ಕೆಲಸದಿಂದ ವಜಾ ಮಾಡಿದ ಬಿಡುಗಡೆಯ ಪತ್ರ ಇತ್ತು. ರಾತ್ರಿ ಕಾವಲುಗಾರ ಹಣ ನೋಡಿ ಖುಷಿಯಾದ! ಆದರೆ ತನ್ನನ್ನು ತನ್ನ ಯಜಮಾನ ಇಷ್ಟೆಲ್ಲಾ ಮಾಡಿದರೂ ಕೆಲಸದಿಂದ ತೆಗೆದು ಹಾಕಿದ್ದಕ್ಕೆ ಕಂಗಾಲಾಗಿ ಹೋದ. ಕೂಡಲೇ ತನ್ನ ಯಜಮಾನನನ್ನು ಕೇಳಿದ, ಯಾಕೆ ನನ್ನನ್ನು ಕೆಲಸದಿಂದ ತೆಗೆದಿರಿ ಅಂತ. ಯಜಮಾನ ಹೇಳಿದ, ನಿನ್ನ ಕನಸು, ನಿನ್ನ ಭವಿಷ್ಯಕ್ಕೆ ಹಣ, ಬಹುಮಾನ. ಆದರೆ ನಿನ್ನ ಕೆಲಸ ರಾತ್ರಿ ಕಾವಲುಗಾರನ ಕೆಲಸ, ನೀನು ರಾತ್ರಿವೇಳೆ ಎಚ್ಚರವಾಗಿದ್ದು ಕಾವಲುಗಾರನ ಕೆಲಸ ಮಾಡದೆ ನಿದ್ದೆ ಮಾಡಿಕೊಂಡು ಕನಸು ಕಾಣುತ್ತಾ, ಭವಿಷ್ಯ ಹೇಳಿ ಕರ್ತವ್ಯಲೋಪ ಎಸಗಿದ್ದಕ್ಕೆ ನಿನಗೆ ನನ್ನ ಬಳಿ ಕೆಲಸ ಇಲ್ಲ. ನಿನ್ನ ಕೆಲಸ ಹೋಯ್ತು ಕಾಯಕವೇ ಕೈಲಾಸ Work is worship ಎಂದ ಯಜಮಾನ.

ಒಂದು ಕಡೆ ಬಹುಮಾನ, ಇನ್ನೊಂದೆಡೆ ಕೆಲಸ ಕಳಕೊಂಡ ಅಪಮಾನ, ಹೇಗಿದೆ ನೋಡಿ ಕತೆಯ ವಿವರ. ಅಂದರೆ ಸುಂಕನೀತಿ ವಿಧಿಸುವಾಗಲೂ ನಿದ್ರಿಸುವಂತಿಲ್ಲ. ಮೆದು ಧೋರಣೆ ತೋರಿಸುವಾಗಲು ಬಹುಮಾನ ಎಂದು ಸ್ವೀಕರಿಸುವಂತಿಲ್ಲ. ಗಾಢ ನಿದ್ರೆ ಕರ್ತವ್ಯಲೋಪ, ಸದಾ ಎಚ್ಚರ ಭಾರತೀಯ ಆರ್ಥಿಕತೆ ಮತ್ತು ಮೇಕ್ ಇನ್ ಇಂಡಿಯಾದ ವಜ್ರಲೇಪ ಏನಂತೀರಿ?

ಕಾದಂಬರಿ ಲೋಕದ ಸಿದ್ಧ ಮಾದರಿಗಳನ್ನು ತೇಜಸ್ವಿಯ 'ಕರ್ವಾಲೋ' ಭೇದಿಸಿತು

● ಪೂರ್ಣಚಂದ್ರ ತೇಜಸ್ವಿ ಒಡನಾಡಿ ಬಿ.ಎಂ.ಶ್ರೀರಾಮ್ ಅಚ್ಚರಿ ವಿವರಣೆ ● ತೇಜಸ್ವಿಯವರ ಕರ್ವಾಲೊ 50; ಪರಿಸರ ಕುರಿತ ರಸ ಸಂವಾದ

ಮೈಸೂರು,ಸೆ.8(ಎಂಟಿವೈ)– ಕಾದಂಬರಿಗಳಲ್ಲಿ ನಾಯಕ, ನಾಯಕಿ ವೈಭವೀಕರಣ, ಅತ್ತೆ–ಸೊಸೆ ಕಾಟದಂತಹ ಸಿದ್ಧ ಮಾದರಿಯನ್ನು ಭೇದಿಸಿದ ಕೀರ್ತಿ ಪೂರ್ಣಚಂದ್ರ ತೇಜಸ್ವಿಯವರ ಕರ್ವಾಲೋ ಕಾದಂಬರಿಗೆ ಸಲ್ಲುತ್ತದೆ ಎಂದು ಪ್ರಕಾಶಕ, ತೇಜಸ್ವಿಯವರ ಒಡನಾಡಿ ಬಿ.ಎಂ.ಶ್ರೀರಾಮ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಕಲಾಮಂದಿರದ ಕಿರುರಂಗ ಮಂದಿರದಲ್ಲಿ ಅಭಿರುಚಿ ಪ್ರಕಾಶನ, ಪುಸ್ತಕ ಪ್ರಕಾಶನ, ಪ್ರಗತಿಪರ ಸಂಘಟನೆಗಳ ಒಕ್ಕೂಟ, ಮಾನವ ಮಂಟಪ, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ, ದಲಿತ ಸಂಘರ್ಷ ಸಮಿತಿ, ನಿರಂತರ ಫೌಂಡೇಷನ್ ಸಹಯೋಗದಲ್ಲಿ ಆಯೋಜಿಸಿದ್ದ 'ಕರ್ವಾಲೊ 50, ತೇಜಸ್ವಿ ಮತ್ತು ಪರಿಸರ' ಕಾರ್ಯಕ್ರಮದಲ್ಲಿ ಕರ್ವಾಲೋ ಸುತ್ತಮುತ್ತ ಸಂವಾದದಲ್ಲಿ ಮಾತನಾಡಿದ ಅವರು, ಸಭಿಕರು ತೇಜಸ್ವಿ ಹಾಗೂ ಕರ್ವಾಲೋ ಕಾದಂಬರಿ ಬಗ್ಗೆ ಕೇಳಿದ ಪ್ರಶ್ನೆಗಳಿಗೆ ಉತ್ತರಿಸಿದರು. ತೇಜಸ್ವಿ ಸೃಷ್ಟಿಸಿದ ಪಾತ್ರಗಳ ವಿವರಣೆ ನೀಡುವ ವೇಳೆ ಬಿರಿಯಾನಿ ಮರಿಯಪ್ಪ ಅವರನ್ನು ನೆನಪಿಸಿ ಕೊಂಡು, ಸಭಿಕರನ್ನು ನಗೆಗಡಲಲ್ಲಿ ತೇಲುವಂತೆ ಮಾಡಿದರು.

ವನ್ಯಜೀವಿ ಛಾಯಾಗ್ರಾಹಕರಾದ ಕೃಪಾಕರ–ಸೇನಾನಿ ಅವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಪೂರ್ಣಚಂದ್ರ ತೇಜಸ್ವಿ ಅವರಿಗೆ ತಮ್ಮ ತಂದೆ ರಾಷ್ಟ್ರಕವಿ ಕುವೆಂಪು ಎಂದು ಹೇಳಿಕೊಳ್ಳದೇ ಬೆಳೆಯುವ ಸವಾಲು ಇತ್ತು. ಎಲ್ಲಿಯೂ ತೇಜಸ್ವಿ ಅವರು ತಮ್ಮ ಬೆಳವಣಿಗೆಯಲ್ಲಿ ಕುವೆಂಪು ಅವರ ಹೆಸರು ಹೇಳಿಕೊಳ್ಳಲಿಲ್ಲ. ಆದರೂ ದೊಡ್ಡಮಟ್ಟದ ಸಾಧನೆ ಮಾಡಲು ಸಾಧ್ಯವಾಯಿತು ಎಂದರು.

ಕರ್ವಾಲೋ ಕಾದಂಬರಿ ಪ್ರಕಟಗೊಂಡಾಗ ಸಾಹಿತ್ಯ ವಲಯ ಯಾವ ರೀತಿ ಸ್ವೀಕರಿಸಿತ್ತು ಎಂಬ ಪ್ರಶ್ನೆಗೆ ಉತ್ತರಿಸಿದ ಶ್ರೀರಾಮ್, ಕನ್ನಡ ಸಾಹಿತ್ಯ ವಲಯ ಯಾವಾಗಲೂ ಮಂದ. ಆಗ ಕೆಲವರು ವಿಜ್ಞಾನ ಲೇಖಕ ಎಂದು ಗೇಲಿ ಮಾಡಿದರು. ಸ್ನೇಹಿತರು ಸಿಕ್ಕಾಪಟ್ಟೆ ಹೊಗಳಿದರು. ಲಂಕೇಶ್ ಅವರು ಒಳ್ಳೆ ವಿಮರ್ಶೆ ಬರೆದರು. ಕನ್ನಡ ಎಂಎ ವಿದ್ಯಾರ್ಥಿಯಾದ ತೇಜಸ್ವಿ ಅವರಿಗೆ ವಿಜ್ಞಾನದ ಮೇಲೆ ಆಸಕ್ತಿ ಬೆಳೆಯಿತು. ಮೈಸೂರು ವಿಶ್ವವಿದ್ಯಾನಿಲಯದ ಗ್ರಂಥಾಲಯಕ್ಕೆ ಬರುತ್ತಿದ್ದ ತೇಜಸ್ವಿ ಅವರು ಸಾಹಿತ್ಯ ಮತ್ತು ವಿಜ್ಞಾನ ಪತ್ರಿಕೆಗಳನ್ನು ಅಧ್ಯಯನ ಮಾಡುತ್ತಿದ್ದರು. ಅಲ್ಲದೆ ನ್ಯಾಷನಲ್ ಜಿಯಾಗ್ರಫಿ ಅವರ ಮೇಲೆ ಅಗಾಧವಾದ ಪ್ರಭಾವ ಬೀರಿದ್ದರಿಂದ ಅವರಿಗೆ ವಿಜ್ಞಾನದ ಮೇಲೆ ಹೆಚ್ಚಿನ ಆಸಕ್ತಿ ಮೂಡಿತು ಎಂದು ತಿಳಿಸಿದರು.

ವಿಜ್ಞಾನ ವಿನಾಶಕ್ಕೆ ಆಯುಧವಾಗಬಾರದು: ಇದಕ್ಕು ಮುನ್ನ ಚಿಂತಕ ರಾಜೇಂದ್ರ ಚೆನ್ನಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ವಿಜ್ಞಾನ ಮನುಷ್ಯನ ಕೈಗೆ ಆಯುಧವಾಗಬಾರದು. ವಿಜ್ಞಾನ ಅಣುಬಾಂಬ್ ತಯಾರಿಸುವ ಯಂತ್ರವಾದರೆ ಅಪಾಯ. 3ನೇ ಮಹಾಯುದ್ಧಕ್ಕೆ ವಿಜ್ಞಾನವನ್ನು ದುರುಪಯೋಗ ಮಾಡಿಕೊಳ್ಳುತ್ತಿರುವುದನ್ನು ಕಾಣುತ್ತಿದ್ದೇವೆ. ಸೃಷ್ಟಿಯನ್ನು ವಿನಾಶ ಮಾಡಲು ಸಜ್ಜಾಗಿದ್ದಾರೆ ಎಂದು ವಿಷಾದಿಸಿದರು.

ಪರಿಸರ ಅಂದರೆ ಸ್ವಯಂ ಸೇವಾ ಸಂಸ್ಥೆಗಾಗಿ ರೂಪಿಸುವ ಪ್ರಾಜೆಕ್ಟ್ ಅಲ್ಲ. ಸರ್ಕಾರ ರೂಪಿಸುವ ಬೃಹತ್ ಕಾರ್ಯಕ್ರಮದ ಯಜ್ಞವಲ್ಲ. ನಾವು ಪರಿಸರದ ಭಾಗ. ಪರಿಸರವೂ ನಮ್ಮ ಒಂದು ಭಾಗ ಎಂಬ ತಿಳವಳಿಕೆಯೇ ಪರಿಸರ. ಪರಿವರ್ತನೆ ಪರಿಸರದ ಮೂಲದ್ರವ್ಯ. ಈ ತಿಳುವಳಿಕೆಯನ್ನು ತೇಜಸ್ವಿ ಕೊಟ್ಟಿದ್ದಾರೆ. ಜೀವ ವಿಕಾಸಕ್ಕೆ ಕೊನೆಯೆಂದು ಎಂದು ಕರ್ವಾಲೋ ಕಾದಂಬರಿಯಲ್ಲಿ ಬರುವ ಸಾಲು ಪ್ರತಿ ಕ್ಷಣ ಕುತೂಹಲದಿಂದ ಬದುಕಬೇಕು ಎನ್ನುವುದನ್ನು ಹೇಳುತ್ತವೆ. ತೇಜಸ್ವಿ ಅವರು ಅಂದು ಹೇಳಿದ ಮಾತುಗಳು ಇಂದು ವಿಶ್ವವಿದ್ಯಾನಿಲಯದಲ್ಲಿ ಚರ್ಚೆ ಆಗುತ್ತಿದೆ. ಅತ್ಯಂತ ದುಷ್ಟ ಮತ್ತು ಮನೆಯಾಳ ಪದ ಎಂದರೆ ಅಭಿವೃದ್ಧಿ. ಅಭಿವೃದ್ಧಿ ಎಂದರೆ ಶೇ.40 ಪರ್ಸೆಂಟ್ ನೆನಪು ಆಗಲಿದೆ. ನಲ್ವತ್ತು ಪರ್ಸೆಂಟ್ ಭ್ರಷ್ಟಾಚಾರವಾದರೂ ಭಿಕ್ಷುಕರಾಗಿ ಬದುಕಬಹುದು. ಆದರೆ, ಶೇ.80ರಷ್ಟು ಪ್ರಕೃತಿಯನ್ನು ಕೊಟ್ಟು ಬದುಕಲು ಸಾಧ್ಯವಿಲ್ಲ ಎಂದರು.



ಮೈಸೂರಿನ ಕಿರುರಂಗಮಂದಿರದಲ್ಲಿ ಆಯೋಜಿಸಿದ್ದ ಕರ್ವಾಲೊ 50, ತೇಜಸ್ವಿ ಮತ್ತು ಪರಿಸರ, ಕರ್ವಾಲೋ ಸುತ್ತಮುತ್ತ: ಸಂವಾದ ಕಾರ್ಯಕ್ರಮವನ್ನು ಚಿಂತಕ ರಾಜೇಂದ್ರ ಚೆನ್ನಿ ಗಿಡಕ್ಕೆ ನೀರೆರೆದು ಉದ್ಘಾಟಿಸಿದರು.

ಸಾಹಿತಿ ಜಿ.ಪಿ.ಬಸವರಾಜು ಪ್ರಾಸ್ತಾವಿಕವಾಗಿ ಮಾತನಾಡಿ, 1980ರಲ್ಲಿ ಪುಸ್ತಕವಾಗಿ ಪ್ರಕಟಗೊಂಡ ಕರ್ವಾಲೋ ಕಾದಂಬರಿ 95 ಮುದ್ರಣಗಳನ್ನು ಕಂಡಿದೆ. ಎಲ್ಲ ತಲೆಮಾರಿನವರನ್ನು ಪ್ರಭಾವಿಸಿದೆ. ನವ್ಯ ಸಾಹಿತ್ಯ ಕಾಲಘಟ್ಟದಲ್ಲಿ ಸಾಹಿತ್ಯ ಕೃಷಿ ಆರಂಭಿಸಿ, ಅದರ ಇಕ್ಕಟ್ಟಿನ ದಾರಿಯನ್ನು ಕಂಡುಕೊಂಡು, ಅದರಿಂದ ಬಿಡಿಸಿಕೊಂಡವರು ತೇಜಸ್ವಿ. ಕರ್ವಾಲೋ ಕಾದಂಬರಿಯಲ್ಲಿ ಸಂವಿಧಾನದ ಮೌಲ್ಯ ಇದೆ. ಜ್ಞಾನ ಅಕಾಡೆಮಿಕ್‌ಗೆ ಸೀಮಿತವಾಗಿಲ್ಲ ಎಂಬುದನ್ನು ಪಾತ್ರಗಳ ಮೂಲಕ ಅದ್ಭುತವಾಗಿ ಸೃಷ್ಟಿಸಲಾಗಿದೆ. ವೈಜ್ಞಾನಿಕ ಮತ್ತು ವೈಚಾರಿಕವಾದ ಈ ಕೃತಿಯು 50 ವರ್ಷ ತುಂಬಿದಾಗ ಕನ್ನಡಿಗರು, ಸರ್ಕಾರ ಸಂಭ್ರಮಾಚರಣೆ ಮಾಡದಿರುವುದು ದುರ್ದೈವದ ಸಂಗತಿ ಎಂದರು.

ಇದೇ ವೇಳೆ ನಾ ಕಂಡಂತೆ ತೇಜಸ್ವಿ ಕುರಿತು ಕುಪ್ಪಳ್ಳಿ ಪ್ರತಿಷ್ಠಾನದ ಸಮ ಕಾರ್ಯದರ್ಶಿ ಕಡಿದಾಳ್ ಪ್ರಕಾಶ್, ಕೃಷಿ, ಹೋರಾಟ, ಛಾಯಾಗ್ರಹಣ ಮತ್ತು ಪರಿಸರ ಕುರಿತು ಎಂ.ವಿ.ಕೃಷ್ಣ, ತೇಜಸ್ವಿ ಅವರ ಒಡನಾಟದಲ್ಲಿ ಕುರಿತು ಪುಸ್ತಕ ಪ್ರಕಾಶನದ ರಾಘವೇಂದ್ರ ಮಾತನಾಡಿದರು. ಅಭಿರುಚಿ ಗಣೇಶ್ ಸ್ವಾಗತಿಸಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮದ್ದೂರಿನ ಗಣೇಶ ವಿಸರ್ಜನೆ ಮೆರವಣಿಗೆಯಲ್ಲಿ ಕಲ್ಲು ತೂರಾಟ ಪ್ರಕರಣ

ಕೋಮು ಗಲಭೆ ಪ್ರಕರಣಗಳಿಗೆ ಕಡಿವಾಣ ಹಾಕುವಲ್ಲಿ ಸರ್ಕಾರ ವಿಫಲ

ಸಂಸದ ಯದುವೀರ್ ಒಡೆಯರ್ ಆರೋಪ



ಯದುವೀರ್

ನವದೆಹಲಿ, ಸೆ.8(ಬಿಎಲ್‌ಯು)– ಮದ್ದೂರಲ್ಲಿ ಗಣೇಶ ವಿಸರ್ಜನೆ ಮೆರವಣಿಗೆ ಮೇಲೆ ಕಲ್ಲು ತೂರಾಟ ನಡೆಸಿರುವ ಪ್ರಕರಣದ ಬಗ್ಗೆ ಸರ್ಕಾರ ಬೇಜವಾಬ್ದಾರಿ ಹೇಳಿಕೆ ನೀಡುವ ಬದಲು ಇಂತಹ ಕೃತ್ಯಗಳು ನಡೆಯದಂತೆ ಕ್ರಮ ಕೈಗೊಳ್ಳಬೇಕು ಎಂದು ಮೈಸೂರು–ಕೊಡಗು ಲೋಕಸಭಾ ಸದಸ್ಯ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಆಗ್ರಹಿಸಿದ್ದಾರೆ.

ದೆಹಲಿಯಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಎರಡೂವರೆ ವರ್ಷದಿಂದ ಇಂತಹ ಕೋಮುಗಲಭೆಗಳು ನಿರಂತರವಾಗಿ ನಡೆಯುತ್ತಿವೆ. ಆದರೆ ಸರ್ಕಾರ ಜನರ ಪ್ರಾಣ ರಕ್ಷಣೆ ಮಾಡದೆ ಬೇಜವಾಬ್ದಾರಿ ಹೇಳಿಕೆ ನೀಡುತ್ತಿದೆ ಎಂದು ಆರೋಪಿಸಿದರು.

ಶಾಂತಿಯುತವಾಗಿ ನಡೆಯುತ್ತಿದ್ದ ಗಣೇಶ ಮೆರವಣಿಗೆ ಮೇಲೆ ಕಲ್ಲು ತೂರಾಟದ ಜೊತೆಗೆ ಕಬ್ಬಿಣದ ರಾಡ್‌ಗಳನ್ನು ಕೂಡ ಎಸೆದಿರುವ ಸುದ್ದಿಗಳು ಮಾಧ್ಯಮಗಳಲ್ಲಿ ಬಂದಿವೆ. ಈ ಹಿನ್ನೆಲೆ ಸರ್ಕಾರ ಕೋಮು ಗಲಭೆ ಸೃಷ್ಟಿಸಲು ಮುಂದಾಗಿರುವ ಕಿಡಿಗೇಡಿಗಳನ್ನು ಕೂಡಲೇ ಬಂಧಿಸಬೇಕು ಎಂದು ಒತ್ತಾಯಿಸಿದರು. ಮುಂದೆ ಇಂತಹ ದುರ್ಘಟನೆ ನಡೆಯದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು ಎಂದು ಯದುವೀರ್ ಆಗ್ರಹಿಸಿದರು.

ಕನ್ನಡಾಂಬೆ ಬಗ್ಗೆ ಬಾನು ಮುಷ್ತಾಕ್ ಮೊದಲು ಸ್ಪಷ್ಟನೆ ನೀಡಲಿ

“ದಸರಾ ಉದ್ಘಾಟನೆಗೆ ಆಹ್ವಾನಿತರಾಗಿರುವ ಬೂಕರ್ ಪ್ರಶಸ್ತಿ ಪುರಸ್ಕೃತ ಸಾಹಿತಿ ಬಾನು ಮುಷ್ತಾಕ್ ಅವರು ಕನ್ನಡಾಂಬೆ ಬಗ್ಗೆ ನೀಡಿರುವ ಹೇಳಿಕೆ ಬಗ್ಗೆ ಮೊದಲು ಸ್ಪಷ್ಟನೆ ನೀಡಲಿ.

ಹಿಂದೂಗಳ ಧಾರ್ಮಿಕ ಭಾವನೆಗೆ ಧಕ್ಕೆ ತರದೆ ದಸರಾ ಉದ್ಘಾಟನೆ ಮಾಡುತ್ತೇನೆ ಎಂದು ಹೇಳಿದರೆ ನಮ್ಮ ಅಭ್ಯಂತರವಿಲ್ಲ. ಆದರೆ ಕನ್ನಡಾಂಬೆ ಬಗ್ಗೆ ಈ ಮೊದಲು ನೀಡಿರುವ ಹೇಳಿಕೆಗೆ ಸ್ಪಷ್ಟನೆ ನೀಡದೆ ದಸರಾ ಉದ್ಘಾಟನೆ ಮಾಡುತ್ತೇನೆ ಎಂದಾದರೆ ನಮ್ಮ ವಿರೋಧವಿದೆ

–ಯದುವೀರ್ ಒಡೆಯರ್.

ಬಾನು ಮುಷ್ತಾಕ್ ಕನ್ನಡಿಗರ ಕ್ಷಮೆ ಕೇಳಿದರೆ ಕೇಸ್ ವಾಪಸ್!



ಪ್ರತಾಪ್ ಸಿಂಹ



ಬಾನು ಮುಷ್ತಾಕ್

ಮೈಸೂರಲ್ಲಿ ಮಾಜಿ ಸಂಸದ ಪ್ರತಾಪ್ ಸಿಂಹ ಸ್ಪಷ್ಟನೆ

- ಸಾಹಿತಿ ಬಾನು ಮುಷ್ತಾಕ್ ಮುಸ್ಲಿಂರೆಂದು ನಾವು ವಿರೋಧಿಸುತ್ತಿಲ್ಲ
- ಕನ್ನಡಾಂಬೆ ಕುರಿತ ಅವರ ಮನಸ್ಥಿತಿಗೆ ನಮ್ಮ ತೀವ್ರ ವಿರೋಧವಿದೆ
- ಅಲ್ಲಾ ಬಿಟ್ಟರೆ ದೇವರಿಲ್ಲ ಎನ್ನುವವರಿಂದ ದಸರಾ ಉದ್ಘಾಟನೆ ಉಚಿತವೇ?
- ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ತುಷ್ಟೀಕರಣ ರಾಜಕಾರಣ
- ಮುಸ್ಲಿಂರು ಶಾಂತಿ ಪ್ರಿಯರಾಗಿದ್ದರೆ ಮದ್ದೂರಲ್ಲಿ ಕಲ್ಲು ತೂರುತ್ತಿರಲಿಲ್ಲ

ಮೈಸೂರು, ಸೆ.8(ಬಿಎಲ್‌ಯು)–ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಬಾನು ಮುಷ್ತಾಕ್ ಅವರಿಂದ ಕನ್ನಡಿಗರಲ್ಲಿ ಕ್ಷಮೆ ಕೇಳಿಸಿದರೆ ಹೈಕೋರ್ಟ್‌ನಲ್ಲಿ ಹೂಡಿರುವ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆಯನ್ನು ವಾಪಸ್ಸು ಪಡೆಯುತ್ತೇನೆ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಸ್ಪಷ್ಟಪಡಿಸಿದ್ದಾರೆ.

ಮೈಸೂರಿನಲ್ಲಿ ಇಂದು ಪತ್ರಕರ್ತರ ಜೊತೆ ಮಾತನಾಡಿದ ಅವರು, ಬಾನು ಮುಷ್ತಾಕ್ ಅವರ ಸಾಧನೆ ಬಗ್ಗೆ ನನಗೆ ಗೌರವವಿದೆ. ಆದರೆ ಹಿಂದೂ ಧರ್ಮದ ಬಗ್ಗೆ ಅವರು ಹೊಂದಿರುವ ಭಿನ್ನ ನಿಲುವಿಗೆ ನನ್ನ ವಿರೋಧವಿದೆ ಎಂದು ಸ್ಪಷ್ಟನೆ ನೀಡಿದರು.

ಬಾನು ಮುಷ್ತಾಕ್ ಅವರು ಮುಸ್ಲಿಂರು ಎಂಬ ಕಾರಣಕ್ಕೆ ನಾನು ಅವರನ್ನು ವಿರೋಧ ಮಾಡುತ್ತಿಲ್ಲ. ಆದರೆ ಕನ್ನಡಾಂಬೆ ಬಗ್ಗೆ ಅವರು ನೀಡಿರುವ ಹೇಳಿಕೆ ಬಗ್ಗೆ ನಮ್ಮ ತಕರಾರು ಇದೆ ಎಂದು ಪ್ರತಾಪ್ ಸಿಂಹ ಸ್ಪಷ್ಟಪಡಿಸಿದರು.

ದಸರಾದಲ್ಲಿ ಆಚರಣೆ ಮಾಡುವ ಹಿಂದೂ ಧರ್ಮದ ಸಂಸ್ಕಾರಗಳ ಬಗ್ಗೆ ಬಾನು ಮುಷ್ತಾಕ್ ಅವರಿಗೆ ಒಪ್ಪಿಗೆ ಇಲ್ಲ. ಅಲ್ಲಾ ಬಿಟ್ಟರೆ ಬೇರೆ ದೇವರಿಲ್ಲ ಎನ್ನುತ್ತಾರೆ. ಈ ಕಾರಣಕ್ಕಾಗಿ ಬಾನು ಮುಷ್ತಾಕ್ ಅವರು ದಸರಾ ಉದ್ಘಾಟನೆ ಮಾಡುವುದನ್ನು ನಾವು ವಿರೋಧ ಮಾಡುತ್ತಿದ್ದೇವೆ ಎಂದರು.

ಕನ್ನಡಾಂಬೆಯ ಅರಿಶಿನ ಕುಂಕುಮದ ಬಗ್ಗೆ ಆಡಿರುವ ಮಾತಿನ ಬಗ್ಗೆ ಬಾನು ಮುಷ್ತಾಕ್ ಕ್ಷಮೆ ಕೇಳಿದರೆ ನಾನು ಕೋರ್ಟ್‌ಗೆ ಹೋಗುತ್ತಿರಲಿಲ್ಲ. ಕ್ಷಮೆ ಕೇಳದವರು ಇನ್ನು ಚಾಮುಂಡಿ ದೇವಿಗೆ ಗೌರವ ನೀಡುತ್ತಾರೆಯೇ ಎಂದು ಪ್ರಶ್ನಿಸಿದ ಪ್ರತಾಪ್ ಸಿಂಹ, ಕನ್ನಡಾಂಬೆ ಬಗ್ಗೆ ಬಾನು ಮುಷ್ತಾಕ್ ಅವರು ನೀಡಿರುವ ಹೇಳಿಕೆ ಬಗ್ಗೆ ಸಿದ್ದರಾಮಯ್ಯ ಈ ತನಕ ಪ್ರತಿಕ್ರಿಯೆ ನೀಡಿಲ್ಲ ಎಂದು ಟೀಕಿಸಿದರು.

ತಾಯಿ ಭುವನೇಶ್ವರಿ ಕುರಿತು ನೀಡಿರುವ ಹೇಳಿಕೆ ಬಗ್ಗೆ ಬಾನು ಮುಷ್ತಾಕ್ ಅವರು ಈ ತನಕ ಯಾವುದೇ ಸ್ಪಷ್ಟೀಕರಣ ನೀಡಿಲ್ಲ. ಈ ಹಿನ್ನೆಲೆಯಲ್ಲಿ ನಮ್ಮ ಧಾರ್ಮಿಕ ನಂಬಿಕೆಗಳಿಗೆ ಧಕ್ಕೆ ಬರುತ್ತದೆ ಎಂಬ ಕಾರಣದಿಂದ ನಾನು ಕಾನೂನಾತ್ಮಕ ಹೋರಾಟಕ್ಕೆ ಇಳಿದಿದ್ದೇನೆ ಎಂದು ತಿಳಿಸಿದರು.

ಬಾನು ಮುಷ್ತಾಕ್ ಅವರ ಭಾಷಣವನ್ನು ಒಪ್ಪುತ್ತೀರಾ ಎಂದು ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಅವರನ್ನು ನಾನು ನೇರವಾಗಿ ಪ್ರಶ್ನಿಸುತ್ತಿದ್ದೇನೆ. ಒಂದು ವೇಳೆ ಒಪ್ಪುವುದಾದರೆ ಧೈರ್ಯವಾಗಿ ಹೇಳಲಿ ಎಂದು ಸವಾಲು ಹಾಕಿದರು.

ಬಾನು ಮುಷ್ತಾಕ್ ಅವರು ದಸರಾ ಉದ್ಘಾಟನೆ ಮಾಡುವುದನ್ನು ನಾವು ವಿರೋಧ ಮಾಡಿದಾಗ ಈ ಹಿಂದೆ ದಸರಾ ಉದ್ಘಾಟನೆ ಮಾಡಿದ್ದ ನಿಸಾರ್ ಅಹಮ್ಮದ್ ಹೆಸರು ಎಳೆದು ತಂದರು. ಆದರೆ ನಿಸಾರ್ ಅಹಮ್ಮದ್ ಅವರು ಕನ್ನಡ ಭಾಷೆಯನ್ನು ದೇವರೆಂದು ಒಪ್ಪಿದ್ದರು. ಭುವನೇಶ್ವರಿಗೆ ಪೂಜೆ ಸಲ್ಲಿಸಿದ್ದರು. ನಮ್ಮ ನೆಲ, ಜಲ, ಸಂಸ್ಕೃತಿ ಒಪ್ಪಿದ ಜಾಕೀರ್ ಹುಸೇನ್, ಬಿಸ್ಮಿಲ್ಲಾ ಖಾನ್ ಅವರನ್ನು ನಾವು ಒಪ್ಪಿದ್ದೇವೆ. ಅಬ್ದುಲ್ ಕಲಾಂ ಅವರನ್ನು ರಾಷ್ಟ್ರಪತಿ ಮಾಡಿದ್ದೇವೆ. ನಮ್ಮ ನೆಲ, ಜಲ ಒಪ್ಪುವವರನ್ನು ನಾನು ಮುಕ್ತ ಮನಸ್ಸಿನಿಂದ ಗೌರವಿಸುತ್ತೇವೆ ಎಂದರು.

ಆದರೆ ಬಾನು ಮುಷ್ತಾಕ್ ಅವರು ಕನ್ನಡಾಂಬೆಯ ಪೂಜೆಯನ್ನು ವಿರೋಧಿಸಿ 2023 ರಲ್ಲಿ ಹೇಳಿಕೆ ನೀಡಿದ್ದಾರೆ. ಇದಕ್ಕೆ ಸಾಕ್ಷಿ ಇಲ್ಲ ಎಂದು ಹೇಳುತ್ತಿರುವ ಸಿದ್ದರಾಮಯ್ಯ ಅವರು ಬಾನು ಮುಷ್ತಾಕ್ ಅವರ ವೈರಲ್ ವಿಡಿಯೋ ನೋಡಲಿ ಎಂದು ಪ್ರತಾಪ್ ಸಿಂಹ ಸಲಹೆ ನೀಡಿದರು.

ಸಿದ್ದರಾಮಯ್ಯ ಅವರು ಅಲ್ಪಸಂಖ್ಯಾತರ ಓಲೈಕೆಗೆ ಯಾವ ಮಟ್ಟಕ್ಕಾದರೂ ಹೋಗುತ್ತಾರೆ. ಈ ಹಿಂದೆ ಬರಗೂರು ರಾಮಚಂದ್ರಪ್ಪ ಅವರು ದಸರಾ ಉದ್ಘಾಟನೆ ವೇಳೆ ದೀಪ ಹಚ್ಚುವುದಿಲ್ಲ ಎಂದು ಕ್ಯಾತೆ ತೆಗೆದಿದ್ದರು. ಆದರೂ ಅವರಿಂದಲೇ ದಸರಾ ಉದ್ಘಾಟಿಸಿದರು. ಹೀಗೆ ಮುಸ್ಲಿಂರ ಓಲೈಕೆ ಮಾಡಲು ಸಿದ್ದರಾಮಯ್ಯ ಅವರು ಯಾವುದೇ ನಿರ್ಧಾರ ತೆಗೆದುಕೊಳ್ಳಲು ಹಿಂಜರಿಯುವುದಿಲ್ಲ ಎಂದರು.

ಸಂವಿಧಾನದ ಆರ್ಟಿಕಲ್ 26 ರ ಅಡಿಯಲ್ಲಿ ನಾನು ಕೇಸ್ ಹಾಕಿದ್ದೇನೆ. ಪೂಜಾ ವಿಧಿ, ವಿಧಾನದ ಬಗ್ಗೆ ಅದರಲ್ಲಿ ಸ್ಪಷ್ಟವಾಗಿ ಹೇಳಿದ್ದಾರೆ. ಇದನ್ನು ಉಲ್ಲೇಖಿಸಿ ಹೈಕೋರ್ಟ್ ಮೊರೆ ಹೋಗಿದ್ದೇನೆ ಎಂದು ಪ್ರತಾಪ್ ಸಿಂಹ ಹೇಳಿದರು.

ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಅವರು ಮಧ್ಯ ಪ್ರವೇಶಿಸಿ ಬಾನು ಮುಷ್ತಾಕ್ ಅವರಿಂದ ಈಗಲೂ ಕ್ಷಮೆ ಕೇಳಿಸಲಿ. ನಾನು ಹೈಕೋರ್ಟ್‌ನಲ್ಲಿ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆ ವಾಪಸು ಪಡೆಯುತ್ತೇನೆ ಎಂದು ಸ್ಪಷ್ಟನೆ ನೀಡಿದರು.

ಇದು ಕನ್ನಡಿಗರ ಸರ್ಕಾರವಲ್ಲ! ತಾಲಿಬಾನ್ ಸರ್ಕಾರ!!

ಸಿಎಂ ಸಿದ್ದರಾಮಯ್ಯ ಹಿಂದೂಗಳಿಗೆ ಜಾತ್ಯಾತೀತತೆ ಪಾಠ ಮಾಡುವ ಅಗತ್ಯವಿಲ್ಲ

ಕರ್ನಾಟಕದಲ್ಲಿ ಇರುವುದು ಕನ್ನಡಿಗರ ಸರ್ಕಾರವಲ್ಲ, ತಾಲಿಬಾನ್ ಸರ್ಕಾರ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ದೂರಿದರು.

ಕಾಂಗ್ರೆಸ್ ಸರ್ಕಾರ ಬಂದ ಕೂಡಲೇ ಕೆಲವು ಸಂಘಟನೆಗಳು ಎದ್ದು ಕುಳಿತುಕೊಳ್ಳುತ್ತವೆ. ಡಿ.ಜೆ. ಹಳ್ಳಿ, ಕೆ.ಜಿ.ಹಳ್ಳಿ ಕೇಸ್ ವಾಪಸು ಪಡೆದಿರುವುದಕ್ಕೆ ಮತ್ತೆ ಪುಂಡಾಟಿಕೆ ಆರಂಭಿಸಿದ್ದಾರೆ ಎಂದು ದೂರಿದರು. ಹಿಂದೂಗಳು ಶಾಂತಿಯಿಂದ ಗಣೇಶ ಮೆರವಣಿಗೆ ಮಾಡಲು ಸಾಧ್ಯವಾಗದ ವಾತಾವರಣ ನಿರ್ಮಾಣವಾಗಿದೆ ಎಂದು ಪ್ರತಾಪ್ ಸಿಂಹ ಆತಂಕ ವ್ಯಕ್ತಪಡಿಸಿದರು.

ಮುಸ್ಲಿಂರು ಶಾಂತಿ ಪ್ರಿಯರು ಎಂದು ಸಿದ್ದರಾಮಯ್ಯ ಮೊನ್ನೆ ಹೇಳಿದ್ದಾರೆ. ಈ ರೀತಿ ಮುಸ್ಲಿಂರಿಗೆ ಉತ್ತೇಜನ ನೀಡಿದ ಕಾರಣದಿಂದ ಅವರು ಕಾನೂನು ವಿರೋಧಿ ಕೃತ್ಯ ಎಸಗುತ್ತಿದ್ದಾರೆ. ಮುಸ್ಲಿಂರು ಶಾಂತಿ ಪ್ರಿಯರಾಗಿದ್ದರೆ ಮದ್ದೂರಿನಲ್ಲಿ ಗಣೇಶಮೂರ್ತಿ ಮೆರವಣಿಗೆ ಸಾಗುವಾಗ ಕಲ್ಲು ತೂರಾಟ ಏಕೆ ಮಾಡಿದರು ಎಂದು ಪ್ರಶ್ನಿಸಿದರು.

ಹಿಂದೂ ಧರ್ಮಿಯರಷ್ಟು ಜಾತ್ಯಾತೀತ ಮನೋಭಾವದವರು ಮತ್ತೊಬ್ಬರಿಲ್ಲ. ಈ ಹಿನ್ನೆಲೆ ಸಿದ್ದರಾಮಯ್ಯ ಅವರು ಹಿಂದೂಗಳ ಜಾತ್ಯಾತೀತತೆ ಬಗ್ಗೆ ಪಾಠ ಮಾಡುವ ಅವಶ್ಯಕತೆ ಇಲ್ಲ ಎಂದು ಪ್ರತಾಪ್ ಸಿಂಹ ತಿರುಗೇಟು ನೀಡಿದರು.

ಕೇಸ್ ಮ್ಯಾನೇಜ್ ಮಾಡುವುದರಲ್ಲಿ ಸಿದ್ದರಾಮಯ್ಯ ಚಾಣಾಕ್ಷರು. ಮುಡಾ ಪ್ರಕರಣದಲ್ಲಿ ಅವರ ಚಾಣಾಕ್ಷತನವನ್ನು ನೋಡಿದ್ದೇವೆ. ಅದೇ ರೀತಿಯ ಚಾಣಾಕ್ಷತನದಿಂದ ಬಾನು ಮುಷ್ತಾಕ್ ಅವರಿಂದ ಕ್ಷಮೆ ಕೇಳಿಸಿ ಎಂದು ಸಲಹೆ ನೀಡಿದರು.

ಚಾತುರ್ಮಾಸ್ಯ ವ್ರತಾನುಷ್ಠಾನ...



ಶ್ರೀ ವಿಶ್ವಕರ್ಮ ಜಗದ್ಗುರು ಪೀಠ, ಅರೇಮಾದನಹಳ್ಳಿ ಮಹಾಸಂಸ್ಥಾನ ಮಠದ ಜಗದ್ಗುರು ಅನಂತ ಶ್ರೀ ವಿಭೂಷಿತ ಶಿವಸುಜ್ಞಾನ ತೀರ್ಥ ಮಹಾಸ್ವಾಮಿಗಳವರ ಚಾತುರ್ಮಾಸ್ಯ ವ್ರತಾನುಷ್ಠಾನ ಮೈಸೂರಿನ ಚಿಕ್ಕಹಳ್ಳಿ ಬಳಿಯ ಶಾಖಾ ಮಠದಲ್ಲಿ ನಡೆಯಿತು. ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಸ್ವಾಮೀಜಿ ಆಶೀರ್ವಾದ ಪಡೆದರು. ಈ ವೇಳೆ ಉದ್ಯಮಿ ಪ್ರವೀಣ್ ಮಂಜುನಾಥ್, ಪ್ರದೀಪ್ ಮಂಜುನಾಥ್, ಮೈಸೂರು ಗ್ರಾಮಾಂತರ ಕೆಎಸ್‌ಆರ್‌ಟಿಸಿ ಗೃಹ ನಿರ್ಮಾಣ ಸಹಕಾರ ಸಂಘದ ಅಧ್ಯಕ್ಷ ನಿವೃತ್ತ ಡಿವೈಎಸ್ಪಿ ಮರಿಸ್ವಾಮಿ, ಕೆಎಂಎಫ್‌ನ ಸಹಾಯಕ ನಿರ್ದೇಶಕ ಪೂರ್ಣಚಂದ್ರ ತೇಜಸ್ವಿ, ಗೋಲ್ಡ್ ಸುರೇಶ್ ಇದ್ದರು.

ಉದ್ಯಮಿ ಶ್ರೀಮತಿ ಖುಷಿ ವಿನುಗೆ ಸನ್ಮಾನ...



ಮೈಸೂರಿನ ಜೆ.ಕೆ.ಮೈದಾನದ ಮೈಸೂರು ಮೆಡಿಕಲ್ ಕಾಲೇಜಿನ ಅಮೃತ ಮಹೋತ್ಸವ ಭವನದಲ್ಲಿ ನಡೆದ ದಿ ರೈಲ್ವೆ ಕೋ–ಆಪರೇಟಿವ್ ಬ್ಯಾಂಕಿನ 105ನೇ ಶತಮಾನೋತ್ಸವ ಸಮಾರಂಭದಲ್ಲಿ ಮಿಸ್ ಇಂಡಿಯಾ ಸ್ಪರ್ಧೆಯ ರನ್ನರ್ಸ್ ಅಪ್ ಆದ ಮೈಸೂರಿನ ಉದ್ಯಮಿ ಶ್ರೀಮತಿ ಖುಷಿ ವಿನು ಅವರ ಸಮಾಜ ಸೇವೆ ಗುರುತಿಸಿ ಸನ್ಮಾನಿಸಲಾಯಿತು. ಬ್ಯಾಂಕ್ ಅಧ್ಯಕ್ಷ ಡಾ.ಎಂ.ಬಿ.ಮಂಜೇಗೌಡ, ಗಣ್ಯರು ಈ ವೇಳೆ ಉಪಸ್ಥಿತರಿದ್ದರು.

ಪೋಷಕರು ಮಕ್ಕಳಿಗೆ ಸೊಪ್ಪಿನ ಮಹತ್ವ ತಿಳಿಸಬೇಕು

- ಅಜೀಂ ಪ್ರೇಮ್‌ಜಿ ಫೌಂಡೇಷನ್‌ನ ಸಂಪನ್ಮೂಲ ವ್ಯಕ್ತಿ ಶಿವಕುಮಾರ್ ಅಭಿಮತ
- ಸೊಪ್ಪಿನ ಮೇಳಕ್ಕೆ ತೆರೆ; ಚಿತ್ರಕಲಾ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣೆ



ಸೊಪ್ಪಿನ ಮೇಳದಲ್ಲಿ ಏರ್ಪಡಿಸಿದ್ದ ವಿವಿಧ ಸ್ಪರ್ಧೆಗಳಲ್ಲಿ ಪಾಲ್ಗೊಂಡು ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ಮೈಸೂರು,ಸೆ.8–ಇಂದಿನ ಪೀಳಿಗೆಯ ಮಕ್ಕಳಿಗೆ ಬೆರಳೆಣಿಕೆಯಷ್ಟು ಸೊಪ್ಪು ಬಿಟ್ಟರೆ, ನಮ್ಮ ನೆಲದ ಬಹುತೇಕ ಸೊಪ್ಪುಗಳ ಪರಿಚಯ ಇಲ್ಲ. ಪೋಷಕರು ತಮ್ಮ ಮಕ್ಕಳಿಗೆ ಸೊಪ್ಪಿನ ಸಂಸ್ಕೃತಿ, ವೈವಿಧ್ಯ ಮತ್ತು ಅಡುಗೆ ಪದ್ಧತಿ ಪರಿಚಯಿಸಬೇಕು ಎಂದು ಅಜೀಂ ಪ್ರೇಮ್‌ಜಿ ಫೌಂಡೇಷನ್‌ನ ಸಂಪನ್ಮೂಲ ವ್ಯಕ್ತಿ ಶಿವಕುಮಾರ್ ಅಭಿಪ್ರಾಯಪಟ್ಟರು.

ಸಹಜ ಸಮೃದ್ಧ, ಹುಲಿಕಾಡು ರೈತ ಉತ್ಪಾದಕರ ಕಂಪನಿ, ಐಸಿಎಆರ್, ಜೆಎಸ್‌ಎಸ್ ಕೃಷಿ ವಿಜ್ಞಾನ ಕೇಂದ್ರ ಸುತ್ತೂರು ಆಶ್ರಯದಲ್ಲಿ ನಂಜರಾಜ ಬಹದ್ದೂರ್ ಛತ್ರದಲ್ಲಿ ನಡೆಯುತ್ತಿದ್ದ ಸೊಪ್ಪು ಮೇಳದ ಅಂಗವಾಗಿ ನಡೆದ ಚಿತ್ರಕಲಾ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಿಸಿ, ಮಾತನಾಡಿದರು. ಚಿತ್ರಕಲಾ ಸ್ಪರ್ಧೆಯಲ್ಲಿ 35 ಮಕ್ಕಳು ಭಾಗವಹಿಸಿದ್ದರು. ಮಕ್ಕಳು ತಾವು ಕಂಡ ಸೊಪ್ಪಿನ ಲೋಕವನ್ನು ಬಣ್ಣಗಳ ಮೂಲಕ ತೆರೆದಿಟ್ಟರು. ಸೊಪ್ಪಿನ ಚಿತ್ರಕಲಾ ಸ್ಪರ್ಧೆಯಲ್ಲಿ ಪ್ರಣತಿ (ಪ್ರಥಮ), ಆದ್ಯ ಶ್ರೀವತ್ಸ (ದ್ವಿತೀಯ), ಪುನರ್ದತ್ತ (ತೃತೀಯ), ಶಾರ್ವಿಕ ಮತ್ತು ಕುಶಾಲ್ (ಸಮಾಧಾನಕರ) ಬಹುಮಾನ ಗಳಿಸಿದರು. ಶಿವಕುಮಾರ್, ಸಹಜ ಕೃಷಿಕ ಶ್ರೀವತ್ಸ ಗೋವಿಂದರಾಜು ತೀರ್ಪುಗಾರರಾಗಿದ್ದರು.

ಸೊಪ್ಪಿನ ಅಡುಗೆ ಸ್ಪರ್ಧೆಗೆ 36 ಜನ ಸ್ಪರ್ಧಿಗಳು, ವಿವಿಧ ಬಗೆಯ ಸೊಪ್ಪಿನ ಅಡುಗೆಗಳನ್ನು ಸ್ಪರ್ಧೆಗೆ ತಂದಿದ್ದರು. ಎಸ್‌ಡಿಎಂ ಕಾಲೇಜಿನ ಪ್ರಥಮ ವರ್ಷದ ವಾಣಿಜ್ಯ ವಿಭಾಗದ ಪೂಜಾಶ್ರೀ ಮಾಡಿದ ಗರಿಕೆ ಹುಲ್ಲಿನ ಚಾಕಲೇಟ್ ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು.

ಪಾಲಕ್ ಪಕೋಡ, ದೊಡ್ಡಪತ್ರೆ ಪಲಾವ್, ಸಬ್ಬಸಿಗೆ ಪುರಿ ಉಂಡೆ, ಕುಂಬಳ ಸೊಪ್ಪಿನ ಸಾಂಬಾರ್, ಸೊಪ್ಪಿನ ರೊಟ್ಟಿ, ದೊಡ್ಡಪತ್ರೆ ಬಜ್ಜಿ... ಹೀಗೆ 100ಕ್ಕೂ ಹೆಚ್ಚು ಸೊಪ್ಪಿನ ಖಾದ್ಯಗಳನ್ನು ಸ್ಪರ್ಧೆಗೆ ತರಲಾಗಿತ್ತು. ಅಡುಗೆ ಸ್ಪರ್ಧೆಯಲ್ಲಿ ಪುಷ್ಪ ಪರಶುರಾಮ (ಪ್ರಥಮ), ಕೃಪಾಲಿನಿ (ದ್ವಿತೀಯ), ನಾಗಮಣಿ ವಿರೂಪಾಕ್ಷ (ತೃತೀಯ), ಶಿವಮ್ಮ ಮತ್ತು ಪೂಜಾಶ್ರೀ (ಸಮಾಧಾನಕರ) ಬಹುಮಾನಗಳಿಸಿದರು. ಸೊಪ್ಪಿನ ಅಡುಗೆಗಳ ಸ್ಪರ್ಧೆಗೆ ನಿವೃತ್ತ ವಿಜ್ಞಾನಿ ಡಾ.ಜಮುನಾ ಅರಸ್, ಪದ್ಮ ಮತ್ತು ಸುತ್ತೂರು ಕೃಷಿ ವಿಜ್ಞಾನ ಕೇಂದ್ರದ ಡಾ.ದಿವ್ಯ ತೀರ್ಪುಗಾರರಾಗಿದ್ದರು.

ಮಣಿಪಾಲ್ ಆಸ್ಪತ್ರೆಯಲ್ಲಿ ಸ್ಪೆಲ್ಲಿಂಗ್ ಬೀ ಸ್ಪರ್ಧೆ



ಮಣಿಪಾಲ್ ಆಸ್ಪತ್ರೆಯಲ್ಲಿ ವೃದ್ಧರ ಮೈತ್ರಿ ವಿಭಾಗದಿಂದ 4ನೇ ಆವೃತ್ತಿಯ ಸೀನಿಯರ್ ಸ್ಪೆಲ್ಲಿಂಗ್ ಬೀ ಸ್ಪರ್ಧೆ ನಡೆಯಿತು.

ಮೈಸೂರು, ಸೆ.8–ಇಲ್ಲಿನ ಮಣಿಪಾಲ್ ಆಸ್ಪತ್ರೆಯಲ್ಲಿ ವೃದ್ಧರ ಮೈತ್ರಿ ವಿಭಾಗದಿಂದ ಈಚೆಗೆ 4ನೇ ಆವೃತ್ತಿಯ ಸೀನಿಯರ್ ಸ್ಪೆಲ್ಲಿಂಗ್ ಬೀ ಸ್ಪರ್ಧೆ ನಡೆಯಿತು.

ಹಿರಿಯರಲ್ಲಿ ಮರೆಗುಳಿತನ ಮುಂತಾದ ಕಾಯಿಲೆಗಳ ಜಾಗೃತಿ ಹಾಗೂ ಭಾಷಾ ಕೌಶಲ, ಮಾನಸಿಕ ಚುರುಕುತನ, ಸಕ್ರಿಯತೆ ಹೆಚ್ಚಳಕ್ಕೆ ಆಯೋಜಿಸಿದ್ದ ಸ್ಪರ್ಧೆಯಲ್ಲಿ 122 ಮಂದಿ ಭಾಗವಹಿಸಿದ್ದರು. ಪ್ರಾಥಮಿಕ ಶಬ್ಧಕೋಶ, ಪದ ನಿರ್ಮಾಣ ಕಾರ್ಯ ಮತ್ತು ಸ್ಪೆಲ್ ಬೀ ನಡೆಯಿತು. ಮುರಳೀಧರ್ ಪ್ರಥಮ ಬಹುಮಾನ ಗಳಿಸಿದರು. ವಿಜೇತರಿಗೆ ಬಹುಮಾನ, ಭಾಗವಹಿಸಿದ್ದವರಿಗೆ ಪ್ರಮಾಣ ಪತ್ರ ನೀಡಲಾಯಿತು. ಆಸ್ಪತ್ರೆಯ ನರಶಸ್ತ್ರ ಚಿಕಿತ್ಸಕ ಡಾ.ಮಕ್ಸೂದ್ ಅಹ್ಮದ್, ನರ ವಿಜ್ಞಾನ ವಿಭಾಗದ ಡಾ.ವೇಣುಗೋಪಾಲಕೃಷ್ಣ, ಡಾ.ಸುಚರಿತ ಮತ್ತಿತರರು ಉಪಸ್ಥಿತರಿದ್ದರು.

ಸೆ.13, ಚಲನಚಿತ್ರೋತ್ಸವ ಉದ್ಘಾಟನಾ ಸಮಾರಂಭ

ಮೈಸೂರು,ಸೆ.8–ಮೈಸೂರು ದಸರಾ ಚಲನಚಿತ್ರ ಉಪಸಮಿತಿ ವತಿಯಿಂದ ಚಲನಚಿತ್ರೋತ್ಸವ–2025 ಉದ್ಘಾಟನಾ ಸಮಾರಂಭವನ್ನು ಅಭಿನಯ ಸರಸ್ವತಿ ದಿವಂಗತ ಬಿ.ಸರೋಜಾದೇವಿ ಅವರ ನೆನಪಿನಲ್ಲಿ ಸೆ.13ರಂದು ಬೆಳಗ್ಗೆ 11 ಗಂಟೆಗೆ ಮಾಲ್ ಆಫ್ ಮೈಸೂರಿನ ನೆಲಮಹಡಿಯಲ್ಲಿ ಹಮ್ಮಿಕೊಳ್ಳಲಾಗಿದೆ. ಕಲಾವಿದರಾದ ಸಂಧ್ಯಾ ಅರಕೆರೆ, ಪೃಥ್ವಿ ಅಂಬರ್, ಜಸ್ಕರನ್ ಸಿಂಗ್, ನಾಗಾರ್ಜುನ್ ಶರ್ಮಾ, ಅಂಜಲಿ ಭಾಗವಹಿಸಲಿದ್ದಾರೆ. ಚಲನಚಿತ್ರ ಪ್ರದರ್ಶನವು ಮಾಲ್ ಆಫ್ ಮೈಸೂರಿನ ಐನಾಕ್ಸ್‌ನಲ್ಲಿ ಸುಮಾರು ಸೆ.14ರಿಂದ 20ರವರೆಗೆ ನಡೆಯಲಿದ್ದು, ಚಿತ್ರ ಪ್ರದರ್ಶನ ಪಾಸ್ ನೋಂದಣಿಗೆ ವಿದ್ಯಾರ್ಥಿಗಳಿಗೆ ರೂ.300, ಇತರೆ ರೂ.500 ನಿಗದಿಪಡಿಸಲಾಗಿದೆ. ಚಿತ್ರರಂಗದ ಹಿರಿಯ ಛಾಯಾಗ್ರಾಹಕ ಪ್ರಗತಿ ಅಶ್ವತ್ ನಾರಾಯಣ್ ನೇತೃತ್ವದಲ್ಲಿ ಅಪರೂಪದ ಸಿನಿ ಫೋಟೋ ಪ್ರದರ್ಶನವನ್ನು ಸೆ.14ರಿಂದ 18ರವರೆಗೆ ಐನಾಕ್ಸ್ ಮಾಲ್‌ನಲ್ಲಿ ಆಯೋಜಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಭಯೋತ್ಪಾದಕ ಪಿತೂರಿ ಪ್ರಕರಣ: ಕರ್ನಾಟಕ ಸೇರಿ 5 ರಾಜ್ಯ, ಜಮ್ಮು–ಕಾಶ್ಮೀರದಲ್ಲಿ ಎನ್‌ಐಎ ತೀವ್ರ ಶೋಧ



ನವದೆಹಲಿ: ಭಯೋತ್ಪಾದಕ ಪಿತೂರಿ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ತನಿಖಾ ಸಂಸ್ಥೆ 5 ರಾಜ್ಯಗಳು, ಜಮ್ಮು–ಕಾಶ್ಮೀರ ಕೇಂದ್ರಾಡಳಿತ ಪ್ರದೇಶದ 22 ಸ್ಥಳಗಳಲ್ಲಿ ಶೋಧ ನಡೆಸಿದೆ.

ಬಿಹಾರದ 8 ಸ್ಥಳಗಳಲ್ಲಿ, ಕರ್ನಾಟಕ, ಮಹಾರಾಷ್ಟ್ರ, ತಮಿಳುನಾಡಿನಲ್ಲಿ ತಲಾ 1, ಉತ್ತರಪ್ರದೇಶದಲ್ಲಿ 2, ಜಮ್ಮು–ಕಾಶ್ಮೀರದ 9 ಸ್ಥಳಗಳಲ್ಲಿ ಶೋಧ ನಡೆದಿದೆ. ನಿರ್ದಿಷ್ಟ ಕ್ರಮ ಕೈಗೊಳ್ಳಬಹುದಾದ ಗುಪ್ತಚರ ಮಾಹಿತಿ ಆಧಾರದ ಮೇಲೆ ಪ್ರತ್ಯೇಕ ಎನ್‌ಐಎ ತಂಡಗಳು ಈ ಸ್ಥಳಗಳಲ್ಲಿ ಏಕಕಾಲದಲ್ಲಿ ಶೋಧ ಕಾರ್ಯಾಚರಣೆ ಪ್ರಾರಂಭಿಸಿದವು. ಈ ಬೆಳವಣಿಗೆ ಬಗ್ಗೆ ಮಾಹಿತಿ ಪಡೆದ ಅಧಿಕಾರಿಗಳು, ರಾಷ್ಟ್ರ ವಿರೋಧಿ ಜಾಲಗಳೊಂದಿಗೆ ಸಂಪರ್ಕ ಹೊಂದಿರುವ ಶಂಕಿತ ವ್ಯಕ್ತಿಗಳ ನಿವಾಸಗಳು ಮತ್ತು ಆವರಣದಲ್ಲಿ ರಾಜ್ಯ ಪೊಲೀಸರೊಂದಿಗೆ ನಿಕಟ ಸಮನ್ವಯದೊಂದಿಗೆ ದಾಳಿ ನಡೆಸಲಾಗುತ್ತಿದೆ.

ಈ ವರ್ಷದ ಆರಂಭದಲ್ಲಿ ಆರ್‌ಸಿ –1/2025/ಎನ್‌ಐಎ/ಸಿಹೆಚ್‌ಇ ಸಂಖ್ಯೆ ಅಡಿಯಲ್ಲಿ ನೋಂದಾಯಿಸಲಾದ ಪ್ರಕರಣ, ಅದರ ಗಂಭೀರತೆ ಮತ್ತು ಸಂಭವನೀಯ ರಾಷ್ಟ್ರೀಯ ಭದ್ರತಾ ಪರಿಣಾಮಗಳನ್ನು ಗಮನದಲ್ಲಿಟ್ಟುಕೊಂಡು ಗೃಹ ವ್ಯವಹಾರಗಳ ಸಚಿವಾಲಯ ಔಪಚಾರಿಕವಾಗಿ ಎನ್‌ಐಎಗೆ ಹಸ್ತಾಂತರಿಸಿದೆ. ತನಿಖೆಯಲ್ಲಿರುವ ಜಾಲವು ದೇಶದಲ್ಲಿ ಅಶಾಂತಿ ಹುಟ್ಟುಹಾಕಲು, ಕಾನೂನು–ಸುವ್ಯವಸ್ಥೆ ಅಸ್ಥಿರಗೊಳಿಸಲು ಪ್ರಯತ್ನಿಸುತ್ತಿದೆ ಎಂದು ತನಿಖಾಧಿಕಾರಿಗಳು ಶಂಕಿಸಿದ್ದಾರೆ.

ಕೇಂದ್ರ ಸರ್ಕಾರವು ಭಯೋತ್ಪಾದನೆ ಬಗ್ಗೆ ತನ್ನ ಶೂನ್ಯ–ಸಹಿಷ್ಣುತೆ ನೀತಿಯನ್ನು ಪದೇ ಪದೆ ಒತ್ತಿ ಹೇಳುತ್ತಿರುವ ಸಮಯದಲ್ಲಿ, ಅಂತಹ ಬೆದರಿಕೆಗಳ ವಿರುದ್ಧ ತಡೆಗಟ್ಟುವ ಕ್ರಮವನ್ನು ಬಲಪಡಿಸಲು ಭದ್ರತಾ ಸಂಸ್ಥೆಗಳಿಗೆ ನಿರ್ದೇಶಿಸಿರುವ ಸಮಯದಲ್ಲಿ ಈ ಕಾರ್ಯಾಚರಣೆ ಬಂದಿದೆ.

ಮಲ್ಲಿಗೆ ಕೊಂಡೊಯ್ದ ನಟಿ ನವ್ಯಾ ನಾಯರ್‌ಗೆ ವಿಮಾನ ನಿಲ್ದಾಣದಲ್ಲಿ 1.1 ಲಕ್ಷ ರೂ. ದಂಡ



ಕೊಚ್ಚಿ: ಕನ್ನಡದ 'ಗಜ' ಖ್ಯಾತಿಯ ನಟಿ ನವ್ಯಾ ನಾಯರ್‌ಗೆ ಆಸ್ಟ್ರೇಲಿಯಾದ ಮೆಲ್ಬೋರ್ನ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ರೂ.1.1 ಲಕ್ಷ ದಂಡ ಹಾಕಲಾಗಿದೆ. ಮಲ್ಲಿಗೆ ಹೂಗಳನ್ನು ಕೊಂಡೊಯ್ದಿದ್ದಕ್ಕಾಗಿ ನಟಿ ನವ್ಯಾ ನಾಯರ್ ಅವರಿಗೆ ಸುಮಾರು 1.14 ಲಕ್ಷ (AUD 1,980) ದಂಡ ವಿಧಿಸಲಾಗಿದೆ.

ವಿಕ್ಟೋರಿಯಾದಲ್ಲಿ ಮಲಯಾಳಿ ಅಸೋಸಿಯೇಷನ್‌ನ ಓಣಂ ಆಚರಣೆಯಲ್ಲಿ ಭಾಗವಹಿಸಿದ್ದಾಗ ಈ ಘಟನೆ ನಡೆದಿರುವುದಾಗಿ ಅವರು ಹೇಳಿಕೊಂಡಿದ್ದಾರೆ. ಆ ಕಾರ್ಯಕ್ರಮಕ್ಕಾಗಿ ನಾನು 1 ಲಕ್ಷಕ್ಕೂ ಹೆಚ್ಚು ಮೌಲ್ಯದ ಹೂವುಗಳನ್ನು ಧರಿಸಿದ್ದೆ ಎಂದು ನವ್ಯಾ ತಮಾಷೆ ಮಾಡಿದ್ದು, ಈ ವಿಡಿಯೋ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ.

ಆಸ್ಟ್ರೇಲಿಯಾ ಪ್ರವಾಸಕ್ಕೆ ಹೊರಡುವ ಮೊದಲು ತನ್ನ ತಂದೆ ಉಡುಗೊರೆಯಾಗಿ ನೀಡಿದ 15 ಸೆಂ.ಮೀ ಉದ್ದದ ಮಲ್ಲಿಗೆ ಹೂವಿನ ಹಾರವನ್ನು ತೆಗೆದುಕೊಂಡು ಹೋಗಿದ್ದೆ. ಆ ದೇಶದ ನಿಯಮಗಳ ಅರಿವಿಲ್ಲದೆ ವಿಮಾನ ನಿಲ್ದಾಣದ ಘಾರಂನಲ್ಲಿ ಮಲ್ಲಿಗೆ ಹೂ ತೆಗೆದುಕೊಂಡು ಹೋಗುವ ಬಗ್ಗೆ ಯಾವುದೇ ಘೋಷಣೆ ಮಾಡಿರಲಿಲ್ಲ. ಇದು ದಂಡಕ್ಕೆ ಕಾರಣವಾಯಿತು ಎಂದು ತಿಳಿಸಿದ್ದಾರೆ.

ದೇಶದ ಸ್ಥಳೀಯ ಸಸ್ಯ ಮತ್ತು ಪ್ರಾಣಿಗಳನ್ನು ರಕ್ಷಿಸಲು ಆಸ್ಟ್ರೇಲಿಯಾದಲ್ಲಿ ಸುರಕ್ಷತಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲಾಗುತ್ತದೆ. ವಿದೇಶಿ ಸಸ್ಯಗಳು ಅಥವಾ ಪ್ರಾಣಿಗಳನ್ನು ಆ ದೇಶಕ್ಕೆ ಕೊಂಡೊಯ್ಯುವುದು ಅಪರಾಧ ಎಂದು ಪರಿಗಣಿಸಲಾಗುತ್ತದೆ. ಏಕೆಂದರೆ ಇದು ಸ್ಥಳೀಯ ಪ್ರಭೇದಗಳಿಗೆ ಅಪಾಯವನ್ನುಂಟುಮಾಡುತ್ತದೆ. ಆಸ್ಟ್ರೇಲಿಯಾ ಸರ್ಕಾರದ ಕೃಷಿ, ಮೀನುಗಾರಿಕೆ ಮತ್ತು ಅರಣ್ಯ ಇಲಾಖೆಯ ಪ್ರಕಾರ, ಅಂತಹ ವಿದೇಶಿ ಸಸ್ಯ ಅಥವಾ ಪ್ರಾಣಿಗಳನ್ನು ಸರಿಯಾದ ಘೋಷಣೆ ಮತ್ತು ತಪಾಸಣೆಯ ನಂತರ ಮಾತ್ರ ದೇಶಕ್ಕೆ ತರಬೇಕು. 28 ದಿನಗಳಲ್ಲಿ ದಂಡ ಪಾವತಿಸುವಂತೆ ನಟಿಗೆ ಸೂಚಿಸಲಾಗಿದೆ.

ಸಕ್ಕರೆ ಕಾಯಿಲೆ ಉಚಿತ ತಪಾಸಣೆ ಶಿಬಿರ

ಮೈಸೂರು, ಸೆ.8–ಮೈಸೂರಿನ ರಾಮಕೃಷ್ಣನಗರದ ಸುಯೋಗ್ ಆಸ್ಪತ್ರೆಯಲ್ಲಿ ಸೆ.15ರವರೆವಿಗೆ ಸಕ್ಕರೆ ಕಾಯಿಲೆ ಉಚಿತ ತಪಾಸಣಾ ಶಿಬಿರ ಆಯೋಜಿಸಲಾಗಿದೆ. ಸಕ್ಕರೆ ಕಾಯಿಲೆ ತಜ್ಞವೈದ್ಯ ಡಾ.ಅಭಿಷೇಕ್ ನೇತೃತ್ವದಲ್ಲಿ ಶಿಬಿರ ನಡೆಯಲಿದೆ.

ಶಿಬಿರದಲ್ಲಿ ಅತಿಯಾದ ಮೂತ್ರ ವಿಸರ್ಜನೆ, ಅತಿಯಾದ ಬಾಯಾರಿಕೆ, ಸುಸ್ತು, ತಲೆಸುತ್ತು, ಹಸಿವಾಗುವಿಕೆ, ದೃಷ್ಟಿ ಕಡಿಮೆಯಾಗುವಿಕೆ ಮುಂತಾದ ಸಮಸ್ಯೆಗಳಿರುವವರು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳತಕ್ಕದ್ದು. ಶಿಬಿರದಲ್ಲಿ ವಿಶೇಷ ವೈದ್ಯರು ಸೂಚಿಸುವ ಪರೀಕ್ಷೆಗಳಿಗೆ ಶೇ.30ರಷ್ಟು ರಿಯಾಯಿತಿ ಇದೆ. ಹೆಚ್ಚಿನ ಮಾಹಿತಿಗೆ 0821–2533600, 9986399862 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ಬೌದ್ಧ ಧರ್ಮಕ್ಕೆ ಜಗತ್ತನ್ನು ಒಗ್ಗೂಡಿಸುವ ಶಕ್ತಿ ಇದೆ

ಧ್ಯಾನ–ಗಾಯನ–ವಿಚಾರ ಕಾರ್ಯಕ್ರಮದಲ್ಲಿ ಮಾಜಿ ಸಚಿವ ಎನ್.ಮಹೇಶ್ ಅಭಿಮತ





ಮೈಸೂರಿನ ಮಾನಸಗಂಗೋತ್ರಿಯಲ್ಲಿ ನಡೆದ ಧಮ್ಮ ಪಯಣದಲ್ಲಿ ಮುಂಬತ್ತಿ ಬೆಳಗಿಸಲಾಯಿತು. ಬುದ್ಧ ಬೆಳದಿಂಗಳು ದಶಮಾನೋತ್ಸವದಲ್ಲಿ ಎನ್.ಮಹೇಶ್ ಮಾತನಾಡಿದರು.

ಮೈಸೂರು,ಸೆ.8(ವಿವಿಹೆಚ್)–ಇಡೀ ಜಗತ್ತನ್ನು ಒಂದುಗೂಡಿಸುವ ಶಕ್ತಿ ಇರುವುದು ಬೌದ್ಧ ಧರ್ಮಕ್ಕೆ ಮಾತ್ರ ಎಂದು ಮಾಜಿ ಸಚಿವ ಎನ್.ಮಹೇಶ್ ಅಭಿಪ್ರಾಯಪಟ್ಟರು.

ಮೈಸೂರಿನ ಮಾನಸಗಂಗೋತ್ರಿ ಆವರಣದಲ್ಲಿ ಬುದ್ಧ ಪ್ರತಿಮೆ ಮುಂಭಾಗ ಧಮ್ಮ ದೀಪ ಪ್ರತಿಷ್ಠಾನ ಚಾರಿಟಬಲ್ ಟ್ರಸ್ಟ್ ವತಿಯಿಂದ ವಿದ್ಯಾರ್ಥಿ ಘಟಕ, ಮಾನಸಗಂಗೋತ್ರಿ, ಮೈಸೂರು ವಿಶ್ವವಿದ್ಯಾನಿಲಯ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ ಬುದ್ಧ ಬೆಳದಿಂಗಳು ದಶಮಾನೋತ್ಸವ ಸಂಭ್ರಮದ ಧ್ಯಾನ–ಗಾಯನ–ವಿಚಾರ ಕಾರ್ಯಕ್ರಮದಲ್ಲಿ ಮುಖ್ಯ ಭಾಷಣಕಾರರಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಧಮ್ಮ ಹರಡುವಲ್ಲಿ ಎದುರಾಗುವ ಬಿಕ್ಕಟ್ಟುಗಳು ಹಾಗೂ ಪರಿಹಾರ ವಿಚಾರ ಸಂಬಂಧ ಮಾತನಾಡಿದ ಅವರು, ರಾಜಕೀಯ ಜನರನ್ನು ವಿಕೇಂದ್ರಿಕರಿಸಿದರೇ, ಧಾರ್ಮಿಕತೆ ಎಂಬುದು ಜನರನ್ನು ಒಂದುಗೂಡಿಸುತ್ತದೆ. ಪ್ರಕೃತಿ ಸಹಜವಾದ ವಿಚಾರಗಳನ್ನು ಜನರಿಗೆ ತಿಳಿಸುವ ಧಾರ್ಮಿಕತೆ ಎಂಬುವುದು ಎಲ್ಲವನ್ನು ಒಳಗೊಂಡಿದೆ. ಬುದ್ಧ ಬರುವುದಕ್ಕಿಂತ ಮೊದಲಿದ್ದ ಹಲವು ಗೊಂದಲಗಳಿಗೆ ಬುದ್ಧ ಪರಿಹಾರ ಕಂಡುಕೊಂಡ. ಸಕಾರಾತ್ಮಕ, ನಕಾರಾತ್ಮವಾಗಿ ಯಾವುದನ್ನು ವಿರೋಧಿಸದೇ ಕೇವಲ ಒಳ್ಳೆಯದನ್ನು ಹೇಳುತ್ತಾ ಇಡೀ ಸಮಾಜವನ್ನು ಸರಿಮಾಡಿದ ಎಂದರು.

ಬೌದ್ಧ ಧರ್ಮಕ್ಕೆ ಯಾಕೆ ಎಲ್ಲವನ್ನು ಒಗ್ಗೂಡಿಸುವ ಶಕ್ತಿ ಇದೆ ಎಂದರೆ ಪ್ರತಿ ಸಮುದಾಯದ ಸಾಂಸ್ಕೃತಿಕ, ಧಾರ್ಮಿಕ ಬದುಕಿಗೆ ತೊಡಕು ಮಾಡದೇ ಎಲ್ಲವನ್ನು ಒಗ್ಗೂಡಿಸುವ ಕೆಲಸ ಮಾಡಿದೆ. ಪ್ರತಿಯೊಬ್ಬ ಮಾನವನ ಆಂತರಿಕ ಬದಲಾವಣೆ ಹೊರತಾಗಿ ಸಮಾಜದ ಬದಲಾವಣೆ ಆಗದು ಎಂದು ಪ್ರತಿಪಾದಿಸಿದರು.

ನಟ, ಸಾಮಾಜಿಕ ಹೋರಾಟಗಾರ ಚೇತನ್ ಅಹಿಂಸಾ ಮಾತನಾಡಿ, ಬಾಬಾ ಸಾಹೇಬ್ ಅಂಬೇಡ್ಕರ್ ಅವರ ದೃಷ್ಟಿಯಿಂದ ಬುದ್ಧನನ್ನು ನೋಡಿದಾಗ ಮಾತ್ರ ಧಮ್ಮ ಅರ್ಥವಾಗುತ್ತದೆ. ಯಾವುದೇ ಶಸ್ತ್ರಾಸ್ತ್ರ ಇಲ್ಲದೇ ಇಡೀ ಪ್ರಪಂಚಕ್ಕೆ ಪ್ರತಿರೋಧದ ಮೂಲಕ ಪರಿವರ್ತನೆ ತಂದವನು ಬುದ್ಧ. ಆ ಮೂಲಕ ಸಮ–ಸಮಾಜವಾದವನ್ನು ಮಂಡಿಸಿದನು. ಅದನ್ನೇ ಬಸವ, ಅಂಬೇಡ್ಕರ್, ಪೆರಿಯಾರ್ ಪಾಲಿಸಿದರು ಎಂದರು.

ಇದಕ್ಕೂ ಮುನ್ನ ಮಾನಸಗಂಗೋತ್ರಿಯ ಕುವೆಂಪು ಪುತ್ಥಳಿ ಮುಂಭಾಗದಿಂದ ಬುದ್ಧನ ಪ್ರತಿಮೆವರೆಗೆ ಧಮ್ಮ ಪಯಣ ಕ್ಯಾಂಡಲ್ ಮೆರವಣಿಗೆ ನಡೆಸಲಾಯಿತು. ಮಹಾಬೋಧಿ ಶಾಲಾ ಮಕ್ಕಳು ಈ ಪಯಣದಲ್ಲಿ ಪಾಲ್ಗೊಂಡಿದ್ದರು.

ಲಾವೋಸ್ ಪೂಜ್ಯ ಬೆಂತೆ ರ್‍ಯಾಂಡಿ ಸೋಟಾ, ಉರಿಲಿಂಗಿ ಪೆದ್ದಿಮಠದ ಜ್ಞಾನಪ್ರಕಾಶ ಸ್ವಾಮೀಜಿ, ಮಾಜಿ ಮೇಯರ್ ಪುರುಷೋತ್ತಮ್, ಮೈಸೂರು ವಿವಿ ಕಲಾ ನಿಕಾಯ ಡೀನ್ ಪ್ರೊ.ಎಂ.ಎಸ್.ಶೇಖರ್, ಪಂಚ ಗ್ಯಾರಂಟಿ ಪ್ರಾಧಿಕಾರದ ಉಪಾಧ್ಯಕ್ಷೆ ಡಾ.ಪುಷ್ಪ ಅಮರ್‌ನಾಥ್, ಧಮ್ಮದೀವಿಗೆ ಚಾರಿಟಬಲ್ ಟ್ರಸ್ಟ್‌ನ ಸಂಸ್ಥಾಪಕ ಅಧ್ಯಕ್ಷ ಮಲ್ಲಿಕಾರ್ಜುನ್ ಕನಕಮರ, ಮೈಸೂರು ವಿವಿ ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶಕ ಪ್ರೊ.ಸಿ.ಗುರುಸಿದ್ದಯ್ಯ, ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಡಾ.ಬಸವರಾಜು ಸಿ.ಜೆಟ್ಟಿಹುಂಡಿ, ಮೈಸೂರು ವಿವಿ ಸಿಂಡಿಕೇಟ್ ಸದಸ್ಯ ಡಾ.ನಟರಾಜು ಶಿವಣ್ಣ, ಮೈಸೂರು ವಿವಿ ಸಂಶೋಧಕರ ಸಂಘದ ಅಧ್ಯಕ್ಷ ವರಹಳ್ಳಿ ಆನಂದ್, ಪುನೀತ್ ಆಲನಹಳ್ಳಿ, ಧಮ್ಮ ದೀಪ ಪ್ರತಿಷ್ಠಾನ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಚಿಂ.ಬ.ಬಸವರಾಜು ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

ಮೈಸೂರು ಮಿತ್ರ ಮಂಗಳವಾರ 9 ಸೆಪ್ಟೆಂಬರ್ 2025

ಗಣೇಶನ ವಿಸರ್ಜನೆ ಮೆರವಣಿಗೆ ವೇಳೆ ನಡೆದ ಕಲ್ಲು ತೂರಾಟ ಪ್ರಕರಣ

ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗಿದೆ

ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ

ಮದ್ದೂರು, ಸೆ.8– ಭಾನುವಾರ ಗಣಪತಿ ವಿಸರ್ಜನೆ ಮೆರವಣಿಗೆ ನಡೆಯುವ ಸಂದರ್ಭದಲ್ಲಿ ಮಸೀದಿ ಕಡೆಯಿಂದ ಕಲ್ಲುಗಳು ಎಸೆದ ಬಗ್ಗೆ ಮಾಹಿತಿ ಇದೆ. ಈ ಬಗ್ಗೆ ವಿಚಾರಣೆ ನಡೆಸಿ ನಂತರ 22 ಮಂದಿಯನ್ನು ಈಗಾಗಲೇ ಬಂಧಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದ್ದಾರೆ.



ಚಲುವರಾಯಸ್ವಾಮಿ

ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವ ಹಿಂದೂಗಳ ಮೇಲೂ ಕೇಸ್ ದಾಖಲಾಗಿಲ್ಲ. ಗಲಭೆ ನಡೆದ ಕೆಲವೇ ಗಂಟೆಗಳಲ್ಲಿ ತಪ್ಪಿತಸ್ಥರ ವಿರುದ್ಧ ಕ್ರಮ ತೆಗೆದುಕೊಳ್ಳಲಾಗಿದೆ. ಘಟನೆ ನಡೆದ ತಕ್ಷಣ ಇಷ್ಟು ಬೇಗ ಕ್ರಮ ತೆಗೆದುಕೊಂಡ ಪ್ರಕರಣ ಬೇರೆ ಯಾವುದೂ ಇಲ್ಲ ಎಂದು ತಿಳಿಸಿದರು.

ಆದರೆ, ಬಿಜೆಪಿಯ ಹಾಗೂ ಕೆಲವು ಜೆಡಿಎಸ್ ನಾಯಕರು ಪ್ರಚೋದಿಸುವ ಕೆಲಸ ಮಾಡುತ್ತಿದ್ದು, ಇನ್ನಷ್ಟು ಬಿಗಿ ಕ್ರಮಗಳನ್ನು ತೆಗೆದುಕೊಳ್ಳಲು ಹೇಳಬಹುದಿತ್ತು, ಅದು ಬಿಟ್ಟು ಕೋಮುಗಲಭೆಗೆ ಪ್ರಚೋದನೆ ಕೊಡಬಾರದಿತ್ತು. ಮದ್ದೂರಿನಲ್ಲಿ ಹಿಂದೆ ಎಂದೂ ಈ ರೀತಿಯ ಘಟನೆ ನಡೆದಿಲ್ಲ ಹೊರಗಡೆಯಿಂದ ಬಂದು ಯಾರೋ ಗಲಭೆ ಮಾಡಿರಬಹುದು ಎಂಬ ಬಗ್ಗೆ ವಿಚಾರಣೆ ಮಾಡುತ್ತಿದ್ದೇವೆ ಎಂದರು.

ತಪ್ಪಿತಸರು ಯಾವುದೇ ಸಮಾಜದವರಾದರೂ ಅವರ ಮೇಲೆ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುತ್ತೇವೆ. ಬಿಜೆಪಿ, ಜೆಡಿಎಸ್‌ನವರು ರಾಜಕೀಯವಾಗಿ ನಮ್ಮನ್ನು ಎದುರಿಸಲಾಗದೇ ಗಲಭೆಗೆ ಪ್ರಚೋದನೆ ನೀಡುತ್ತಿದ್ದು, ನಾವು ಯಾರ ಓಲೈಕೆ ಮಾಡುತ್ತಿಲ್ಲ, ಹಾಗಿದ್ದರೆ ಯಾಕೆ 22 ಜನರ ಬಂಧನ ಮಾಡುತ್ತಿದ್ದೆವು. ಸರ್ಕಾರದ ಅಭಿವೃದ್ಧಿ ಯೋಜನೆಗಳನ್ನು ಬಿಜೆಪಿ ಹಾಗೂ ಜೆಡಿಎಸ್ ನಾಯಕರಿಗೆ ಸಹಿಸಲು ಆಗುತ್ತಿಲ್ಲ. ಸದನದಲ್ಲಿ ನಮ್ಮನ್ನು ಎದುರಿಸಲು ಅವರಿಗೆ ಆಗೋದಿಲ್ಲ, ಹೀಗಾಗಿ ಇವಾಗ ಇಂತಹಾ ಘಟನೆಗಳು ನಡೆದಾಗ ಪ್ರಚೋದನೆ ಕೊಡುವ ಕೆಲಸ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು.

ಲಂಡನ್‌ನಲ್ಲಿ ಮದ್ದೂರು ಶಾಸಕ ಉದಯ್

ಗಣೇಶ ಮೂರ್ತಿ ವಿಸರ್ಜನೆ ಮೆರವಣಿಗೆ ವೇಳೆ ಕಲ್ಲು ತೂರಾಟ ಸಂಭವಿಸಿ, ಇಡೀ ಮದ್ದೂರು ನಗರದಲ್ಲಿ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿದ್ದರೆ, ಕ್ಷೇತ್ರದ ಶಾಸಕ ಕೆ.ಎಂ.ಉದಯ್ ಲಂಡನ್ ಪ್ರವಾಸದಲ್ಲಿದ್ದಾರೆ.



ಉದಯ್

ಆರಂಭದಲ್ಲಿ ಅವರ ಫೋನ್ ಸ್ವಿಚ್ ಆಫ್ ಆಗಿತ್ತು. ಸಿಎಂ ಸಿದ್ದರಾಮಯ್ಯ ಅವರು ಸಚಿವ ಚಲುವರಾಯಸ್ವಾಮಿ ಜತೆಗೆ ಬೆಂಗಳೂರಿನಲ್ಲಿ ಸಭೆ ನಡೆಸುವಾಗ 'ಎಲ್ಲಿದ್ದಾನೆ ಮದ್ದೂರು ಶಾಸಕ' ಎಂದು ಏರುಧ್ವನಿಯಲ್ಲಿ ಪ್ರಶ್ನಿಸಿದ್ದರು. ಬಳಿಕ ಸಂಪರ್ಕಕ್ಕೆ ಸಿಕ್ಕಿದ ಶಾಸಕ ಉದಯ್ ಲಂಡನ್‌ನಲ್ಲಿರುವುದು ಗೊತ್ತಾಗಿದೆ.

ಸಚಿವ ಚಲುವರಾಯಸ್ವಾಮಿ, ಲಂಡನ್‌ನಲ್ಲಿ ವ್ಯಾಸಂಗ ಮಾಡುತ್ತಿರುವ ಪುತ್ರಿಯನ್ನು ನೋಡಲು ಉದಯ್ ಅಲ್ಲಿಗೆ ಹೋಗಿದ್ದಾರೆಂದು ಸಮಜಾಯಿಷಿ ನೀಡಿದ್ದಾರೆ. ಬಳಿಕ ಕೆಲ ದೃಶ್ಯ ಮಾಧ್ಯಮಕ್ಕೆ ಫೋನ್ ಮೂಲಕ ಪ್ರತಿಕ್ರಿಯೆ ನೀಡಿರುವ ಉದಯ್, ಕಳೆದೆರಡು ದಿನಗಳ ಹಿಂದೆಯೇ ಇಲ್ಲಿಗೆ ಬಂದಿದ್ದು, ಘಟನೆ ಬಗ್ಗೆ ಮಾಹಿತಿ ಪಡೆದುಕೊಂಡಿದ್ದೇನೆ. ಕ್ಷೇತ್ರದ ಜನರು ಶಾಂತಿ ಕಾಪಾಡುವಂತೆ ಮನವಿ ಮಾಡಿದ್ದಾರೆ.

ಜಿಲ್ಲಾಡಳಿತದಿಂದ ಕ್ರಮದ ಭರವಸೆ; ಪ್ರತಿಭಟನೆ ಸ್ಥಗಿತ

ಮದ್ದೂರು, ಸೆ.8– ಮದ್ದೂರಿನಲ್ಲಿ ಗಣೇಶನ ವಿಸರ್ಜನೆ ವೇಳೆ ನಡೆದ ಕಲ್ಲು ತೂರಾಟ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿಭಟನಾಕಾರರ ಜೊತೆ ಜಿಲ್ಲಾಡಳಿತ ಮಾತುಕತೆ ನಡೆಸಿ, ಕ್ರಮದ ಭರವಸೆ ನೀಡಿದ ಹಿನ್ನೆಲೆಯಲ್ಲಿ ಪ್ರತಿಭಟನೆಯನ್ನು ಸ್ಥಗಿತಗೊಳಿಸಲಾಯಿತು.

ನಗರದ ಟಿ.ಬಿ.ವೃತ್ತದಿಂದ ತಾಲೂಕು ಕಚೇರಿವರೆಗೆ ಆಗಮಿಸಿ, ಕಚೇರಿಯನ್ನು ಮುತ್ತಿಗೆ ಹಾಕಿದ್ದ ಪ್ರತಿಭಟನಾಕಾರರು, ಜಿಲ್ಲಾಡಳಿತದ ಭರವಸೆ ಮೇರೆಗೆ ಇಂದಿನ ಪ್ರತಿಭಟನೆ ಅಂತ್ಯಗೊಳಿಸಿ ತೆರಳಿದರು. ಮದ್ದೂರಿನಲ್ಲಿ ಹಿಂದೂಪರ ಸಂಘಟನೆಗಳು ನಾಳಿನ ಮದ್ದೂರು ಬಂದ್‌ಗೆ ಸಿದ್ಧತೆ ಮಾಡಿಕೊಳ್ಳಲು ಮುಂದಾಗಿದ್ದಾರೆ.



ಪ್ರತಿಭಟನೆ ವೇಳೆ ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ಮಾತನಾಡಿದರು.

ಸದ್ಯಕ್ಕೆ ಪರಿಸ್ಥಿತಿ ನಿಯಂತ್ರಣಕ್ಕೆ ಬಂದಿದ್ದು, ಆದರೆ ವಾತಾವರಣ ಮಾತ್ರ ಬೂದಿ ಮುಚ್ಚಿದ ಕೆಂಡದಂತಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಅಲ್ಲಲ್ಲಿ ಪೊಲೀಸರ ನಿಯೋಜನೆ ಮಾಡಿದ್ದು, ಹೆಚ್ಚಿನ ಅನಾಹುತವಾಗದ ರೀತಿ ಕಟ್ಟೆಚ್ಚರ ವಹಿಸಲಾಗಿದೆ.

ತಾಲೂಕು ಕಚೇರಿ ಮುಂದೆ ಪ್ರತಿಭಟನಾಕಾರರನ್ನುದ್ದೇಶಿಸಿ ಮಾತನಾಡಿದ ಜಿಲ್ಲಾಧಿಕಾರಿ ಡಾ.ಕುಮಾರ್, ಮದ್ದೂರು ಪಟ್ಟಣದಲ್ಲಿ ನಡೆದ ಅಹಿತಕರ ಘಟನೆಗೆ ವಿಷಾದ ವ್ಯಕ್ತಪಡಿಸುತ್ತೇವೆ. ಎರಡು ಪ್ರಕರಣ ದಾಖಲು ಮಾಡಿಕೊಂಡು ಈಗಾಗಲೇ 22 ಮಂದಿಯನ್ನು ಬಂಧಿಸಿದ್ದೇವೆ. ಇನ್ನೂ ಪರಿಶೀಲನೆ ಮಾಡುತ್ತಿದ್ದೇವೆ. ಕಿಡಿಗೇಡಿಗಳನ್ನು ನಾವು ಎಂದಿಗೂ ಸಹಿಸುವುದಿಲ್ಲ. ಅವರ ಮೇಲೆ ಕಠಿಣ ಕ್ರಮಕೈಗೊಳ್ಳುತ್ತೇವೆ. ಮುಂದಿನ ದಿನಗಳಲ್ಲೂ ಸೂಕ್ತ ಕ್ರಮ ಕೈಗೊಳ್ಳುತ್ತೇವೆ ಎಂದು ಭರವಸೆ ನೀಡಿದರು.

ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ಮಾತನಾಡಿ, ಘಟನೆ ನಡೆದ ತಕ್ಷಣ ಪ್ರಮುಖ ಆರೋಪಿಗಳನ್ನು ಬಂಧಿಸಿದ್ದೇವೆ. ಸಿಸಿಟಿವಿ ದೃಶ್ಯ, ಮೊಬೈಲ್ ವಿಡಿಯೋ ಆಧರಿಸಿ ಆರೋಪಿಗಳನ್ನು ಬಂಧಿಸಿದ್ದು, ಇನ್ನೂ ಹಲವು ಆರೋಪಿಗಳನ್ನ ಬಂಧಿಸುತ್ತೇವೆ. ಬೇಲ್ ಆಗದಂತೆ ಸೆಕ್ಷನ್‌ಗಳನ್ನ ಹಾಕಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸುತ್ತೇವೆ. ಕುಮ್ಮಕ್ಕು ಕೊಟ್ಟವರ ವಿರುದ್ಧ ಕ್ರಮ ಕೈಗೊಳ್ಳುತ್ತೇವೆ. ನಮಗೆ ಸಹಕಾರ ಕೊಟ್ಟು ಶಾಂತ ರೀತಿ ವರ್ತಿಸಿ ಎಂದು ಮನವಿ ಮಾಡಿದರು.

ಇಂದು ಸಾಮೂಹಿಕ ಗಣೇಶ ವಿಸರ್ಜನೆ

ಮದ್ದೂರು: ಪಟ್ಟಣದ ವಿವಿಧೆಡೆ ಪ್ರತಿಷ್ಠಾಪಿಸಿರುವ ಗಣೇಶಮೂರ್ತಿಗಳ ಸಾಮೂಹಿಕ ವಿಸರ್ಜನೆ ಕಾರ್ಯಕ್ರಮ ಮಂಗಳವಾರ ನಡೆಯಲಿದೆ.

ಗಣೇಶ ಮೂರ್ತಿ ವಿಸರ್ಜನೆ ವೇಳೆ ನಡೆದ ಗಲಭೆ ಖಂಡಿಸಿ ಮಂಗಳವಾರವೂ ಹಿಂದೂಪರ ಸಂಘಟನೆಗಳು ಮದ್ದೂರು ಬಂದ್‌ಗೆ ಕರೆ ನೀಡಿದ್ದರೇ, ಮತ್ತೊಂದೆಡೆ 144 ಸೆಕ್ಷನ್ ಜಾರಿ ನಡುವೆಯೂ ಪಟ್ಟಣದ ವಿವಿಧೆಡೆ ಪ್ರತಿಷ್ಠಾಪಿಸಿರುವ ಗಣೇಶ ಮೂರ್ತಿಗಳ ಸಾಮೂಹಿಕ ವಿಸರ್ಜನೆ ಕಾರ್ಯಕ್ರಮ ನಡೆಯಲಿದ್ದು, ಸೋಮವಾರ ಸಂಜೆ ಪಟ್ಟಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಸೂಕ್ತ ಬಿಗಿ ಬಂದೋಬಸ್ತ್ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಸೆ.13, ಲೋಕ್ ಅದಾಲತ್

ಮಂಡ್ಯ, ಸೆ.8– ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದಿಂದ ಜಿಲ್ಲಾದ್ಯಂತ ಸೆ.13 ರಂದು ರಾಷ್ಟ್ರೀಯ ಲೋಕ್ ಅದಾಲತ್ ಹಮ್ಮಿಕೊಂಡಿದ್ದು, ಜಿಲ್ಲೆಯ 7 ತಾಲೂಕುಗಳಲ್ಲೂ ಲೋಕ ಅದಾಲತ್ ಮೂಲಕ ಪ್ರಕರಣಗಳನ್ನು ಇತ್ಯರ್ಥಗೊಳಿಸುವ ನಿಟ್ಟಿನಲ್ಲಿ ಪೂರ್ವಭಾವಿ ಬೈಠಕ್‌ಗಳನ್ನು ನಡೆಸಲಾಗುವುದು ಎಂದು ಪ್ರಧಾನ ಜಿಲ್ಲಾ ಸತ್ರ ನ್ಯಾಯಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಸುಬ್ರಹ್ಮಣ್ಯ ತಿಳಿಸಿದರು.

ಬಡವರಿಗೆ ಇ–ಸ್ವತ್ತು, ಎ ಖಾತೆ ವಿತರಣೆ

ಶಾಸಕ ರಮೇಶ್‌ಬಾಬು

ಶ್ರೀರಂಗಪಟ್ಟಣ, ಸೆ.8– ತಾಲೂಕಿನ ಬಡವರಿಗೆ ಇ–ಸ್ವತ್ತು, ಎ ಖಾತೆ ವಿತರಿಸುವುದಾಗಿ ಶಾಸಕ ರಮೇಶ್‌ಬಾಬು ತಿಳಿಸಿದರು.

ತಾಲೂಕಿನ ಹೊಸಹಳ್ಳಿ ಗ್ರಾಪಂ ವ್ಯಾಪ್ತಿಯ ಮೊಗರಹಳ್ಳಿ ಗ್ರಾಮದ 250 ಮಂದಿಗೆ ನಮೂನೆ 9 ಮತ್ತು 11 ಎ ಖಾತೆ ಜೊತೆಗೆ ಬಾಗೀನ ನೀಡಿ, ಜಲ ಜೀವನ್ ಮಿಷನ್ ಯೋಜನೆ ಅಡಿ ಕುಡಿಯುವ ನೀರಿನ ಯೋಜನೆ, 2 ಕೋಟಿ ವೆಚ್ಚದ ರಸ್ತೆ, ಚರಂಡಿ ಕಾಮಗಾರಿ, ಶುದ್ಧ ಕುಡಿಯುವ ನೀರಿನ ಘಟಕ ಹಾಗೂ ಹೊಸ ನೀರಿನ ಟ್ಯಾಂಕ್ ನಿರ್ಮಾಣಕ್ಕೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಕಳೆದ 50 ವರ್ಷಗಳಿಂದ ವಾಸವಿರುವ ಬಡವರಿಗೆ, ನಿರ್ಗತಿಕರಿಗೆ 2 ತಿಂಗಳೊಳಗೆ ನಿವೇಶನ, ಮೂಲ ವಾಸವಿರುವವರಿಗೆ ಹಕ್ಕುಪತ್ರ ವಿತರಿಸಲಾಗುವುದು.



ಶಾಸಕ ರಮೇಶ್ ಬಾಬು ಇ–ಸ್ವತ್ತು ವಿತರಿಸಿದರು.

ಸರ್ಕಾರಿ ಭೂಮಿಯನ್ನು ಯಾರೂ ಅಕ್ರಮಿಸಬೇಡಿ. ಕಾಂಗ್ರೆಸ್ ಸರ್ಕಾರ ಬಡವರ ಕಲ್ಯಾಣಕ್ಕಾಗಿ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ಇದನ್ನು ಸದ್ಬಳಕೆ ಮಾಡಿಕೊಳ್ಳಿ ಎಂದ ಅವರು, ನಿಮ್ಮ ಪ್ರೀತಿ, ವಿಶ್ವಾಸ, ನಂಬಿಕೆಗೆ ಚ್ಯುತಿ ಬಾರದಂತೆ ಎಲ್ಲಾ ಕೆಲಸಗಳನ್ನು ಹಂತ ಹಂತವಾಗಿ ಮಾಡುತ್ತೇನೆ ಎಂದರು.

ಈ ವೇಳೆ ತಹಸೀಲ್ದಾರ್ ಚೇತನ ಯಾದವ್, ಇಓ ವೇಣು, ಗ್ರಾಪಂ ಅಧ್ಯಕ್ಷ ಚೆಲುವರಾಜು, ಉಪಾಧ್ಯಕ್ಷೆ ಸುಮಿತ್ರ, ಪಿಡಿಓ ಶಶಿಕಲಾ ಹಾಗೂ ಗ್ರಾಪಂ ಸದಸ್ಯರು, ಮುಖಂಡರು ಹಾಜರಿದ್ದರು.

ಸಿಂಧುಘಟ್ಟ ಗ್ರಾಪಂಗೆ ರೂಪಾ ನೂತನ ಅಧ್ಯಕ್ಷೆ

ಕೆ.ಆರ್.ಪೇಟೆ, ಸೆ.8– ತಾಲೂಕಿನ ಸಿಂಧುಘಟ್ಟ ಗ್ರಾಪಂ ನೂತನ ಅಧ್ಯಕ್ಷೆಯಾಗಿ ರೂಪಾ ಮಹಾದೇವ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.



ನೂತನ ಅಧ್ಯಕ್ಷೆ ರೂಪ ಅವರನ್ನು ಮುಖಂಡರು ಅಭಿನಂದಿಸಿದರು.

ಈ ಹಿಂದಿನ ಅಧ್ಯಕ್ಷೆ ಲಾವಣ್ಯ ಕುಮಾರ್ ಅವರ ರಾಜೀನಾಮೆಯಿಂದ ತೆರವಾದ ಅಧ್ಯಕ್ಷ ಸ್ಥಾನಕ್ಕೆ ಸೋಮವಾರ ನಡೆದ ಚುನಾವಣೆಯಲ್ಲಿ ರೂಪ ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ಲೋಕೋಪಯೋಗಿ ಇಲಾಖೆಯ ಎಇಇ ಬೋರಯ್ಯ ಘೋಷಿಸಿದರು. ಸಹ ಚುನಾವಣಾಧಿಕಾರಿಗಳಾಗಿ ತಾಪಂ ವ್ಯವಸ್ಥಾಪಕ ಅನಿಲ್ ಬಾಬು, ಪಿಡಿಓ ಕೆ.ಜೆ.ವಾಣಿ ಕಾರ್ಯ ನಿರ್ವಹಿಸಿದರು.

ನೂತನ ಅಧ್ಯಕ್ಷೆ ರೂಪ ಮಾತನಾಡಿ, ನನ್ನ ಅವಿರೋಧ ಆಯ್ಕೆಗೆ ಕಾರಣರಾದ ಶಾಸಕ ಹೆಚ್.ಟಿ.ಮಂಜು, ಹೆಚ್.ಟಿ.ಲೋಕೇಶ್, ಗ್ರಾಪಂ ಸದಸ್ಯರು, ಮುಖಂಡರು, ಹಿತೈಷಿಗಳಿಗೆ ಧನ್ಯವಾದ ತಿಳಿಸುತ್ತೇನೆ. ನನ್ನ ಅಧಿಕಾರವಧಿಯಲ್ಲಿ ಪಕ್ಷಭೇದ ಮರೆತು ಎಲ್ಲಾ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಗ್ರಾಪಂ ವ್ಯಾಪ್ತಿಯ ಎಲ್ಲಾ ಗ್ರಾಮಗಳ ಅಭಿವೃದ್ಧಿಗೆ ಶ್ರಮಿಸುತ್ತೇನೆ. ಅಲ್ಲದೇ ರಸ್ತೆ, ಚರಂಡಿ, ಶುದ್ಧ ಕುಡಿಯುವ ನೀರು, ಬೀದಿ ದೀಪ ಸೇರಿದಂತೆ ಎಲ್ಲಾ ರೀತಿಯ ಮೂಲ ಸೌಕರ್ಯ ಕಲ್ಪಿಸಲು ಮುಂದಾಗುತ್ತೇನೆ. ಜನರ ಸಮಸ್ಯೆ ಗಳಿಗೆ ಸ್ಪಂದಿಸುವ ಕೆಲಸವನ್ನು ಪ್ರಾಮಾಣಿಕವಾಗಿ ಮಾಡುತ್ತೇನೆ ಎಂದು ಭರವಸೆ ನೀಡಿದರು.

ನೂತನ ಅಧ್ಯಕ್ಷೆ ರೂಪ ಅವರನ್ನು ಉಪಾಧ್ಯಕ್ಷ ಕೆ.ಆರ್.ಸೋಮಶೇಖರ್, ಪಿಡಿಓ ಕೆ.ಜೆ.ವಾಣಿ, ಸದಸ್ಯರಾದ ದಿವ್ಯ, ಆಶಾ, ನಂಜಪ್ಪ, ಲಾವಣ್ಯ, ಜ್ಯೋತಿ, ಸುಮ ಲತಾ, ಎಸ್.ಸಿ.ನಾಗೇಶ್, ನವೀನ್‌ಕುಮಾರ್, ರಾಜೇಶ್ವರಿ, ಶಾಂಭವಿ, ಮುಖಂಡರಾದ ಎಸ್.ಐ.ಗಿರೀಶ್, ಮರೀಗೌಡ, ಸೋಮಶೇಖರ್, ನವೀನ್, ಸೋಮಶೇಖರ್, ಕೃಷ್ಣೇಗೌಡ, ಸಚಿನ್ ಕೃಷ್ಣ, ಕಿಟ್ಟಿ, ಮಂಜೇಗೌಡ, ಹರೀಶ್, ಯೋಗೇಶ್, ಆನಂದ್, ಇತರರು ಅಭಿನಂದಿಸಿದರು.

ಒಂದನೇ ಪುಟದಿಂದ

ತನಿಖೆಗೆ ಪ್ರತಾಪ್ ಸಿಂಹ ಆಗ್ರಹ

ಯೋಗಿ ಆದಿತ್ಯನಾಥ್ ಕರೆಸುವಂತೆ ಪ್ರತಿಭಟನಾಕಾರರು ಒತ್ತಾಯ ಮಾಡಿದಾಗ, ಚುನಾವಣೆ ಸಂದರ್ಭದಲ್ಲಿ ಈ ಕ್ಷೇತ್ರದ ಶಾಸಕ ಉದಯ್ ನೀಡಿದ ಕಾಸಿಗೆ ಮತ ಹಾಕಿದ್ದೀರಿ. ಜೂಜಾಡಿಸೋರಿಗೆ ಮತ ಕೊಟ್ಟು ಯೋಗಿ ಆದಿತ್ಯನಾಥ್ ಬೇಕು ಅಂದರೆ ಹೇಗೆ? ಜೆಡಿಎಸ್‌ನ ಡಿ.ಸಿ.ತಮ್ಮಣ್ಣ ಹಾಗೂ ಬಿಜೆಪಿಯ ಎಸ್.ಪಿ.ಸ್ವಾಮಿ ಅವರನ್ನು ಬಿಟ್ಟು ಕಾಂಗ್ರೆಸ್‌ನ ಉದಯ್‌ಗೆ ಮತ ಹಾಕಿದ್ದಕ್ಕೆ ಈ ರೀತಿಯ ಘಟನೆಗಳು ನಡೆಯುತ್ತಿವೆ ಎಂದು ಕಿಡಿಕಾರಿದರು.

ಕಾಂಗ್ರೆಸ್‌ಗೆ ಮತ ಹಾಕಿದರೆ ಕನ್ನಡದ ಸರ್ಕಾರ ಅಲ್ಲ ತಾಲಿಬಾನ್ ಸರ್ಕಾರ ನಿರ್ಮಾಣ ಆಗುತ್ತೆ ಅಂತ ಈ ಹಿಂದೆ ನಾನು ಹೇಳಿದ್ದೆ. ಒಂದು ವರ್ಗ ಎಂದೂ ಶಾಂತಿಯಿಂದಿಲ್ಲ, ಇಲ್ಲಿ ಅನ್ನ ತಿಂದು ಗಡಿ ಆಚೆಗಿನ ದೇಶಕ್ಕೆ ನಿಷ್ಠೆ ತೋರಿಸುತ್ತಾರೆ. ಬಂಧಿತ ನಮ್ಮ ಹಿಂದು ಯುವಕರನ್ನು ಬಿಡುಗಡೆ ಮಾಡಬೇಕು. ಮಸೀದಿ ಮುಂದೆ ಗಣೇಶ ಮೆರವಣಿಗೆ ಮಾಡಲು ಅವಕಾಶ ಕೊಡಬೇಕು. ಲಾಠಿ ಪ್ರಹಾರ ಮಾಡಿದ ಅಧಿಕಾರಿ ವಿರುದ್ಧ ಕ್ರಮ ಆಗಬೇಕೆಂದು ಆಗ್ರಹಿಸಿದರು.

ಮದ್ದೂರಲ್ಲಿ ಪೊಲೀಸರು ಅಸಹಾಯಕರಾಗಿದ್ದಾರೆ: ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಮಾತನಾಡಿ, ಮದ್ದೂರಿನಲ್ಲಿ ಗಣೇಶ ವಿಸರ್ಜನೆ ಮೆರವಣಿಗೆ ವೇಳೆ ಕಲ್ಲು ತೂರಿ ಅಶಾಂತಿ ಸೃಷ್ಟಿಸಿರುವ ಸಮಾಜಘಾತುಕರನ್ನು ಬಂಧಿಸಿ, ರಾಜ್ಯ ಸರ್ಕಾರ ಕಠಿಣ ಕ್ರಮ ಜರುಗಿಸಬೇಕು. ಮದ್ದೂರು ಘಟನೆ ಹೊಣೆಯನ್ನು ಗೃಹ ಸಚಿವರು, ಉಸ್ತುವಾರಿ ಸಚಿವರು ಹೊರಬೇಕು. ಮದ್ದೂರಿನಲ್ಲಿ ಪೊಲೀಸರು ಅಸಹಾಯಕರಾಗಿದ್ದಾರೆ. ಸರ್ಕಾರ ವೋಟ್ ಬ್ಯಾಂಕ್‌ಗಾಗಿ ಈ ರೀತಿ ಒಂದು ಸಮುದಾಯವನ್ನು ಓಲೈಸುವ ಕೆಲಸ ಮಾಡುತ್ತಿದೆ ಎಂದು ಗುಡುಗಿದರು.

ಗೃಹ ಸಚಿವರು ಏನೇ ಕೇಳಿದರೂ ಗೊತ್ತಿಲ್ಲ ಎನ್ನುತ್ತಾರೆ. ಮದ್ದೂರಿನ ಘಟನೆ ರಾಜ್ಯವ್ಯಾಪಿ ಚರ್ಚೆ ಆಗುತ್ತಿದೆ. ಕೆರಗೋಡು, ನಾಗಮಂಗಲ ಬಿಟ್ಟು ಈಗ ಮದ್ದೂರಿಗೆ ಬಂದು ನಿಂತಿದೆ. ನಾವು ಹಿಂದೆ ಕರಾವಳಿ ಭಾಗದಲ್ಲಿ ಈ ರೀತಿ ಘಟನೆ ನೋಡುತ್ತಿದ್ದೆವು. ನಾವೆಲ್ಲ ಹಿಂದೂ ಧರ್ಮದವರು. ನಮ್ಮ ಸಂಸ್ಕೃತಿ, ನಮ್ಮ ಪದ್ಧತಿ, ಆಚಾರ–ವಿಚಾರಗಳ ಮೇಲೆ ನಂಬಿಕೆ ಇಟ್ಟು ಬದುಕುವಂತಹ ಜನ. ನಮಗೆ ಧಕ್ಕೆ ಆದ ಸಂದರ್ಭದಲ್ಲಿ ನಾವು ಎಲ್ಲರ ಪರವಾಗಿ ನಿಂತು ಜಿಲ್ಲೆಯ ಜನರ ಜೊತೆ ನಿಂತು ಹೋರಾಟ ಮಾಡುತ್ತೇವೆ ಎಂದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಹಿಂದೂ ವಿರೋಧಿ ನಡವಳಿಕೆ ಮುಂದುವರೆಸಿದೆ. ಕಳೆದ ವರ್ಷ ಕೆರೆಗೋಡು ಗಲಾಟೆ, ಈಗ ಧರ್ಮಸ್ಥಳ ಪ್ರಕರಣ, ಚಾಮುಂಡಿ ತಾಯಿ ಬಗ್ಗೆ ಅವರು ಮಾತನಾಡಿರುವ ಮಾತುಗಳೇ ಸಾಕ್ಷಿ. ನಮ್ಮ ಧರ್ಮವನ್ನು ನಾವು ರಕ್ಷಣೆ ಮಾಡಬೇಕು. ಅದರ ಹೊಣೆ ನಮ್ಮೆಲ್ಲರ ಮೇಲಿದೆ. ಇಲ್ಲಿ ಬಂದು ಪ್ರತಿಭಟನೆ ಮಾಡಿದವರು ಪಕ್ಷಾತೀತವಾಗಿ ಬಂದಿದ್ದಾರೆ. ಸ್ವಾತಂತ್ರ್ಯ ಬಂದಾಗಿನಿಂದಲೂ ಇಲ್ಲಿಯವರೆಗೂ ಗಣೇಶ ವಿಸರ್ಜನೆ ಕಾರ್ಯಕ್ರಮದಲ್ಲಿ ಈ ರೀತಿಯ ನಿಯಮಗಳನ್ನು ಜಾರಿಗೊಳಿಸಿಲ್ಲ ಎಂದು ವಾಗ್ದಾಳಿ ನಡೆಸಿದರು. ಮದ್ದೂರಿನಲ್ಲಿ ನಡೆದಿರುವ ಘಟನೆಯಿಂದ ತುಂಬಾ ನೋವಾಗಿದೆ. ಮಂಡ್ಯ ಜಿಲ್ಲಾ ಜನತೆ ಯಾರು ಕಾನೂನು ಸುವ್ಯವಸ್ಥೆಗೆ ಧಕ್ಕೆ ತರಬಾರದು. ಮಂಡ್ಯ ಜಿಲ್ಲೆಯಲ್ಲಿ ಹಲವಾರು ಮಹನೀಯರು ಬೆಳೆದ ಹೋರಾಟದ ಇತಿಹಾಸವಿದೆ. ಅದಕ್ಕೆ ಧಕ್ಕೆ ತರುವಂತೆ ನಡೆದುಕೊಳ್ಳಬಾರದು. ಈ ಸರ್ಕಾರದಲ್ಲಿ ಪೊಲೀಸರು ಅಸಹಾಯಕರಾಗಿದ್ದಾರೆ. ಅವರ ಹಿಂದೆ ಸರ್ಕಾರ ನಿಂತಿದೆ.ಒಂದು ವರ್ಗದ ಮತ ಗಟ್ಟಿ ಮಾಡಿಕೊಳ್ಳೋಕೆ ರಾಜ್ಯ ಸರ್ಕಾರ ಈ ರೀತಿ ಮಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಮಾಜಿ ಸಚಿವರಾದ ಡಿ.ಸಿ.ತಮ್ಮಣ್ಣ, ಸಿ.ಎಸ್.ಪುಟ್ಟರಾಜು, ಮಾಜಿ ಶಾಸಕ ಡಾ.ಕೆ.ಅನ್ನದಾನಿ, ಕೆ.ಸುರೇಶ್‌ಗೌಡ, ಜೆಡಿಎಸ್– ಬಿಜೆಪಿ ಮುಖಂಡರಾದ ಡಿ.ರಮೇಶ್, ಡಾ.ಇಂದ್ರೇಶ್, ಎಸ್.ಪಿ.ಸ್ವಾಮಿ, ಬಿ.ಆರ್.ರಾಮಚಂದ್ರು ಸೇರಿದಂತೆ ಸಾವಿರಾರು ಮಂದಿ ಭಾಗವಹಿಸಿದ್ದರು.

ಗಲಭೆ ಹಿಂದೆ ರಾಜಕೀಯ ಇರಬಹುದು!

ನಡೆದಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ. ಇದರಲ್ಲಿ ರಾಜಕಾರಣ ಹಾಗೂ ಯಾರನ್ನು ಓಲೈಕೆ ಮಾಡದೇ ತಪ್ಪಿತಸ್ಥರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದರು. ಮಂಡ್ಯ ಸ್ವಾತಂತ್ರ್ಯ ಹೋರಾಟ, ಕಾವೇರಿ ಹೋರಾಟಕ್ಕೆ ಹೆಸರುವಾಸಿ. ಪ್ರಕರಣ ಸಂಬಂಧ ವಿವಿಧ ಆಯಾಮಗಳಲ್ಲಿ ವಿಚಾರಣೆ ನಡೆಸಲು 7 ಮಂದಿ ಎಸ್‌ಪಿಗಳನ್ನು ನಿಯೋಜಿಸಲಾಗಿದೆ. ನಾಳೆ(ಮಂಗಳವಾರ) ನಡೆಯುವ ಸಾಮೂಹಿಕ ಗಣಪತಿ ವಿಸರ್ಜನೆಗೆ ಸೂಕ್ತ ಬಂದೋಬಸ್ತ್ ಮಾಡಲಾಗಿದೆ. ಅಲ್ಲದೇ ನಾಳೆ ಜೆಡಿಎಸ್– ಬಿಜೆಪಿ ಪ್ರತಿಭಟನೆ ಮಾಡದಂತೆ ಮನವಿ ಮಾಡಬಹುದು. ಆದರೆ ಪ್ರತಿಭಟನೆ ಮಾಡಲು ಮುಂದಾದರೆ ಅದನ್ನು ತಡೆಯುವ ಕೆಲಸ ಮಾಡುವುದಿಲ್ಲ. ಧಾರ್ಮಿಕ ಸಂಘಟನೆಯಲ್ಲಿ ಯಾವುದೇ ಗೊಂದಲ ಬೇಡ. ಕೆರಗೋಡು, ನಾಗಮಂಗಲ ಹಾಗೂ ಮದ್ದೂರು ಗಲಭೆಗಳಿಗೆ ಒಂದಕ್ಕೊಂದು ಸಂಬಂಧವಿಲ್ಲ. ಆದರೆ ವಿಪಕ್ಷ ನಾಯಕರು ಬೇರೆ ರೀತಿ ಹೇಳಿಕೆ ನೀಡುವುದು ಸರಿಯಲ್ಲ. ಧರ್ಮದ ಹೆಸರಿನಲ್ಲಿ ನಮ್ಮ ಸರ್ಕಾರ ರಾಜಕೀಯ ಮಾಡುವುದಿಲ್ಲ. ಧಾರ್ಮಿಕ ಸಂಘಟನೆಗಳು ಯಾವುದೇ ರಾಜಕೀಯ ಪ್ರಚೋದನೆಗೆ ಒಳಗಾಗಬಾರದು ಎಂದರು. ಈ ವೇಳೆ ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ, ಜಿಲ್ಲಾಧಿಕಾರಿ ಡಾ.ಕುಮಾರ, ಜಿಪಂ ಸಿಇಓ ನಂದಿನಿ ಉಪಸ್ಥಿತರಿದ್ದರು.

ಮದ್ದೂರಲ್ಲಿ ಲಾಠಿ ಚಾರ್ಜ್; ಉದ್ವಿಗ್ನ ಪರಿಸ್ಥಿತಿ

ಪ್ರಕರಣದ ಬಗ್ಗೆ ಒಂದು ಸುಮೊಟೊ ಕೇಸ್ ಮತ್ತು ಗಾಯಾಳು ಅಜಯ್ ಎಂಬಾತ ನೀಡಿರುವ ದೂರಿನ ಅನ್ವಯ ಪ್ರಕರಣ ದಾಖಲಿಸಿಕೊಂಡು ಎಫ್‌ಐಆರ್ ದಾಖಲು ಮಾಡಲಾಗಿದೆ ಎಂದು ಎಸ್ಪಿ ವಿವರಿಸಿದರು. ಜೊತೆಗೆ ಪರಿಸ್ಥಿತಿಯನ್ನು ನಿಭಾಯಿಸಲು ಹೆಚ್ಚುವರಿ ಪೊಲೀಸ್ ಸಿಬ್ಬಂದಿ ನಿಯೋಜಿಸಲಾಗಿದ್ದು, ಶಾಂತಿ ಕಾಪಾಡು ವಂತೆ ಮನವಿ ಮಾಡಿದರು. ಆದರೆ ಎಸ್ಪಿಯವರ ಮನವಿಯನ್ನು ಧಿಕ್ಕರಿಸಿದ ಪ್ರತಿಭಟನಾಕಾರರು ಪ್ರತಿಭಟನಾ ರ‍್ಯಾಲಿ ಆರಂಭಿಸಿದರು.

ಲಾಠಿ ಚಾರ್ಜ್: ಬೆಳಗ್ಗೆ ಉಗ್ರನರಸಿಂಹ ದೇಗುಲದಿಂದ ಸಾವಿರಾರು ಮಂದಿ ಮೆರವಣಿಗೆ ಮೂಲಕ ರ‍್ಯಾಲಿಯಲ್ಲಿ ಸಾಗಿದರು. ಪೇಟೆ ಬೀದಿ ಬಳಿ ಆಗಮಿಸಿದಾಗ ಉದ್ರಿಕ್ತರ ಗುಂಪು ಅನ್ಯ ಧರ್ಮದ ಧಾರ್ಮಿಕ ಕೇಂದ್ರದ ಮೇಲೆ ಕಲ್ಲು ತೂರಿ, ಹೂವಿನ ಸರ್ಕಲ್ ಬಳಿ ಕಂಬದಲ್ಲಿ ನೇತಾಡುತ್ತಿದ್ದ ಹಸಿರು ಬಾವುಟವನ್ನು ಕಿತ್ತು ಹಾಕಿ, ಕೇಸರಿ ಬಾವುಟವನ್ನು ಹರಿಸಿದ್ದಾರೆ. ಈ ಸಂದರ್ಭದಲ್ಲಿ ಪೊಲೀಸರು ಲಾಠಿ ಪ್ರಹಾರ ನಡೆಸಿದ್ದಾರೆ. ಪೊಲೀಸ್ ಪೇದೆಯೊಬ್ಬ ಮಹಿಳೆಯ ಮೇಲೆ ಲಾಠಿ ಬೀಸಿದ ಪರಿಣಾಮ ಆಕೆ ಕುಸಿದು ಬಿದ್ದು ಗೋಳಾಡುತ್ತಿದ್ದ ದೃಶ್ಯ ಕಂಡು ಬಂತು.

ವಿಷಯ ತಿಳಿದು ಭಾರೀ ಸಂಖ್ಯೆಯಲ್ಲಿ ಜನ ಜಮಾಯಿಸಿ ಡಿಜೆ ಸದ್ದಿಗೆ ಕುಣಿದು ಕುಪ್ಪಳಿಸುತ್ತಾ ಧಾರ್ಮಿಕ ಕೇಂದ್ರದ ಪಕ್ಕದಲ್ಲೇ ರ‍್ಯಾಲಿ ಹೊರಟರು. ಈ ವೇಳೆ ಕೇಸರಿ ಬಾವುಟ ಹಾರಿಸಿ, ಬೈಕ್‌ಗಳಲ್ಲಿ ಸಾಗುತ್ತಾ, ಘೋಷಣೆಗಳ ಮೊಳಗಿಸಿದರು. ಕೆಲ ದೂರ ಸಾಗುತ್ತಿದ್ದಂತೆಯೇ ಒಂದು ಸಮುದಾಯಕ್ಕೆ ಸೇರಿದ ಬ್ಯಾನರ್ ಅನ್ನು ಪ್ರತಿಭಟನಾಕಾರರು ಕಿತ್ತೆಸೆಯಲು ಮುಂದಾದಾಗ ಪೊಲೀಸರು ಅವರನ್ನು ತಡೆದರು. ಈ ವೇಳೆ ಕೆಲ ಮನೆಗಳ ಮೇಲೆ ಕಲ್ಲು ತೂರಾಟ ನಡೆಸಿದಾಗ ಪೊಲೀಸರು ಮತ್ತೆ ಲಾಠಿ ಪ್ರಹಾರ ನಡೆಸಿದರು.

ಬಳಿಕ ಪ್ರತಿಭಟನಾ ರ‍್ಯಾಲಿ ನಗರದ ಟಿ.ಬಿ.ವೃತ್ತಕ್ಕೆ ಆಗಮಿಸಿದಾಗ ಸುಮಾರು ಮೂರು ಸಾವಿರಕ್ಕೂ ಅಧಿಕ ಪ್ರತಿಭಟನಾಕಾರರು ಜಮಾಯಿಸಿ, ಘೋಷಣೆಗಳನ್ನು ಕೂಗಿದರು. ಪ್ರತಿಭಟನಾಕಾರರು ಹೆಚ್ಚಾಗುತ್ತಿದ್ದಂತೆಯೇ ಹಳೆ ಬೆಂಗಳೂರು–ಮೈಸೂರು ಹೆದ್ದಾರಿಯ ಸಂಚಾರ ಸಂಪೂರ್ಣ ಅಸ್ತವ್ಯಸ್ತಗೊಂಡಿತು.

ಪೊಲೀಸ್ ಠಾಣೆಗೆ ನುಗ್ಗಲು ಯತ್ನ: ಟಿ.ಬಿ.ವೃತ್ತದಿಂದ ಪೊಲೀಸ್ ಠಾಣೆವರೆಗೆ ಮೆರವಣಿಗೆ ಹೊರಟ ಪ್ರತಿಭಟನಾಕಾರರು ಠಾಣೆಗೆ ನುಗ್ಗಲು ಯತ್ನಿಸಿದರು. ಆಗ ಬ್ಯಾರಿಕೇಡ್ ಅಳವಡಿಸಿ ಪೊಲೀಸರು ಪ್ರತಿಭಟನಾಕಾರರು ಠಾಣೆಯ ಒಳಗೆ ಬರದಂತೆ ತಡೆದರು. ಬಳಿಕ ತಾಲೂಕು ಕಚೇರಿಗೆ ಮುತ್ತಿಗೆ ಹಾಕಿ ಘೋಷಣೆಗಳನ್ನು ಕೂಗಿದರು.

ಎಡಿಜಿಪಿ, ಐಜಿಪಿ ಮೊಕ್ಕಾಂ: ಪ್ರತಿಭಟನಾ ಸ್ಥಳದಲ್ಲಿ ಒಂದು ಸಾವಿರಕ್ಕೂ ಅಧಿಕ ಪೊಲೀಸರನ್ನು ನಿಯೋಜಿಸಲಾಗಿತ್ತು. ಆದರೆ ಉದ್ವಿಗ್ನ ಪರಿಸ್ಥಿತಿ ಹಿನ್ನಲೆಯಲ್ಲಿ ಮಂಡ್ಯ, ಬೆಂಗಳೂರು, ಮೈಸೂರು, ಹಾಸನ, ರಾಮನಗರ, ತುಮಕೂರು ಮತ್ತು ಚಾಮರಾಜನಗರದಿಂದ ಭಾರೀ ಸಂಖ್ಯೆಯ ಪೊಲೀಸರನ್ನು ಕರೆಸಿ ಭದ್ರತೆಗೆ ನಿಯೋಜಿಸಲಾಗಿದೆ. ಎಡಿಜಿಪಿ ಜಿತೇಂದ್ರ, ದಕ್ಷಿಣ ವಲಯ ಐಜಿಪಿ ಡಾ.ಬೋರಲಿಂಗಯ್ಯ ಸೇರಿದಂತೆ ರಾಜ್ಯ ಮಟ್ಟದ ಉನ್ನತ ಪೊಲೀಸ್ ಅಧಿಕಾರಿಗಳು ಸಹ ಸ್ಥಳದಲ್ಲೇ ಮೊಕ್ಕಾಂ ಹೂಡಿದ್ದಾರೆ.

ನಿನ್ನೆ ಏನಾಗಿತ್ತು?: ನಿನ್ನೆ ಸಂಜೆ ನಗರದ ರಾಂ ರಹೀಂ ನಗರದ ಬಳಿ ಇರುವ ಚನ್ನೇಗೌಡ ಬಡಾವಣೆಯಲ್ಲಿ ಗಣೇಶಮೂರ್ತಿಯನ್ನು ಪ್ರತಿಷ್ಠಾಪಿಸಿದ್ದ ಯುವಕರ ತಂಡ ವಿಸರ್ಜನೆ ಮಾಡಲು ಮೆರವಣಿಗೆಯಲ್ಲಿ ಸಾಗಿದ್ದರು. ಈ ವೇಳೆ ಡಿಜೆ ಹಾಕಿಕೊಂಡು ನೃತ್ಯ ಮಾಡುತ್ತಾ ಬರುವಾಗ ನಗರದ ಮಸ್ಜಿದ್ ಹುಸೇನ್ ಘನಿ ಮಸೀದಿಯ ಸುನ್ನಿ ಚೌಕದ ಬಳಿ ಕಿಡಿಗೇಡಿಗಳ ಗುಂಪು ಮೆರವಣಿಗೆ ನಿರತ ಯುವಕರು, ಪೊಲೀಸ್ ಮತ್ತು ಮಹಿಳೆಯರ ಮೇಲೆ ಕಲ್ಲು ಮತ್ತು ಕಬ್ಬಿಣದ ರಾಡ್‌ಗಳನ್ನು ತೂರಿದ್ದರು. ಇದರಿಂದ ರೊಚ್ಚಿಗೆದ್ದ ಯುವಕರ ಗುಂಪು ಪ್ರತಿಯಾಗಿ ಕಲ್ಲು ತೂರಿದ್ದರು. ಈ ಸಂದರ್ಭದಲ್ಲಿ ಪ್ರಕ್ಷುಬ್ಧ ವಾತಾವರಣ ನಿರ್ಮಾಣವಾಗಿತ್ತು.

10ರಿಂದ 15 ನಿಮಿಷಗಳ ಕಾಲ ಆತಂಕದ ವಾತಾವರಣ ನಿರ್ಮಾಣವಾಗಿ ಪರಿಸ್ಥಿತಿಯನ್ನು ನಿಯಂತ್ರಿಸಲು ಪೊಲೀಸರು ಎರಡು ಗುಂಪುಗಳನ್ನು ಚದುರಿಸಿ, ಸ್ವತ: ಪೊಲೀಸರೇ ನಿಂತು ಗಣೇಶಮೂರ್ತಿ ವಿಸರ್ಜನೆ ಮಾಡಿದ್ದರು. ಎರಡು ಕೋಮಿನ ಗುಂಪು ರಾತ್ರಿಯೇ ಪ್ರತ್ಯೇಕ ಪ್ರತಿಭಟನೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ಆಗ್ರಹಿಸಿದ್ದರು.

30ಕ್ಕೂ ಹೆಚ್ಚು ಮಂದಿಗೆ ಗಾಯ: 30ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದು, ಅವರನ್ನು ನಗರದ ಗುರುಶಾಂತಪ್ಪ ಸಾರ್ವಜನಿಕ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಅಲ್ಲದೇ ಆಸ್ಪತ್ರೆಗೆ ದಕ್ಷಿಣ ವಲಯ ಐಜಿಪಿ ಬೋರಲಿಂಗಯ್ಯ, ಜಿಲ್ಲಾಧಿಕಾರಿ ಡಾ.ಕುಮಾರ, ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ, ಜೆಡಿಎಸ್ ಯುವಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ, ಮಾಜಿ ಸಚಿವ ಡಿ.ಸಿ.ತಮ್ಮಣ್ಣ, ಮನ್‌ಮುಲ್ ನಿರ್ದೇಶಕ ಎಸ್.ಪಿ.ಸ್ವಾಮಿ ಭೇಟಿ ನೀಡಿ ಆರೋಗ್ಯ ವಿಚಾರಿಸಿದ್ದಾರೆ.

ಮುಡಾ ಹಗರಣ ತನಿಖೆ ಅಂತ್ಯ

ಸೇರಿದಂತೆ ಅಗತ್ಯ ಸೌಲಭ್ಯ ಕಲ್ಪಿಸಿತ್ತು. ತನಿಖೆಗೆ ಪೂರಕವಾದ ದಾಖಲೆ ಪತ್ರಗಳನ್ನು ಮುಡಾ ಕಚೇರಿಯಿಂದ ನ್ಯಾಯಮೂರ್ತಿಗಳಿಗೆ ಅಭಿಲೇಖಾಲಯದಿಂದ ತೆಗೆದು ಪ್ರತಿ ದಾಖಲೆಗಳನ್ನು ಜೆರಾಕ್ಸ್ ಮಾಡಿ ಸಂಬಂಧಪಟ್ಟ ವಿಶೇಷ ತಹಶೀಲ್ದಾರ್‌ಗಳು ದೃಢೀಕರಿಸಿ, ಬೆಂಗಳೂರಿಗೆ ರವಾನಿಸಲಾಗುತ್ತಿತ್ತು. ಈ ಪ್ರಕ್ರಿಯೆಯಲ್ಲಿ ಸಾವಿರಾರು ಕಡತಗಳ ಲಕ್ಷಾಂತರ ಹಾಳೆ (ಶೀಟ್) ಯನ್ನು ಜೆರಾಕ್ಸ್ ಮಾಡಿಸಿ, ಕಳುಹಿಸಲಾಗಿತ್ತು.

ಸುಮಾರು ಒಂದು ವರ್ಷ ಕಾಲ ತನಿಖೆ ನಡೆಸಿದ ಆಯೋಗವೂ ಇತ್ತೀಚೆಗಷ್ಟೇ ಸರ್ಕಾರಕ್ಕೆ ಮುಡಾದಲ್ಲಿ ಶೇಕಡಾ 50:50 ಅನುಪಾತದಡಿ ನಿವೇಶನ ಮಂಜೂರಾತಿಯಲ್ಲಿ ನಡೆದಿದೆ ಎನ್ನಲಾದ ಬಾರೀ ಅವ್ಯವಹಾರ ಕುರಿತಂತೆ ವರದಿಯನ್ನು ಸಲ್ಲಿಸಿದೆ. ಅಂದರೆ, ಆಯೋಗದ ಉದ್ದೇಶಿತ ಕಾರ್ಯ ಪೂರ್ಣಗೊಂಡಂತಾಗಿದ್ದು, ಅದಕ್ಕೆ ಒದಗಿಸಿದ್ದ ಸೌಲಭ್ಯಗಳನ್ನು ಹಿಂಪಡೆಯುವಂತೆ ನ್ಯಾ. ದೇಸಾಯಿಯವರೇ ಹಾಲಿ ಮೈಸೂರು ಅಭಿವೃದ್ಧಿ ಪ್ರಾಧಿಕಾರ (ಎಂಡಿಎ) ದ ಆಯುಕ್ತ ಕೆ.ಆರ್. ರಕ್ಷಿತ್ ಅವರಿಗೆ ಪತ್ರ ಬರೆದಿದ್ದರು. ಹಾಗೆಯೇ ಕುಮಾರ ಕೃಪಾದ ಕಚೇರಿಯನ್ನು ಬಂದ್ ಮಾಡಿ, ಅತಿಥಿ ಗೃಹ ಆಡಳಿತಕ್ಕೆ ಕೊಠಡಿಯನ್ನು ಒಪ್ಪಿಸುವಂತೆಯೂ ತಿಳಿಸಿದ್ದರು.

ಕಚೇರಿ ತೆರವು: ಅದರನ್ವಯ ಆಯುಕ್ತರ ನಿರ್ದೇಶನದಂತೆ ಎಂಡಿಎ ಅಸಿಸ್ಟೆಂಟ್ ಎಕ್ಸಿಕ್ಯೂಟಿವ್ ಇಂಜಿನಿಯರ್ ಸಂಪತ್ ಕುಮಾರ್ ವಾರದ ಹಿಂದೆ ಕುಮಾರ ಕೃಪಾ ಅತಿಥಿ ಗೃಹ ಕೊಠಡಿಯಲ್ಲಿ ತನಿಖಾ ಆಯೋಗಕ್ಕೆ ಒದಗಿಸಲಾಗಿದ್ದ ಪೀಠೋಪಕರಣವೂ ಸೇರಿದಂತೆ ಎಲ್ಲಾ ಸೌಲಭ್ಯಗಳನ್ನು ತೆರವು ಮಾಡಿ ತಂದು ಪ್ರಾಧಿಕಾರದ ಕಚೇರಿ ಸ್ಟೋರ್ ರೂಮ್‌ನಲ್ಲಿ ಇರಿಸಿ ಬೀಗ ಮುದ್ರೆ ಮಾಡಿ, ಕೀಯನ್ನು ಆಯುಕ್ತರಿಗೆ ಹಸ್ತಾಂತರಿಸಿದ್ದಾರೆ.

ತನಿಖಾ ಆಯೋಗಕ್ಕೆ ದೇಸಾಯಿ ಸೇರಿದಂತೆ ಇಬ್ಬರು ನ್ಯಾಯಾಧೀಶರು, ಓರ್ವ ಕಚೇರಿ ಅಧೀಕ್ಷಕ, ಮೂವರು ಸಿಬ್ಬಂದಿ ಹಾಗೂ ಮೂವರು ವಾಹನ ಚಾಲಕರಿಗೆ ಕಳೆದ 2024 ರ ಜುಲೈ ಮಾಹೆಯಿಂದ ಇದುವರೆಗೆ ಸಂಬಳ, ಟಿಎ, ಡಿಎ ಹಾಗೂ ಇನ್ನಿತರ ಸೌಲಭ್ಯ, ಕುಮಾರ ಕೃಪಾ ಅತಿಥಿ ಗೃಹ ಕೊಠಡಿಯ ಬಾಡಿಗೆ, ವಿದ್ಯುತ್ ಬಿಲ್, ನ್ಯೂಸ್ ಪೇಪರ್ಸ್ ಬಿಲ್, ನ್ಯಾಯಮೂರ್ತಿಗಳು ಹಾಗೂ ಸಿಬ್ಬಂದಿಗೆ ತಿಂಡಿ, ಊಟದ ಖರ್ಚು, ಕಂಪ್ಯೂಟರ್, ಲ್ಯಾಪ್‌ಟಾಪ್, ಪ್ರಿಂಟರ್‌ಗಳ ನಿರ್ವಹಣೆ ಸೇರಿದಂತೆ ಇದುವರೆಗೆ ಬರೋಬರಿ 5 ಕೋಟಿ ರೂ. ಖರ್ಚಾಗಿದೆ ಎಂದು ಹೇಳಲಾಗುತ್ತಿದೆ.

ಖರ್ಚು ಭರಿಸಿದ ಎಂಡಿಎ: ಸರ್ಕಾರದ ಆದೇಶದಂತೆ ತನಿಖಾ ಆಯೋಗದ ಕಚೇರಿ ಖರ್ಚನ್ನು ಮೈಸೂರು ಅಭಿವೃದ್ಧಿ ಪ್ರಾಧಿಕಾರವೇ ಭರಿಸಿದೆ. ಮುಖ್ಯಮಂತ್ರಿ, ಅವರ ಕುಟುಂಬ ಸದಸ್ಯರ ಪಾತ್ರವಿಲ್ಲ. ಈ ವಿಷಯದಲ್ಲಿ ಕೆಲ ಅಧಿಕಾರಿಗಳ ಲೋಪವಿದೆ ಎಂದು ತನಿಖಾ ಆಯೋಗ ತನ್ನ ವರದಿಯಲ್ಲಿ ತಿಳಿಸಿದ್ದು ಇದನ್ನು ಸಂಪುಟ ಸಭೆ ಕೂಡ ಈಗಾಗಲೇ ಮಾನ್ಯ ಮಾಡಿದೆ. ಅಲ್ಲಿಗೆ ಪ್ರಕರಣಕ್ಕೆ ಒಂದು ಹಂತದ ತೆರೆ ಬಿದ್ದಂತಾಗಿದೆ.

ಮಳೆಯಿಂದ 550 ಕೋಟಿ ಬೆಳೆ ಹಾನಿ

ಪೂರ್ಣಗೊಳಿಸಿ ವರದಿ ನೀಡಲು ಜಿಲ್ಲಾಡಳಿತಕ್ಕೆ ಸೂಚಿಸಲಾಗಿದೆ ಎಂದರು.

ಮುಂಗಾರು ಹಂಗಾಮಿನಲ್ಲಿ ಜೂನ್ 1ರಿಂದ ಸೆಪ್ಟೆಂಬರ್ ಮೊದಲ ವಾರದವರೆಗೆ ವಾಡಿಕೆಗಿಂತ ಶೇ.4ರಷ್ಟು ಹೆಚ್ಚು ಮಳೆಯಾಗಿದೆ, ಈ ಅವಧಿಯಲ್ಲಿ ವಾಡಿಕೆ ಮಳೆ 721 ಮಿ.ಮೀ. ಇದ್ದು, 753 ಮಿ.ಮೀ. ಮಳೆ ದಾಖಲಾಗಿದೆ, ಕಳೆದ ವರ್ಷ ಶೇ. 23ರಷ್ಟು ಹೆಚ್ಚುವರಿ ಮಳೆ ದಾಖಲಾಗಿತ್ತು.

ಚಾಮರಾಜನಗರದಲ್ಲಿ ಶೇ.24ರಷ್ಟು ಕಡಿಮೆ ಮಳೆಯಾಗಿದೆ, ವಿಜಯಪುರ, ಗದಗ, ಬಾಗಲಕೋಟೆ, ದಾವಣಗೆರೆ, ತುಮಕೂರು ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಶೇ.20ಕ್ಕಿಂತ ಹೆಚ್ಚು ಮಳೆ ದಾಖಲಾಗಿದೆ.

ಪ್ರಮುಖ ಜಲಾಶಯಗಳಲ್ಲಿ ನೀರಿನ ಮಟ್ಟ ಕಳೆದ ವರ್ಷಕ್ಕೆ ಹೋಲಿಸಿದರೆ ಈಗ ಸ್ವಲ್ಪ ಕಡಿಮೆಯಿದೆ. ಪ್ರಮುಖ ಜಲಾಶಯಗಳ ಗರಿಷ್ಠ ಸಾಮರ್ಥ್ಯ 895.62 ಟಿಎಂಸಿ ಇದ್ದು, ಪ್ರಸ್ತುತ 840.52 ಟಿಎಂಸಿ ಸಂಗ್ರಹವಿದೆ, ಕಳೆದ ವರ್ಷ ಈ ಅವಧಿಯಲ್ಲಿ 856.17 ಟಿಎಂಸಿ ಸಂಗ್ರಹ ಇತ್ತು.

ಮಳೆಯಿಂದ ಹಾನಿಗೀಡಾಗಿರುವ ಮನೆಗಳಿಗೆ ಸೂಕ್ತ ಪರಿಹಾರವನ್ನು ತಕ್ಷಣ ಒದಗಿಸಲು ಸೂಚಿಸಿದ್ದೇನೆ ಎಂದರು.

ಮುಂಗಾರು ಹಂಗಾಮಿನಲ್ಲಿ ಶೇ.98 ಬಿತ್ತನೆ ಪೂರ್ಣಗೊಂಡಿದೆ, ಬಿತ್ತನೆ ಗುರಿ 82.50 ಲಕ್ಷ ಹೆಕ್ಟೇರ್ ಇದ್ದು, 80.76 ಲಕ್ಷ ಹೆಕ್ಟೇರ್ ವಾಸ್ತವಿಕ ಬಿತ್ತನೆಯಾಗಿದೆ.

ಮಳೆಗೆ ಸಂಬಂಧಿಸಿದಂತೆ ಏಪ್ರಿಲ್‌ನಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ಒಟ್ಟು 111 ಮಂದಿ ಸಾವನ್ನಪ್ಪಿದ್ದು, ಎಲ್ಲಾ ಪ್ರಕರಣಗಳಲ್ಲಿ ಪರಿಹಾರ ವಿತರಿಸಲಾಗಿದೆ, ಒಟ್ಟು 5.55 ಕೋಟಿ ರೂ. ಪರಿಹಾರ ನೀಡಲಾಗಿದೆ. 651 ಮನೆಗಳು ಸಂಪೂರ್ಣ ಹಾನಿಯಾಗಿವೆ, 9,087 ಮನೆಗಳು ಭಾಗಶಃ ಹಾನಿಯಾಗಿವೆ, ಸಂಪೂರ್ಣ ಹಾನಿಯಾದ 649 ಮನೆ ಹಾಗೂ ಭಾಗಶಃ ಹಾನಿಯಾದ 8,608 ಮನೆಗಳಿಗೆ ಪರಿಹಾರ ಪಾವತಿಸಲಾಗಿದೆ, 766 ಜಾನುವಾರು ಸಾವಿಗೀಡಾಗಿದ್ದು, ಒಟ್ಟು 1.52 ಕೋಟಿ ರೂ. ಪರಿಹಾರ ವಿತರಿಸಲಾಗಿದೆ ಎಂದರು.

ಸಂಭ್ರಮ ಸಂಗೀತ, ನೃತ್ಯ ಝೇಂಕಾರ

ಸೆ.13ರಂದು ಮಹಿಳಾ ಸಂಭ್ರಮ: ಸೆ.13ರಂದು ಮಹಿಳಾ ಸಂಭ್ರಮ ದಿನವೆಂದು ಆಚರಣೆ ಮಾಡುತ್ತಿದ್ದು, ಅಂದು ವೇದಿಕೆಯ ನಿರ್ವಹಣೆ, ಪ್ರದರ್ಶನ ನೀಡುವ ಎಲ್ಲಾ ತಂಡಗಳು ಮಹಿಳಾ ಕಾಲೇಜಿನ ತಂಡಗಳೇ ಆಗಿರುತ್ತವೆ ಎಂದರು.

ಪ್ರಾಯೋಜಕತ್ವ ಉಪಸಮಿತಿ ಸಮನ್ವಯಾಧಿಕಾರಿಯೂ ಆದ ಪಾಲಿಕೆ ಉಪ ಆಯುಕ್ತ ಜಿ.ಎಸ್.ಸೋಮಶೇಖರ್ ಜಿಗಣಿ ಮಾತನಾಡಿ, ಯುವ ಸಂಭ್ರಮಕ್ಕೆ ಇದೇ ಪ್ರಥಮ ಬಾರಿಗೆ ಪ್ರಾಯೋಜಕರನ್ನು ಆಹ್ವಾನಿಸಲಾಗಿತ್ತು. ಸೌಂಡ್ ಮತ್ತು ಲೈಟ್ಸ್ ವ್ಯವಸ್ಥೆಗೆ 40 ಲಕ್ಷ ರೂ. ಅಗತ್ಯವೆಂದು ಅಂದಾಜಿಸಿದ್ದು, ಇದಕ್ಕೆ ಮೈಸೂರಿನ ಮೆರಾ ಸಂಸ್ಥೆ, ಸಮೃದ್ಧಿ ಸಂಸ್ಥೆ ಪ್ರಾಯೋಜಕತ್ವ ನೀಡುತ್ತಿವೆ. ಶೀರ್ಷಿಕೆ ಗೀತೆಗೆ ಸಾರ್ವಜನಿಕರಿಂದಲೂ ರೀಲ್ಸ್‌ಗಳನ್ನು ಆಹ್ವಾನಿಸಲಾಗಿತ್ತು. ಈ ಪೈಕಿ ಉತ್ತಮವಾದ 5 ರೀಲ್ಸ್‌ಗಳನ್ನು ಗೀತೆಯ ವಿಡಿಯೋ ಚಿತ್ರೀಕರಣದಲ್ಲಿ ಬಳಸಿದ್ದು, ಶೀರ್ಷಿಕೆ ಗೀತೆ ಸಿದ್ಧಪಡಿಸಿರುವುದು ಇದೇ ಮೊದಲು. ಈ ಗೀತೆ ಸಿದ್ಧಪಡಿಸಲು ಉಪಸಮಿತಿಯಿಂದ ಹಣ ವಿನಿಯೋಗಿಸಿಲ್ಲ. ಪ್ರಾಯೋಜಕತ್ವದಲ್ಲಿ ಗೀತೆ ಹೊರತರಲಾಗಿದೆ ಎಂದರು.

ಸಹ ಕಾರ್ಯಾಧ್ಯಕ್ಷರೂ ಆದ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ಸಿ.ಶಿವಕುಮಾರ್ ಮಾತನಾಡಿ, ಮಾನಸಗಂಗೋತ್ರಿಯಲ್ಲಿ ಸ್ಥಳಾವಕಾಶ ಇರುವ ಕಾರಣ ಪಾರ್ಕಿಂಗ್‌ಗೆ ಸಮಸ್ಯೆ ಆಗುವುದಿಲ್ಲವೆಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಸಮಯದ ಅಭಾವದಿಂದ ನೃತ್ಯ ಅರ್ಧಕ್ಕೆ ನಿಲ್ಲುವ ಸನ್ನಿವೇಶ ಈ ಹಿಂದೆ ಸೃಷ್ಟಿಯಾಗಿದೆ. ಹಾಗಾಗಿ ಸಮಯಕ್ಕೆ ಸರಿಯಾಗಿ ಸಿದ್ಧರಿಬೇಕೆಂದು ಈ ಬಾರಿ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದರು.

ಹೆಚ್ಚಿನ ಬ್ಯಾರಿಕೇಡ್ ಅಳವಡಿಸಿ, ಭದ್ರತೆಗೆ ಹೆಚ್ಚಿನ ನಿಗಾ ವಹಿಸಲಾಗುತ್ತಿದೆ. ಜೊತೆಗೆ ನೂಕುನಗ್ಗಲು ಆಗದಂತೆ ನಿಗಾ ವಹಿಸಲಾಗುವುದು. ಎಲ್‌ಇಡಿ ಪರದೆಗಳ ಸಂಖ್ಯೆ ಹಿಂದಿಗಿಂತ ಈ ಬಾರಿ ಹೆಚ್ಚು ಇರಲಿವೆ ಎಂದು ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದರು.

ಉದ್ಘಾಟನಾ ಸಮಾರಂಭ ಸೆ.10 ರಂದು ಸಂಜೆ 4ಕ್ಕೆ ನಡೆಯಲಿದೆ. ಅಂದು 25 ಕಾಲೇಜು ತಂಡಗಳು ಪ್ರದರ್ಶನ ನೀಡಲು ಅವಕಾಶವಿದೆ. ನಂತರ ಪ್ರತಿದಿನ 59 ಕಾಲೇಜು ತಂಡಗಳಿಗೆ ಅವಕಾಶವಾಗಲಿದೆ. ಅತಿಥಿಗಳಾಗಿ ಭಾಗವಹಿಸುವ ಸಿನಿಮಾ ತಾರೆಯರಿಗೆ ಯಾವುದೇ ಸಂಭಾವನೆ ನೀಡುತ್ತಿಲ್ಲ. ನಮ್ಮ ಮನವಿ ಮೇರೆಗೆ ಅತಿಥಿಯಾಗಿ ಪಾಲ್ಗೊಳ್ಳುತ್ತಿದ್ದು, ಸಾರಿಗೆ ವೆಚ್ಚ, ಊಟೋಪಾಚಾರ ವ್ಯವಸ್ಥೆ ಹೊರತಾಗಿ ಯಾವುದೇ ಗೌರವ ಸಂಭಾವನೆ ನೀಡುತ್ತಿಲ್ಲವೆಂದು ಪ್ರಶ್ನೆಗಳಿಗೆ ಸಿ.ಶಿವಕುಮಾರ್ ಉತ್ತರಿಸಿದರು. ಡಿಆರ್‌ಸಿ ಮಲ್ಟಿಪ್ಲೆಕ್ಸ್‌ನ ಹನುಮಂತು ಹಾಗೂ ವೈಶಾಲಿ ಹನುಮಂತು ದಂಪತಿ, ಉಪಸಮಿತಿ ಸಮನ್ವಯಾಧಿಕಾರಿಗಳಾದ ಪಾಲಿಕೆ ವಲಯ 6ರ ವಲಯ ಆಯುಕ್ತರಾದ ಎಂ.ಎಸ್.ಪ್ರತಿಭಾ, ಸಹ ಕಾರ್ಯಾಧ್ಯಕ್ಷರೂ ಆದ ಮೈಸೂರು ವಿವಿ ಕಾರ್ಯಪಾಲಕ ಅಭಿಯಂತರ ವಿ.ಎಸ್.ಅಶ್ವತ್ಥ್‌ಪ್ರಸಾದ್, ಅಧ್ಯಾಪಕರಾದ ಡಾ.ಆರ್.ನಿಂಗರಾಜು, ಡಾ.ಮಧುಸೂದನ್ ಮತ್ತಿತರರು ಹಾಜರಿದ್ದರು.

ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ತಾರತಮ್ಯ ಖಂಡಿಸಿ ಪ್ರತಿಭಟನೆ

ಯುಜಿಸಿ–ನಾನ್ ಯುಜಿಸಿ ಪರಿಗಣಿಸದಂತೆ ಆಗ್ರಹ



ಮೈಸೂರು ಡಿಸಿ ಕಚೇರಿ ಎದುರು ಸರ್ಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರ ರಾಜ್ಯ ಸಮನ್ವಯ ಸಮಿತಿಯಿಂದ ಪ್ರತಿಭಟನೆ ನಡೆಯಿತು.

ಮೈಸೂರು, ಸೆ.8(ಎಂಕೆ)– ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಯುಜಿಸಿ–ನಾನ್ ಯುಜಿಸಿ ಎಂದು ತಾರತಮ್ಯ ಮಾಡದೆ, ಸೇವಾ ಹಿರಿತನ ಪರಿಗಣಿಸುವಂತೆ ಆಗ್ರಹಿಸಿ ಸರ್ಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರ ರಾಜ್ಯ ಸಮನ್ವಯ ಸಮಿತಿ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಸೋಮವಾರ ಪ್ರತಿಭಟನೆ ನಡೆಸಲಾಯಿತು.

2025–26ನೇ ಸಾಲಿನ ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಯುಜಿಸಿ–ನಾನ್ ಯುಜಿಸಿ ಎಂಬ ತಾರತಮ್ಯ ಮಾಡದೇ ಸರ್ಕಾರದ ಮಟ್ಟದಲ್ಲಿ ನಿರ್ಣಯ ಕೈಗೊಳ್ಳಬೇಕು. ಹಾಗೆಯೇ ಹತ್ತಾರು ವರ್ಷಗಳಿಂದ ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರನ್ನು ಸೇವಾ ಹಿರಿತನದ ಆಧಾರದ ಮೇಲೆ ಪರಿಗಣಿಸಬೇಕು ಎಂದು ಒತ್ತಾಯಿಸಲಾಯಿತು.

ರಾಜ್ಯದ 432 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸುಮಾರು 11 ಸಾವಿರ ಅತಿಥಿ ಉಪನ್ಯಾಸಕರು ಸೇವೆ ಸಲ್ಲಿಸುತ್ತಿದ್ದು, ಇವರಲ್ಲಿ 5,623 ಮಂದಿ ಯುಜಿಸಿ ಅರ್ಹತೆ ಪಡೆದಿದ್ದರೆ, ಉಳಿದ 5,353 ಮಂದಿ ನಾನ್–ಯುಜಿಸಿ ಉಪನ್ಯಾಸಕರಿದ್ದಾರೆ. ಹಲವರು ಎಂಫಿಲ್ ಪದವಿಯನ್ನೂ ಪಡೆದವರಿದ್ದಾರೆ. ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಎಲ್ಲಾ ಅತಿಥಿ ಉಪನ್ಯಾಸಕರು ಶ್ರಮಿಸುತ್ತಿದ್ದು, ತಾರತಮ್ಯ ಮಾಡುವುದು ಸರಿಯಲ್ಲ. ಕಳೆದ ಒಂದೂವರೆ ತಿಂಗಳಿಂದ ಪಾಠಗಳು ನಡೆಯುತ್ತಿಲ್ಲ. ಗೌರವಧನವೂ ಇಲ್ಲದೆ ಅತಿಥಿ ಉಪನ್ಯಾಸಕರ ಬದುಕು ಅತಂತ್ರವಾಗಿದೆ. ಆದ್ದರಿಂದ ಈ ಕೂಡಲೇ ಸರ್ಕಾರ ಅತಿಥಿ ಉಪನ್ಯಾಸಕರಿಗೆ ನೆರವಾಗಬೇಕು ಎಂದು ಆಗ್ರಹಿಸಲಾಯಿತು.

ಸರ್ಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರ ರಾಜ್ಯ ಸಮನ್ವಯ ಸಮಿತಿ ರಾಜ್ಯ ಉಪಾಧ್ಯಕ್ಷ ದಿವಾಕರ್ ಕೆ.ಆರ್.ನಗರ, ರಾಜ್ಯ ಸಂಘಟನಾ ಕಾರ್ಯದರ್ಶಿ ಬಿ.ಎಸ್.ನಾಗರಾಜ್ ಮದ್ದೂರು, ಎಂ.ಸುದರ್ಶನ್, ಕೃಷ್ಣಮೂರ್ತಿ, ಎನ್.ಶರತ್, ಅಜಿತ್ ಕುಮಾರ್ ಮತ್ತಿತರರಿದ್ದರು.

ರಾಜ್ಯ ಬಿಜೆಪಿ ನಿಯೋಗದಿಂದ ಅಮಿತ್ ಶಾ ಭೇಟಿ; ರಾಜ್ಯ ರಾಜಕೀಯ ವಿದ್ಯಮಾನದ ವರದಿ ಸಲ್ಲಿಕೆ



ಅಮಿತ್ ಶಾ



ವಿಜಯೇಂದ್ರ

ನವದೆಹಲಿ, ಸೆ.8– ಕರ್ನಾಟಕ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದ ನಿಯೋಗವು ಇಂದು (ಸೆ.8) ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿ, ರಾಜ್ಯ ರಾಜಕೀಯ ವಿದ್ಯಮಾನಗಳ ಕುರಿತು ವರದಿ ಸಲ್ಲಿಸಿದೆ.

ನವದೆಹಲಿಯ ಕೃಷ್ಣ ಮೆನನ್ ಮಾರ್ಗದಲ್ಲಿರುವ ನಿವಾಸದಲ್ಲಿ ಅಮಿತ್ ಶಾ ಅವರನ್ನು ಭೇಟಿ ಮಾಡಿ, ಧರ್ಮಸ್ಥಳ ಪ್ರಕರಣದ ವರದಿ ಸಲ್ಲಿಸಿದೆ. ರಾಜ್ಯ ಬಿಜೆಪಿ ಕೈಗೊಂಡ ಹೋರಾಟ, ಸಮಾವೇಶದ ಬಗ್ಗೆಯೂ ಸಹ ವರದಿ ನೀಡಲಾಗಿದ್ದು, ಕೊಪ್ಪಳದಲ್ಲಿ ಯುವಕ ಗವಿಸಿದ್ದಪ್ಪ ಕೊಲೆ ಪ್ರಕರಣ, ಮದ್ದೂರಿನಲ್ಲಿ ಗಣಪತಿ ವಿಸರ್ಜನೆ ಮೆರವಣಿಗೆ ಮೇಲೆ ಕಲ್ಲುತೂರಾಟ ಸೇರಿದಂತೆ ಸದ್ಯ ರಾಜ್ಯ ರಾಜಕಾರಣದ ಬಗ್ಗೆ ಅಮಿತ್ ಶಾ ಗಮನಕ್ಕೆ ತಂದಿದ್ದಾರೆ.

ಅಮಿತ್ ಶಾ ಭೇಟಿ ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಬಿ.ವೈ.ವಿಜಯೇಂದ್ರ, ರಾಜ್ಯ ಬಿಜೆಪಿ ನಿಯೋಗ ಅಮಿತ್ ಶಾ ಅವರನ್ನು ಭೇಟಿ ಮಾಡಿದ್ದು, ಹಿಂದೂ ವಿರೋಧಿ ರಾಜ್ಯ ಸರ್ಕಾರದ ಬಗ್ಗೆ ಅವರ ಗಮನಕ್ಕೆ ತರಲಾಗಿದೆ. ಧರ್ಮಸ್ಥಳ ಪ್ರಕರಣ, ಕೊಪ್ಪಳದ ಗವಿಸಿದ್ದಪ್ಪ ಕೊಲೆ ಪ್ರಕರಣ ಸೇರಿದಂತೆ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿರುವ ಕುರಿತು ಚರ್ಚಿಸಿದ್ದೇವೆ. ಹಾಗೇ ಹಿಂದೂಗಳ ಮೇಲೆ ಹಲ್ಲೆ ಕುರಿತು ಗಮನಕ್ಕೆ ತರಲಾಗಿದೆ ಎಂದು ಹೇಳಿದರು.

ರಾಜ್ಯ ಸರ್ಕಾರದಿಂದ ಕೇಸ್‌ಗಳನ್ನು ವಾಪಸ್ ಪಡೆದಿರುವ ಬಗ್ಗೆಯೂ ಚರ್ಚಿಸಿದ್ದೇವೆ. ಕಾಂಗ್ರೆಸ್ ಸರ್ಕಾರ ಹಿಂದೂ ವಿರೋಧಿ ನೀತಿ ಅನುಸರಿಸುತ್ತಿದೆ. ರಾಜ್ಯದಲ್ಲಿ ಪೊಲೀಸ್ ವ್ಯವಸ್ಥೆ ಸಂಪೂರ್ಣ ಕುಸಿದು ಬಿದ್ದಿದ್ದೆ. ಸರ್ಕಾರವು ಪೊಲೀಸರಿಗೆ ಅಧಿಕಾರ ನೀಡದ ಬಗ್ಗೆ ಗಮನಕ್ಕೆ ತಂದಿದ್ದೇವೆ. ಇನ್ನು ಕರ್ನಾಟಕದಲ್ಲಿ ವಿಪಕ್ಷವಾಗಿ ನಮ್ಮ ಕರ್ತವ್ಯ ನಾವು ಮಾಡಿದ್ದು, ಅದರ ಸಂಪೂರ್ಣ ವರದಿಯನ್ನು ಅಮಿತ್ ಶಾ ಅವರಿಗೆ ಸಲ್ಲಿಸಿದ್ದೇವೆ ಎಂದು ಸ್ಪಷ್ಟಪಡಿಸಿದರು.

ಅಮಿತ್ ಶಾ ಭೇಟಿ ಮಾಡಿದ ವಿಜಯೇಂದ್ರ ನೇತೃತ್ವದ ನಿಯೋಗದಲ್ಲಿ ವಿಪಕ್ಷ ನಾಯಕರಾದ ಆರ್.ಅಶೋಕ್, ಛಲವಾದಿ ನಾರಾಯಣಸ್ವಾಮಿ, ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಸಂಸದರಾದ ಕೋಟ ಶ್ರೀನಿವಾಸ ಪೂಜಾರಿ, ಬ್ರಿಜೇಶ್ ಚೌಟ, ಶಾಸಕ ಹರೀಶ್ ಪೂಂಜಾ, ಎಸ್.ಆರ್.ವಿಶ್ವನಾಥ್ ಇದ್ದರು.

ಇಂದು ರಾಷ್ಟ್ರೀಯ ಸಮ್ಮೇಳನ ಕಾರ್ಸಿನೋ ಯೋಗ

ಮೈಸೂರು, ಸೆ. 8– ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರ, ಮೈಸೂರು ಹಾಗೂ ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಆಂಕಾಲಜಿ ವಿಭಾಗದ ವತಿಯಿಂದ ಸೆ.9 ರಂದು ಮಿಲೇನಿಯಂ ಹಾಲ್, ಪ್ಲಾಟಿನಂ ಜುಬಿಲಿ ಹಾಲ್ ಕಾಂಪ್ಲೆಕ್ಸ್, ಜೆ.ಕೆ. ಗ್ರೌಂಡ್ ಮೈಸೂರಿನಲ್ಲಿ ಏರ್ಪಡಿಸಲಾಗಿದೆ.

ಅಂದು ಬೆಳಗ್ಗೆ 9.30ಕ್ಕೆ ರಾಜ್ಯ ಆಯುಷ್ ಇಲಾಖೆ ಆಯುಕ್ತ ವಿಪಿನ್ ಸಿಂಗ್ ಕಾರ್ಯಕ್ರಮವನ್ನು ಉದ್ಘಾಟಿಸುವರು. ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಮುಖ್ಯ ಅತಿಥಿಯಾಗಿ ರುವರು. ಇಂದು ಈ ಕಾರ್ಯಕ್ರಮದ ಪೋಸ್ಟರ್ ಅನ್ನು ಎಂಎಂಸಿ ಮತ್ತು ಆರ್‌ಐ ನಿರ್ದೇಶಕಿ ಡಾ.ಕೆ.ಆರ್.ದಾಕ್ಷಾಯಿಣಿ ಬಿಡುಗಡೆಗೊಳಿಸಿದರು. ಈ ಸಂದರ್ಭದಲ್ಲಿ ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರದ ಸಹಾಯಕ ನಿರ್ದೇಶಕ ಡಾ.ಲಕ್ಷ್ಮೀ ನಾರಾಯಣ ಶೆಣೈ, ಡಾ.ಆಂಥೋನಿ ಪಾಲ್‌ರಾಜ್, ಡಾ. ಮಾಧವ ಪಿ, ಡಾ.ಪ್ರಕಾಶ್, ಅಂಕಾಲಾಜಿ ವಿಭಾಗದ ಮುಖ್ಯಸ್ಥರು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ನಾಡಹಬ್ಬ ಮೈಸೂರು ದಸರಾ ಮಹೋತ್ಸವ–2025

ಕಾವಾದಲ್ಲಿ ಸೆ.22ರಿಂದ 30ರವರೆಗೆ ಸಾಂಪ್ರದಾಯಿಕ ಚಿತ್ರಕಲಾ ಪ್ರದರ್ಶನ, ಸ್ಪರ್ಧೆ, ಮಾರಾಟ, ಕಲಾ ಜಾತ್ರೆ

ದಸರಾ ಲಲಿತ ಕಲೆ, ಕರಕುಶಲ ಕಲೆ ಉಪಸಮಿತಿಯಿಂದ ಆಯೋಜನೆ



ಮೈಸೂರು ದಸರಾ ಮಹೋತ್ಸವ–2025ರ ಅಂಗವಾಗಿ ದಸರಾ ಲಲಿತಕಲೆ ಮತ್ತು ಕರಕುಶಲಕಲೆ ಉಪಸಮಿತಿ ವತಿಯಿಂದ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ಮಾಹಿತಿಯುಳ್ಳ ಪೋಸ್ಟರ್ ಅನ್ನು ಬಿಡುಗಡೆ ಮಾಡಲಾಯಿತು.

ಮೈಸೂರು, ಸೆ.8(ಎಂಕೆ)– ನಾಡಹಬ್ಬ ಮೈಸೂರು ದಸರಾ ಮಹೋತ್ಸವ–2025ರ ಅಂಗವಾಗಿ ದಸರಾ ಲಲಿತಕಲೆ ಮತ್ತು ಕರಕುಶಲಕಲೆ ಉಪಸಮಿತಿ ವತಿಯಿಂದ ಮೈಸೂರಿನ ಸಿದ್ದಾರ್ಥನಗರದಲ್ಲಿರುವ ಚಾಮರಾಜೇಂದ್ರ ಸರ್ಕಾರಿ ದೃಶ್ಯ ಕಲಾ ಕಾಲೇಜು(ಕಾವಾ) ಆವರಣದಲ್ಲಿ ತೊಗಲು ಗೊಂಬೆ ಭಿತ್ತಿಶಿಲ್ಪ ಕಲಾ ಶಿಬಿರ, ಮೈಸೂರು ಶೈಲಿಯ ಸಾಂಪ್ರದಾಯಿಕ ಚಿತ್ರಕಲಾ ಪ್ರದರ್ಶನ ಮತ್ತು ಸ್ಪರ್ಧೆ, ರಾಷ್ಟ್ರಮಟ್ಟದ ಕರಕುಶಲ ಕಲಾ ಕೃತಿಗಳ ಪ್ರದರ್ಶನ ಮತ್ತು ಮಾರಾಟ, ಕಲಾಜಾತ್ರೆ ಸೇರಿದಂತೆ ಸೆ.22 ರಿಂದ 30ರವರೆಗೆ ವೈವಿಧ್ಯಮಯ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ಎಂದು ದಸರಾ ಲಲಿತಕಲೆ ಮತ್ತು ಕರಕುಶಲ ಕಲೆ ಉಪಸಮಿತಿ ಉಪವಿಶೇಷಾಧಿಕಾರಿ ಎ.ದೇವರಾಜು ತಿಳಿಸಿದರು.

ಕಾವಾ ಸಭಾಂಗಣದಲ್ಲಿ ಸೋಮವಾರ ಸುದ್ದಿಗೋಷ್ಠಿ ನಡೆಸಿದ ಅವರು, ಪ್ರತಿವರ್ಷದಂತೆ ಈ ಬಾರಿಯೂ ವಿಜೃಂಭಣೆಯಿಂದ ನಾಡಹಬ್ಬ ಆಚರಿಸಲು ಮೈಸೂರು ಸಿದ್ಧವಾಗುತ್ತಿದ್ದು, ದಸರಾ ಲಲಿತಕಲೆ ಮತ್ತು ಕರಕುಶಲಕಲೆ ಉಪಸಮಿತಿ ವಿವಿಧ ಕಲಾತ್ಮಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಸೆ.22ರಂದು ಸಂಜೆ 4 ಗಂಟೆಗೆ ಕರ್ನಾಟಕ ಲಲಿತಕಲಾ ಅಕಾಡಮಿ ಸಹಯೋಗದೊಂದಿಗೆ ತೊಗಲು ಗೊಂಬೆ ಭಿತ್ತಿ ಚಿತ್ರಕಲಾ ಶಿಬಿರ ಮತ್ತು ಇಂದಿರಾ ಗಾಂಧಿ ರಾಷ್ಟ್ರೀಯ ಕಲಾ ಕೇಂದ್ರದ ಸಹಕಾರದೊಂದಿಗೆ ಮೈಸೂರು ಶೈಲಿಯ ಸಾಂಪ್ರದಾಯಿಕ ಚಿತ್ರಕಲೆ ಪ್ರದರ್ಶನಕ್ಕೆ ಚಾಲನೆ ದೊರೆಯಲಿದೆ. ಹಾಗೆಯೇ ವೃತ್ತಿಪರ ಹಾಗೂ ಹವ್ಯಾಸಿ ಕಲಾವಿದರನ್ನು ಪ್ರೋತ್ಸಾಹಿಸಲು ಸೆ.26ರಿಂದ ಕಲಾಕೃತಿಗಳ ಪ್ರದರ್ಶನ, ಮಾರಾಟ ಮತ್ತು ಸ್ಪರ್ಧೆ ಏರ್ಪಡಿಸಲಾಗಿದ್ದು, ಸೆ.30ರವರೆಗೆ (ಬೆಳಗ್ಗೆ 10.30ರಿಂದ ಸಂಜೆ 6.30 ರವರೆಗೆ) ಪ್ರದರ್ಶನ ವೀಕ್ಷಣೆಗೆ ಸಾರ್ವಜನಿಕರಿಗೆ ಅವಕಾಶ ನೀಡಲಾಗಿದೆ ಎಂದರು.

ಭಿತ್ತಿಶಿಲ್ಪ ಶಿಬಿರ: ಸೆ.2ರಿಂದ 8ರವರೆಗೆ ಕರ್ನಾಟಕ ಶಿಲ್ಪಕಲಾ ಅಕಾಡೆಮಿ ಸಹಯೋಗದೊಂದಿಗೆ ಶಿಲ್ಪಕಲಾವಿದರಿಂದ ಮೊದಲ ಹಂತ ಹಾಗೂ ಸೆ.22ರಿಂದ 28ರವರೆಗೆ ಎರಡನೇ ಹಂತದ ಭಿತ್ತಿಶಿಲ್ಪ ಶಿಬಿರವನ್ನು ಆಯೋಜಿಸಲಾಗಿದೆ.

ಭಿತ್ತಿ ಶಿಲ್ಪ ಶಿಬಿರದಲ್ಲಿ ರಾಜ್ಯ ಹಿರಿಯ ಶಿಲ್ಪ ಕಲಾವಿದರು ಭಾಗವಹಿಸಲಿದ್ದಾರೆ. ಹಾಗೆಯೇ ಸೆ.26ರಿಂದ 30ರವರೆಗೆ ರಾಷ್ಟ್ರಮಟ್ಟದ ಕಲಾವಿದರಿಂದ ರಚಿಸಲ್ಪಟ್ಟ ಕಲಾಕೃತಿಗಳ ಪ್ರದರ್ಶನ, ಪ್ರಾತ್ಯಕ್ಷಿಕೆ ಮತ್ತು ಮಾರಾಟ ನಡೆಯಲಿದೆ ಎಂದರು.

ಕಲಾ ಜಾತ್ರೆ: ಜನ ಸಾಮಾನ್ಯರು, ವಿದ್ಯಾರ್ಥಿಗಳು, ಅರಳುತ್ತಿರುವ ಕಲಾವಿದರು ಮತ್ತು ಕಲಾಸಕ್ತರಿಗೆ ನೇರ ವೇದಿಕೆ ಕಲ್ಪಿಸುವ ದೃಷ್ಟಿಯಿಂದ ಈ ವರ್ಷ ವಿಭಿನ್ನ ಪ್ರಯತ್ನ ನಡೆಸಿದ್ದು, ಸೆ.28 ರಂದು ಬೆಳಗ್ಗೆ 10 ಗಂಟೆಯಿಂದ ಒಂದು ದಿನದ ಕಲಾಕೃತಿಗಳ ಪ್ರದರ್ಶನ ಮತ್ತು ಮಾರಾಟವನ್ನೊಳಗೊಂಡ ಕಲಾ ಜಾತ್ರೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಅರ್ಜಿ ಸಲ್ಲಿಸುವ ಕಲಾವಿದರಿಗೆ ಉಚಿತವಾಗಿ ಮಳಿಗೆಗಳನ್ನು ನೀಡಲಾಗುವುದು ಎಂದು ಮಾಹಿತಿ ನೀಡಿದರು.

ವಿಶೇಷ ಆಕರ್ಷಣೆ: ಶಾಲಾ ಮಕ್ಕಳಲ್ಲಿ ಅಡಗಿರುವ ಕಲಾ ಪ್ರತಿಭೆ ಗುರ್ತಿಸಿ, ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಸೆ.26 ರಂದು ಮಧ್ಯಾಹ್ನ 3 ಗಂಟೆಗೆ ವಿವಿಧ ವಯೋಮಾನದ ಮಕ್ಕಳಿಗೆ ಸ್ಥಳದಲ್ಲೇ ಚಿತ್ರಬಿಡಿಸುವ, ಜೇಡಿ ಮಣ್ಣಿನಿಂದ ಕಲಾಕೃತಿ ರಚಿಸುವ ಸ್ಪರ್ಧೆ ಹಾಗೂ ವಿವಿಧ ಸಾಂಪ್ರದಾಯಿಕ ಕಸುಬುಗಳ ಪ್ರಾತ್ಯಕ್ಷಿಕೆ ಏರ್ಪಡಿಸಿದ್ದು, ಸೆ.28 ರಂದು ವಿಜೇತ ಮಕ್ಕಳಿಗೆ ಬಹುಮಾನ ವಿತರಣೆ ಮಾಡಲಾಗುವುದು. ಹಾಗೆಯೇ ಮಕ್ಕಳಿಗೆ ದೇಶದ ವಿವಿಧ ಭಾಗಗಳ ಸಾಂಪ್ರದಾಯಿಕ ಕಸುಬುಗಳನ್ನು ಪರಿಚಯಿಸುವ ದೃಷ್ಟಿಯಿಂದ ಕುಂಬಾರಿಕೆ, ನೇಯ್ಗೆ ಹಾಗು ಇತರೆ ಕಸುಬುಗಳ ಒಂದು ದಿನದ ಪ್ರಾತ್ಯಕ್ಷಿಕೆ ಏರ್ಪಡಿಸಲಾಗಿದೆ ಎಂದು ಹೇಳಿದರು.

ಜೊತೆಗೆ ಸೆ.23 ರಿಂದ 30ರವರೆಗೆ ಮಧ್ಯಾಹ್ನ 2 ರಿಂದ ಸಂಜೆ 4.30ರವರೆಗೆ ಸಾಧಕ ಕಲಾವಿದರ ಸಾಕ್ಷ್ಯಚಿತ್ರ ಪ್ರದರ್ಶನ ಹಾಗೂ ಪ್ರತಿ ದಿನ ಸಂಜೆ 4.30 ರಿಂದ ವಿವಿಧ ತಂಡಗಳಿಂದ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ವಿವರಿಸಿದರು.

ಪೋಸ್ಟರ್ ಬಿಡುಗಡೆ: ಇದೇ ವೇಳೆ ದಸರಾ ಅಂಗವಾಗಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ಮಾಹಿತಿಯುಳ್ಳ ಪೋಸ್ಟರ್ ಅನ್ನು ಬಿಡುಗಡೆ ಮಾಡಲಾಯಿತು. ಕರ್ನಾಟಕ ಶಿಲ್ಪಕಲಾ ಅಕಾಡೆಮಿ ಅಧ್ಯಕ್ಷ ಎಂ.ಸಿ.ರಮೇಶ್, ದಸರಾ ಲಲಿತಕಲೆ ಮತ್ತು ಕರಕುಶಲ ಕಲೆ ಉಪಸಮಿತಿ ಕಾರ್ಯಾಧ್ಯಕ್ಷರೂ ಆದ ಕಾವಾ ಕಾಲೇಜು ಆಡಳಿತಾಧಿಕಾರಿ ನಿರ್ಮಲ ಎಸ್.ಮಠಪತಿ, ಕಾರ್ಯದರ್ಶಿ ಕೆ.ರಾಘವೇಂದ್ರ, ಟೆರಾಕೋಟ ಭಿತ್ತಿಶಿಲ್ಪ ಶಿಬಿರ ನಿರ್ದೇಶಕ ಉಲ್ಲಾಸ್ಕರ್ ಡೇ, ಕಲಾವಿದರಾದ ಸೂರ್ಯ, ಮಂಜು ಪ್ರಸಾದ್, ಯೋಗನಂದ್ ಮತ್ತಿತರರಿದ್ದರು.

35 ಲಕ್ಷ ಕೇಳಿದ್ದೇವೆ... 25 ಲಕ್ಷ ಕೊಡುವ ಸಾಧ್ಯತೆ...!

ದಸರಾ ಲಲಿತಕಲೆ, ಕರಕುಶಲಕಲೆ ಉಪಸಮಿತಿ ವತಿಯಿಂದ ಹಮ್ಮಿಕೊಂಡಿರುವ ಕಾರ್ಯಕ್ರಮಗಳಿಗೆ 35 ಲಕ್ಷ ರೂ.ಅನುದಾನ ನೀಡುವಂತೆ ಮನವಿ ಮಾಡಿದ್ದೇವೆ. ಕಳೆದ ವರ್ಷ 25 ಲಕ್ಷ ರೂ. ನೀಡಿದ್ದು, ಈ ವರ್ಷವೂ ಅಷ್ಟೇ ಅನುದಾನ ನೀಡುವ ಸಾಧ್ಯತೆ ಇದೆ. ವಿಜೇತ ಕಲಾವಿದರಿಗೆ ಗಿಫ್ಟ್ ವೋಚರ್‌ಗಳನ್ನು ಬಹುಮಾನದ ರೂಪದಲ್ಲಿ ನೀಡಲಾಗುವುದು. ಹಾಗೆಯೇ ಕಲಾವಿದರಿಗೆ ಗೌರವ ಸಮರ್ಪಣೆ ಇರಲಿದೆ.

ಟೆರಾಕೋಟಾ ಭಿತ್ತಿ ಶಿಲ್ಪಗಳ ಆಕರ್ಷಣೆ...!

ಕಾವಾ ಕಾಲೇಜು ಆವಣರದಲ್ಲಿ ನಡೆಯುತ್ತಿರುವ ಟೆರಾಕೋಟಾ ಭಿತ್ತಿ ಶಿಲ್ಪಕಲಾ ಶಿಬಿರದಲ್ಲಿ ಆಕರ್ಷಕ ಟೆರಾಕೋಟಾ ಕಲಾಕೃತಿಗಳು ರೂಪುಗೊಳ್ಳುತ್ತಿದ್ದು, ಬಹುತೇಕ ಮುಕ್ತಾಯ ಹಂತದಲ್ಲಿವೆ. ವಿನ್ಯಾಸಗೊಂಡಿರುವ ಕಲಾಕೃತಿಗಳನ್ನು ಬಿಸಿಲಿನಲ್ಲಿ ಒಣಗಿಸಿ, ನಂತರ ಬೆಂಕಿಯಲ್ಲಿ ಬೇಯಿಸಿದ ಬಳಿಕ ಕಾಲೇಜಿನ ಗೋಡೆಗಳ ಮೇಲೆ ಟೆರಾಕೋಟಾ ಶಿಲ್ಪಕಲೆಗಳನ್ನು ಅನಾವರಣಗೊಳಿಸಲಾಗುವುದು.

–ಉಲ್ಲಾಸ್ಕರ್ ಡೇ, ಟೆರಾಕೋಟ ಭಿತ್ತಿಶಿಲ್ಪ ಶಿಬಿರ ನಿರ್ದೇಶಕ

ಜಿಎಸ್‌ಟಿ ಪರಿಷ್ಕರಣೆಯಿಂದ ದೇಶದ ಆರ್ಥಿಕತೆಯಲ್ಲಿ ಕ್ರಾಂತಿಕಾರಿ ಬದಲಾವಣೆ



ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಸೋಮವಾರ ಮಾಜಿ ಸಚಿವ ಎನ್.ಮಹೇಶ್ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಮಾಜಿ ಸಚಿವ ಮಹೇಶ್ ವಿಶ್ವಾಸ

ಮೈಸೂರು, ಸೆ.8(ಬಿಎಲ್‌ಯು)– ಕೇಂದ್ರ ಸರ್ಕಾರ ಜಿಎಸ್‌ಟಿ ಪರಿಷ್ಕರಣೆ ಮಾಡಿರುವುದರಿಂದ ದೇಶದ ಆರ್ಥಿಕತೆಯಲ್ಲಿ ಕ್ರಾಂತಿಕಾರಿ ಬದಲಾವಣೆ ಆಗಲಿದೆ ಎಂದು ಮಾಜಿ ಸಚಿವ ಎನ್.ಮಹೇಶ್ ವಿಶ್ವಾಸ ವ್ಯಕ್ತಪಡಿಸಿದರು.

ನಗರದ ಬಿಜೆಪಿ ಕಚೇರಿಯಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಶ್ರೀಮಂತರು ಬಳಸುವ ಐಷಾರಾಮಿ ವಸ್ತುಗಳ ಮೇಲೆ ತೆರಿಗೆ ಹೆಚ್ಚಳ ಮಾಡಿ, ಬಡವರು ಬಳಕೆ ಮಾಡುವ ವಸ್ತುಗಳ ಮೇಲೆ ತೆರಿಗೆ ಕಡಿತ ಮಾಡಲಾಗಿದೆ. ಇದರಿಂದ ಸಾಮಾನ್ಯ ಜನರ ತಲಾದಾಯ ಹೆಚ್ಚಾಗಿ ದೇಶದ ಆರ್ಥಿಕತೆ ಚೈತನ್ಯ ಪಡೆಯುತ್ತದೆ ಎಂದರು.

ಜಿಎಸ್ ಟಿ ಪರಿಷ್ಕರಣೆಯಿಂದ ಕೇಂದ್ರ ಸರ್ಕಾರಕ್ಕೆ 48 ಸಾವಿರ ಕೋಟಿ ಆದಾಯ ಖೋತಾ ಆಗಲಿದೆ. ಇಷ್ಟು ಹಣ ಜನಸಾಮಾನ್ಯರ ಜೇಬಿನಲ್ಲಿ ಉಳಿಯಲಿದೆ. ಇದರಿಂದ ಮುಂದಿನ ಮೂರ್ನಾಲ್ಕು ತಿಂಗಳಲ್ಲಿ ಜನರ ಆರ್ಥಿಕ ಪರಿಸ್ಥಿತಿ ಉತ್ತಮವಾಗಿ ಜನ ಸಾಮಾನ್ಯರು ಹೆಚ್ಚು ಪ್ರಮಾಣದಲ್ಲಿ ವಸ್ತುಗಳನ್ನು ಖರೀದಿಸುವ ಶಕ್ತಿ ಹೊಂದುತ್ತಾರೆ ಎಂದರು.

ಕಾಂಗ್ರೆಸ್ ಸರ್ಕಾರ ಅಧಿಕಾರ ದಲ್ಲಿದ್ದಾಗ ದೇಶದ ಜನರ ತಲಾದಾಯ 270 ರೂಪಾಯಿ ಇತ್ತು. ನರೇಂದ್ರ ಮೋದಿ ಅವರು ಪ್ರಧಾನಿಯಾದ ನಂತರ ಜನರ ತಲಾದಾಯ 670 ರೂಪಾಯಿಗೆ ಏರಿಕೆಯಾಗಿದೆ. ಇದರಿಂದ ದೇಶದ 20 ಕೋಟಿ ಜನರು ಬಡತನ ರೇಖೆಯಿಂದ ಹೊರಗೆ ಬಂದಿದ್ದಾರೆ ಎಂದರು.

ನರೇಂದ್ರ ಮೋದಿ ಅವರ ಆತ್ಮನಿರ್ಭರ ಭಾರತ ಪರಿಕಲ್ಪನೆಯಲ್ಲಿ ದೇಶದ ಜನರು ಸ್ವಾವಲಂಬಿಗಳಾಗಿದ್ದಾರೆ. ಕಾಂಗ್ರೆಸ್ ಪಕ್ಷ ಆರೇಳು ದಶಕಗಳಿಂದ ಬಡತನ ನಿರ್ಮೂಲನೆ ಹೆಸರಿನಲ್ಲಿ ಕೆಲಸಕ್ಕೆ ಬಾರದ ಯೋಜನೆ ಜಾರಿ ಮಾಡಿ ಜನರನ್ನು ಬಡವರನ್ನಾಗಿಯೇ ಉಳಿಸಿತ್ತು. ಆದರೆ ನರೇಂದ್ರ ಮೋದಿ ಸರ್ಕಾರ ಜನಸಾಮಾನ್ಯರಿಗೆ ಆರ್ಥಿಕ ಚೈತನ್ಯ ತುಂಬಿದೆ ಎಂದು ಮಹೇಶ್ ಹೇಳಿದರು.

ಜಿಎಸ್‌ಟಿ ಪರಿಷ್ಕರಣೆ ಮಾಡಿರುವುದನ್ನು ಸಂಭ್ರಮಿಸಿದ ಬಿಜೆಪಿ ಕಾರ್ಯಕರ್ತರು ಪಕ್ಷದ ಕಚೇರಿ ಮುಂದೆ ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂತಸ ವ್ಯಕ್ತಪಡಿಸಿದರು. ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಜಿಲ್ಲಾಧ್ಯಕ್ಷ ಸುಬ್ಬಣ್ಣ, ಪ್ರಧಾನ ಕಾರ್ಯದರ್ಶಿ ಮಹೇಶ್, ಕಿರಣ್, ಜಯರಾಂ ಗೌಡ, ಬಾಲಚಂದ್ರ, ಕೇಬಲ್ ಮಹೇಶ್, ಶೈಲೇಂದ್ರ ಹಲವರು ಹಾಜರಿದ್ದರು.

ಬಿಜೆಪಿ ಮುಖಂಡ ಜೆಪಿಯವರಿಗೆ ಸನ್ಮಾನ...



ಬಿಜೆಪಿ ಹಿರಿಯ ಮುಖಂಡ, ಚಿತ್ರನಟ ಎಸ್.ಜಯಪ್ರಕಾಶ್ (ಜೆ.ಪಿ) ಅವರನ್ನು ಶ್ರೀ ವಿನಾಯಕ ಗೆಳೆಯರ ಬಳಗದಿಂದ ಆತ್ಮೀಯವಾಗಿ ಸನ್ಮಾನಿಸಲಾಯಿತು. ಈ ವೇಳೆ ಬಿಜೆಪಿ ಹಿರಿಯ ಮುಖಂಡರಾದ ಡಿ.ಮಹೇಶ ನಾಯಕ, ಹನುಮಂತೇಗೌಡ, ಪ್ರೇಮ್, ಸುಮಂತ್, ಚಂದ್ರಶೇಖರ್, ಭಾನುಪ್ರಕಾಶ್ ಮತ್ತಿತರರು ಉಪಸ್ಥಿತರಿದ್ದರು.

'ಮೋದಿ ನೋಡಿ ಕಲಿಯಿರಿ...'

ನೇತನ್ಯಾಹುಗೆ ಇಸ್ರೇಲಿ ರಕ್ಷಣಾ ನೀತಿ ತಜ್ಞರ ಚಾಟಿ



ನರೇಂದ್ರ ಮೋದಿ, ನೆತನ್ಯಾಹು

ಟೆಲ್ ಅವಿವ್: ರಾಷ್ಟ್ರೀಯ ಗೌರವವನ್ನು ಕಾರ್ಯತಂತ್ರದ 'ಆಸ್ತಿ'ಯನ್ನಾಗಿ ಮಾಡುವುದು ಹೇಗೆ ಎಂಬುದನ್ನು ಭಾರತ ಮತ್ತು ಪ್ರಧಾನಿ ಮೋದಿ ಅವರಿಂದ ಕಲಿಯಬೇಕು ಎಂದು ಇಸ್ರೇಲ್ ಪತ್ರಿಕೆಗಳು ಇಸ್ರೇಲ್ ಸರ್ಕಾರದ ವಿರುದ್ಧ ಕಿಡಿಕಾರಿವೆ.

ದಿ ಜೆರುಸಲೆಮ್ ಪೋಸ್ಟ್‌ನಲ್ಲಿ ಪ್ರಕಟವಾದ ಲೇಖನವೊಂದರಲ್ಲಿ, ಮಿಸ್ಗಾವ್ ಇನ್‌ಸ್ಟಿಟ್ಯೂಟ್ ಫಾರ್ ನ್ಯಾಷನಲ್ ಸೆಕ್ಯುರಿಟಿ ಅಂಡ್ ಝಿಯೋನಿಸ್ಟ್ ಸ್ಟ್ರಾಟಜಿಯ ಹಿರಿಯ ಸಹೋದ್ಯೋಗಿ ಹಾಗೂ ಇಸ್ರೇಲ್ ರಕ್ಷಣಾ ನೀತಿ ತಜ್ಞ ಝುಕಿ ಶಾಲೋಮ್, ಸುಂಕನೀತಿ ಕುರಿತು ಅಮೆರಿಕದ ವಿರುದ್ಧ ಪ್ರಧಾನಿ ಮೋದಿ ಅವರ ಕಠಿಣ ನಿಲುವು ಮತ್ತು ಪಾಕಿಸ್ತಾನದೊಂದಿಗಿನ ಭಾರತದ ಗಡಿ ಘರ್ಷಣೆಗಳಿಗೆ ಅದರ ವಿಧಾನವು ರಾಷ್ಟ್ರೀಯ ಗೌರವವು ಐಷಾರಾಮಿ ಅಲ್ಲ, ಆದರೆ ದೂರಗಾಮಿ ಕಾರ್ಯತಂತ್ರದ ಆಸ್ತಿ ಎಂದು ತೋರಿಸುತ್ತದೆ ಎಂದು ಹೇಳಿದ್ದಾರೆ.

ರಾಷ್ಟ್ರೀಯ ಗೌರವವನ್ನು ಭಾರತದಿಂದ ಕಾರ್ಯತಂತ್ರದ ಆಸ್ತಿಯನ್ನಾಗಿ ಮಾಡುವುದು ಹೇಗೆ ಎಂಬುದನ್ನು ಇಸ್ರೇಲ್ ಕಲಿಯಬೇಕು. ಪ್ರಧಾನಿ ಮೋದಿಯವರ ಕಠಿಣ ಪ್ರತಿಕ್ರಿಯೆಯು ಆರ್ಥಿಕ ಮತ್ತು ಮಿಲಿಟರಿ ಉದ್ವಿಗ್ನತೆಯಲ್ಲಿ ಬೇರೂರಿದೆ. ಆದರೆ ಪ್ರಾಥಮಿಕವಾಗಿ ವೈಯಕ್ತಿಕ ಮತ್ತು ರಾಷ್ಟ್ರೀಯ ಗೌರವಕ್ಕೆ ಧಕ್ಕೆಯಾಗಿದೆ ಎಂಬ ಭಾವನೆಯಿಂದ ಹುಟ್ಟಿಕೊಂಡಿದೆ. ಅಧ್ಯಕ್ಷ ಟ್ರಂಪ್‌ನಿಂದ ನಾಲ್ಕು ಫೋನ್ ಕರೆಗಳನ್ನು ಅವರು ನಿರಾಕರಿಸಿದರು. ಈ ಸಂದರ್ಭದಲ್ಲಿ, ಇಸ್ರೇಲ್ ಒಂದು ಪ್ರಮುಖ ವಿಷಯವನ್ನು ಕಲಿಯಬಹುದು ಎಂದು ಶಾಲೋಮ್ ಹೇಳಿದ್ದಾರೆ.

ಭಾರತವು ಅಧ್ಯಕ್ಷ ಟ್ರಂಪ್‌ರಿಂದ ಅಭೂತ ಪೂರ್ವ ಮೌಖಿಕ ದಾಳಿಗಳನ್ನು ಎದುರಿಸಿದಾಗ, ಪ್ರಧಾನಿ ಮೋದಿ ಕ್ಷಮೆಯಾಚಿಸಲು ಆತುರಪಡಲಿಲ್ಲ; ಬದಲಾಗಿ, ಅವರು ರಾಷ್ಟ್ರೀಯ ಗೌರವವನ್ನು ಎತ್ತಿಹಿಡಿಯುವ ಮೂಲಕ ಬಲವಂತವಾಗಿ ಪ್ರತಿಕ್ರಿಯಿಸಲು ಆಯ್ಕೆ ಮಾಡಿಕೊಂಡರು. ಬಹುಶಃ ಅವರ ವಿಧಾನವು ಕಠಿಣವಾಗಿ ಕಂಡು ಬಂದಿದೆ. ಆದರೆ ಅದು ಸ್ಪಷ್ಟ ಸಂದೇಶ ವನ್ನು ಕಳುಹಿಸಿತು. ಭಾರತವು ಅಧೀನ ಅಥವಾ ಕೀಳು ರಾಷ್ಟ್ರವಾಗಿ ನಡೆಸಿ ಕೊಳ್ಳುವುದನ್ನು ಸ್ವೀಕರಿಸುವುದಿಲ್ಲ ಎಂದರು.


ಅಂತೆಯೇ ಗಾಜಾದ ಖಾನ್ ಯೂನಿಸ್‌ನಲ್ಲಿರುವ ನಾಸರ್ ಆಸ್ಪತ್ರೆಯ ಮೇಲೆ ನಡೆದ ಬಾಂಬ್ ದಾಳಿಗೆ ಇಸ್ರೇಲ್ ಸರ್ಕಾರ ಮತ್ತು ಮಿಲಿಟರಿಯ ಆತುರದ ಪ್ರತಿಕ್ರಿಯೆಯನ್ನು ಟೀಕಿಸಿದ ಶಾಲೋಮ್, ಇಸ್ರೇಲ್ ದಾಳಿಯಲ್ಲಿ ಕನಿಷ್ಠ 20 ಜನರು ಸಾವನ್ನಪ್ಪಿದರು.

ಇಸ್ರೇಲಿ ರಕ್ಷಣಾ ಪಡೆಗಳು, ಸಿಬ್ಬಂದಿ ಮುಖ್ಯಸ್ಥ ಮತ್ತು ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಪ್ರತ್ಯೇಕ ಪ್ರತಿಕ್ರಿಯೆಗಳು ಅಂತರರಾಷ್ಟ್ರೀಯ ಸಾರ್ವಜನಿಕ ಅಭಿ ಪ್ರಾಯವನ್ನು ಶಾಂತಗೊಳಿಸುವ ಬಯಕೆಯನ್ನು ಮಾತ್ರವಲ್ಲದೆ ಘಟನೆಯ ಪರಿಣಾಮಗಳ ಬಗ್ಗೆ ಗಮನಾರ್ಹ ಮಟ್ಟದ ಆತಂಕ–ಮತ್ತು ಬಹುಶಃ ಭಯವನ್ನು ಸಹ ವ್ಯಕ್ತಪಡಿಸಿದವು ಎಂದು ಟೀಕಿಸಿದರು.

ತಮ್ಮ ಕ್ರಮಗಳಲ್ಲಿ, ನಾಯಕರು ಭಾಗಿಯಾಗದ ನಾಗರಿಕರ ಹತ್ಯೆಗೆ ಕೆಲವು ಜವಾಬ್ದಾರಿಯನ್ನು ತೆಗೆದು ಕೊಳ್ಳುವ ಸಂದೇಶ ರವಾನಿಸಿದರು. ಇದು ಅಂತರ ರಾಷ್ಟ್ರೀಯ ಕಾನೂನಿನ ವಿಷಯದಲ್ಲಿ ಅಪಾಯಕಾರಿ ಪೂರ್ವನಿದರ್ಶನವನ್ನು ಸ್ಥಾಪಿಸಬಹುದಾದ ಸಂದೇಶವಾಗಿದೆ ಎಂದು ಶಾಲೋಮ್ ಹೇಳಿದರು.

ದೇಶ - ವಿದೇಶ

ಅಮೆರಿಕದ ರೈಲಿನಲ್ಲಿ ಉಕ್ರೇನ್ ಯುವತಿಯ ಬರ್ಬರ ಹತ್ಯೆ



ವಾಷಿಂಗ್ಟನ್: ಉಕ್ರೇನ್‌ನಲ್ಲಿ ನಡೆದ ಯುದ್ಧದ ವಿನಾಶದಿಂದಾಗಿ ಅನಿವಾರ್ಯವಾಗಿ ಅಮೆರಿಕಕ್ಕೆ ವಲಸೆ ಬಂದಿದ್ದ ಯುವತಿಯನ್ನು ಅಮೆರಿಕದ ರೈಲಿನಲ್ಲಿ ಬರ್ಬರವಾಗಿ ಹತ್ಯೆ ಮಾಡಿರುವ ವಿಡಿಯೋ ವೈರಲ್ ಆಗಿದೆ. 23 ವರ್ಷದ ಐರಿನಾ ಜರುಟ್ಸ್ಕಾಳನ್ನು ವ್ಯಕ್ತಿಯೊಬ್ಬ ಚಾಕುವಿನಿಂದ ಇರಿದು ಹತ್ಯೆ ಮಾಡಿದ್ದಾನೆ. ಉತ್ತರ ಕೆರೊಲಿನಾದ ಷಾರ್ಲೆಟ್‌ನಲ್ಲಿ ಘಟನೆ ನಡೆದಿದೆ. ಯುವತಿ ಸಮವಸ್ತ್ರದಲ್ಲಿರುವುದನ್ನು ವಿಡಿಯೋದಲ್ಲಿ ಕಾಣಬಹುದು. ಆಕೆ ರೈಲು ಹತ್ತಿ ಖಾಲಿ ಸೀಟಿನಲ್ಲಿ ಬಂದು ಕೂರುತ್ತಾರೆ. ಅಲ್ಲೇ ಹಿಂದೆ ಹೊಂಚು ಹಾಕಿ ಕೂತಿದ್ದ ಆರೋಪಿ ಆಕೆ ಮೇಲೆ ಹಲ್ಲೆ ನಡೆಸಿ, ಆಕೆಯ ಕುತ್ತಿಗೆಗೆ 3 ಬಾರಿ ಇರಿದಿದ್ದಾನೆ. ಜರುಟ್ಸ್ಕಾ ಅವರು ಕುತ್ತಿಗೆಯನ್ನು ಬಿಗಿಯಾಗಿ ಹಿಡಿದುಕೊಂಡು ನಂತರ ಅವರು ತಮ್ಮ ಸೀಟಿನಲ್ಲಿ ಕುಸಿದು ಬಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಮುಂದಿನ ನಿಲ್ದಾಣದಲ್ಲಿ ಆರೋಪಿ ಇಳಿದಿದ್ದಾನೆ. ಪೊಲೀಸರು ನಂತರ ಪ್ಲಾಟ್‌ಫಾರ್ಮ್ ಬಳಿ ಆರೋಪಿಯನ್ನು ಬಂಧಿಸಿದ್ದಾರೆ.

ವ್ಯಕ್ತಿ ಹೆಗಲ ಮೇಲೆ ಕುಳಿತು ಪ್ರವಾಹ ಸಮೀಕ್ಷೆ ನಡೆಸಿದ ಕಾಂಗ್ರೆಸ್ ಸಂಸದ



ಪಾಟ್ನಾ: ದೇಶದ ವಿವಿಧೆಡೆ ಕಳೆದ 2 ವಾರಗಳಿಂದ ಭಾರಿ ಮಳೆಯಾಗುತ್ತಿದ್ದು, ಪ್ರವಾಹದ ಸ್ಥಿತಿ ನಿರ್ಮಾಣವಾಗಿದೆ. ಹಾಗೆಯೇ ಬಿಹಾರದ ಕಟಿಹಾರ ಜಿಲ್ಲೆಯಲ್ಲಿ ಕೂಡ ಪ್ರವಾಹ ಸಂಭವಿಸಿ ಸಾಕಷ್ಟು ಆಸ್ತಿ–ಪಾಸ್ತಿಗಳಿಗೆ ಹಾನಿಯುಂಟಾಗಿತ್ತು. ಈ ಪ್ರವಾಹ ಪೀಡಿತ ಪ್ರದೇಶದ ಸಮೀಕ್ಷೆ ನಡೆಯಲು ಕಾಂಗ್ರೆಸ್ ಸಂಸದ ತಾರೀಖ್ ಅನ್ವರ್ ಹಳ್ಳಿ ಜನರ ಹೆಗಲ ಮೇಲೆ ಕುಳಿತು ಹೋಗಿರುವ ವಿಡಿಯೋ ಎಲ್ಲೆಡೆ ವೈರಲ್ ಆಗಿದ್ದು, ತೀವ್ರ ಆಕ್ಷೇಪ ವ್ಯಕ್ತವಾಗಿದೆ.

1 ನಿಮಿಷ, 12 ಸೆಕೆಂಡುಗಳ ವಿಡಿಯೋದಲ್ಲಿ 74 ವರ್ಷದ ರಾಜಕೀಯ ನಾಯಕ ಹಳ್ಳಿಯ ಜನರ ಹೆಗಲ ಮೇಲೆ ಕುಳಿತು ಹೋಗುತ್ತಿರುವುದನ್ನು ಕಾಣಬಹುದು. ಆದರೆ ಅಲ್ಲಿ ನಡೆಸಲು ಸಾಧ್ಯವಾಗದಷ್ಟು ನೀರೇನು ಇರಲಿಲ್ಲ, ಬದಲಾಗಿ ಕೆಸರು ಮಿಶ್ರಿತ ನೀರಿತ್ತಷ್ಟೇ, ಇದೆಂಥಾ ಸಮೀಕ್ಷೆ ಎಂದು ಜನರು ತರಾಟೆಗೆ ತೆಗೆದುಕೊಂಡಿದ್ದಾರೆ. ಅನ್ವರ್ ಮೊದಲು ಸ್ವಲ್ಪ ದೂರ ಟ್ರ್ಯಾಕ್ಟರ್‌ನಲ್ಲಿ ತೆರಳಿದ್ದರು. ಬಿಹಾರದಲ್ಲಿ ಚುನಾವಣೆ ಸನ್ನಿಹಿತವಾಗುತ್ತಿದ್ದು, ಈ ಸಂದರ್ಭದಲ್ಲಿ ಕಾಂಗ್ರೆಸ್ ಸಂಸದನ ಈ ವರ್ತನೆ ಭಾರಿ ಪರಿಣಾಮ ಬೀರಬಹುದು ಎಂದು ಹೇಳಲಾಗುತ್ತಿದೆ.

ಇಸ್ರೇಲಿನ ಜೆರುಸಲೇಂನಲ್ಲಿ ಉಗ್ರರ ದಾಳಿ: 5 ಮಂದಿ ಬಲಿ



ಟೆಲ್ ಅವಿವ್: ಇಸ್ರೇಲಿನ ಪೂರ್ವ ಜೆರುಸಲೇಂನಲ್ಲಿ ಭಯೋತ್ಪಾದನ ದಾಳಿ ನಡೆದಿದ್ದು ಕನಿಷ್ಠ 5 ಮಂದಿ ಮೃತಪಟ್ಟಿದ್ದು, ಹಲವು ಮಂದಿ ಗಾಯಗೊಂಡಿದ್ದಾರೆ.


ಜೆರುಸಲೆಮ್‌ನ ಯಿಗಲ್ ಯಾಡಿನ್ ಸ್ಟ್ರೀಟ್‌ನಲ್ಲಿರುವ ರಾಮೋಟ್ ಜಂಕ್ಷನ್‌ನಲ್ಲಿ ಈ ದಾಳಿ ನಡೆದಿದೆ. ಉಗ್ರರು ಬಸ್ಸನ್ನು ಹತ್ತಿ ಮನಬಂದಂತೆ ಗುಂಡಿನ ದಾಳಿ ನಡೆಸಿದ್ದರಿಂದ ಸಾವು ನೋವಿನ ಸಂಖ್ಯೆ ಹೆಚ್ಚಾಗುವ ಸಾಧ್ಯತೆಯಿದೆ. ಗುಂಡಿನ ದಾಳಿ ನಡೆದ ಜಾಗ ಜನನಿಬಿಡ ಪ್ರದೇಶವಾಗಿತ್ತು. ಗುಂಡಿನ ಶಬ್ದ ಕೇಳುತ್ತಿದ್ದಂತೆ ಜನರು ದಿಕ್ಕಾಪಾಲಾಗಿ ಓಡಿದ್ದಾರೆ. ಉಗ್ರಗಾಮಿ ಸಂಘಟನೆ ಹಮಾಸ್‌ಗೆ ಶಸ್ತ್ರಾಸ್ತ್ರಗಳನ್ನು ಕೈಬಿಟ್ಟು ಶರಣಾಗಬೇಕು ಇಲ್ಲದೇ ಇದ್ದರೆ ಸಂಪೂರ್ಣ ನಾಶಪಡಿಸಲಾಗುವುದು ಎಂದು ಇಸ್ರೇಲ್ ರಕ್ಷಣಾ ಸಚಿವ ಇಸ್ರೇಲ್ ಕಾಟ್ಜ್ ಪ್ಯಾಲೆಸ್ಟೀನಿಯನ್ ಎಚ್ಚರಿಕೆ ನೀಡಿದ ಕೆಲವೇ ಗಂಟೆಗಳಲ್ಲಿ ಈ ಗುಂಡಿನ ದಾಳಿ ನಡೆದಿದೆ.

ನೇಪಾಳದಲ್ಲಿ ಸಾಮಾಜಿಕ ಮಾಧ್ಯಮ ಬ್ಯಾನ್ ವಿರುದ್ಧ ಪ್ರತಿಭಟನೆ ಪೊಲೀಸರ ಗುಂಡಿಗೆ 19 ಮಂದಿ ಸಾವು, ಗೃಹ ಸಚಿವ ರಾಜೀನಾಮೆ

ಕಠ್ಮಂಡು: ನೇಪಾಳ ಗೃಹ ಸಚಿವ ರಮೇಶ್ ಲೇಖಕ್ ತಮ್ಮ ಸ್ಥಾನಕ್ಕೆ ದಿಢೀರ್ ರಾಜೀನಾಮೆ ನೀಡಿದ್ದಾರೆ. ಫೇಸ್‌ಬುಕ್, ಎಕ್ಸ್, ಯೂಟ್ಯೂಬ್ ನಿಷೇಧಿಸಿರುವುದನ್ನು ವಿರೋಧಿಸಿ ನೇಪಾಳದಾದ್ಯಂತ ಸರ್ಕಾರದ ವಿರುದ್ಧ ವ್ಯಾಪಕ ಪ್ರತಿಭಟನೆ ನಡೆಯುತ್ತಿದೆ. ಪ್ರತಿಭಟನೆ ಹಿಂಸಾಚಾರಕ್ಕೆ ತಿರುಗಿದ್ದು, 19 ಮಂದಿ ಮೃತಪಟ್ಟಿದ್ದಾರೆ. ಪ್ರಕರಣದ ನೈತಿಕ ಹೊಣೆ ಹೊತ್ತು ಗೃಹ ಸಚಿವ ಸ್ಥಾನಕ್ಕೆ ರಮೇಶ್ ಅವರು ರಾಜೀನಾಮೆ ಸಲ್ಲಿಸಿದ್ದಾರೆ.

ಸೋಮವಾರ ಸಂಜೆ ನಡೆದ ಸಂಪುಟ ಸಭೆಯಲ್ಲಿ ಅವರು ಪ್ರಧಾನಿ ಕೆ.ಪಿ. ಶರ್ಮಾ ಓಲಿ ಅವರಿಗೆ ತಮ್ಮ ರಾಜೀನಾಮೆ ಪತ್ರವನ್ನು ಸಲ್ಲಿಸಿದ್ದಾರೆ ಎಂದು ಹಿರಿಯ ಸಚಿವರೊಬ್ಬರು ತಿಳಿಸಿದ್ದಾರೆ. ಯುವಕರು ರೀಲ್ಸ್ ಮಾಡುವುದಕ್ಕೆ ಸರ್ಕಾರ ಕಡಿವಾಣ ಹಾಕಿದ ಬೆನ್ನಲ್ಲೇ ಯುವಜನತೆ ಬೀದಿಗಿಳಿದು ಪ್ರಶ್ನೆಗಳನ್ನು ಕೇಳಲು ಪ್ರಾರಂಭಿಸಿದೆ. ಭ್ರಷ್ಟಾಚಾರದ ಬಗ್ಗೆ ಮಾತನಾಡಲು ಪ್ರಾರಂಭಿಸಿದ್ದು ಉದ್ಯೋಗಗಳು ಎಲ್ಲಿವೆ ಎಂದು ಕೇಳಲು ಪ್ರಾರಂಭಿಸಿದ್ದಾರೆ. ಸರ್ಕಾರವು ಸೈನ್ಯವನ್ನು ನಿಯೋಜಿದ್ದು ಕರ್ಫ್ಯೂ ವಿಧಿಸಿದೆ.

ಅಣಬೆ ತಿನ್ನಿಸಿ ಕೊಲೆ: ಮಹಿಳೆಗೆ ಜೀವಾವಧಿ ಶಿಕ್ಷೆ ವಿಧಿಸಿದ ಕೋರ್ಟ್



ಸಿಡ್ನಿ: ತನ್ನ ಪತಿಯ ಮೂವರು ಸಂಬಂಧಿಕರನ್ನು ಕೊಲೆ ಮಾಡಿದ ಆರೋಪ ಪ್ರಕರಣದಲ್ಲಿ ದೋಷಿಯಾಗಿರುವ ಎರಿಕ್ ಪ್ಯಾಟರ್ಸನ್ ಎಂಬ ಮಹಿಳೆಗೆ ಆಸ್ಟ್ರೇಲಿಯಾ ನ್ಯಾಯಾಲಯವು ಜೀವಾವಧಿ ಶಿಕ್ಷೆ ವಿಧಿಸಿ ತೀರ್ಪು ನೀಡಿದೆ. ವಿಕ್ಟೋರಿಯನ್ ಸುಪ್ರೀಂಕೋರ್ಟ್ ನ್ಯಾ. ಕ್ರಿಸ್ಟೋಫರ್ ಬೀಲೆ, ಎರಿಕ್ ಮಾಡಿರುವ ಅಪರಾಧವು ವಿಶ್ವಾಸಘಾತವೂ ಹೌದು ಎಂದಿದ್ದಾರೆ. ದೋಷಿ ಎರಿಕ್, ತಮ್ಮಿಂದ ದೂರವಾಗಿದ್ದ ಪತಿ ಸೈಮನ್ ಪ್ಯಾಟರ್ಸನ್‌ರನ್ನು ಕೊಲ್ಲಲು ಸಂಚು ಮಾಡಿದ್ದಳು. ಅದರಂತೆ, 2023ರ ಜುಲೈನಲ್ಲಿ ಸೈಮನ್, ಅವರ ಅಮ್ಮ, ಅಪ್ಪ, ಚಿಕ್ಕಮ್ಮ, ಚಿಕ್ಕಪ್ಪನನ್ನು ಊಟಕ್ಕೆ ಆಹ್ವಾನಿಸಿದ್ದಳು. ಮನೆಗೆ ಕರೆಯುವ ವೇಳೆ, ತನಗೆ ಕ್ಯಾನ್ಸರ್ ಇದೆ. ಆ ವಿಚಾರವನ್ನು ತನ್ನ ಇಬ್ಬರು ಮಕ್ಕಳಿಗೆ ತಿಳಿಸುವುದು ಹೇಗೆ ಎಂಬುದೇ ಗೊತ್ತಾಗುತ್ತಿಲ್ಲ. ಅದಕ್ಕೆ ನಿಮ್ಮ ಸಲಹೆ ಬೇಕಿದೆ ಎಂದು ಹೇಳಿ ನಂಬಿಸಿದ್ದಳು ಎನ್ನಲಾಗಿದೆ. ಸೈಮನ್ ಹೊರತುಪಡಿಸಿ ಉಳಿದವರು ಮನೆಗೆ ಊಟಕ್ಕೆ ಹೋಗಿದ್ದರು. ಮೊದಲೇ ಮಾಡಿಕೊಂಡಿದ್ದ ಯೋಜನೆಯಂತೆ ವಿಷಪೂರಿತ ಅಣಬೆ ಸೇರಿಸಿ ತಯಾರಿಸಿದ್ದ ಆಹಾರವನ್ನು ಅವರಿಗೆ ಬಡಿಸಿದ್ದಳು. ಆ ವೇಳೆ, ಗೇಲ್ ಪ್ಯಾಟರ್ಸನ್, ಡಾನ್ ಪ್ಯಾಟರ್ಸನ್ ಮತ್ತು ಗೇಲ್ ಸಹೋದರಿ ಹೀದರ್ ವಿಲ್ಕಿನ್ಸನ್ ಅವರು ಮೃತಪಟ್ಟಿದ್ದರು.

ಬೆಳೆ ನಷ್ಟ ಪರಿಹಾರಕ್ಕೆ ಆಗ್ರಹಿಸಿ ಪ್ರತಿಭಟನೆ



ಕಣಿವೆ ಗ್ರಾಮದ ಉಪವಲಯ ಅರಣ್ಯಾಧಿಕಾರಿ ಕಚೇರಿ ಮುಂಭಾಗ ಕೃಷಿಕರು ಪ್ರತಿಭಟನೆ ನಡೆಸಿದರು.

ಮಡಿಕೇರಿ,ಸೆ.8–ಕಾಡಾನೆಗಳಿಂದ ನಾಶವಾದ ಕೃಷಿ ಬೆಳೆಗಳಿಗೆ ಅರಣ್ಯ ಇಲಾಖೆ ಅಧಿಕಾರಿಗಳು ಬೆಳೆ ನಷ್ಟ ಪರಿಹಾರ ಕೊಡಿಸುವಲ್ಲಿ ವಿಫಲರಾಗಿದ್ದಾರೆ ಎಂದು ಆರೋಪಿಸಿ ಕಣಿವೆ ಸುತ್ತಮುತ್ತಲಿನ ಕೃಷಿಕರು ಕಣಿವೆ ಗ್ರಾಮದ ಉಪವಲಯ ಅರಣ್ಯಾಧಿಕಾರಿ ಕಚೇರಿ ಮುಂಭಾಗ ಜಮಾಯಿಸಿ ಅಸಮಾಧಾನ ವ್ಯಕ್ತಪಡಿಸಿ ಪ್ರತಿಭಟನೆ ನಡೆಸಿದರು.

ಕಣಿವೆ ಅರಣ್ಯ ವ್ಯಾಪ್ತಿಯಲ್ಲಿನ 6ನೇ ಹೊಸಕೋಟೆ, ಸೀಗೆಹೊಸೂರು, ಚಿನ್ನೇನಹಳ್ಳಿ, ಮರೂರು, ಚೈನ್‌ಗೇಟ್, ಗಂಗಾಕಲ್ಯಾಣ, ಜೇನುಕಲ್ಲು ಬೆಟ್ಟ, ಹೆಬ್ಬಾಲೆ, ಮರೂರು, ಮದಲಾಪುರ, ಹುದುಗೂರು ಮೊದಲಾದ ಕಡೆಗಳಲ್ಲಿ ಕಾಡಾನೆಗಳ ಹಾವಳಿ ಮಿತಿ ಮೀರಿದೆ. ಕಾಡಾನೆಗಳಿಂದಾಗಿ ಸಾಲ ಮಾಡಿ ಬೆಳೆದ ಬೆಳೆಗಳು ನಮ್ಮ ಕೈ ಸೇರುತ್ತಿಲ್ಲ. ಅಪಾರ ಪ್ರಮಾಣದ ನಷ್ಟ ಸಂಭವಿಸುತ್ತಿದ್ದರೂ ಕೂಡ ಅರಣ್ಯ ಇಲಾಖೆ ಸೂಕ್ತ ಪರಿಹಾರ ನೀಡುತ್ತಿಲ್ಲ ಎಂದು ಕೃಷಿಕರಾದ ಅರುಣಕುಮಾರ್, ಲೋಕೇಶ್, ಚನ್ನಯ್ಯ, ಶಿವರುದ್ರಪ್ಪ, ದೇವರಾಜ್, ಸುಂದರೇಶ್, ಗೌರಮ್ಮ ಮೊದಲಾದವರು ಅಳಲು ತೋಡಿಕೊಂಡರು. ಕಳೆದ ವರ್ಷದ ಮುಂಗಾರಿನಲ್ಲಿ ಬೆಳೆದ ಭತ್ತದ ಫಸಲು ಸಂಪೂರ್ಣ ಕಾಡಾನೆಗಳ ಪಾಲಾಗಿದ್ದರೂ ಕೂಡ ಇದುವರೆಗೂ ನಯಾಪೈಸೆ ಪರಿಹಾರದ ಹಣ ಬಂದಿಲ್ಲ. ಕಾಡಾನೆಗಳ ಹಾವಳಿಯನ್ನು ಶಾಶ್ವತವಾಗಿ ತಡೆಯುವ ಯೋಜನೆ ರೂಪಿಸಬೇಕು. ನಷ್ಟಕ್ಕೊಳಗಾದ ರೈತರಿಗೆ ಕೂಡಲೇ ಪರಿಹಾರ ನೀಡಬೇಕೆಂದು ಕೃಷಿಕರು ಆಗ್ರಹಿಸಿದರು.

ಕೃಷಿಕರ ಅಳಲು ಆಲಿಸಿದ ಅರಣ್ಯ ಇಲಾಖಾಧಿಕಾರಿಗಳು ಮನವಿ ಪತ್ರ ಸ್ವೀಕರಿಸಿ, ಪರಿಹಾರದ ಕುರಿತು ಮೇಲಾಧಿಕಾರಿಗಳ ಗಮನಕ್ಕೆ ತಂದು ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಶಿಸ್ತುಬದ್ಧ ಜೀವನ ನಡೆಸುವ ಮೂಲಕ ಶೈಕ್ಷಣಿಕ ಗುರಿ ಸಾಧಿಸಿ



ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸ್ಥಳೀಯ ಸಂಸ್ಥೆ ದೇಶಭಕ್ತಿ ಗೀತ ಗಾಯನ ಸ್ಪರ್ಧೆ ನಡೆಸಿತು.

ಮಡಿಕೇರಿ, ಸೆ.8–ವಿದ್ಯಾರ್ಥಿಗಳು ಶಿಸ್ತುಬದ್ಧ ಜೀವನ ನಡೆಸುವ ಮೂಲಕ ಶೈಕ್ಷಣಿಕ ಗುರಿ ಸಾಧಿಸಬೇಕು ಎಂದು ಸಮಾಜ ಸೇವಕಿ ಜಯಂತಿ ಶೆಟ್ಟಿ ಕರೆ ನೀಡಿದ್ದಾರೆ. ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸ್ಥಳೀಯ ಸಂಸ್ಥೆ ಮಡಿಕೇರಿ ವಿಭಾಗದ ವತಿಯಿಂದ ನಗರದ ಸ್ಕೌಟ್ಸ್ ಮತ್ತು ಗೈಡ್ಸ್ ಭವನದಲ್ಲಿ ನಡೆದ ಸ್ಥಳೀಯ ಸಂಸ್ಥೆ ಮಟ್ಟದ ದೇಶಭಕ್ತಿ ಗೀತ ಗಾಯನ ಸ್ಪರ್ಧೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಶೈಕ್ಷಣಿಕ ಪ್ರಗತಿಯ ಜೊತೆಯಲ್ಲಿ ಪಠ್ಯೇತರ ಚಟುವಟಿಕೆಯಲ್ಲೂ ತೊಡಗಿಸಿಕೊಳ್ಳಬೇಕು. ಸ್ಕೌಟ್ಸ್ ಮತ್ತು ಗೈಡ್ಸ್, ಸೇವಾದಳ, ಎನ್‌ಸಿಸಿ, ಕ್ರೀಡೆ ಮತ್ತಿತರ ಚಟುವಟಿಕೆಗಳು ವಿದ್ಯಾರ್ಥಿಗಳಲ್ಲಿ ಶಿಸ್ತನ್ನು ಬೆಳೆಸುತ್ತದೆ. ಇಲ್ಲಿ ರೂಢಿಸಿಕೊಂಡ ಶಿಸ್ತು ಮುಂದೆ ಉತ್ತಮ ಜೀವನಕ್ಕೆ ಸಹಕಾರಿಯಾಗಲಿದೆ ಎಂದರು.

ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ಜಿಲ್ಲಾ ಪ್ರಧಾನ ಆಯುಕ್ತ ಕೆ.ಟಿ.ಬೇಬಿ ಮ್ಯಾಥ್ಯು ಮಾತನಾಡಿ, ವಿದ್ಯಾರ್ಥಿಗಳು ದೇಶಭಕ್ತಿಯನ್ನು ಬೆಳೆಸಿಕೊಳ್ಳಬೇಕು ಮತ್ತು ಶಿಸ್ತನ್ನು ಅಳವಡಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಸ್ಕೌಟ್ಸ್ ಮತ್ತು ಗೈಡ್ಸ್ ಸ್ಥಳೀಯ ಸಂಸ್ಥೆ ಮಡಿಕೇರಿಯ ಅಧ್ಯಕ್ಷ ಈರಮಂಡ ಹರಿಣಿ ವಿಜಯ್ ಇಂದಿನ ಮಕ್ಕಳೇ ಮುಂದಿನ ಪ್ರಜೆಗಳು. ದೇಶದ ಉಜ್ವಲ ಭವಿಷ್ಯಕ್ಕಾಗಿ ವಿದ್ಯಾರ್ಥಿಗಳು ದೇಶಾಭಿಮಾನದೊಂದಿಗೆ ಗುರಿ ಸಾಧಿಸಬೇಕು. ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆ ಇದಕ್ಕೆ ಪೂರಕವಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದು ತಿಳಿಸಿದರು. ದೇಶಭಕ್ತಿ ಗಾಯನದ ಮೂಲಕ ಅವರು ವಿದ್ಯಾರ್ಥಿಗಳ ಗಮನ ಸೆಳೆದರು.

ಸ್ಕೌಟ್ಸ್ ವಿಭಾಗದಲ್ಲಿ ಸಂತ ಮೈಕಲರ ಶಾಲೆ ಪ್ರಥಮ, ಸಂತ ಜೋಸೆಫರ ಶಾಲೆ ದ್ವಿತೀಯ, ಗೈಡ್ಸ್ ವಿಭಾಗದಲ್ಲಿ ಸಂತ ಜೋಸೆಫರ ಶಾಲೆಯ 'ಬಿ' ತಂಡ ಪ್ರಥಮ, ಸಂತ ಮೈಕಲರ ಶಾಲೆಯ ಇಂಗ್ಲೀಷ್ ಮಾಧ್ಯಮ ವಿಭಾಗ ದ್ವಿತೀಯ, ಬುಲ್ ಬುಲ್ ವಿಭಾಗದಲ್ಲಿ ಸಂತ ಜೋಸೆಫರ ಶಾಲೆ ಪ್ರಥಮ ಬಹುಮಾನ ಗಳಿಸಿತು.

ಸಂಸ್ಥೆಯ ಜಿಲ್ಲಾ ಆಯುಕ್ತ ಜಿಮ್ಮಿ ಸಿಕ್ವೇರಾ, ಜಿಲ್ಲಾ ತರಬೇತಿ ಆಯುಕ್ತ ರಂಜಿತ್ ಕೆ.ಯು, ಮೈಥಿಲಿ ರಾವ್, ಸಹಾಯಕ ಆಯುಕ್ತ ಸುಲೋಚನ, ಖಜಾಂಚಿ ಎಂ.ಎಸ್.ಶಾಂತಿ, ಸ್ಥಾನಿಕ ಆಯುಕ್ತ ಹೆಚ್.ಆರ್.ಮುತ್ತಪ್ಪ, ಕಾರ್ಯದರ್ಶಿಗಳಾದ ವಸಂತಿ, ನಳಿನಿ ಸುವರ್ಣ, ಸಹ ಕಾರ್ಯದರ್ಶಿಗಳಾದ ಬೊಳ್ಳಜಿರ ಬಿ.ಅಯ್ಯಪ್ಪ ಸುಚಿತ ಕಾವೇರಪ್ಪ, ಸದಸ್ಯರಾದ ಗುಲ್‌ಷನ್, ಸೂರಜ್ ತಿಮ್ಮಯ್ಯ, ಲಕ್ಷ್ಮೀ ಮತ್ತಿತರರು ಉಪಸ್ಥಿತರಿದ್ದರು.

ನರ್ಸ್ ವರ್ಗಾವಣೆಗೆ ಆಗ್ರಹಿಸಿ ಪ್ರತಿಭಟನೆ



ಮಡಿಕೇರಿ, ಸೆ.8– ಸರ್ಕಾರಿ ಆಸ್ಪತ್ರೆಗೆ ಬರುವ ಬೆಟ್ಟದಳ್ಳಿ ಗ್ರಾಮಸ್ಥರಿಗೆ ಹಿರಿಯ ನರ್ಸ್‌ವೊಬ್ಬರು ಬೆದರಿಕೆ ಹಾಕುತ್ತಿದ್ದಾರೆಂದು ಆರೋಪಿಸಿ ಕುಮಾರಲಿಂಗೇಶ್ವರ ವಿದ್ಯಾ ಸಂಸ್ಥೆ ಆಡಳಿತ ಮಂಡಳಿ ಮತ್ತು ಗ್ರಾಮಸ್ಥರು ಸೋಮವಾರಪೇಟೆ ತಾಲೂಕು ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಬೆಟ್ಟದಳ್ಳಿ ಗ್ರಾಮಾಭಿವೃದ್ಧಿ ಮಂಡಳಿ ಅಧ್ಯಕ್ಷ ಸಂಪತ್, ವಿದ್ಯಾಸಂಸ್ಥೆಯ ಕಾರ್ಯದರ್ಶಿ ಗಿರೀಶ್ ಅವರುಗಳ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿದ ಗ್ರಾಮಸ್ಥರು ಶುಶ್ರೂಷಕಿ ಅವರನ್ನು ಕೂಡಲೇ ವರ್ಗಾವಣೆ ಮಾಡಬೇಕೆಂದು ಆಗ್ರಹಿಸಿದರು.

ಏಕಾಏಕಿ ಶುಶ್ರೂಷಕಿ ವಿರುದ್ಧ ಇಲಾಖಾ ಕ್ರಮ ಕೈಗೊಳ್ಳಲು ಸಾಧ್ಯವಿಲ್ಲ. ದೂರಿನ ಬಗ್ಗೆ ಮೇಲಾಧಿಕಾರಿಗಳಿಗೂ ತಿಳಿಸಲಾಗಿದೆ ಆದೇಶ ಬಂದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಆರೋಗ್ಯಾಧಿಕಾರಿ ಸತೀಶ್ ಕುಮಾರ್ ಸಮಜಾಯಿಷಿಕೆಗೆ ಅಸಮಾಧಾನ ವ್ಯಕ್ತಪಡಿಸಿದ ಪ್ರತಿಭಟನಾಕಾರರು, ಗ್ರಾಮದ ಜನರು ಆಸ್ಪತ್ರೆಗೆ ಬಂದು ಚಿಕಿತ್ಸೆ ಪಡೆಯಲು ಹಿಂಜರಿಯುತ್ತಿದ್ದಾರೆ. ಶುಶ್ರೂಷಕಿಯನ್ನು ವರ್ಗಾವಣೆ ಮಾಡದಿದ್ದರೆ, ಅಹೋರಾತ್ರಿ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು. ಈ ಹಿನ್ನೆಲೆಯಲ್ಲಿ ನರ್ಸ್ ಅನ್ನು ವರ್ಗಾವಣೆಗೊಳಿಸಲಾಗುವುದು ಎಂದು ಡಿಹೆಚ್‌ಓ ಭರವಸೆ ನೀಡಿದ ನಂತರ ಪ್ರತಿಭಟನೆ ಹಿಂಪಡೆಯಲಾಯಿತು.

ತನಿಖೆಗೆ ಆದೇಶ: ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಶಾಸಕ ಡಾ. ಮಂತರ್ ಗೌಡ ಪ್ರತಿಭಟನಾಕಾರರ ಬೇಡಿಕೆಗಳನ್ನು ಆಲಿಸಿ, ಆಕೆಯ ವಿರುದ್ಧ ಸೂಕ್ತ ತನಿಖೆ ನಡೆಸಿ ವಾರದ ಒಳಗೆ ಮಾಹಿತಿ ನೀಡುವಂತೆ ಡಿಹೆಚ್‌ಓ ಅವರಿಗೆ ಶಾಸಕರು ಆದೇಶಿಸಿದರು. ತಹಶೀಲ್ದಾರ್ ಕೃಷ್ಣಮೂರ್ತಿ, ಟಿಹೆಚ್‌ಓ ಡಾ.ಇಂದೂಧರ್ ಶಾಸಕರೊಂದಿಗಿದ್ದರು.

ರಾಜ್ಯಮಟ್ಟದ ಉತ್ತಮ ಶಿಕ್ಷಕಿ ಪ್ರಶಸ್ತಿಗೆ ಆಯ್ಕೆ



ಸುಂಟಿಕೊಪ್ಪ,ಸೆ.8– ಸಂತ ಅಂತೋಣಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯಿನಿ ಜೋವಿಟಾವಾಸ್ ಅವರು ರಾಜ್ಯಮಟ್ಟದ ಉತ್ತಮ ಶಿಕ್ಷಕಿ ಪ್ರಶಸ್ತಿಗೆ ಭಾಜನರಾಗಿದ್ದಾರೆ. ರಾಜ್ಯ ಅನುದಾನಿತ ಶಾಲಾ ಶಿಕ್ಷಕರ ಸಂಘದ ವತಿಯಿಂದ ರಾಜ್ಯಮಟ್ಟದ ಪ್ರಶಸ್ತಿಗೆ ಭಾಜನರಾಗಿರುವ ಜೋವಿಟಾವಾಸ್ ಅವರಿಗೆ ಸೆ.14ರಂದು ಹಾವೇರಿ ಜಿಲ್ಲೆಯ ರಾಣಿಬೆನ್ನೂರಿನ ಮೃತ್ಯುಂಜಯ ಸಭಾ ಭವನದಲ್ಲಿ ಪ್ರಶಸ್ತಿ ಪ್ರಧಾನ ಮಾಡಲಾಗುತ್ತದೆ.

ಆದಿ ಬೈತೂರು ದೇವಾಲಯದಲ್ಲಿ ಅಭಿವೃದ್ಧಿಗೆ ಕೈ ಜೋಡಿಸಲು ಮನವಿ



ಶ್ರೀ ಆದಿ ಬೈತೂರಪ್ಪ ಭಕ್ತ ಜನಸಂಘದ ಪತ್ರಿಕಾಗೋಷ್ಠಿ.

ವಿರಾಜಪೇಟೆ, ಸೆ.8– ಕೊಡಗು ಜಿಲ್ಲೆಯ ಬಹುತೇಕ ದೇವರುಗಳ ಮೂಲ ಸ್ಥಾನ ಕೇರಳವಾಗಿದ್ದು, ಕೇರಳ ಹಾಗೂ ಕೊಡಗು ಜಿಲ್ಲೆಗೆ ಅವಿನಾಭಾವ ಸಂಬಂಧ ಇರುವುದರಿಂದ ಕೇರಳದ ಉಳಿಕಲ್ ತಾಲೂಕಿನಲ್ಲಿರುವ ಆದಿ ಬೈತೂರು ದೇವಾಲಯದಲ್ಲಿ ಪುಗ್ಗೆರ ಕುಟುಂಬಸ್ಥರ ನೇತೃತ್ವದಲ್ಲಿ ಶ್ರೀ ಆದಿ ಬೈತೂರಪ್ಪ ಭಕ್ತ ಜನ ಸಂಘದ ಮೂಲಕ ಅನೇಕ ಅಭಿವೃದ್ಧಿ ಕಾರ್ಯಗಳನ್ನು ನಡೆಸಲಾಗಿದೆ ಎಂದು ತಕ್ಕ ಮುಖ್ಯಸ್ಥ ಪುಗ್ಗೆರ ಪೊನ್ನಪ್ಪ ತಿಳಿಸಿದರು.

ವಿರಾಜಪೇಟೆ ಪ್ರೆಸ್‌ಕ್ಲಬ್‌ನಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪುಗ್ಗೆರ ಕುಟುಂಬವು ಅನಾದಿ ಕಾಲದಿಂದಲೂ ಕ್ಷೇತ್ರದ ತಕ್ಕರಾಗಿ ಕಾರ್ಯ ನಿರ್ವಹಿಸುತ್ತಿದ್ದು ಕೊಡಗಿನ ಭಕ್ತರಿಂದ ಧನಸಹಾಯ ಪಡೆದು ಹಬ್ಬದ ಸಮಯದಲ್ಲಿ ಕೊಡಗಿನಿಂದ ಬರುವ ಭಕ್ತರಿಗೆ ತಂಗಲು ಬೈತೂರಪ್ಪ ಭವನವನ್ನು ನಿರ್ಮಿಸಲಾಗಿದೆ ಎಂದರು.

ಭವನದ ನಿರ್ವಹಣೆಯನ್ನು ಆದಿ ಬೈತೂರಪ್ಪ ಭಕ್ತ ಜನಸಂಘ ನಿರ್ವಹಿಸುತ್ತಿದೆ. ಭಕ್ತ ಜನ ಸಂಘದಿಂದ ದೇವಾಲಯಕ್ಕೆ ತೆರಳುವ ರಸ್ತೆಗೆ ಕಲ್ಲು ಹಾಕಲಾಗಿದೆ. ದೇವಸ್ಥಾನದಿಂದ ಹೊಳೆಗೆ ತೆರಳುವ ರಸ್ತೆಗೆ ಇಂಟರ್‌ಲಾಕ್ ವ್ಯವಸ್ಥೆ, ಹೊಳೆಗೆ ಇಳಿಯಲು ಮೆಟ್ಟಿಲುಗಳ ವ್ಯವಸ್ಥೆ, ಭವನದ ಸುರಕ್ಷತೆಗಾಗಿ ಸಿಸಿ ಟಿ.ವಿ ಅಳವಡಿಕೆ, ಶೌಚಗೃಹಗಳು, ಅಂದಾಜು 10 ಲಕ್ಷ ವೆಚ್ಚದಲ್ಲಿ ಬೇಟೆ ಕುರಮಗನ್ ದೇವಾಲಯದ ಜೀರ್ಣೋದ್ಧಾರ ಕಾರ್ಯಗಳನ್ನು ಮಾಡಲಾಗಿದೆ ಎಂದು ಹೇಳಿದರು.

ಶ್ರೀ ಆದಿ ಬೈತೂರಪ್ಪ ಭಕ್ತ ಜನಸಂಘ ಅಧ್ಯಕ್ಷ ಅಮ್ಮಣಕುಟ್ಟಂಡ ಕಿರಣ್ ಸುಬ್ರಮಣಿ ಮಾತನಾಡಿ, ಮುಂದಿನ ದಿನಗಳಲ್ಲಿ ಹಲವಾರು ಅಭಿವೃದ್ಧಿ ಕಾರ್ಯಗಳನ್ನು ನಡೆಸಲು ಉದ್ದೇಶಿಸಲಾಗಿದ್ದು ಬೈತೂರು ದೇವಾಲಯದ ಬಲಪೌಳಿ ಶಿಥಿಲಗೊಂಡಿದ್ದು ಅದರ ಪುನರ್ ನಿರ್ಮಾಣ ಕಾರ್ಯ, ಭೋಜನ ಮಂದಿರದ ಕಾಮಗಾರಿ, ದೇವಾಲಯದ ಉತ್ತರ ಭಾಗದಲ್ಲಿರುವ ಚಾಮುಂಡಿ ದೇವರ ಗೋಪುರ(ವಡಕನಡೆ)ವನ್ನು ನಿರ್ಮಾಣ ಮಾಡುವ ಕಾರ್ಯಗಳನ್ನು ಕೈಗೆತ್ತಿಕೊಂಡಿದ್ದು 30ರಿಂದ40 ಲಕ್ಷಅಂದಾಜು ವೆಚ್ಚವಾಗುವುದು. ಅಭಿವೃದ್ಧಿ ಕಾರ್ಯಗಳಿಗೆ ಕೊಡಗಿನ ಭಕ್ತರು ಉದಾರ ಧನಸಹಾಯ ಮಾಡುವಂತೆ ಕೋರಿದರು. ಧನಸಹಾಯ ಕೊಡಲು ಇಚ್ಛಿಸುವವರು ಡಿಸಿಸಿ ಬ್ಯಾಂಕ್ ಅಕೌಟ್ ಸಂಖ್ಯೆ 121004343777 ಶ್ರೀ ಆದಿ ಬೈತೂರಪ್ಪ ಭಕ್ತ ಜನಸಂಘ ಅಕೌಂಟ್‌ಗೆ ನೇರವಾಗಿ ನೀಡಬಹುದಾಗಿದೆ. ಹೆಚ್ಚಿನ ವಿವರಗಳಿಗೆ 9686355789 ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸಬಹುದಾಗಿದೆ ಎಂದರು.

ಗೋಷ್ಠಿಯಲ್ಲಿ ಸಂಚಾಲಕ ಚೇಂದಂಡ ಶಿವಕುಮಾರ್, ಕಾರ್ಯದರ್ಶಿ ಮಾಳೇಟಿರ ಅಜಿತ್ ಪೂವಣ್ಣ ನಿರ್ದೇಶಕ ಮಂಡೇಪಂಡ ರಿಶು ಕಾರ್ಯಪ್ಪ ಉಪಸ್ಥಿತರಿದ್ದರು.

ಮೇರಿ ಮಾತೆಯ ಜಯಂತಿ ಆಚರಣೆ



ಮೇರಿ ಮಾತೆಯ ಜಯಂತಿಯನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಿದರು.

ವಿರಾಜಪೇಟೆ: ಪಟ್ಟಣದ ಸಂತ ಅನ್ನಮ್ಮ ಚರ್ಚ್‌ನಲ್ಲಿ ಯೇಸುವಿನ ತಾಯಿಯವರಾದ ಮೇರಿ ಮಾತೆಯ ಜಯಂತಿಯನ್ನು ಶ್ರದ್ಧಾ ಭಕ್ತಿಯಿಂದ ನೆರವೇರಿಸಲಾಯಿತು.

ಮೇರಿ ಹಬ್ಬದ ಹಿಂದಿನ 9 ದಿವಸಗಳ ಕಾಲ ಚರ್ಚ್‌ನಲ್ಲಿ ನವೇನ ಪ್ರಾರ್ಥನೆ ಜರುಗಿತು. ಈ ಸಂದರ್ಭದಲ್ಲಿ ವಿಶೇಷವಾದ ಬಲಿ ಪೂಜೆ, ಪ್ರಸಂಗ, ಪ್ರಬೋಧನೆಗಳು ಜರುಗಿದವು. ಮಾತೆ ಮರಿಯಮ್ಮನವರ ಗೌರವಾರ್ಥವಾಗಿ ಚರ್ಚ್ ಒಳಾವರಣದಲ್ಲಿರುವ ಮಾತೆ ಮೇರಿಯಮ್ಮ ಪ್ರತಿಮೆಗೆ ಪುಷ್ಪಾರ್ಚನೆಯನ್ನು ಧರ್ಮ ಗುರುಗಳು ಹಾಗೂ ನೆರೆದಿದ್ದ ಭಕ್ತಾದಿಗಳು ಸಲ್ಲಿಸಿದರು. ಒಂಬತ್ತು ದಿವಸಗಳ ವಿಶೇಷ ಪ್ರಾರ್ಥನೆ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಸಂತ ಅನ್ನಮ್ಮ ದೇವಾಲಯ ವ್ಯಾಪ್ತಿಯ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

ಮಾತೆ ಮೇರಿಯಮ್ಮ ಹಬ್ಬದ ದಿನವಾದ ಬೆಳಿಗ್ಗೆಯಿಂದಲೇ ಚರ್ಚ್‌ನಲ್ಲಿ ಧಾರ್ಮಿಕ ಕಾರ್ಯಕ್ರಮಗಳು ಆರಂಭಗೊಂಡವು. ಸಂತ ಅನ್ನಮ್ಮ ದೇವಾಲಯದ ಪ್ರಧಾನ ಗುರುಗಳು ಹಾಗೂ ವಿದ್ಯಾಸಂಸ್ಥೆಗಳ ವ್ಯವಸ್ಥಾಪಕ ರೆ.ಫಾ.ಜೇಮ್ಸ್ ಡೊಮಿನಿಕ್ ಹಾಗೂ ಸಹಾಯಕ ಗುರುಗಳಾದ ರೆ.ಫಾ. ಅಭಿಲಾಶ್ ನೇತೃತ್ವದಲ್ಲಿ ಪೂಜಾ ಕಾರ್ಯಕ್ರಮಗಳು ಜರುಗಿದವು. ಧರ್ಮಗುರುಗಳು ಹಬ್ಬದ ಪ್ರಯುಕ್ತ ವಿಶೇಷವಾಗಿ ಆಡಂಬರದ ಗಾಯನ ಬಲಿಪೂಜೆಯನ್ನು, ನೆರವೇರಿಸಿದರು.

ನಂತರದಲ್ಲಿ ನವೇನಾ ಪ್ರಾರ್ಥನೆ, ಧರ್ಮ ಗುರುಗಳಿಂದ ಪ್ರವಚನ ಜರುಗಿತು. ನೆರೆದಿದ್ದ ಭಕ್ತರು ಮಾತೆ ಮೇರಿಯಮ್ಮ ಅವರ ಪ್ರತಿಮೆಗೆ ಪುಷ್ಪಾರ್ಚನೆಯನ್ನು ಸಲ್ಲಿಸಿದರು. ಪಟ್ಟಣ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು. ಕನ್ಯಾ ಸ್ತ್ರೀಯರು, ದೇವಸ್ಥಾನದ ಪಾಲನಾ ಸಮಿತಿಯವರು, ಸಾರ್ವಜನಿಕರು ಉಪಸ್ಥಿತರಿದ್ದರು.

ಪಿ.ಪಿ.ಅಹಮದ್ ಹಾಜಿ ನಿಧನ



ನಾಪೋಕ್ಲು, ಸೆ.8–ಇಲ್ಲಿಯ ಪಟ್ಟಣದಲ್ಲಿ ಹಿರಿಯ ವರ್ತಕರಾದ ಪಿ.ಪಿ.ಅಹಮದ್ ಹಾಜಿ (72) ಸೋಮವಾರ ನಿಧನರಾದರು.

ಮೃತರ ಅಂತಿಮ ಕಾರ್ಯವನ್ನು ಸ್ಥಳೀಯ ಮೊಹಿಯುದ್ದೀನ್ ಜುಮಾ ಮಸೀದಿಯ ಖಬರ್ ಸ್ಥಾನದಲ್ಲಿ ನೆರವೇರಿಸಲಾ ಯಿತು. ಮೃತರು ಪತ್ನಿ, ಇಬ್ಬರು ಪುತ್ರರು ಮತ್ತು ಪುತ್ರಿಯನ್ನು ಸೇರಿದಂತೆ ಅಪಾರ ಬಂಧು ಬಾಂಧವರನ್ನು ಅಗಲಿದ್ದಾರೆ.

ಫೇಸ್ ಬುಕ್‌ನಲ್ಲಿ ಪರಿಚಯವಾದ
ಅಪ್ರಾಪ್ತೆಗೆ ಅತ್ಯಾಚಾರವೆಸಗಿದ್ದ ಆರೋಪಿಗೆ ಸೆರೆವಾಸ



ಚಾಮರಾಜನಗರ, ಸೆ.8–ಫೇಸ್ ಬುಕ್‌ನಲ್ಲಿ ಪರಿಚಯವಾದ ಅಪ್ರಾಪ್ತೆಯನ್ನು ಪ್ರೀತಿಸಿ ಆಕೆಯ ಮೇಲೆ ಅತ್ಯಾಚಾರ ಮಾಡಿದ ಆರೋಪಿ ಯುವಕನಿಗೆ 20 ವರ್ಷ ಕಠಿಣ ಜೈಲು ಶಿಕ್ಷೆ ವಿಧಿಸುವಂತೆ ಅಧಿಕ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ತೀರ್ಪು ನೀಡಿದೆ.

ಹನೂರು ತಾಲೂಕಿನ ಚಿಕ್ಕಮಾಲಾಪುರ ಗ್ರಾಮದ ನಾಗೇಂದ್ರ (24) ಶಿಕ್ಷೆಗೊಳಗಾದ ಅಪರಾಧಿ. ಈತ ಎರಡು ವರ್ಷಗಳ ಹಿಂದೆ ಅಪ್ರಾಪ್ತೆ ಬಾಲಕಿಯೊಬ್ಬಳನ್ನ ಫೇಸ್‌ಬುಕ್‌ನಲ್ಲಿ ಪರಿಚಯ ಮಾಡಿಕೊಂಡು, ಪ್ರೀತಿ ಪ್ರೇಮದ ಹೆಸರಿನಲ್ಲಿ ಕರೆದುಕೊಂಡು ಹೋಗಿ ಆಕೆಯ ಮೇಲೆ ಅತ್ಯಾಚಾರ ಎಸಗಿದ್ದ. ಈ ಸಂಬಂಧ ಹನೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಪೋಕ್ಸೋ ಕಾಯ್ದೆಯನ್ವಯ 20 ವರ್ಷಗಳ ಕಠಿಣ ಸಜೆ, 25 ಸಾವಿರ ರೂ. ದಂಡವಿಧಿಸಿ, ನ್ಯಾಯಾಧೀಶ ಎಸ್.ಜೆ. ಕೃಷ್ಣ ತೀರ್ಪು ನೀಡಿದ್ದಾರೆ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ 4 ಲಕ್ಷ ರೂ. ಹಣವನ್ನು ನೊಂದ ಬಾಲಕಿಗೆ ಪರಿಹಾರವಾಗಿ ನೀಡಬೇಕೆಂದು ಆದೇಶಿಸಲಾಗಿದೆ. ಪ್ರಾಸಿಕ್ಯೂಷನ್ ಪರವಾಗಿ ಕೆ. ಯೋಗೇಶ್ ವಾದ ಮಂಡಿಸಿದ್ದರು.

ಕ್ಷುಲ್ಲಕ ವಿಚಾರಕ್ಕೆ ಪತ್ರಕರ್ತನ ಮೇಲೆ ತೀವ್ರ ಹಲ್ಲೆ



ಮಾಜಿ ಸಚಿವ ಎನ್.ಮಹೇಶ್, ಚಿಕ್ಕಮಾಳಿಗೆ ಅವರ ಯೋಗಕ್ಷೇಮ ವಿಚಾರಿಸಿದರು.

ಕೊಳ್ಳೇಗಾಲ, ಸೆ.8–ಪತ್ರಕರ್ತ ಹಾಗೂ ಪಟ್ಟಣದ ಭೀಮನಗರದ ದೊಡ್ಡ ಯಜಮಾನರಾದ ಚಿಕ್ಕಮಾಳಿಗೆರವರ ಮೇಲೆ ವ್ಯಕ್ತಿಯೋರ್ವ ಕ್ಷುಲ್ಲಕ ವಿಚಾರಕ್ಕೆ ಹಲ್ಲೆ ಮಾಡಿ ಕೈ ಮುರಿದಿರುವ ಹಿನ್ನೆಲೆಯಲ್ಲಿ ಕಾಮಗೆರೆಯ ಹೋಲಿ ಕ್ರಾಸ್ ಆಸ್ಪತ್ರೆಯಲ್ಲಿ ದಾಖಲಾಗಿ ಶಸ್ತ್ರಚಿಕಿತ್ಸೆಗೊಳಗಾಗಿರುವ ಘಟನೆ ಜರುಗಿದೆ.

ರಾತ್ರಿ ಪತ್ನಿ ಜೊತೆ ತಿಂಡಿಗಾಗಿ ದೇವಾಂಗ ಪೇಟೆಯ ಹೋಟೆಲ್‌ವೊಂದಕ್ಕೆ ಹೋಗಿದ್ದಾರೆ. ಅಲ್ಲಿ ತಿಂಡಿ ತಿನ್ನುತ್ತಿದ್ದಾಗ ಅಲ್ಲಿಗೆ ಬಂದ ಪಾಳ್ಯ ಗ್ರಾಮದ ರವಿನಾಯಕ ಎಂಬಾತ ಏಕಾಏಕಿ ನಾನು ಭೀಮಾನಗರದವನು, ನನಗೆ ತಿನ್ನಲು ಬೇಗನೆ ತಿಂಡಿಕೊಡು ಎಂದು ಹೋಟೆಲ್‌ನವರೊಡನೆ ಮಾತಿನ ಚಕಮಕಿ ನಡೆಸಿದ್ದಾನೆ. ಅಲ್ಲಿಯೇ ಇದ್ದ ಚಿಕ್ಕಮಾಳಿಗೆ ಆತನ ಬಗ್ಗೆ ವಿಚಾರಿಸಿದಾಗ ಕುಪಿತನಾದ ಆತ ಇದನ್ನು ಕೇಳಲು ನೀನು ಯಾರು ಎಂದು ಹಲ್ಲೆಗೆ ಮುಂದಾಗಿ ಅವರ ಕೈ ಹಿಡಿದು ಬಲವಾಗಿ ತಿರುವಿದಾಗ ಕೈ ಮೂಳೆ ಮುರಿದಿದ್ದು, ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ಕೊಡಿಸಿ, ಹೆಚ್ಚಿನ ಚಿಕಿತ್ಸೆಗೆ ಕಾಮಗೆರೆಯ ಹೋಲಿಕ್ರಾಸ್ ಆಸ್ಪತ್ರೆಗೆ ದಾಖಲಿಸಿದ್ದಾರೆ.

ಪಟ್ಟಣ ಠಾಣೆ ಪಿಎಸ್‌ಐ ವರ್ಷ ಪ್ರಕರಣ ದಾಖಲಿಸಿಕೊಂಡು ಆರೋಪಿಯನ್ನು ವಶಕ್ಕೆ ಪಡೆದು ಠಾಣಾ ಜಾಮೀನಿನ ಮೇಲೆ ಬಿಡುಗಡೆ ಮಾಡಿದ್ದಾರೆ.

ವಿಷಯ ತಿಳಿದು ಮಾಜಿ ಸಚಿವ ಎನ್.ಮಹೇಶ್, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ದೇವರಾಜು ಕಪ್ಪುಸೋಗೆ, ಉಪಾಧ್ಯಕ್ಷ ಡಿ.ನಟರಾಜು, ಖಜಾಂಚಿ ರೇಣುಕೇಶ್, ಗಂಗಾಧರ್, ಎನ್.ರಾಜೇಶ್, ಗೂಳಿಪುರ ನಂದೀಶ್, ತಾಲೂಕು ಅಧ್ಯಕ್ಷ ಡಿ.ಸಿದ್ದರಾಜು, ಉಪಾಧ್ಯಕ್ಷ ಎಂ.ಮರಿಸ್ವಾಮಿ, ಹನೂರು ಸಂಘದ ಗೌರವಾಧ್ಯಕ್ಷ ದೇವರಾಜ ನಾಯ್ಡು, ಕಾಮಗೆರೆ ಪ್ರಕಾಶ್ ಇತರರು ಯೋಗಕ್ಷೇಮ ವಿಚಾರಿಸಿದರು.

ಸ್ಫೋಟಕ ವಸ್ತುಗಳ ಸಂಗ್ರಹ; ಓರ್ವನ ಬಂಧನ

ಚಾಮರಾಜನಗರ: ಕ್ವಾರಿಯೊಂದರಲ್ಲಿ ಅಕ್ರಮವಾಗಿ ಸ್ಫೋಟಕ ವಸ್ತುಗಳನ್ನು ಸಂಗ್ರಹಿಸಿಕೊಂಡಿದ್ದ ಕೇಂದ್ರದ ಮೇಲೆ ಪೊಲೀಸರು ದಾಳಿ ನಡೆಸಿ ಮಾಲು ಸಮೇತ ಆರೋಪಿಯನ್ನು ಬಂಧಿಸಿರುವ ಪ್ರಕರಣ ಅರಕಲವಾಡಿ ಗ್ರಾಮದಲ್ಲಿ ನಡೆದಿದೆ.

ಯಳಂದೂರು ಪಟ್ಟಣದ ನಿವಾಸಿ ಆಕಾಶ್ ಬಂಧಿತ ಆರೋಪಿ. ಈತ ಅರಕಲವಾಡಿ ಗ್ರಾಮದ ಕ್ವಾರಿಯಲ್ಲಿ ವ್ಯವಸ್ಥಾಪಕನಾಗಿ ಕೆಲಸ ನಿರ್ವಹಿಸುತ್ತಿದ್ದು, ಸ್ಫೋಟಕ ವಸ್ತುಗಳನ್ನು ಸಂಗ್ರಹಿಸಿ ಇಟ್ಟುಕೊಂಡಿದ್ದನೆನ್ನಲಾಗಿದೆ. ಖಚಿತ ಮಾಹಿತಿ ಮೇರೆಗೆ ಗ್ರಾಮಾಂತರ ಠಾಣೆಯ ಸಬ್‌ಇನ್‌ಸ್ಪೆಕ್ಟರ್ ರಿಹಾನಾ ಬೇಗಂ ಹಾಗೂ ಸಿಬ್ಬಂದಿ ದಾಳಿ ನಡೆಸಿ, ಪ್ಲಾಸ್ಟಿಕ್ ಚೀಲದಲ್ಲಿ 53 ಜೆಲ್‌ಸಿಕ್‌ಗಳು ಹಾಗೂ 20 ಎಲೆಕ್ಟ್ರಾನಿಕ್ ಡೆಟೋನೇಟರ್ ವಶಕ್ಕೆ ಪಡೆದುಕೊಂಡಿದ್ದಾರೆ. ಗ್ರಾಮಾಂತರ ಠಾಣೆಯಲ್ಲಿ ಮೊಕದ್ದಮೆ ದಾಖಲಾಗಿದೆ.

ಬೆಳೆಹಾನಿ ಪರಿಹಾರ ಕುರಿತು ಮೂರು ದಿನಗಳೊಳಗೆ ವರದಿ ಸಲ್ಲಿಸಿ



ಜಿಲ್ಲಾಧಿಕಾರಿ ಶಿಲ್ಪಾನಾಗ್ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ ನಡೆಸಿದರು

ಚಾಮರಾಜನಗರ, ಸೆ.8–ಪ್ರಕೃತಿ ವಿಕೋಪ ವೈಪರಿತ್ಯದಿಂದ ಉಂಟಾಗಿರುವ ಬೆಳೆಹಾನಿಗೆ ಪರಿಹಾರ ನೀಡುವ ಸಂಬಂಧ ಮೂರು ದಿನಗಳೊಳಗೆ ಸಮೀಕ್ಷೆ ನಡೆಸಿ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಆದೇಶಿಸಿದ್ದಾರೆ

ನಗರದ ಜಿಲ್ಲಾಡಳಿತ ಭವನದಲ್ಲಿರುವ ಕೇಸ್ವಾನ್ ಸಭಾಂಗಣದಲ್ಲಿಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮುಖ್ಯಮಂತ್ರಿಗಳು ಸಭೆ ನಡೆಸಿ ಅತಿವೃಷ್ಟಿ, ಬೆಳೆಹಾನಿ ಸೇರಿದಂತೆ ಮುಂಗಾರು ಅವಧಿಯಲ್ಲಿನ ಇನ್ನಿತರ ನಷ್ಟ ಸಂಬಂಧ ವಿವರವಾಗಿ ಮಾಹಿತಿ ಪಡೆದು ಅಗತ್ಯ ಸೂಚನೆಗಳನ್ನು ನೀಡಿದ್ದಾರೆ. ಬೆಳೆ ಹಾನಿ ಪರಿಹಾರ ಸಂಬಂಧ ಶೀಘ್ರ ವರದಿ ಸಲ್ಲಿಸಬೇಕಿದೆ ಹೀಗಾಗಿ ಜಿಲ್ಲೆಯಲ್ಲಿ ಯಾವುದೇ ಪ್ರದೇಶಗಳು ಬಿಟ್ಟುಹೋಗದಂತೆ ಪರಿಪೂರ್ಣವಾಗಿ ಮೂರು ದಿನಗಳೊಳಗೆ ಸಂಬಂಧಪಟ್ಟ ಅಧಿಕಾರಿಗಳು ಸಮೀಕ್ಷೆ ನಡೆಸಿ ವರದಿ ನೀಡಬೇಕು ಎಂದು ಸೂಚಿಸಿದರು.

ನಗರ ಹಾಗೂ ಪಟ್ಟಣ ಪ್ರದೇಶಗಳಲ್ಲಿ ಕುಡಿಯುವ ನೀರಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕಿದೆ. ಹನೂರು ಹಾಗೂ ಚಾಮರಾಜನಗರ ಭಾಗಗಳಲ್ಲಿ ಕುಡಿಯುವ ನೀರು ಪೂರೈಕೆಗೆ ಯಾವುದೇ ಸಮಸ್ಯೆಯಾಗದಿರಲು ಮುಂಜಾಗ್ರತೆ ಕ್ರಮಗಳನ್ನು ತೆಗೆದುಕೊಳ್ಳಬೇಕು. ತಹಶೀಲ್ದಾರರು, ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ಗ್ರಾಮೀಣ ಭಾಗದ ಅಧಿಕಾರಿಗಳು ಭೇಟಿ ನೀಡಿ ಕುಡಿಯುವ ನೀರನ್ನು ಸಮರ್ಪಕವಾಗಿ ಸರಬರಾಜು ಮಾಡುವ ನಿಟ್ಟಿನಲ್ಲಿ ಮುಂದಾಗಬೇಕು ಎಂದರು.

ನರೇಗಾ ಅಡಿ ಜಲ ಮರುಪೂರಣ ಸಂರಕ್ಷಣೆಯಂತಹ ಕಾಮಗಾರಿಯನ್ನು ಕೈಗೊಳ್ಳಬೇಕು. ಶಾಶ್ವತವಾಗಿ ನೀರು ಒದಗಿಸುವ ಕಾಮಗಾರಿಗಳಿಗೆ ಆದ್ಯತೆ ನೀಡಬೇಕು. ಕುಡಿಯುವ ನೀರಿನ ತೊಂದರೆ ಎದುರಾಗಬಹುದಾದ ಸಮಸ್ಯಾತ್ಮಕ ಗ್ರಾಮಗಳನ್ನು ಗುರುತಿಸಿ ಪರಿಹಾರ ಕಂಡುಕೊಳ್ಳಲು ಶೀಘ್ರವೇ ಮುಂದಾಗಬೇಕು. ಯಾವುದೇ ದೂರುಗಳು ಬರದಂತೆ ಎಚ್ಚರಿಕೆ ವಹಿಸಬೇಕೆಂದು ಹೇಳಿದರು.

ತೆಂಗು ಬೆಳೆಗೆ ಬಾಧಿಸುತ್ತಿರುವ ಕಪ್ಪುತಲೆ ಹುಳು ಹತೋಟಿ ಸಂಬಂಧ ನಡೆಸುತ್ತಿರುವ ಸಮೀಕ್ಷಾ ಕಾರ್ಯದ ವಿವರ ಪಡೆದ ಜಿಲ್ಲಾಧಿಕಾರಿಯವರು ಸಮೀಕ್ಷೆಯಲ್ಲಿ ಪ್ರತಿನಿತ್ಯದ ಮಾಹಿತಿಯನ್ನು ಪಡೆದುಕೊಳ್ಳಬೇಕು. ತಹಶೀಲ್ದಾರರು ಉಸ್ತುವಾರಿ ವಹಿಸಿ ಸಮೀಕ್ಷೆಯ ಪ್ರಗತಿಯನ್ನು ಪರಿಶೀಲಿಸಬೇಕು. ಅಗತ್ಯ ಮಾರ್ಗದರ್ಶನ ಮಾಡಿ ನಿಗದಿತ ಅವಧಿಯೊಳಗೆ ಸಮೀಕ್ಷಾ ಕಾರ್ಯ ಪೂರ್ಣವಾಗುವಂತೆ ಗಮನಹರಿಸಬೇಕು. ಕೃಷಿ ಚಟುವಟಿಕೆಗಳಿಗೆ ಅಗತ್ಯವಾಗಿರುವ ರಸಗೊಬ್ಬರ, ಬಿತ್ತನೆ ಬೀಜ, ಇನ್ನಿತರ ಪರಿಕರಗಳನ್ನು ಕೊರತೆಯಾಗದಂತೆ ಒದಗಿಸಬೇಕು ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ, ಉಪವಿಭಾಗಾಧಿಕಾರಿ ದಿನೇಶ್ ಕುಮಾರ್ ಮೀನಾ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶೃತಿ, ತಹಶೀಲ್ದಾರರು, ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಮನೆ ಬೀಗ ಮುರಿದು 35 ಗ್ರಾಂ ಚಿನ್ನಾಭರಣ ಕಳವು

ಚಾಮರಾಜನಗರ: ಹಾಡಹಗಲೇ ಮನೆಯ ಬೀಗ ಮುರಿದು ಒಳ ನುಗ್ಗಿದ ಖದೀಮರು ಕೊಠಡಿಯ ಬೀರುವಿನಲ್ಲಿದ್ದ ಸುಮಾರು 35 ಗ್ರಾಂ ತೂಕದ ಚಿನ್ನದ ಸರವನ್ನು ಕಳವು ಮಾಡಿಕೊಂಡು ಪರಾರಿಯಾಗಿರುವ ಘಟನೆ ನಗರದ ಹೌಸಿಂಗ್ ಬೋರ್ಡ್ ಕಾಲೋನಿಯಲ್ಲಿ ನಡೆದಿದೆ.

ಹೌಸಿಂಗ್‌ಬೋರ್ಡ್ ಕಾಲೋನಿಯ ನಿವಾಸಿ ಶಿವಸ್ವಾಮಿ ಎಂಬವರ ಮನೆಯಲ್ಲಿ ಕಳ್ಳತನ ನಡೆದಿದೆ. ಉದ್ಯೋಗಸ್ಥರಾಗಿರುವ ಶಿವಸ್ವಾಮಿ ದಂಪತಿ ಎಂದಿನಂತೆ ಬೆಳಗ್ಗೆ ಕೆಲಸಕ್ಕೆ ಹೋಗಿ ಮಧ್ಯಾಹ್ನ ಊಟಕ್ಕೆಂದು ಬಂದಾಗ ಮನೆಯ ಬಾಗಿಲ ಚಿಲಕ ಒಡೆದಿರುವುದು ಬೆಳಕಿಗೆ ಬಂದಿದೆ. ಒಳಗೆ ಹೋಗಿ ನೋಡಿದಾಗ ಬೀರುವಿನಲ್ಲಿಡಲಾಗಿದ್ದ 35 ಗ್ರಾಂ ಚಿನ್ನಾಭರಣ ಕಳುವಾಗಿರುವುದು ಕಂಡು ಬಂದಿದೆ ಕೂಡಲೇ ಶಿವಸ್ವಾಮಿ ಪಟ್ಟಣ ಠಾಣೆ ಪೊಲೀಸರಿಗೆ ದೂರು ನೀಡಿದ್ದಾರೆ.

ಇನ್‌ಸ್ಪೆಕ್ಟರ್ ಶ್ರೀಕಾಂತ್, ಸಬ್‌ಇನ್‌ಸ್ಪೆಕ್ಟರ್ ಮಂಜುನಾಥ್ ಹಾಗೂ ಬೆರಳಚ್ಚು ತಜ್ಞರು ಸ್ಥಳಕ್ಕೆ ಆಗಮಿಸಿ ಪರಿಶೀಲಿಸಿದರು.

ಇತ್ತೀಚೆಗೆ ನಗರದಲ್ಲಿ ಕಳ್ಳತನ ಸಂಖ್ಯೆ ಹೆಚ್ಚಾಗುತ್ತಿದ್ದು, ಗಸ್ತು ವ್ಯವಸ್ಥೆಯನ್ನು ಪೊಲೀಸರು ಹೆಚ್ಚಿಸಬೇಕಾಗಿದೆ ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಅಂಡರ್‌ಪಾಸ್, ಡಿವೈಡರ್ ನಿರ್ಮಾಣಕ್ಕೆ ಒತ್ತಾಯಿಸಿ ಎಸ್‌ಡಿಪಿಐ ಪ್ರತಿಭಟನೆ



ಬೈಪಾಸ್ ರಸ್ತೆಯಲ್ಲಿ ಅಂಡರ್‌ಪಾಸ್ ಹಾಗೂ ಡಿವೈಡರ್ ನಿರ್ಮಾಣ ಮಾಡುವಂತೆ ಒತ್ತಾಯಿಸಿ ಎಸ್‌ಡಿಪಿಐ ಪ್ರತಿಭಟನೆ ನಡೆಸಿತು.

ಚಾಮರಾಜನಗರ, ಸೆ.8–ನಗರದ ಹೊರ ವಲಯದಲ್ಲಿರುವ ಬೈಪಾಸ್ ರಸ್ತೆಯಲ್ಲಿ ಅಂಡರ್‌ಪಾಸ್ ಹಾಗೂ ಡಿವೈಡರ್ ನಿರ್ಮಾಣ ಮಾಡುವ ಮೂಲಕ ಅಪಘಾತಗಳನ್ನು ತಡೆಯಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ನಗರದಲ್ಲಿ ಎಸ್‌ಡಿಪಿಐನಿಂದ ಪ್ರತಿಭಟನೆ ನಡೆಯಿತು.

ನಗರದ ಸೋಮವಾರಪೇಟೆ ಬಳಿಯ ಬೈಪಾಸ್ ರಸ್ತೆಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಮಾವೇಶಗೊಂಡ ಪ್ರತಿಭಟನಾಕಾರರು ಕೆಲಕಾಲ ಹೆದ್ದಾರಿ ತಡೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು. ಗುಂಡ್ಲುಪೇಟೆ, ಮೈಸೂರು ಮತ್ತು ಕೊಳ್ಳೇಗಾಲ ರಸ್ತೆಗೆ ಸೇರುವಂತೆ ಗಾಳೀಪುರ ಬಡಾವಣೆಯ ಹತ್ತಿರದಿಂದ ಹೋಗುವ ರಿಂಗ್ ರಸ್ತೆಯಲ್ಲಿ ಅಪಘಾತಗಳು ಹೆಚ್ಚಾಗುತ್ತಿದೆ. ಗಾಳೀಪುರ ಬಡಾವಣೆಯ ಜನರು ಈ ರಸ್ತೆಯಲ್ಲಿ ಹೆಚ್ಚು ಓಡಾಡುತ್ತಾರೆ. ಕರಿವರದರಾಜ ಸ್ವಾಮಿ ಬೆಟ್ಟಕ್ಕೆ ವಾಯುವಿಹಾರಕ್ಕೆ ಈ ಬಡಾವಣೆಯ ನಿವಾಸಿಗಳಲ್ಲದೇ, ನಗರದ ಇತರೆ ವಾರ್ಡ್‌ನ ಜನರು ಹೋಗಿ ಬರುವುದು ಹೆಚ್ಚಾಗಿದೆ. ಹಾಗೆಯೇ ನಗರಸಭಾ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ತ್ಯಾಜ್ಯಗಳನ್ನು ಸಾಗಿಸುವ ನಗರಸಭೆಯ ಕಸವಿಲೇವಾರಿ ವಾಹನಗಳು ಸಹ ಇದೇ ರಸ್ತೆಯಲ್ಲಿ ಹಾದು ಹೋಗುತ್ತವೆ. ಈ ರಸ್ತೆಯನ್ನು ದಾಟುವಾಗ ಅಪಘಾತಗಳಾಗುವ ಸಂಭವ ಹೆಚ್ಚಾಗಿದೆ. ಹೀಗಾಗಿ ಈ ಸ್ಥಳದಲ್ಲಿ ಅಂಡರ್‌ಪಾಸ್ ನಿರ್ಮಿಸಬೇಕು ಸೋಮವಾರಪೇಟೆ ಕ್ರಾಸ್‌ನಿಂದ ಗುಂಡ್ಲುಪೇಟೆ ಮುಖ್ಯ ರಸ್ತೆಗೆ ಸೇರುವ ಹಂತದವರೆಗೂ ರಿಂಗ್ ರೋಡ್ ಮಧ್ಯೆ ಡಿವೈಡರ್ ಹಾಕಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಎಸ್‌ಡಿಪಿಐ ಜಿಲ್ಲಾಧ್ಯಕ್ಷ ಖಲೀಲ್ ಉಲ್ಲಾ, ಉಪಾಧ್ಯಕ್ಷ ನಯಾಜ್ ಉಲ್ಲಾ, ಪ್ರಧಾನ ಕಾರ್ಯದರ್ಶಿ ಎಂ.ಮಹೇಶ್, ಕಾರ್ಯದರ್ಶಿ ಜಬೀನೂರ್, ಪದಾಧಿಕಾರಿಗಳಾದ ಅಬ್ರಾರ್ ಅಹಮ್ಮದ್, ಸುಹೇಲ್ ಪಾಷ, ಸೈಯದ್ ಇರ್ಫಾನ್, ಮಹೇಂದ್ರ, ಮಹದೇವಮ್ಮ ಸೇರಿದಂತೆ ಇತರರು ಭಾಗವಹಿಸಿದ್ದರು.

ನಾಳೆ ಹನೂರು ತಾಲೂಕಿಗೆ ಲೋಕಾಯುಕ್ತ ಅಧಿಕಾರಿಗಳ ಭೇಟಿ

ಚಾಮರಾಜನಗರ, ಸೆ.8–ಜಿಲ್ಲೆಯ ಲೋಕಾಯುಕ್ತ ಅಧಿಕಾರಿಗಳು ಹನೂರು ತಾಲೂಕು ಪ್ರವಾಸಿಮಂದಿರಕ್ಕೆ ಸೆ. 10ರ ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಭೇಟಿ ನೀಡಿ ಸಾರ್ವಜನಿಕರಿಂದ ರಾಜ್ಯ ಲೋಕಾಯುಕ್ತ ಕಾಯ್ದೆಯಡಿ ಭರ್ತಿ ಮಾಡಿದ ದೂರು ಅರ್ಜಿಗಳನ್ನು ಸ್ವೀಕರಿಸಿ, ವಿಚಾರಣೆ ನಡೆಸುವರು.

ಸರ್ಕಾರಿ ಕಚೇರಿಗಳಲ್ಲಿ ಕೆಲಸದ ಅನಗತ್ಯ ವಿಳಂಬ ಹಾಗೂ ಇನ್ನಿತರ ತೊಂದರೆ ನೀಡುತ್ತಿರುವ ಸರ್ಕಾರಿ ಅಧಿಕಾರಿ ಅಥವಾ ನೌಕರರ ವಿರುದ್ಧ ಸಾರ್ವಜನಿಕರು ದೂರುಗಳನ್ನು ನಿಗದಿತ ನಮೂನೆ–1 ಮತ್ತು 2ರಲ್ಲಿ ಭರ್ತಿಮಾಡಿ ನೀಡಬಹುದಾಗಿದೆ. ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

ಪದ್ಮರಾಜು ನಿಧನ



ಚಾಮರಾಜನಗರ, ಸೆ.8–ಶ್ರೀ ಕ್ಷೇತ್ರ ಕನಕಗಿರಿಯ ಜೈನ ಮಠದಲ್ಲಿ ವ್ಯವಸ್ಥಾಪಕರಾಗಿ ಕಾರ್ಯ ನಿರ್ವಹಿಸುತ್ತಿದ್ದ ಪದ್ಮರಾಜು (58) ಇಂದು ನಿಧನರಾಗಿದ್ದಾರೆ. ಮೃತರು ಪತ್ನಿ, ಪುತ್ರನನ್ನು ಅಗಲಿದ್ದಾರೆ. ನಗರದ ಸಿದ್ಧಾರ್ಥ ಚಿತ್ರಮಂದಿರದ ಮಾಲೀಕರಾಗಿದ್ದ ಶ್ರೀಧರ್ ಕುಮಾರ್ ಅವರ ಅಳಿಯ.

ಮೂಲತಃ ಸಾಗರ ತಾಲೂಕು ಹುರುಳಿ ಗ್ರಾಮದವರಾಗಿದ್ದ ಇವರು ಕೆಲಕಾಲ ಶ್ರವಣ ಬೆಳಗೊಳದ ಜೈನ ಮಠದಲ್ಲಿ ಸೇವೆ ಸಲ್ಲಿಸಿದ್ದು, ಇವರು ಕಳೆದ ಕೆಲ ವರ್ಷಗಳಿಂದ ಕನಕಗಿರಿಯ ಜೈನಮಠದಲ್ಲಿ ವ್ಯವಸ್ಥಾಪಕರಾಗಿ ಸೇವೆ ಸಲ್ಲಿಸುತ್ತಿದ್ದರು. ಮೃತರ ಅಂತ್ಯಕ್ರಿಯೆ ಮಂಗಳವಾರ ನಡೆಯಲಿದೆಯೆಂದು ಕುಟುಂಬದ ಮೂಲಗಳು ತಿಳಿಸಿವೆ.

ಬೆಟ್ಟಹಳ್ಳಿ ಗಂಗಪ್ಪ



ಗುಂಡ್ಲುಪೇಟೆ, ಸೆ.8– ತಾಲೂಕಿನ ಚಿಕ್ಕತುಪ್ಪೂರು ನಿವಾಸಿ ಬೆಟ್ಟಹಳ್ಳಿ ಗಂಗಪ್ಪ(60) ಸೋಮವಾರ ನಿಧನರಾದರು.

ಮೃತರು ಪತ್ನಿ, ಇಬ್ಬರು ಪುತ್ರಿಯರನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮಂಗಳವಾರ ಚಿಕ್ಕತುಪ್ಪೂರು ಗ್ರಾಮದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಹಠಾತ್ ಹೃದಯ ಸಂಬಂಧಿ ಸಾವು ತಡೆಗೆ

'ಪುನೀತ್ ರಾಜ್‌ಕುಮಾರ್ ಎಇಡಿ ಯೋಜನೆ' ಜಾರಿ

ರಾಜ್ಯ ಸರ್ಕಾರದಿಂದ 6 ಕೋಟಿ ಅನುದಾನ ಘೋಷಣೆ

ಬೆಂಗಳೂರು, ಸೆ.8– ರಾಜ್ಯ ಸರ್ಕಾರವು ನಟ ದಿವಂಗತ ಡಾ.ಪುನೀತ್ ರಾಜಕುಮಾರ್ ಅವರ ಸ್ಮರಣಾರ್ಥ ಹಠಾತ್ ಹೃದಯ ಸಂಬಂಧಿ ಸಾವುಗಳನ್ನು ತಡೆಯುವ ಉದ್ದೇಶದಿಂದ ಎಇಡಿ (Automated External Defibrillator) ಯೋಜನೆ ಜಾರಿಗೊಳಿಸಲು ನಿರ್ಧರಿಸಿದೆ. ಈ ಯೋಜನೆಗಾಗಿ ಸರ್ಕಾರವು ಒಟ್ಟು 6 ಕೋಟಿ ಅನುದಾನವನ್ನು ಘೋಷಿಸಿದೆ. ಇದಕ್ಕೆ ಆಡಳಿತಾತ್ಮಕ ಅನುಮೋದನೆ ಕೂಡ ಸಿಕ್ಕಿದ್ದು ಸರಕಾರ ಪ್ರಕಟಣೆ ಬಿಡುಗಡೆ ಮಾಡಿದೆ.

ಹೃದಯಾಘಾತ ತಡೆಗೆ ಎಇಡಿ ಯಂತ್ರಗಳ ಅಳವಡಿಕೆ: ಇತ್ತೀಚಿನ ದಿನಗಳಲ್ಲಿ ಹಠಾತ್ ಹೃದಯಾಘಾತ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ತಕ್ಷಣ ಚಿಕಿತ್ಸೆ ನೀಡಲು ಅಗತ್ಯವಾದ ಎಇಡಿ ಯಂತ್ರಗಳನ್ನು ರಾಜ್ಯದ 16 ಜಿಲ್ಲಾಸ್ಪತ್ರೆ ಹಾಗೂ 147 ತಾಲೂಕು ಆಸ್ಪತ್ರೆಗಳಲ್ಲಿ ಅಳವಡಿಸಲು ಆದೇಶಿಸಲಾಗಿದೆ.

ಎಇಡಿ ಯಂತ್ರಗಳು ತುರ್ತು ಪರಿಸ್ಥಿತಿಯಲ್ಲಿ ಹೃದಯ ಬಡಿತವನ್ನು ಪರೀಕ್ಷಿಸಿ, ಅಗತ್ಯವಿದ್ದರೆ ವಿದ್ಯುತ್ ಶಾಕ್ ನೀಡಿ ಜೀವ ಉಳಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ. 'ಗೋಲ್ಡನ್ ಟೈಮ್' ಎಂದೇ ಕರೆಯಲಾಗುವ ಮೊದಲ ಕೆಲವು ನಿಮಿಷಗಳಲ್ಲಿ ಈ ಚಿಕಿತ್ಸೆ ದೊರೆತರೆ ರೋಗಿಯನ್ನು ಬದುಕಿಸುವ ಸಾಧ್ಯತೆಗಳು ಬಹಳ ಹೆಚ್ಚಾಗುತ್ತವೆ.

ಸಾರ್ವಜನಿಕ ಸ್ಥಳಗಳಲ್ಲಿಯೂ ಎಇಡಿ ಲಭ್ಯತೆ: ಯೋಜನೆಯಡಿ ಕೇವಲ ಆಸ್ಪತ್ರೆಗಳಲ್ಲದೇ, ಪ್ರಮುಖ ಸಾರ್ವಜನಿಕ ಪ್ರದೇಶಗಳಲ್ಲಿಯೂ



ಎಇಡಿ ಯಂತ್ರಗಳನ್ನು ಅಳವಡಿಸುವ ಯೋಜನೆ ಸರ್ಕಾರದ್ದಾಗಿದೆ. ಇದರಿಂದ ಬಸ್ ನಿಲ್ದಾಣಗಳು, ರೈಲು ನಿಲ್ದಾಣಗಳು, ಶಾಪಿಂಗ್ ಮಾಲ್‌ಗಳು ಹಾಗೂ ಜನಸಂದಣಿ ಪ್ರದೇಶಗಳಲ್ಲಿ ಹೃದಯಾಘಾತ ಉಂಟಾದರೂ ತಕ್ಷಣ ಚಿಕಿತ್ಸೆಯನ್ನು ನೀಡಲು ಸಾಧ್ಯವಾಗಲಿದೆ.

ಪುನೀತ್ ರಾಜಕುಮಾರ್ ಯೋಜನೆಯ ಮಹತ್ವ: ಪುನೀತ್ ರಾಜಕುಮಾರ್ ಅವರು 2021ರಲ್ಲಿ ಹಠಾತ್ ಹೃದಯಾಘಾತದಿಂದ ಅಕಾಲಿಕವಾಗಿ ಅಗಲಿದ ಬಳಿಕ ರಾಜ್ಯದಲ್ಲಿ ಹೃದಯ ಸಂಬಂಧಿ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುವ ಅಗತ್ಯತೆ ತೀವ್ರವಾಗಿ ಕಂಡುಬಂತು. ಅವರ ಸ್ಮರಣಾರ್ಥ ಕೈಗೊಂಡಿರುವ ಈ ಯೋಜನೆ, 'ಪುನೀತ್ ರಾಜಕುಮಾರ್ ಎಇಡಿ ಯೋಜನೆ' ಎಂಬ ಹೆಸರಿನಿಂದ ಜಾರಿಗೊಳ್ಳಲಿದೆ.

ಸರ್ಕಾರವು ಜನರ ಹೃದಯ ಆರೋಗ್ಯವನ್ನು ಕಾಪಾಡಲು ಮತ್ತು ತುರ್ತು ಪರಿಸ್ಥಿತಿಯಲ್ಲಿ ತಕ್ಷಣ ಚಿಕಿತ್ಸೆ ಲಭ್ಯವಾಗುವಂತೆ ಮಾಡುವ ಗುರಿಯನ್ನು ಹೊಂದಿದೆ. ಈ ಯೋಜನೆ ಜಾರಿಯಾದ ಬಳಿಕ, ರಾಜ್ಯದಲ್ಲಿ ಹಠಾತ್ ಹೃದಯಾಘಾತದಿಂದ ಸಂಭವಿಸುವ ಸಾವುಗಳ ಪ್ರಮಾಣವನ್ನು ಕಡಿಮೆ ಮಾಡಲು ಸಾಧ್ಯವಾಗಲಿದೆ.

'ಪ್ರಭುಲಿಂಗ ಲೀಲೆ' ನಾಟಕ ಯಶಸ್ವಿ; ಕೆಲ ಕಲಾವಿದರಿಗೆ ಸನ್ಮಾನ



'ಪ್ರಭುಲಿಂಗ ಲೀಲೆ ನಾಟಕ'ದ ಯಶಸ್ವಿಗೆ ಕಾರಣರಾದ ಕೆಲ ಕಲಾವಿದರನ್ನು ಸನ್ಮಾನಿಸಲಾಯಿತು.

ಮೈಸೂರು, ಸೆ.8(ಎಸ್‌ಪಿಎನ್)– ಸುತ್ತೂರು ಮಠದ ಆವರಣದಲ್ಲಿ ಜರುಗಿದ 'ಪ್ರಭುಲಿಂಗ ಲೀಲೆ ನಾಟಕ'ದ ಯಶಸ್ವಿಗೆ ಕಾರಣರಾದ ಕೆಲ ಕಲಾವಿದರನ್ನು ಸನ್ಮಾನಿಸಲಾಯಿತು.

ಮೈಸೂರು ಅಗ್ರಹಾರದ ನೂರೊಂದು ಗಣಪತಿ ದೇವಸ್ಥಾನ ಮುಂಭಾಗದಲ್ಲಿನ ಮಹಾಸಂಗಮ ಸಮಾನಮನಸ್ಕ ಗೆಳೆಯರ ಬಳಗಗಳ ಒಕ್ಕೂಟದ ಕಚೇರಿ ಆವರಣದಲ್ಲಿ ಶಿವಸನ್ನಿಧಿ ಗೆಳೆಯರ ಬಳಗದ ವತಿಯಿಂದ ಆಯೋಜಿಸಿದ್ದ ಅಭಿನಂದನಾ ಕಾರ್ಯಕ್ರಮದಲ್ಲಿ 'ಪ್ರಭುಲಿಂಗ ಲೀಲೆ' ಪಾತ್ರಧಾರಿಗಳನ್ನು ಸನ್ಮಾನಿಸಲಾಯಿತು.

ಬಳಿಕ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಮಾಜಿ ಜಿಲ್ಲಾಧ್ಯಕ್ಷ ಕಾನ್ಯ ಎಸ್.ಶಿವಮೂರ್ತಿ ಮಾತನಾಡಿ, ಸಾಮಾಜಿಕ ವೈರುಧ್ಯಗಳನ್ನು ಪರಿಣಾಮಕಾರಿಯಾಗಿ ಬಿಂಬಿಸುವ ಮಾಧ್ಯಮ ರಂಗಮಾಧ್ಯಮ. ಹಾಗಾಗಿ ಪ್ರತಿಯೊಬ್ಬರು ರಂಗಕಲೆಗಳಲ್ಲಿ ತೊಡಗಿಸಿಕೊಳ್ಳಬೇಕು. ವೃತ್ತಿ ಕಂಪನಿ ನಾಟಕಗಳಿಗೆ ಜನರ ಪ್ರೋತ್ಸಾಹವಿಲ್ಲ ಎನ್ನುವ ಕಾಲಘಟ್ಟದಲ್ಲಿ ಪ್ರಭುಲಿಂಗಲೀಲೆ ನಾಟಕ ನೋಡಲು ಸಹಸ್ರಾರು ಮಂದಿ ಭಾಗವಹಿಸಿ ಯಶಸ್ವಿಗೊಳಿಸಿದರು. ಇದಕ್ಕೆ ಕಲಾವಿದರ ಪ್ರೋತ್ಸಾಹವೂ ಮುಖ್ಯ ಎಂದರು.

ಶ್ರೀ ಶಿವರಾತ್ರಿ ರಾಜೇಂದ್ರ ಕಲಾ ಬಳಗದ ಸಂಸ್ಥಾಪಕ ಕಲ್ಮಳ್ಳಿ ನಟರಾಜು ಮಾತನಾಡಿ, ಲಿಂಗೈಕ್ಯ ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿರವರ 110ನೇಯ ಜಯಂತಿ ಮಹೋತ್ಸವ ನಿಮಿತ್ತ ಮೈಸೂರಿನ ಸುತ್ತೂರು ಮಠದಲ್ಲಿ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಅವರ ಸಾನ್ನಿಧ್ಯದಲ್ಲಿ ಪ್ರದರ್ಶನಗೊಂಡ 'ಪ್ರಭುಲಿಂಗ ಲೀಲೆ' ನಾಟಕ ಯಶಸ್ವಿಯಾಗಿದೆ. ಇದರಲ್ಲಿ ಹಿರಿಯ ಮತ್ತು ಕಿರಿಯ ಕಲಾವಿದರ ಕೊಡುಗೆಯೂ ಇದೆ ಎಂದರು.

ಈ ವೇಳೆ 25ಕ್ಕೂ ಹೆಚ್ಚು ರಂಗಭೂಮಿಯ ಹಿರಿಯ, ಕಿರಿಯ ಕಲಾವಿದರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಕಲಾಬಳಗದ ರಂಗ ನಿರ್ದೇಶಕ ಬೀರಿಹುಂಡಿ ಗೋವಿಂದರಾಜು, ಹೊಸಕೋಟೆ ದೇವಣ್ಣ, ಸರ್ಕಾರಿ ನೌಕರರ ಸಂಘದ ಮಾಲಂಗಿ ಸುರೇಶ್, ಬಿ.ಎಂ.ಪರಮೇಶ್, ಸುರೇಶ್, ಗಣೇಶ್, ಮಹೇಶ್, ಅನಿಲ್ ಕುಮಾರ್, ಹಿರಿಯ ರಂಗಭೂಮಿ ಕಲಾವಿದ ಹುಲ್ಲಹಳ್ಳಿ ಪಾರ್ವತಪ್ಪ ಸೋಮಶೇಖರಪ್ಪ, ಮರಿಮಲ್ಲಪ್ಪ ಪ್ರೌಢಶಾಲೆಯ ಸಹಶಿಕ್ಷಕ ಬಿ.ಆರ್.ಶಿವಕುಮಾರ್, ಕೊತ್ತಲವಾಡಿಯ ಸಿದ್ದರಾಮಯ್ಯ ಪ್ರಸನ್ನ ಗೌಡಗೆರೆ ಮಹೇಶ, ಹಿರಿಯ ಕಲಾವಿದರಾದ ಚಿಕ್ಕಳ್ಳಿ ಪುಟ್ಟಣ್ಣ, ಕೆರೆಹಳ್ಳಿ ದೊರೆಸ್ವಾಮಿ, ಶಿವಣ್ಣ, ಕೃಷ್ಣರಾಜ ಬ್ಯಾಂಕ್‌ನ ನಿರ್ದೇಶಕ ನಂ. ಸಿದ್ದಪ್ಪ, ಪ್ರತಿಧ್ವನಿ ಪ್ರಸಾದ್, ಉದ್ಯಮಿ ಸುರೇಶ್ ಸೇರಿದಂತೆ ಉಪಸ್ಥಿತರಿದ್ದರು.

ಚಂದ್ರಗ್ರಹಣದ ಹಿನ್ನೆಲೆ; ಮೈಸೂರು ದೇವಾಲಯಗಳಲ್ಲಿ ಹೋಮ-ಹವನ, ವಿಶೇಷ ಪೂಜೆ



ಚಂದ್ರಗ್ರಹಣದ ಹಿನ್ನೆಲೆಯಲ್ಲಿ ಮೈಸೂರಿನ ದಿವಾನ್ಸ್ ರಸ್ತೆಯಲ್ಲಿರುವ ಅಮೃತೇಶ್ವರ ಸ್ವಾಮಿ ದೇವಾಲಯದ ಆವರಣದಲ್ಲಿ ಹೋಮ-ಹವನ ಆಯೋಜಿಸಲಾಗಿತ್ತು.

ಮೈಸೂರು,ಸೆ.8(ಎಂಟಿವೈ)– ಚಂದ್ರಗ್ರಹಣದ ಹಿನ್ನೆಲೆಯಲ್ಲಿ ಸೋಮವಾರ ಬೆಳಗ್ಗೆ ವಿವಿಧ ದೇವಾಲಯ ಶುದ್ಧೀಕರಣದ ನಂತರ ವಿಶೇಷ ಪೂಜಾ ಕಾರ್ಯ ಜರುಗಿದ್ದವು. ಬಳಿಕ ಜನ ದೇವರ ದರ್ಶನ ಪಡೆದರು. ಹಲವೆಡೆ ದೇವಾಲಯಗಳಲ್ಲಿ ಭಾರಿ ಸಂಖ್ಯೆಯಲ್ಲಿ ಭಕ್ತರು ಪೂಜೆ ಸಲ್ಲಿಸಿದರು.

ಚಂದ್ರಗ್ರಹಣ ಭಾನುವಾರ ರಾತ್ರಿ ಆರಂಭವಾಗಿ ಮುಂಜಾನೆ ಮುಕ್ತಿಗೊಂಡಿತು. ಚಂದ್ರನ ರಕ್ತಚಂದನ ಗ್ರಹಣದ ಹಿನ್ನೆಲೆಯಲ್ಲಿ ಭಾನುವಾರ ಮಧ್ಯಾಹ್ನದಿಂದಲೇ ಮೈಸೂರಿನ ಬಹುತೇಕ ದೇವಾಲಯಗಳು ಬಂದ್ ಆಗಿದ್ದವು. ಗ್ರಹಣದ ಸ್ಪರ್ಶಕಾಲ ಹಾಗೂ ಮೋಕ್ಷ ಕಾಲದಲ್ಲಿ ವಿಶೇಷ ಪೂಜೆ ನೆರವೇರಿಸಲಾಗಿತ್ತು. ಅಲ್ಲದೆ, ದೇವಾಲಯಕ್ಕೆ ಭಕ್ತರ ಪ್ರವೇಶ ನಿರ್ಬಂಧಿಸಲಾಗಿತ್ತು. ಮುಂಜಾನೆ ಗ್ರಹಣ ಬಿಟ್ಟ ಹಿನ್ನೆಲೆಯಲ್ಲಿ ಸೋಮವಾರ ಮುಂಜಾನೆಯಿಂದಲೇ ದೇವಾಲಯಗಳ ಶುದ್ಧೀಕರಣ ಕಾರ್ಯ ಜರುಗಿತು.

ನಂತರ ದೇವಾಲಯಗಳಲ್ಲಿ ವಿಶೇಷ ಪೂಜೆ ಸಲ್ಲಿಸಿದ ಬಳಿಕ ಅಲಂಕಾರ, ಮಂಗಳಾರತಿ ನಂತರವೇ ಬೆಳಗ್ಗೆ 8 ಗಂಟೆಗೆ ಭಕ್ತರಿಗೆ ದರ್ಶನಕ್ಕೆ ಅವಕಾಶ ನೀಡಲಾಯಿತು.

ಚಂದ್ರಗ್ರಹಣದ ಹಿನ್ನೆಲೆಯಲ್ಲಿ ಶಕ್ತಿದೇವತೆ ಚಾಮುಂಡೇಶ್ವರಿ ದರ್ಶನ ಪಡೆಯಲು ವಿವಿಧೆಡೆಯಿಂದ ಭಕ್ತರು ಆಗಮಿಸಿದ್ದರು. ಆದರೆ, ಬೆಳಗ್ಗೆ 8 ಗಂಟೆವರೆಗೂ ದೇವಾಲಯದ ಬಾಗಿಲು ಬಂದ್ ಮಾಡಲಾಗಿತ್ತು. ಅರ್ಚಕ ಡಾ.ಎನ್.ಶಶಿಶೇಖರ್ ದೀಕ್ಷಿತ್ ನೇತೃತ್ವದಲ್ಲಿ ವಿಶೇಷ ಪೂಜಾ ಕೈಂಕರ್ಯ ಜರುಗಿದ ನಂತರ ಭಕ್ತರಿಗೆ ದರ್ಶನಕ್ಕೆ ಅವಕಾಶ ನೀಡಲಾಯಿತು.

ಮೈಸೂರಿನ ಚಂದ್ರಮೌಳೇಶ್ವರ ದೇವಾಲಯದ ಆವರಣದಲ್ಲಿ ಚಂದ್ರಗ್ರಹಣದ ಅಂಗವಾಗಿ ವಿವಿಧ ರಾಶಿ ಜನರ ಪರ ಆಯೋಜಿಸಿದ್ದ ಹೋಮದಲ್ಲಿ ಹಲವು ಜನ ಪಾಲ್ಗೊಂಡಿದ್ದರು. ಮೈಸೂರಿನ ಮಲೆ ಮಹದೇಶ್ವರ ದೇವಾಲಯ, ಗಣಪತಿ ದೇವಾಲಯ, ಚಾಮುಂಡೇಶ್ವರಿ ದೇವಾಲಯ, ಚಂದ್ರಮೌಳೇಶ್ವರ, ಅಮೃತೇಶ್ವರ, ಒಂಟಿಕೊಪ್ಪಲಿನ ವೆಂಕಟರಮಣ, ಅರಮನೆಯ ತ್ರಿನೇಶ್ವರ, ಚಾಮುಂಡಿಬೆಟ್ಟದ ಮಹಾಬಲೇಶ್ವರ ದೇವಾಲಯ ಸೇರಿದಂತೆ ವಿವಿಧ ದೇವಾಲಯಗಳಲ್ಲೂ ಬೆಳಗ್ಗೆ 8 ಗಂಟೆ ನಂತರವೇ ಭಕ್ತರಿಗೆ ದರ್ಶನಕ್ಕೆ ಅವಕಾಶ ಕಲ್ಪಿಸಲಾಯಿತು.

ಮೈಮುಲ್ ಅಧ್ಯಕ್ಷ ಸ್ಥಾನಕ್ಕೆ ಚೆಲುವರಾಜ್ ರಾಜೀನಾಮೆ

● ಅಲ್ಪ ಅವಧಿಯಲ್ಲಿ ಒಕ್ಕೂಟದಲ್ಲಿ ಗಮನಾರ್ಹ ಸುಧಾರಣೆ ತಂದ ತೃಪ್ತಿ ● ಈರೇಗೌಡ, ಗುರುಸ್ವಾಮಿ ನಡುವೆ ಅಧ್ಯಕ್ಷಗಾದಿಗೆ ಪೈಪೋಟಿ



ಚೆಲುವರಾಜು



ಕೆ.ಈರೇಗೌಡ



ಬಿ.ಗುರುಸ್ವಾಮಿ

ಮೈಸೂರು, ಸೆ.8– ಮೈಸೂರು ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ (ಮೈಮುಲ್)ದ ಅಧ್ಯಕ್ಷ ಆರ್.ಚೆಲುವರಾಜು ಸೋಮವಾರ ರಾಜೀನಾಮೆ ಸಲ್ಲಿಸಿದ್ದಾರೆ.

ಮೈಮುಲ್ ವ್ಯವಸ್ಥಾಪಕ ನಿರ್ದೇಶಕ ಕೆ.ಎನ್.ಸುರೇಶ್‌ನಾಯಕ್ ಅವರಿಗೆ ರಾಜೀನಾಮೆ ಸಲ್ಲಿಸಿದ್ದು, ಇದರ ಬೆನ್ನಲ್ಲೇ ಮುಂದಿನ ಅಧ್ಯಕ್ಷಗಿರಿಗೆ ಪೈಪೋಟಿಯೂ ಆರಂಭವಾಗಿದೆ ಕಳೆದ ಬಾರಿಯೂ ಆಕಾಂಕ್ಷಿಗಳಾಗಿದ್ದ ಕೆ.ಈರೇಗೌಡ ಹಾಗೂ ಬಿ.ಗುರುಸ್ವಾಮಿ ಅಧ್ಯಕ್ಷ ಸ್ಥಾನಕ್ಕೇರಲು ಕಸರತ್ತು ಆರಂಭಿಸಿದ್ದಾರೆ ಎಂದು ತಿಳಿದುಬಂದಿದೆ.

ಪಿರಿಯಾಪಟ್ಟಣ ಮಾಜಿ ಶಾಸಕ ಕೆ.ಮಹದೇವು ಅವರ ಪುತ್ರ ಪಿ.ಎಂ.ಪ್ರಸನ್ನ ರಾಜೀನಾಮೆ ನಂತರ ಆಡಳಿತಾರೂಢ ಕಾಂಗ್ರೆಸ್, ಮೈಮುಲ್ ಕೈವಶ ಮಾಡಿಕೊಂಡಿದ್ದರ ಪರಿಣಾಮ 2024ರ ಆ.7ರಂದು ನಡೆದ ಚುನಾವಣೆಯಲ್ಲಿ ಆರ್.ಚೆಲುವರಾಜು ಅವಿರೋಧವಾಗಿ ಅಧ್ಯಕ್ಷರಾಗಿದ್ದರು. ಅಧಿಕಾರ ವಹಿಸಿಕೊಂಡು ವರ್ಷವಾಗುತ್ತಿದ್ದಂತೆ ವೈಯಕ್ತಿಕ ಕಾರಣ ನೀಡಿ, ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

ಈ ವಿಷಯವನ್ನು 'ಮೈಸೂರು ಮಿತ್ರ'ನಿಗೆ ಸ್ಪಷ್ಟಪಡಿಸಿದ ಆರ್.ಚೆಲುವರಾಜು, ವೈಯಕ್ತಿಕ ಕಾರಣದಿಂದಾಗಿ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದೇನೆ. ಹಾಲು ಉತ್ಪಾದಕರಿಗೆ ಒಂದು ಲಕ್ಷ ಮೊತ್ತದ ಜೀವ ವಿಮೆಯನ್ನು ಒಕ್ಕೂಟದಿಂದ ಉಚಿತವಾಗಿ ಮಾಡಿಸಿದ್ದು, ಬಿಎಂಸಿ ಹಾಗೂ ಸಹಕಾರ ಸಂಘಗಳ ಕಾರ್ಯದರ್ಶಿಗಳ ಪ್ರೋತ್ಸಾಹ ಧನ ಹೆಚ್ಚಳ, ಜನಶ್ರೀ ಗುಂಪುವಿಮೆ ಸೇರಿದಂತೆ ಹಲವು ಯೋಜನೆಗಳ ಬಗ್ಗೆ ಹಾಲು ಉತ್ಪಾದಕರು ಹಾಗೂ ಸಂಘಗಳ ಕಾರ್ಯದರ್ಶಿಗಳು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಒಂದು ವರ್ಷದ ಅವಧಿಯಲ್ಲಿ ಒಕ್ಕೂಟದ ಬೆಳವಣಿಗೆ ಹಾಗೂ ಹಾಲು ಉತ್ಪಾದಕರ ಹಿತದೃಷ್ಟಿಯೊಂದಿಗೆ ಕೆಲಸ ಮಾಡಿದ ತೃಪ್ತಿ ಇದೆ ಎಂದರು.

6 ತಿಂಗಳಲ್ಲಿ ಚುನಾವಣೆ?: ಮೈಮುಲ್‌ನ ಪ್ರಸಕ್ತ ಆಡಳಿತ ಮಂಡಳಿ ಅವಧಿಯು 2026ರ ಮಾರ್ಚ್‌ನಲ್ಲಿ ಮುಕ್ತಾಯಗೊಳ್ಳಲಿದ್ದು, ಅದೇ ತಿಂಗಳು ಚುನಾವಣೆ ನಡೆಸುವ ಸಾಧ್ಯತೆ ಇದೆ ಎನ್ನಲಾಗಿದೆ.

ಅಕ್ರಮ ಬೆಟ್ಟಿಂಗ್ ಪ್ರಕರಣ

ಕಾಂಗ್ರೆಸ್ ಶಾಸಕ ವೀರೇಂದ್ರ ಪಪ್ಪಿಗೆ 14 ದಿನ ನ್ಯಾಯಾಂಗ ಬಂಧನ



ಬೆಂಗಳೂರು, ಸೆ.8– ಅಕ್ರಮವಾಗಿ ಬೆಟ್ಟಿಂಗ್ ಕಂಪನಿ ನಡೆಸುತ್ತಿದ್ದ ಆರೋಪಕ್ಕೆ ಸಂಬಂಧಿಸಿದ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಬಂಧನಕ್ಕೀಡಾಗಿರುವ ಕಾಂಗ್ರೆಸ್ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿಗೆ ಕೋರ್ಟ್ 14 ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ಆದೇಶಿಸಿದೆ. ಇಡಿ ಕಸ್ಟಡಿ ಅವಧಿ ಮುಗಿದ ಹಿನ್ನೆಲೆಯಲ್ಲಿ ಅವರನ್ನು ಇಂದು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು. ಈ ವೇಳೆ ವಿಚಾರಣೆ ನಡೆಸಿದ ನ್ಯಾಯಾಲಯ, ವೀರೇಂದ್ರ ಪಪ್ಪಿ ಅವರನ್ನು ಸೆ. 22ರವರೆಗೆ 14 ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ಆದೇಶ ಹೊರಡಿಸಿದೆ.

ಅಕ್ರಮ ಬೆಟ್ಟಿಂಗ್ ಪ್ರಕರಣಕ್ಕೆ ಸಂಬಂಧಿಸಿದಂತೆ ಹಲವು ರಾಜ್ಯಗಳಲ್ಲಿ ಇಡಿ ದಾಳಿ ನಡೆಸಿತ್ತು. ದಾಳಿ ವೇಳೆ ವೀರೇಂದ್ರ ಪಪ್ಪಿ ಮನೆಯಲ್ಲಿ 12 ಕೋಟಿ ರೂ. ನಗದು (ಒಂದು ಕೋಟಿ ರೂ. ವಿದೇಶಿ ಕರೆನ್ಸಿ ಸೇರಿದಂತೆ), 6 ಕೋಟಿ ರೂ. ಮೌಲ್ಯದ ಚಿನ್ನಾಭರಣ, ಸುಮಾರು 10 ಕೆಜಿ ಬೆಳ್ಳಿ ಮತ್ತು ನಾಲ್ಕು ವಾಹನಗಳನ್ನು ವಶಪಡಿಸಿಕೊಂಡಿತ್ತು.

ಈ ಶಾಸಕನನ್ನು ಆ.22 ರಂದು ಸಿಕ್ಕಿಂನ ರಾಜಧಾನಿ ಗ್ಯಾಂಗ್ಟಾಕ್‌ನಲ್ಲಿ ಬಂಧಿಸಿದ್ದು, ಇಡಿ ಮ್ಯಾಜಿಸ್ಟ್ರೇಟ್ ಮುಂದೆ ಹಾಜರುಪಡಿಸಿ ಬೆಂಗಳೂರಿನ ನ್ಯಾಯಾಲಯದ ಮುಂದೆ ಹಾಜರುಪಡಿಸಲು ಟ್ರಾನ್ಸಿಟ್ ರಿಮಾಂಡ್ ಪಡೆದು ರಾಜ್ಯಕ್ಕೆ ಕರೆತಂದಿದ್ದರು. ಬಂಧನದ ವೇಳೆ ಶಾಸಕರು ತಮ್ಮ ಸಹಚರರೊಂದಿಗೆ ಕ್ಯಾಸಿನೊವನ್ನು ಗುತ್ತಿಗೆ ಪಡೆಯುವ ಸಲುವಾಗಿ ಮಾತುಕತೆ ನಡೆಸಲು ಗ್ಯಾಂಗ್ಟಾಕ್‌ಗೆ ಭೇಟಿ ನೀಡಿದ್ದರು ಎಂದು ತನಿಖಾ ಸಂಸ್ಥೆ ತಿಳಿಸಿದೆ.

ಕ್ರೆಡಿಟ್ ಕಾರ್ಡ್ ಲಿಮಿಟ್ ಹೆಚ್ಚಿಸುವ ನೆಪದಲ್ಲಿ ಬ್ಯಾಂಕ್ ಮಾಹಿತಿ ಪಡೆದು ಉದ್ಯಮಿಗೆ 21 ಲಕ್ಷ ವಂಚನೆ

ಕ್ರೈಂ ಬಾಕ್ಸ್

ಮೈಸೂರು, ಸೆ.8– ಕ್ರೆಡಿಟ್ ಕಾರ್ಡ್ ಲಿಮಿಟ್(ಮಿತಿ) ಹೆಚ್ಚಿಸುವ ನೆಪದಲ್ಲಿ ಕೈಗಾರಿಕೋದ್ಯಮಿ ಬ್ಯಾಂಕ್ ಖಾತೆಗೆ ಕನ್ನ ಹಾಕಿ, ಸುಮಾರು 21 ಲಕ್ಷ ರೂ. ಲಪಟಾಯಿಸಿರುವ ಘಟನೆ ಮೈಸೂರಿನಲ್ಲಿ ನಡೆದಿದೆ.

ಬ್ಯಾಂಕ್ ಉದ್ಯೋಗಿಗಳ ಸೋಗಿನಲ್ಲಿ ನಗರದ ಯಾದವಗಿರಿ ನಿವಾಸಿ, 76 ವರ್ಷದ ಕೈಗಾರಿಕೋದ್ಯಮಿಯ ವಿವರ ಪಡೆದಿರುವ ಖದೀಮರು, ಅವರಿಗೆ ತಿಳಿಯದಂತೆಯೇ ಹಣ ವರ್ಗಾವಣೆ ಮಾಡಿಕೊಂಡಿದ್ದಾರೆ.

ಈ ಸಂಬಂಧ ಸೆನ್ ಪೊಲೀಸ್ ಠಾಣೆಗೆ ದೂರು ನೀಡಿರುವ ಕೈಗಾರಿಕೋದ್ಯಮಿ, ಸೆ.4ರಂದು +447832 725604 ಸಂಖ್ಯೆಯಿಂದ ಬಂದ ಎಸ್‌ಎಂಎಸ್‌ನಲ್ಲಿ ಹೆಚ್‌ಡಿಎಫ್‌ಸಿ ಕ್ರೆಡಿಟ್ ಕಾರ್ಡ್‌ನ ಲಿಮಿಟ್ ಹೆಚ್ಚಿಸಲು ಇಮೇಲ್ ಐಡಿ, ಕ್ರೆಡಿಟ್ ಕಾರ್ಡ್ ಸಂಖ್ಯೆ, ಜನ್ಮ ದಿನಾಂಕ ಕಳುಹಿಸುವಂತೆ ಸೂಚಿಸಲಾಗಿತ್ತು. ನಂತರ ಕರೆ ಮಾಡಿ ಈ ಎಲ್ಲಾ ಮಾಹಿತಿ ಪಡೆದುಕೊಂಡರು. ನಂತರ ಹೆಚ್‌ಡಿಎಫ್‌ಸಿ ಕ್ರೆಡಿಟ್ ಕಾರ್ಡ್‌ನಿಂದ 1,00,485 ರೂ. ಅಪರಿಚಿತ ಖಾತೆಗೆ ವರ್ಗಾವಣೆಯಾಗಿತ್ತು. ಕೂಡಲೇ ಆ ಕ್ರೆಡಿಟ್ ಕಾರ್ಡ್ ಅನ್ನು ಬ್ಲಾಕ್ ಮಾಡಿಸಿದೆ. ಆದರೆ ಮರುದಿನ ನನ್ನ ಗಮನಕ್ಕೆ ಬಾರದಂತೆ ಐಡಿಎಫ್‌ಸಿ ಬ್ಯಾಂಕ್ ಖಾತೆಯಿಂದ 20 ಲಕ್ಷ ರೂ. ವರ್ಗಾವಣೆ ಮಾಡಿಕೊಂಡು ವಂಚಿಸಿರುವುದಾಗಿ ತಿಳಿಸಿದ್ದಾರೆ. ಈ ಬಗ್ಗೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು, ಮುಂದಿನ ಕ್ರಮ ಕೈಗೊಂಡಿದ್ದಾರೆ.

ಬಿಎಂ ಹ್ಯಾಬಿಟೇಟ್ ಮಾಲ್ ನಾಲ್ಕನೇ ಮಹಡಿಯಿಂದ ಆಕಸ್ಮಿಕವಾಗಿ ಬಿದ್ದು ನೌಕರ ಸಾವು

ರಕ್ಷಣೆಗೆ ಮುಂದಾದ ಯುವಕನಿಗೂ ಗಂಭೀರ ಗಾಯ

ಮೈಸೂರು, ಸೆ.8– ಕೆಲಸ ಮಾಡುತ್ತಿದ್ದಾಗ ಪಿಓಪಿ ಶೀಟ್ ಮುರಿದು ನೌಕರನೊಬ್ಬ ಸುಮಾರು 60 ಅಡಿ ಎತ್ತರದಿಂದ ಕೆಳಗೆ ಬಿದ್ದು ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಈ ವೇಳೆ ಆತನ ರಕ್ಷಣೆಗೆ ಮುಂದಾದ ಯುವಕನೂ ಗಂಭೀರವಾಗಿ ಗಾಯಗೊಂಡಿದ್ದಾನೆ. ಈ ದುರಂತ ಮೈಸೂರಿನ ಜಯಲಕ್ಷ್ಮೀಪುರಂನಲ್ಲಿರುವ ಬಿಎಂ ಹ್ಯಾಬಿಟೇಟ್ ಮಾಲ್‌ನಲ್ಲಿ ಸೋಮವಾರ ಸಂಜೆ ನಡೆದಿದೆ.

ಕಳೆದ ಆರು ತಿಂಗಳಿಂದ ಮಾಲ್‌ನಲ್ಲಿ ಟೆಕ್ನಿಷಿಯನ್ ಆಗಿ ಕಾರ್ಯ ನಿರ್ವಹಿಸುತ್ತಿದ್ದ ಹುಣಸೂರು ತಾಲೂಕಿನ ನೇರಳಕುಪ್ಪೆ ಗ್ರಾಮದ ಸುನೀಲ್(35) ಮೃತಪಟ್ಟಿದ್ದು, ಇವರ ರಕ್ಷಣೆಗೆ ಮುಂದಾದ ಗೋಕುಲಂ ನಿವಾಸಿ ಚಂದ್ರು(22) ತೀವ್ರವಾಗಿ ಗಾಯಗೊಂಡಿದ್ದಾರೆ. ಇವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಮಾಲ್‌ನ ಒಳ ಆವರಣದಲ್ಲಿ ಸುಮಾರು 60 ಅಡಿ ಎತ್ತರದಲ್ಲಿ ಅಳವಡಿಸಿದ್ದ ಬ್ಯಾನರ್ ತೆರವುಗೊಳಿಸುತ್ತಿದ್ದ ಸುನೀಲ್, ಆಕಸ್ಮಿಕವಾಗಿ ಪಿಓಪಿ ಮೇಲ್ಛಾವಣಿ ಶೀಟ್ ಮೇಲೆ ಕಾಲಿಟ್ಟಿದ್ದಾರೆ. ಈ ವೇಳೆ ಭಾರಕ್ಕೆ ಶೀಟ್ ಮುರಿದಿದ್ದರಿಂದ ಅವರು ಕೆಳಗೆ ಬಿದ್ದು, ತೀವ್ರ ರಕ್ತಸ್ರಾವದಿಂದ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಸಿನಿಮಾ ನೋಡಲೆಂದು ಮಾಲ್‌ಗೆ ಬಂದಿದ್ದ ಚಂದ್ರು, ಕೆಳಮಹಡಿಯಲ್ಲಿದ್ದರು. ಸುನೀಲ್ ಕೆಳಗೆ ಬೀಳುವುದನ್ನು ಗಮನಿಸಿ, ಅವರ ರಕ್ಷಣೆಗೆ ಮುಂದಾದರು. ಆದರೆ ಅವರೂ ಕೆಳಗೆ ಬಿದ್ದು, ಗಂಭೀರವಾಗಿ ಗಾಯಗೊಂಡಿದ್ದಾರೆ.

ವಿಷಯ ತಿಳಿಯುತ್ತಿದ್ದಂತೆ ಜಯಲಕ್ಷ್ಮೀಪುರಂ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಕುಮಾರ್ ಹಾಗೂ ಸಿಬ್ಬಂದಿ ಸ್ಥಳಕ್ಕೆ ದೌಡಾಯಿಸಿ, ಪರಿಶೀಲನೆ ನಡೆಸಿದ್ದಾರೆ. ಘಟನೆಗೆ ಕಟ್ಟಡದ ಮಾಲೀಕರ ನಿರ್ಲಕ್ಷ್ಯವೇ ಕಾರಣ ಎಂದು ಸುನೀಲ್ ತಂದೆ ದೂರು ನೀಡಿದ್ದು, ಈ ಸಂಬಂಧ ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದು ತಿಳಿದುಬಂದಿದೆ.

ಎಂಎಂಕೆ-ಎಸ್‌ಡಿಎಂ ಮಹಿಳಾ ಮಹಾವಿದ್ಯಾಲಯದಲ್ಲಿ ಶಿಕ್ಷಕರ ದಿನಾಚರಣೆ



ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನ ಅಂಗವಾಗಿ ಶಿಕ್ಷಕರ ದಿನಾಚರಣೆಯನ್ನು ನಡೆಸಲಾಯಿತು.

ಮೈಸೂರು,ಸೆ.8(ಎಸ್‌ಪಿಎನ್)–ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಎಂಎಂಕೆ ಮತ್ತು ಧರ್ಮಸ್ಥಳ ಮಂಜುನಾಥಸ್ವಾಮಿ ಮಹಿಳಾ ಮಹಾ ವಿದ್ಯಾಲಯದಲ್ಲಿ ಭಾರತ ರತ್ನ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನ ಅಂಗವಾಗಿ ಶಿಕ್ಷಕರ ದಿನವನ್ನು ಆಚರಿಸಲಾಯಿತು.

ಈ ವೇಳೆ ಪ್ರಾಂಶುಪಾಲರಾದ ಪ್ರೊ.ಎನ್.ಭಾರತಿ ಮಾತನಾಡಿ, ಎಲ್ಲ ವೃತ್ತಿಗಳನ್ನು ರೂಪಿಸುವ ಬಹು ದೊಡ್ಡ ಗೌರವದ ಹುದ್ದೆ ಶಿಕ್ಷಕ ಹುದ್ದೆ. ತಂದೆ-ತಾಯಿಯ ನಂತರ ಗುರು ಜ್ಞಾನದ ಬೆಳಕಿನ ಹಾದಿಯನ್ನು ತೋರಿ ವಿದ್ಯಾರ್ಥಿಯ ಸರ್ವತೋಮುಖ ಅಭಿವೃದ್ಧಿಗೆ ನಾಂದಿಯಾಡುತ್ತಾರೆ ಎಂದರು.

ಶಿಕ್ಷಣ ಮತ್ತು ಶಿಕ್ಷಕರು, ಶಾಲಾ ಕಾಲೇಜು ವಿದ್ಯಾರ್ಥಿಯ ಅಭ್ಯುದಯಕ್ಕೆ ಮೆಟ್ಟಿಲುಗಳಾಗಿವೆ. ಪ್ರತಿ ಶಿಕ್ಷಕನಲ್ಲೂ ಒಬ್ಬ ಜಾಗೃತ ವಿದ್ಯಾರ್ಥಿ ಇದ್ದು, ನಿತ್ಯವೂ ಸಂಶೋಧಕನಂತೆ ವಿದ್ಯಾರ್ಥಿಗಳ ಏಳಿಗೆಗೆ ಚಿಂತಿಸುವವನೇ ನಿಜವಾದ ಗುರುಸ್ಥಾನ ತುಂಬಬಲ್ಲರು. ಒಂದು ಸಂಸ್ಥೆಯಲ್ಲಿ ಶಿಕ್ಷಕರ ಜೊತೆಯಲ್ಲಿಯೇ ಕಾರ್ಯ ನಿರ್ವಹಿಸುವ ಶಿಕ್ಷಕೇತರ ವೃಂದದವರು ಶಿಕ್ಷಕರ ಸ್ಥಾನಮಾನದ ಸಮಾನಾಗಿ ನಿಲ್ಲುತ್ತಾರೆ. ಗುರು ಎಂಬ ಗೌರವದ ಸಂಬೋಧನೆಗೆ ಕಾರಣವಾಗುವ ಪ್ರತಿಯೊಬ್ಬರು ಸಮಾಜದ ಒಳಿತಿಗಾಗಿ ಕರ್ತವ್ಯ ನಿರ್ವಹಿಬೇಕು ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಐಕ್ಯೂಎಸಿ ಸಂಚಾಲಕಿ ಕೆ.ಎಸ್.ಸುಕೃತ, ವಿದ್ಯಾರ್ಥಿನಿ ಕ್ಷೇಮಪಾಲನಾಧಿಕಾರಿ ಜ್ಯೋತಿಲಕ್ಷ್ಮಿ ಜಿ. ಕಾವ್ಯ, ವಿದ್ಯಾರ್ಥಿನಿ ಸಂಘದ ಅಧ್ಯಕ್ಷೆ ಗಂಗಾಶ್ರೀ ಮತ್ತು ಕಾರ್ಯಕಾರಿ ಸಂಘದ ವಿದ್ಯಾರ್ಥಿ ಪ್ರತಿನಿಧಿಗಳು, ವಿವಿಧ ವಿಭಾಗಗಳ ಮುಖ್ಯಸ್ಥರು, ಅಧ್ಯಾಪಕರು ಉಪಸ್ಥಿತರಿದ್ದರು. ಕಾರ್ಯಕ್ರಮದ ಅನಂತರ ಅಧ್ಯಾಪಕ ವೃಂದದವರಿಗೆ ವಿದ್ಯಾರ್ಥಿನಿಯರಿಂದ ಸಾಂಸ್ಕೃತಿಕ ಕಾರ್ಯಕ್ರಮ ಮತ್ತು ಆಟೋಟಗಳ ಸ್ಪರ್ಧೆಯನ್ನು ಏರ್ಪಡಿಸಿ ಬಹುಮಾನವನ್ನು ನೀಡಲಾಯಿತು.

ಪುಸ್ತಕ ಓದುವುದರಿಂದ ವ್ಯಕ್ತಿತ್ವ ವಿಕಸನ

ಮೃಗಾಲಯ ಪ್ರಾಧಿಕಾರದ ಮಾಜಿ ಅಧ್ಯಕ್ಷೆ ಮಲ್ಲಿಗೆ ವೀರೇಶ್ ಅಭಿಮತ



ರಾಷ್ಟ್ರೀಯ 'ಒಂದು ಪುಸ್ತಕ ಓದು' ಆಚರಣೆ ಅಂಗವಾಗಿ ಏರ್ಪಡಿಸಿದ್ದ 3ನೇ ದಿನದ ಕಾರ್ಯಕ್ರಮವನ್ನು ಕರ್ನಾಟಕ ಮೃಗಾಲಯ ಪ್ರಾಧಿಕಾರದ ಮಾಜಿ ಅಧ್ಯಕ್ಷೆ ಮಲ್ಲಿಗೆ ವೀರೇಶ್ ತಬಲ ಬಾರಿಸುವ ಮೂಲಕ ಚಾಲನೆ ನೀಡಿದರು.

ಮೈಸೂರು, ಸೆ.8(ಎಸ್‌ಪಿಎನ್)– ಪುಸ್ತಕಗಳನ್ನು ನಾವು ಪ್ರೀತಿಸಿದರೆ, ಅದರಲ್ಲಿನ ಜ್ಞಾನ ನಮ್ಮ ಹೃದಯದಲ್ಲಿರುತ್ತದೆ ಎಂದು ಕರ್ನಾಟಕ ಮೃಗಾಲಯ ಪ್ರಾಧಿಕಾರದ ಮಾಜಿ ಅಧ್ಯಕ್ಷೆ ಮಲ್ಲಿಗೆ ವೀರೇಶ್ ಅಭಿಪ್ರಾಯಪಟ್ಟರು.

ಮೈಸೂರು ವಿಜಯನಗರದಲ್ಲಿರುವ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಹಾಗೂ ಸಂಸ್ಕೃತಿ ಬುಕ್ ಏಜೆನ್ಸೀಸ್ ಸಹಯೋಗದೊಂದಿಗೆ ನಡೆದ ರಾಷ್ಟ್ರೀಯ 'ಒಂದು ಪುಸ್ತಕ ಓದು' ಆಚರಣೆ ಅಂಗವಾಗಿ 3ನೇ ದಿನದ ಪುಸ್ತಕ ಪ್ರದರ್ಶನ ಮತ್ತು ಮಾರಾಟ ಮೇಳದಲ್ಲಿ ಭಾಗವಹಿಸಿ ಮಾತನಾಡಿದರು.

ಯುವ ಸಮೂಹ ಪುಸ್ತಕಗಳನ್ನು ಓದುವುದರಿಂದ ವ್ಯಕ್ತಿತ್ವ ವಿಕಸನಕ್ಕೆ ನಾಂದಿಯಾಗುತ್ತದೆ. ಹಾಗಾಗಿ ಪ್ರತಿಯೊಬ್ಬರು ಪುಸ್ತಕಗಳನ್ನು ಓದಿ, ವ್ಯಕ್ತಿತ್ವ ಮತ್ತು ಜ್ಞಾನ ವೃದ್ಧಿಸಿಕೊಳ್ಳಲು ಪ್ರಯತ್ನಿಸಬೇಕು ಎಂದು ಸಲಹೆ ನೀಡಿದರು.

ಹೂಟಗಳ್ಳಿಯ ಎಂ.ಪಿ.ಗೀತಾ ತಂಡದಿಂದ ಜಾನಪದ, ಭಾವಗೀತೆ ಹಾಗೂ ಸುಗಮ ಗೀತೆಗಳನ್ನು ಹಾಡಿ, ಪ್ರೇಕ್ಷಕರ ರಂಜಿಸಿದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮೈಸೂರು ವಿಜಯನಗರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಯು.ಬಿ. ಉದಯಕುಮಾರ್ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ಲೇಖಕ ಮತ್ತು ಪುಸ್ತಕ ಸಲಹೆಗಾರ ಸಂಸ್ಕೃತಿ ಸುಬ್ರಹ್ಮಣ್ಯ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಯುನಿಕ್ ಪಬ್ಲಿಷರ್ಸ್‌ನ ಶ್ರೀಗೌರಿ ಸುಬ್ರಹ್ಮಣ್ಯ ನಿರೂಪಿಸಿದರು.

ಬೆಂಗಳೂರು ಮೆಟ್ರೋ ನಿಲ್ದಾಣಕ್ಕೆ 'ಸೆಂಟ್ ಮೇರಿ' ಹೆಸರು ನಾಮಕರಣ

ಬೆಂಗಳೂರು, ಸೆ.8: ಬೆಂಗಳೂರು ನಗರದಲ್ಲಿನ ಒಂದು ಮೆಟ್ರೋ ನಿಲ್ದಾಣಕ್ಕೆ 'ಸೆಂಟ್ ಮೇರಿ' ಎಂಬ ಹೆಸರಿಡಬೇಕು ಎಂಬ ಪ್ರಸ್ತಾವನೆಯನ್ನು ಸ್ವೀಕರಿಸಲಾಗಿದೆ. ಈ ಹಿನ್ನೆಲೆಯಲ್ಲಿ ನಗರದ ಒಂದು ಮೆಟ್ರೋ ನಿಲ್ದಾಣಕ್ಕೆ ಸೆಂಟ್ ಮೇರಿ ಹೆಸರಿಸಲು ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುವುದು. ಇದಕ್ಕೆ ಅನುಮೋದನೆ ದೊರೆತ ನಂತರ ನಾಮಕರಣ ದಿನಾಂಕ ಘೋಷಣೆ ಮಾಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

ಬೆಂಗಳೂರಿನಲ್ಲಿ ನಡೆದ ಸೆಂಟ್ ಮೇರೀಸ್ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಇವತ್ತು ನಾನು ತುಂಬಾ ಸಂತೋಷದಿಂದ ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದೇನೆ. ಈ ಸಂದರ್ಭದಲ್ಲಿ ನಾಡಿನ ಜನತೆಗೆ ಸೆಂಟ್ ಮೇರಿಸ್ ಜನ್ಮದಿನದ ಶುಭಾಶಯ ಕೋರುತ್ತೇನೆ. ನಾನು ಮುಖ್ಯಮಂತ್ರಿ ಆಗಿ ಪ್ರತಿ ವರ್ಷ ತಪ್ಪದೇ ಈ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದೇನೆ. ಈ ಕಾರ್ಯಕ್ರಮದಲ್ಲಿ ಬಹಳ ಜನ ಹರಕೆ ಹೊತ್ತುಕೊಳ್ತಾರೆ, ನಂತರ ಹರಕೆ ತೀರಿಸ್ತಾರೆ. ಪ್ರತಿಯೊಬ್ಬರು ಕೂಡ ದೈಹಿಕ, ಮಾನಸಿಕವಾಗಿ ಆರೋಗ್ಯ ಕೊಡಲಿ ಅಂತ ತಾಯಿ ಸೆಂಟ್ ಮೇರಿಯನ್ನು ಪ್ರಾರ್ಥನೆ ಮಾಡುತ್ತಾರೆ. ಅದಕ್ಕೋಸ್ಕರ ಸೆಂಟ್ ಮೇರಿಗೆ ಆರೋಗ್ಯ ಮಾತೆ ಅಂತ ಕರಿತಾರೆ ಎಂದು ಹೇಳಿದರು.

ಭಾಗವತ ಪ್ರವಚನ ಸಪ್ತಾಹ ಮಂಗಳ ಮಹೋತ್ಸವ



ಮೈಸೂರು ಕೃಷ್ಣಮೂರ್ತಿಪುರಂನ ಸಪ್ತಗಿರಿ ನಿವಾಸದಲ್ಲಿ ನಡೆದ ಭಾಗವತ ಪ್ರವಚನ ಸಪ್ತಾಹ ಮಂಗಳ ಮಹೋತ್ಸವದಲ್ಲಿ ಉಪನ್ಯಾಸ ನೀಡಿದ ಪಂಡಿತ ಅನಿರುದ್ಧಾಚಾರ್ಯರನ್ನು ಶ್ರೀನಿವಾಸ-ಭಾಗ್ಯ ದಂಪತಿ ಗೌರವಿಸಿದರು.

ಮೈಸೂರು, ಸೆ.8– ಭಾಗವತ ಶ್ರವಣವು ಭಕ್ತಿ ಮತ್ತು ಭಾವವನ್ನು ಜಾಗೃತಗೊಳಿಸುತ್ತದೆ ಎಂದು ಪಂಡಿತ ಅನಿರುದ್ಧಾಚಾರ್ಯ ಪಾಂಡುರಂಗಿ ಹೇಳಿದರು.

ಶ್ರೀ ಸತ್ಯಾತ್ಮತೀರ್ಥ ಸ್ವಾಮೀಜಿ ಅಧಿಕಮಾಸ ವ್ರತಾಚರಣೆ ಅಂಗವಾಗಿ ಹಮ್ಮಿಕೊಂಡಿರುವ ಸರಣಿ ಕಾರ್ಯಕ್ರಮದ ನಿಮಿತ್ತ ಕೃಷ್ಣಮೂರ್ತಿಪುರಂನ ಶ್ರೀನಿವಾಸ ಅವರ ಸಪ್ತಗಿರಿ ನಿವಾಸದಲ್ಲಿ ನಡೆದ 'ಭಾಗವತ ಪ್ರವಚನ ಸಪ್ತಾಹ ಮಂಗಳ ಮಹೋತ್ಸವ'ದಲ್ಲಿ ಉಪನ್ಯಾಸ ನೀಡಿದರು.

ಭಾಗವತ ಶ್ರವಣ(ಕೇಳುವುದು) ಮಾಡಿದರೆ ಜೀವನವನ್ನು ಕಾಣುವ ವಿಧಾನವೇ ಬದಲಾಗುತ್ತದೆ. ಪ್ರಪಂಚವನ್ನು ಪರಿಭಾವಿಸುವ ದೃಷ್ಟಿ ಸುಧಾರಣೆಗೊಳ್ಳುತ್ತದೆ. ಪ್ರಕೃತಿಯ ಮಿತಿಗಳನ್ನು ಅರಿಯುವ ಪ್ರೌಢಿಮೆ ಪ್ರಾಪ್ತವಾಗುತ್ತದೆ. ಅನಂತ ಕಾಲದ ಯಶಸ್ಸಿನ ಸೂತ್ರ ಭಾಗವತ ಗ್ರಂಥದಲ್ಲಿದೆ. ಭಾಗವತ ಕೇವಲ ಧರ್ಮ ಗ್ರಂಥವಲ್ಲ, ಅದರಲ್ಲಿ ಬದುಕಿನ ಒಳಿತು-ಕೆಡುಕಿನ ಬಗ್ಗೆ ಸ್ಪಷ್ಟವಾಗಿ ತಿಳಿಸಲಾಗಿದೆ. ಆದರೆ ಇಂದಿನ ದಿನಮಾನದಲ್ಲಿ ನಾವು ಒಳಿತನ್ನು ಮರೆತು ನಿತ್ಯವೂ ದುಃಖಪಡುವ ಸ್ಥಿತಿ ಬಂದೊದಗಿದೆ. ನಾವು ನಮಗೆ ಮತ್ತು ಸಮಾಜಕ್ಕೆ ಹಿತಕರವಾದದ್ದನ್ನೇ ಮಾಡಿ ಆಯುಷ್ಯವನ್ನು ಸಾರ್ಥಕಪಡಿಸಿಕೊಳ್ಳಬೇಕು ಎಂದು ಅವರು ತಿಳಿಹೇಳಿದರು.

ಪರೀಕ್ಷಿತ ಮಹಾರಾಜನಿಗೆ ಕೇವಲ 7 ದಿನ ಮಾತ್ರ ಆಯುಷ್ಯವಿದೆ ಎಂದು ಶುಕಾಚಾರ್ಯರು ಹೇಳಿದಾಗ ಕೂಡಲೇ ಆತ ಎಚ್ಚೆತ್ತು ಮೋಕ್ಷ ಸಾಧನೆಯಲ್ಲಿ ತೊಡಗಿದ. ಆದರೆ ನಾವೆಲ್ಲಾ ಮುಂದಿನ 7 ನಿಮಿಷ ಬದುಕುತ್ತೇವೆಂಬ ಭರವಸೆಯೇ ಇಲ್ಲದ ಕಾಲಘಟ್ಟದಲ್ಲಿ ಇದ್ದೇವೆ. ಆದ್ದರಿಂದ ದೇವರು ಕೊಟ್ಟ ಸಾಧನಾ ಶರೀರ, ಬುದ್ಧಿ ಮತ್ತು ಇಂದ್ರಿಯಾದಿಗಳನ್ನು ಸತ್ಕಾರ್ಯಕ್ಕಾಗಿ ಮಾತ್ರ ಬಳಸಬೇಕು. ಆಗ ಮಾತ್ರ ಬದುಕಿರುವಷ್ಟು ಕ್ಷಣಗಳೂ ಆನಂದಮಯವಾಗುತ್ತವೆ ಎಂದು ಹೇಳಿದರು.

ಇದೇ ವೇಳೆ ಸಪ್ತಾಹ ನೆರವೇರಿಸಿಕೊಟ್ಟ ಶ್ರೀನಿವಾಸ-ಭಾಗ್ಯ ದಂಪತಿಗಳು ಅನಿರುದ್ಧಾಚಾರ್ಯರನ್ನು ಗೌರವಿಸಿದರು. ಹಿರಿಯ ಪಂಡಿತರಾದ ಮುಕುಂದಾಚಾರ್ಯ, ಗೋವಿಂದಾಚಾರ್ಯ ಪಾಂಡುರಂಗಿ ಸೇರಿದಂತೆ ಹಲವು ಹಿರಿಯರು ಉಪಸ್ಥಿತರಿದ್ದರು.

ಮೈಸೂರು ಮಿತ್ರ

ಮಾನವೀಯ ತತ್ವ ಸಾರಿದ ಶ್ರೀನಾರಾಯಣ ಗುರು

ಶಾಸಕ ದರ್ಶನ್



ನಾರಾಯಣ ಗುರು ಜಯಂತಿಯಲ್ಲಿ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.


ನಂಜನಗೂಡು, ಸೆ.8– ನಾರಾಯಣ ಗುರುಗಳು ಮೌಢ್ಯ, ಕಂದಾಚಾರ ಹಾಗೂ ಅಸಮಾನತೆ ವಿರುದ್ಧ ಹೋರಾಟ ನಡೆಸಿ ಸಮಾಜವನ್ನು ಜಾಗೃತಿಗೊಳಿಸಿದರು ಎಂದು ಶಾಸಕ ದರ್ಶನ್ ತಿಳಿಸಿದರು.

ನಗರದ ತಾಲೂಕು ಕಚೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯಿಂದ ಆಯೋಜಿಸಿದ್ದ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿಗೆ ಚಾಲನೆ ನೀಡಿ ಮಾತನಾಡಿದ ಅವರು, ಸಾಮಾಜಿಕ ಹಾಗೂ ಧಾರ್ಮಿಕ ಪರಿವರ್ತನೆಯ ಹರಿಕಾರ ಶ್ರೀನಾರಾಯಣ ಗುರುಗಳು ಒಂದೇ ಜಾತಿ, ಒಂದೇ ಮತ, ಒಂದೇ ದೇವರು ಎಂಬ ಮಾನವೀಯ ತತ್ವವನ್ನು ಸಾರಿದ ಮಹಾನ್ ತತ್ವಜ್ಞಾನಿ. ಅವರ ಸಮಾನತೆ, ಸಹೋದರತ್ವ ಮತ್ತು ಮಾನವೀಯ ಮೌಲ್ಯಗಳ ಬೋಧನೆ ಇಂದು ಸಮಾನತೆಯ ಸಮಾಜಕ್ಕೆ ದಾರಿ ತೋರಿಸುತ್ತಿದೆ ಎಂದರು.

ಮುಖ್ಯ ಭಾಷಣಕಾರ ಡಾ.ರಾಜು ಮಾತನಾಡಿ, ಕೇರಳದಲ್ಲಿ ಶೂದ್ರರಿಗೆ ದೇವಾಲಯ ಪ್ರವೇಶ ನಿರಾಕರಿಸಿದ ಸಂದರ್ಭ ತೀರ್ಮಾನದ ವಿರುದ್ಧ ಸಂಘರ್ಷಕ್ಕಿಳಿಯದೆ ನಾರಾಯಣ ಗುರುಗಳು ಶೂದ್ರರ ಆರಾಧನೆಯ ದೇವಾಲಯ ನಿರ್ಮಿಸಲು ಹಾಗೂ ಶೂದ್ರರನ್ನೇ ಅರ್ಚಕರನ್ನಾಗಿ ನೇಮಿಸುವಂತೆ ನೋಡಿಕೊಂಡರು. ಈ ರೀತಿ ಕೇರಳದಲ್ಲಿ 60ಕ್ಕೂ ಅಧಿಕ ದೇವಾಲಯ ಕಟ್ಟಿದರು. ಜೊತೆಗೆ ಕರ್ನಾಟಕದ ಮಂಗಳೂರಿನಲ್ಲೂ ದೇವಾಲಯ ನಿರ್ಮಿಸಿದರು. ಅಲ್ಲಿ ಈಗಲೂ ತಳ ಸಮುದಾಯದವರೇ ಅರ್ಚಕರಾಗಿ ಪೂಜೆ ಸಲ್ಲಿಸುತ್ತಿದ್ದಾರೆ. ಆ ಮೂಲಕ ಸರಳವಾಗಿ ಧರ್ಮ ಅರ್ಥವಾಗುವ ರೀತಿ ಪ್ರತಿಪಾದಿಸಿದರು ಎಂದರು.

ಈ ವೇಳೆ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಕೇಶವಮೂರ್ತಿ, ನಗರಸಭಾಧ್ಯಕ್ಷ ಶ್ರೀಕಂಠಸ್ವಾಮಿ, ತಹಸೀಲ್ದಾರ್ ಶಿವಕುಮಾರ್ ಕಾಸ್ನೂರ್, ಪೌರಾಯುಕ್ತ ವಿಜಯ್, ದಸಂಸ ಸಂಚಾಲಕ ಶಂಕರಪುರ ಸುರೇಶ್, ಅಬ್ದುಲ್ ಖಾದರ್, ಉದ್ಯಮಿ ಎನ್.ಟಿ.ಗಿರೀಶ್, ಜಿ.ಕೆ.ಮಂಜುನಾಥ್, ಕೃಷ್ಣಕುಮಾರ್, ಸಿಂಧುವಳ್ಳಿಪುರ ರಾಜು, ಹೆಚ್.ಎಸ್.ದಿಲೀಪ್, ನಾರಾಯಣ, ರಘು, ರಾಘವೇಂದ್ರ ಮತ್ತಿತರರಿದ್ದರು.

ಪಿರಿಯಾಪಟ್ಟಣದಲ್ಲಿ ನಾರಾಯಣ ಗುರು ಜಯಂತಿ


ಪಿರಿಯಾಪಟ್ಟಣದಲ್ಲಿ ನಾರಾಯಣ ಗುರು ಜಯಂತಿ ನಡೆಯಿತು.

ಪಿರಿಯಾಪಟ್ಟಣ, ಸೆ.8– ಅನಿಷ್ಟ ಪದ್ಧತಿಗಳ ವಿರುದ್ಧ ಹೋರಾಡಿ ಸಮಾನತೆಯ ಪ್ರತಿಪಾದತ್ವವನ್ನು ಸಾರಿದವರು ಬ್ರಹ್ಮಶ್ರೀ ನಾರಾಯಣ ಗುರುಗಳು ಎಂದು ಉಪನ್ಯಾಸಕ ಕಾಂತರಾಜ್ ತಿಳಿಸಿದರು.

ಪಟ್ಟಣದ ಕಮಲಮ್ಮ ಕರೀಗೌಡರ ಕಲ್ಯಾಣ ಮಂಟಪದಲ್ಲಿ ನಡೆದ ನಾರಾಯಣ ಗುರು ಜಯಂತಿಯಲ್ಲಿ ಉಪನ್ಯಾಸ ನೀಡಿ ಮಾತನಾಡಿದ ಅವರು, ನಾರಾಯಣ ಗುರುಗಳ ಪ್ರಮುಖ ಸಂದೇಶಗಳೆಂದರೆ ಒಂದೇ ಜಾತಿ, ಒಂದೇ ಮತ, ಒಂದೇ ದೇವರು, ವಿದ್ಯೆಯಿಂದ ಪ್ರಬುದ್ಧರಾಗಿ, ಸಂಘಟನೆಯಿಂದ ಬಲಿಷ್ಠರಾಗಿ ಹಾಗೂ ವಿದ್ಯೆಗೆ ಜಾತಿ, ಮತಗಳ ಭೇದವಿಲ್ಲ ಎಂಬುದು. ಅವರು ಜಾತಿ ವ್ಯವಸ್ಥೆ, ಅಸಮಾನತೆ ಮತ್ತು ದಬ್ಬಾಳಿಕೆ ವಿರೋಧಿಸಿ ಎಲ್ಲಾ ಮಾನವರಿಗೂ ಸಮಾನತೆ ಮತ್ತು ಸಹೋದರತ್ವವನ್ನು ಸಾರಿದರು. ದೇವಸ್ಥಾನಗಳ ಬಾಗಿಲು ಎಲ್ಲರಿಗೂ ತೆರೆದಿರಬೇಕು ಎಂದು ಧಾರ್ಮಿಕ ಸಮಾನತೆಯನ್ನು ಪ್ರತಿಪಾದಿಸಿದರು.

ಸಮಾನತೆಯ ಘೋಷಣೆ ಮೂಲಕ ನಾರಾಯಣ ಗುರುಗಳು ಜಾತಿ, ಮತಗಳ ತಾರತಮ್ಯ ತೊಡೆದು, ಎಲ್ಲರೂ ಒಂದೇ ಎಂಬ ಸಾರ್ವತ್ರಿಕ ತತ್ವವನ್ನು ಸಾರಿದರು ಎಂದರು.

ತಾಲೂಕು ಆರ್ಯ ಈಡಿಗರ ಸಮಾಜದ ಅಧ್ಯಕ್ಷ ಪಿ.ವೈ.ಮಲ್ಲೇಶ್ ಮಾತನಾಡಿ, ಬ್ರಹ್ಮರ್ಷಿ ನಾರಾಯಣ ಗುರುಗಳ ಜಯಂತಿ ಮಾಡಿದರಷ್ಟೇ ಸಾಲದು. ನಿತ್ಯ ನಾವು ಅವರ ಆಧ್ಯಾತ್ಮಿಕ ಚಿಂತನೆಯನ್ನು ಅಳವಡಿಸಿಕೊಂಡು ಅವರ ಮಾರ್ಗದರ್ಶನದಲ್ಲಿ ನಡೆದಾಗ ಮಾತ್ರ ಇಂತಹ ಕಾರ್ಯಕ್ರಮಗಳು ಅರ್ಥಪೂರ್ಣವಾಗುತ್ತದೆ. ಅವರ ಚಿಂತನೆಗಳು ವಿಶ್ವ ಶಾಂತಿ ಮತ್ತು ಸಹಬಾಳ್ವೆಗೆ ಪೂರಕವಾಗಿದ್ದು, ಇಂದಿನ ಜಗತ್ತಿಗೆ ಆದರ್ಶಪ್ರಾಯವಾಗಿದೆ ಎಂದರು.

ಸಮಾರಂಭದಲ್ಲಿ ಈಡಿಗರ ಸಮಾಜದ ಉಪಾಧ್ಯಕ್ಷ ಸಿ.ಎನ್.ನಾರಾಯಣ್, ಮಹದೇವ್, ಕಾರ್ಯದರ್ಶಿ ನಿಂಗರಾಜ್, ಖಜಾಂಚಿ ಕಾಂತರಾಜ್, ಮುಖಂಡರಾದ ಮಲ್ಲೇಶ್, ನಾಗರಾಜ್, ತಿಮ್ಮಪ್ಪ, ಉಮೇಶ್, ನಾಗರಾಜ್, ಗಿರೀಶ್ ಸೇರಿದಂತೆ ಇತರರಿದ್ದರು.

ಉಚಿತ ಆರೋಗ್ಯ ತಪಾಸಣಾ ಶಿಬಿರ



ಮೇಟಿಕುಪ್ಪೆಯಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ನಡೆಯಿತು.

ಹೆಚ್.ಡಿ.ಕೋಟೆ, ಸೆ.8– ತಾಲೂಕಿನ ಮೇಟಿಕುಪ್ಪೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ನಡೆಯಿತು.

ಶಿಬಿರ ಉದ್ಘಾಟಿಸಿ ಮಾತನಾಡಿದ ಹೆಚ್.ಡಿ.ಕೋಟೆ ಲಯನ್ಸ್ ಕ್ಲಬ್ ಅಧ್ಯಕ್ಷ ಭಾಸ್ಕರ್, ಮೇಟಿಕುಪ್ಪೆ ಗ್ರಾಮ ಕಾಡಂಚಿನ ಗ್ರಾಮವಾಗಿದ್ದು, ಇಲ್ಲಿ ಗಿರಿಜನರು, ಹಿಂದುಳಿದ ವರ್ಗದವರು, ಕೃಷಿ ಕಾರ್ಮಿಕರು ಹೆಚ್ಚಾಗಿ ವಾಸಿಸುತ್ತಿದ್ದು, ಹೃದಯ ಸಂಬಂಧಿ ಸಮಸ್ಯೆಗಳು, ಕಣ್ಣಿನ ತಪಾಸಣೆ, ಶ್ವಾಸಕೋಶ ಪರೀಕ್ಷೆ ಸೇರಿದಂತೆ ಇನ್ನಿತರ ಪರೀಕ್ಷೆಗಳನ್ನು ಮಾಡುವ ನಿಟ್ಟಿನಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಏರ್ಪಡಿಸಿದ್ದು, ಪ್ರತಿಯೊಬ್ಬರೂ ಶಿಬಿರದ ಪ್ರಯೋಜನ ಪಡೆಯಬೇಕು. ಮೈಸೂರಿನ ನುರಿತ ವೈದ್ಯರ ತಂಡ ಶಿಬಿರದಲ್ಲಿದ್ದು, ಪ್ರತಿಯೊಬ್ಬರೂ ತಮ್ಮ ಆರೋಗ್ಯ ಸಮಸ್ಯೆಗಳನ್ನು ಮುಕ್ತವಾಗಿ ಹಂಚಿಕೊಂಡು ಸಲಹೆಯೊಂದಿಗೆ ಚಿಕಿತ್ಸೆ ಪಡೆಯಬೇಕು ಎಂದರು.

ಶಿಬಿರದಲ್ಲಿ 70 ಮಂದಿ ರಕ್ತದೊತ್ತಡ ಮತ್ತು ಮಧುಮೇಹ ಪರೀಕ್ಷೆಗೆ ಒಳಪಟ್ಟರು. 40 ಮಂದಿ ಕಣ್ಣಿನ ತಪಾಸಣೆ ಮಾಡಿಸಿಕೊಂಡರು. ಕಣ್ಣಿನ ಸಮಸ್ಯೆ ಇರುವವರನ್ನು ಹೆಚ್ಚಿನ ಚಿಕಿತ್ಸೆಗೆ ಮೈಸೂರಿಗೆ ಬಂದು ತೋರಿಸಿಕೊಳ್ಳಲು ಸಲಹೆ ನೀಡಲಾಯಿತು. ಸಾಮಾನ್ಯ ರೋಗ ತಜ್ಞರು 70 ಮಂದಿ ತಪಾಸಣೆ ಮಾಡಿದರು. ಈ ಪೈಕಿ ಚರ್ಮ, ಹೃದಯ, ಮೂಳೆ ಸಮಸ್ಯೆ ಇರುವವರನ್ನು ಆಸ್ಪತ್ರೆಗೆ ಬರಲು ತಿಳಿಸಲಾಯಿತು. ಐವರಿಗೆ ಇಸಿಜಿ ಪರೀಕ್ಷೆ ಮಾಡಲಾಯಿತು.

ಶಿಬಿರದಲ್ಲಿ ಹಾರ್ಟ್ ಸಂಸ್ಥೆ ಸಂಯೋಜಕ ಶಿವಲಿಂಗ, ಸೇವಾ ಭಾರತಿ ಸಂಸ್ಥೆಯ ಅಚ್ಯುತ್ ರಾವ್, ಶಿವಕುಮಾರ್, ವಕೀಲರಾದ ಸರಸ್ವತಿ, ಮೈಸೂರಿನ ಅವೆಂಟ್ ಬಿಕೆಜಿ ಆಸ್ಪತ್ರೆ ಸಾಮಾನ್ಯ ರೋಗ ತಜ್ಞರಾದ ಲ್ಯಾನ್ಸಿ, ಸೈಯದ್ ಇಸ್ಮಾಯಿಲ್, ಪ್ರಶಾಂತ್, ಶಮಂತ್ ಮತ್ತು ತಂಡದವರು, ಎಎಸ್‌ಜಿ ಕಣ್ಣಿನ ಆಸ್ಪತ್ರೆಯ ಮಹೇಶ್, ರಘು, ಮೈಸೂರು ಸಿಪ್ಲ ಬ್ರಿತ್ ಫ್ರೀ ನಾ ಮಹಮ್ಮದ್ ಸಬೀರ್, ಸಾರ್ವಜನಿಕರು ಇದ್ದರು.

ಸಮೀಕ್ಷೆಯಲ್ಲಿ ಒಕ್ಕಲಿಗ ಎಂದೇ ಬರೆಸಿ


ಸಭೆಯಲ್ಲಿ ಬಾಲಗಂಗಾಧರನಾಥ ಸ್ವಾಮೀಜಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು.

ಬನ್ನೂರು, ಸೆ.8– ರಾಜ್ಯ ಸರ್ಕಾರ ಹಿಂದುಳಿದ ವರ್ಗಗಳ ಆಯೋಗದ ಮೂಲಕ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಸಮೀಕ್ಷೆ ನಡೆಸಲಿದ್ದು, ಗಣತಿದಾರರು ಮನೆ ಮನೆಗೆ ಬಂದಾಗ ಒಕ್ಕಲಿಗ ಜನಾಂಗದವರು ಒಕ್ಕಲಿಗ ಎಂದೇ ನಮೂದಿಸಬೇಕೆಂದು ಆದಿಚುಂಚನಗಿರಿ ಮೈಸೂರು ಶಾಖಾ ಮಠದ ಸೋಮೇಶ್ವರನಾಥ ಸ್ವಾಮೀಜಿ ತಿಳಿಸಿದರು.

ಪಟ್ಟಣದ ಆದಿಚುಂಚನಗಿರಿ ವಿದ್ಯಾಸಂಸ್ಥೆ ಆವರಣದಲ್ಲಿ ನಡೆದ ಒಕ್ಕಲಿಗ ಸಂಘದ ಸಭೆಯಲ್ಲಿ ಮಾತನಾಡಿದ ಅವರು, ಒಕ್ಕಲಿಗ ಸಮಾಜಕ್ಕೆ ಇತಿಹಾಸವಿದೆ. ಸಮುದಾಯದ ಅನೇಕ ವ್ಯಕ್ತಿಗಳು ಉತ್ತಮ ಸೇವಾ ಕಾರ್ಯದಲ್ಲಿ ತೊಡಗಿದ್ದಾರೆ ಎಂದ ಅವರು, ಒಕ್ಕಲಿಗ ಸಮಾಜ ಶೇ.4ರಷ್ಟು ಮಾತ್ರ ಮೀಸಲಾತಿ ಹೊಂದಿದ್ದು, ಮುಂಬರುವ ಸಮೀಕ್ಷೆ ದೃಷ್ಟಿಯಿಂದ ಬಹಳಷ್ಟು ಮಹತ್ವದ್ದಾಗಿ ಎಂದರು.

ಶಿಕ್ಷಣ, ಉದ್ಯೋಗ, ಆಸ್ತಿ, ಆರ್ಥಿಕ ಪರಿಸ್ಥಿತಿ ಮೊದಲಾದ ಮಾಹಿತಿಯನ್ನು ಯಾವುದೇ ಕಾರಣಕ್ಕೂ ಹೆಚ್ಚು ಕಡಿಮೆ ಮಾಡಬಾರದು. ಎಲ್ಲರೂ ತಮ್ಮ ಊರುಗಳಲ್ಲಿ ತಮ್ಮ ಸಮುದಾಯದವರಿಗೆ ಮಾಹಿತಿ ನೀಡಿ ಸಮೀಕ್ಷಾ ಕಾರ್ಯ ಯಶಸ್ವಿಯಾಗಿ ನಡೆಯುವಂತೆ ನೋಡಿಕೊಳ್ಳಬೇಕು. ಸಮುದಾಯದ ಅಭಿವೃದ್ಧಿಗೆ ಮೀಸಲಾತಿಯು ಬಹಳಷ್ಟು ಮುಖ್ಯವಾಗಿದೆ ಎಂದು ತಿಳಿಸಿದರು.

ತಾಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ವೈ.ಎಸ್.ರಾಮಸ್ವಾಮಿ ಮಾತನಾಡಿ, ಈ ತಿಂಗಳ 22 ರಿಂದ ಜಾತಿಗಣತಿ ಕಾರ್ಯ ನಡೆಯಲಿದ್ದು, ಒಕ್ಕಲಿಗ ಸಮಾಜದವರು ತಪ್ಪದೇ ಮನೆಗಳಲ್ಲಿದ್ದು, ಸಮೀಕ್ಷೆದಾರರು ಕೇಳುವ ಮಾಹಿತಿಯನ್ನು ಸಮರ್ಪಕವಾಗಿ ನೀಡಿ ಸಮೀಕ್ಷೆಯು ಯಶಸ್ವಿಯಾಗಿ ನಡೆಯಲು ಅನುಕೂಲ ಮಾಡಿಕೊಡುವಂತೆ ತಿಳಿಸಿದರು.

ಈ ವೇಳೆ ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ಚನ್ನಕೇಶವ, ಕೃಷ್ಣೇಗೌಡ, ಜಿಲ್ಲಾ ಒಕ್ಕಲಿಗ ಸಂಘದ ಕಾರ್ಯದರ್ಶಿ ಚೇತನ್, ರವಿಕುಮಾರ್, ತಾಲೂಕು ಪ್ರಧಾನ ಕಾರ್ಯದರ್ಶಿ ಎನ್.ಎಂ.ರಾಮಚಂದ್ರ, ಚನ್ನೇಗೌಡ, ಬಿ.ಎಂ.ಕೃಷ್ಣೇಗೌಡ, ಅತ್ತಹಳ್ಳಿ ಸತೀಶ, ಜಯರಾಮೇಗೌಡ, ಚನ್ನೇಗೌಡ, ಜಿಲ್ಲಾ ಒಕ್ಕಲಿಗ ಸಂಘದ ಉಪಾಧ್ಯಕ್ಷ ಮಹೇಶ್, ಪ್ರಸನ್ನ, ರಾಮಲಿಂಗೇಗೌಡ, ಮಹೇಂದ್ರ, ಲೋಕೇಶ್, ನಾಗಣ್ಣ, ಶಂಕರೇಗೌಡ, ಬಸವನಹಳ್ಳಿ ರಾಜು, ಸೀಹಳ್ಳಿ ರೈತ ಮುಖಂಡ ರವಿ ಸೇರಿ ದಂತೆ ವಿವಿಧ ಸಂಘ ಸಂಸ್ಥೆಯ ಮುಖಂಡರು, ಒಕ್ಕಲಿಗ ಸಮಾಜದವರು ಇದ್ದರು.

ಶಾಲಾ ಮಕ್ಕಳಿಗೆ ಕ್ರೀಡಾ ಸಾಮಗ್ರಿ ವಿತರಣೆ


ಶಾಲಾ ಮಕ್ಕಳಿಗೆ ಗ್ರಾಪಂ ಅಧ್ಯಕ್ಷ ಲೋಕೇಶ್ ಕ್ರೀಡಾ ಸಾಮಗ್ರಿ ವಿತರಿಸಿದರು.

ಮೂಗೂರು, ಸೆ.8– ಇಲ್ಲಿನ ಗ್ರಾಪಂ ವ್ಯಾಪ್ತಿಯ ಸರ್ಕಾರಿ ಶಾಲಾ ಮಕ್ಕಳಿಗೆ ಕ್ರೀಡಾ ಸಾಮಗ್ರಿಗಳನ್ನು ಗ್ರಾಪಂ ಅಧ್ಯಕ್ಷ ಎಂ.ಡಿ.ಲೋಕೇಶ್ ವಿತರಿಸಿದರು.

ಬಳಿಕ ಮಾತನಾಡಿದ ಅವರು, ಮಾನಸಿಕ ಹಾಗೂ ದೈಹಿಕ ಆರೋಗ್ಯ ವೃದ್ಧಿಗೆ ಕ್ರೀಡೆ ಸಹಕಾರಿ. ಶಾಲಾ ಅವಧಿ ಹೊರತುಪಡಿಸಿ ಕ್ರೀಡಾ ಚಟುವಟಿಕೆಯಲ್ಲಿ ತೊಡಗಿ ನೀಡಿರುವ ಸೌಲಭ್ಯ ಬಳಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಪಿಡಿಓ ಅಮ್ಜದ್ ಪಾಷ ಮಾತನಾಡಿ, 15ನೇ ಹಣಕಾಸು ಅನುದಾನದಡಿ 3 ಲಕ್ಷ ರೂ. ವೆಚ್ಚದ ಕ್ರೀಡಾ ಸಾಮಗ್ರಿಗಳನ್ನು ಖರೀದಿಸಿ ಗ್ರಾಪಂ ವ್ಯಾಪ್ತಿಯ ಹೊಸಹಳ್ಳಿ, ಹೊಸಹಳ್ಳಿ ಮೋಳೆ, ಮೂಗೂರು ಸರ್ಕಾರಿ ಹಿರಿಯ ಪ್ರಾಥಮಿಕ ಪ್ರೌಢ ಶಾಲೆ ಹಾಗೂ ಕಾಲೇಜು ವಿಭಾಗದ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿದೆ ಎಂದರು.

ಈ ವೇಳೆ ಮೂಗೂರು ಕೆಪಿಎಸ್ ಶಾಲೆ ಮುಖ್ಯಸ್ಥರು, ಕಾಲೇಜು ಪ್ರಾಂಶುಪಾಲ ರಾಚಯ್ಯ, ಗ್ರಾಪಂ ಉಪಾಧ್ಯಕ್ಷೆ ಭಾಗ್ಯ, ಮಾಜಿ ಉಪಾಧ್ಯಕ್ಷ ಜಿ.ಎಸ್.ಮೋಹನ್ ಕುಮಾರ್, ಗ್ರಾಪಂ ಸದಸ್ಯ ಗೌರೀಶ್, ಮನು, ಚೇತನ್, ಕಾರ್ಯದರ್ಶಿ ದೀಪಾ, ಕುಮಾರ್, ಜವರೇಗೌಡ, ಶಶಿಕುಮಾರ್, ಶಾಲಾ ಶಿಕ್ಷಕರು, ಗ್ರಾಪಂ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

ಭೇರ್ಯ ಗ್ರಾಪಂಗೆ ರೇಖಾ ಮಹದೇವ್ ಅಧ್ಯಕ್ಷೆ


ಭೇರ್ಯ ಗ್ರಾಪಂ ಅಧ್ಯಕ್ಷೆಯಾಗಿ ರೇಖಾ ಮಹದೇವ್ ಆಯ್ಕೆಯಾದರು.

ಭೇರ್ಯ, ಸೆ.8– ಭೇರ್ಯ ಗ್ರಾಮ ಪಂಚಾಯತಿ ಅಧ್ಯಕ್ಷೆಯಾಗಿ ರೇಖಾ ಮಹದೇವ್ ಆಯ್ಕೆಯಾದರು.

ಈ ಹಿಂದಿನ ಅಧ್ಯಕ್ಷ ಬಿ.ಕೆ.ಮಂಜಪ್ಪ ಅವರ ರಾಜೀನಾಮೆಯಿಂದ ತೆರವಾದ ಸ್ಥಾನಕ್ಕೆ ಗ್ರಾಪಂ ಆವರಣದಲ್ಲಿ ನಡೆದ ಚುನಾವಣೆಯಲ್ಲಿ ರೇಖಾ ಮಹದೇವ್ ಮತ್ತು ಬಿ.ಎಸ್.ಕೃಷ್ಣೇಗೌಡ ನಾಮಪತ್ರ ಸಲ್ಲಿಸಿದರು. ನಂತರ ನಡೆದ ಚುನಾವಣೆಯಲ್ಲಿ 8 ಮತ ಪಡೆದು ರೇಖಾ ಮಹದೇವ್ ಅಧ್ಯಕ್ಷೆಯಾಗಿ ಆಯ್ಕೆಯಾದರೇ, ಪ್ರತಿಸ್ಪರ್ಧಿ ಬಿ.ಎಸ್.ಕೃಷ್ಣೇಗೌಡ 7 ಮತಗಳನ್ನು ಪಡೆದು ಪರಾಭವಗೊಂಡರು. ಈ ವೇಳೆ ನೂತನ ಅಧ್ಯಕ್ಷರ ಆಯ್ಕೆಯನ್ನು ಚುನಾವಣಾಧಿಕಾರಿ ಪಶು ವೈದ್ಯಕೀಯ ಇಲಾಖೆಯ ಡಾ.ರಾಮು ಪ್ರಕಟಿಸಿದರು. ಪಿಡಿಓ ಮಮತ ಹಾಗೂ ಲೆಕ್ಕ ಸಹಾಯಕಿ ಅಶ್ವಿನಿ ಸಹಕಾರ ನೀಡಿದರು.

ನೂತನ ಅಧ್ಯಕ್ಷರ ಆಯ್ಕೆಯಾಗುತ್ತಿದ್ದಂತೆಯೇ ಸ್ಥಳದಲ್ಲಿದ್ದ ಮುಖಂಡರು, ಗ್ರಾಮಸ್ಥರು ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಾಚರಣೆ ಮಾಡಿದರು.

ನೂತನ ಅಧ್ಯಕ್ಷೆ ರೇಖಾ ಮಹದೇವ್ ಮಾತನಾಡಿ, ಪಕ್ಷಾತೀತವಾಗಿ ನನಗೆ ಮತ ನೀಡಿದ ಎಲ್ಲಾ ಗ್ರಾಪಂ ಸದಸ್ಯರಿಗೂ ಧನ್ಯವಾದ ತಿಳಿಸುತ್ತೇನೆ. ಜಿಲ್ಲೆಗೆ ಭೇರ್ಯ ಗ್ರಾಪಂ ಅನ್ನು ಮಾದರಿ ಮಾಡಲು ಎಲ್ಲಾ ಸದಸ್ಯರ ಸಹಕಾರ ಅಗತ್ಯ. ನರೇಗಾ ಯೋಜನೆ ಹಾಗೂ ಮತ್ತೊಂದು ಸ್ವಚ್ಛತಾ ವಾಹನ ನೀಡುವಂತೆ ಜಿಪಂ ಸಿಇಓ ಅವರಿಗೆ ಮನವಿ ಮಾಡಿ ಪತ್ರ ಬರೆಯುವುದಾಗಿ ತಿಳಿಸಿದ ಅವರು ಗ್ರಾಮದಲ್ಲಿ ಹಲವು ಸಮಸ್ಯೆಗಳಿದ್ದು, ನನ್ನ ಅಧಿಕಾರಾವಧಿಯಲ್ಲಿ ಸಾಧ್ಯವಾದಷ್ಟು ಬಗೆಹರಿಸುತ್ತೇನೆ ಎಂದರು.

ಚುನಾವಣೆ ಸಭೆಯಲ್ಲಿ ಸದಸ್ಯರಾದ ಬಿ.ಕೆ.ಕುಮಾರ್, ಶಿವಕುಮಾರ್, ಮೊಹಸೀನ್ ತಾಜ್, ಹರ್ಷವರ್ಧಿನಿ, ಜ್ಯೋತಿ, ಶಾಂತಮ್ಮ, ಬಿ.ಬಿ.ಶಿವಣ್ಣ, ಬಿ.ಪಿ.ಪ್ರಕಾಶ್, ಬಿ.ಕೆ.ಮಂಜಪ್ಪ, ಬಿ.ಎಲ್.ರಾಜಶೇಖರ, ಜಯಲಕ್ಷ್ಮಿ, ತಾಯಮ್ಮ, ರೂಪ ಹಾಗೂ ಮುಖಂಡರು ಇದ್ದರು.

ನಂ.ಗೂಡಲ್ಲಿ ಫುಟ್‌ಪಾತ್ ತೆರವು ಕಾರ್ಯಾಚರಣೆ


ನಂಜನಗೂಡಿನಲ್ಲಿ ನಗರಸಭೆ ಅಧಿಕಾರಿಗಳು ಫುಟ್‌ಪಾತ್ ತೆರವುಗೊಳಿಸಿದರು.

ನಂಜನಗೂಡು, ಸೆ.8– ನಗರದ ರಾಷ್ಟ್ರಪತಿ ರಸ್ತೆಯಲ್ಲಿ ಪಾದಚಾರಿ ಮಾರ್ಗ ಅತಿಕ್ರಮಿಸಿಕೊಂಡು ವ್ಯಾಪಾರ ಮಾಡುತ್ತಿದ್ದ ಶೆಡ್‌ಗಳು, ಅಂಗಡಿ ಮುಂಭಾಗದ ಶೆಲ್ಟರ್‌ಗಳನ್ನು ನಗರಸಭೆ ಅಧಿಕಾರಿಗಳು ಸೋಮವಾರ ಜೆಸಿಬಿ ಮೂಲಕ ತೆರವುಗೊಳಿಸಿದರು.

ಸುಪ್ರೀಂ ಕೋರ್ಟ್ ಆದೇಶದ ಹಿನ್ನೆಲೆಯಲ್ಲಿ ನಗರಸಭೆ ಆಯುಕ್ತ ವಿಜಯ್ ಹಾಗೂ ಸಂಚಾರ ಪೊಲೀಸ್ ಠಾಣೆಯ ಎಸ್‌ಐ ಕೃಷ್ಣಕಾಂತ ಕೋಳಿ ನೇತೃತ್ವದಲ್ಲಿ ಫುಟ್‌ಪಾತ್ ಒತ್ತುವರಿ ತೆರವುಗೊಳಿಸಲಾಯಿತು.

ಸುದ್ದಿಗಾರರೊಂದಿಗೆ ಎಸ್‌ಐ ಕೃಷ್ಣಕಾಂತ ಕೋಳಿ ಮಾತನಾಡಿ, ವ್ಯಾಪಾರಿಗಳಿಗೆ ಒತ್ತುವರಿ ತೆರವುಗೊಳಿಸುವಂತೆ ಸೂಚಿಸಲಾಗಿತ್ತು. ಆದರೆ ಸೂಚನೆ ಪಾಲಿಸದ ವ್ಯಾಪಾರಿಗಳ ವಿರುದ್ಧ ಮೊಕದ್ದಮೆ ಹೂಡಲಾಗಿದೆ. ತೆರವು ಕಾರ್ಯಾಚರಣೆ ಮಂಗಳವಾರವೂ ಮುಂದುವರೆಯಲಿದೆ. ನಗರದ ಪ್ರಮುಖ ರಸ್ತೆಗಳಲ್ಲಿ ಸಂಚಾರ ಪೊಲೀಸ್ ಠಾಣೆ ವತಿಯಿಂದ ವಾಹನ ನಿಲ್ದಾಣಕ್ಕೆ ಜಾಗ ಗುರ್ತಿಸಿ ಸೂಚನಾ ಫಲಕಗಳನ್ನು ನೆಡಲಾಗಿದ್ದು, ನಿಯಮ ಉಲ್ಲಂಘಿಸುವ ವಾಹನಗಳ ಮಾಲೀಕರ ವಿರುದ್ಧ ಕ್ರಮ ವಹಿಸಲಾಗುವುದು. ಅನಧಿಕೃತವಾಗಿ ಫುಟ್‌ಪಾತ್ ಒತ್ತುವರಿ ಮಾಡಿಕೊಂಡಿರುವ ವ್ಯಾಪಾರಸ್ಥರಿಗೆ ಸಂಚಾರ ಪೊಲೀಸ್ ನಿಯಮ 92 (ಡಿ) ಕರ್ನಾಟಕ ಪೊಲೀಸ್ ಆಕ್ಟ್ ರಿತ್ಯಾ ನೋಟಿಸ್ ನೀಡಿ ಎಚ್ಚರಿಕೆ ನೀಡಲಾಗಿದೆ ಎಂದರು.

ತೆರವು ಕಾರ್ಯಾಚರಣೆಯಲ್ಲಿ ನಗರಸಭೆ ಪರಿಸರ ಮತ್ತು ನೈರ್ಮಲ್ಯಾಧಿಕಾರಿ ಮೈತ್ರಿಯ ದೇವಿ, ಆರೋಗ್ಯಾಧಿಕಾರಿಗಳಾದ ವಸಂತ್, ಆದರ್ಶ್, ಸಂಚಾರ ಪೊಲೀಸ್ ಠಾಣೆ ಸಿಬ್ಬಂದಿ ಇದ್ದರು.

ಪ್ರೇಕ್ಷಕರ ಮನಸೂರೆಗೊಂಡ ಮಿಸ್ಟರ್ ಗುಂಡಣ್ಣ ನಾಟಕ


ನಟ ಕುಮಾರ್ ಅರಸೇಗೌಡ ಅವರನ್ನು ಸನ್ಮಾನಿಸಲಾಯಿತು.

ಕಂಪಲಾಪುರ, ಸೆ.8– ಪ್ರಸ್ತುತ ನಾಟಕ ಕಲೆಗಳು ಜೀವಂತವಾಗಿವೆ ಎಂಬುದಕ್ಕೆ 'ಮಿಸ್ಟರ್ ಗುಂಡಣ್ಣ' ನಾಟಕವೇ ಸಾಕ್ಷಿ.

ಕಂಪಲಾಪುರ ಕೊಪ್ಪಲಿನ ಏಕದಂತ ಗೆಳೆಯರ ಬಳಗದಿಂದ ಮೊದಲ ವರ್ಷದ ಗಣೇಶೋತ್ಸವದಲ್ಲಿ ಏರ್ಪಡಿಸಿದ್ದ ಮಿಸ್ಟರ್ ಗುಂಡಣ್ಣ ನಾಟಕ ನೆರೆದಿದ್ದವರನ್ನು ನಗೆಗಡಲಲ್ಲಿ ತೇಲಿಸಿತು. ಪ್ರಾರಂಭದಿಂದ ಅಂತ್ಯದವರೆಗೂ ನಗುವಿಗೆ ಬಿಡುವೇ ನೀಡದೆ ಗುಂಡಣ್ಣ ಪಾತ್ರಧಾರಿ(ಮಾದಿಪ್ರಕಾಶ್) ಪ್ರೇಕ್ಷಕರ ಹೊಟ್ಟೆ ಹುಣ್ಣಾಗಿಸುವಷ್ಟು ನಗಿಸಿದರು. ಉಳಿದಂತೆ ಶೇಷಾಚಲ (ಹುರ), ಮಂಡ್ಯ ಜಯರಾಂ, ಕುಮಾರ್ ಅರಸೇಗೌಡ, ಮೈಸೂರು ಗೋಪಿ, ಗೌರಮ್ಮ, ಮಹೇಶ್ವರಿ ಇತರರು ತಮ್ಮ ಪಾತ್ರಕ್ಕೆ ಜೀವ ತುಂಬಿ ನಟಿಸಿ ಎಲ್ಲರ ಮೆಚ್ಚುಗೆಗೆ ಪಾತ್ರರಾದರು. ಸಂಗೀತ ಅಲೆಗ್ಸಾಂಡರ್, ಸತ್ಯ, ವರ್ಣಾಲಂಕಾರ ನಾಗೇಶ್ ಅವರದಾಗಿತ್ತು. ಗೆಳೆಯರ ಬಳಗದ ಪರವಾಗಿ ನಟ ಕುಮಾರ್ ಅರಸೇಗೌಡ ರವರನ್ನು ಮುಖಂಡ ಅನಿಲ್ ಸನ್ಮಾನಿಸಿದರು.



ಶ್ರೀಸಿದ್ದಮಲ್ಲಿಕಾರ್ಜುನ ಸ್ವಾಮೀಜಿಗಳಿಗೆ ಸನ್ಮಾನ

ತಲಕಾಡು ನೆಲಮಂಗಲದ ಪವಾಡ ಶ್ರೀಬಸವಣ್ಣ ದೇವರ ಮಠದಲ್ಲಿ ನಡೆದ ಶ್ರೀಸದಾಶಿವ ಸ್ವಾಮೀಜಿಗಳ ನಿರಂಜನ ಪಟ್ಟಾಧಿಕಾರ ಸುವರ್ಣ ಮಹೋತ್ಸವದಲ್ಲಿ ಹಸ್ತಿಕೇರಿ ಮಠದ ಡಾ.ಶ್ರೀಸಿದ್ದಮಲ್ಲಿಕಾರ್ಜುನ ಸ್ವಾಮೀಜಿಗಳನ್ನು ಸನ್ಮಾನಿಸಲಾಯಿತು.

ವಿಚಾರಣೆ ನೆಪದಲ್ಲಿ ಯುವಕರ ಮೇಲೆ ಪೊಲೀಸರಿಂದ ತೀವ್ರ ಹಲ್ಲೆ

ಸಿಪಿಐ, ಎಸ್‌ಐ ವಿರುದ್ಧ ಕ್ರಮಕ್ಕೆ ದಸಂಸ, ಸಂತ್ರಸ್ತ ಯುವಕರ ಆಗ್ರಹ



ಯುವಕ ಗಾಯಗೊಂಡಿರುವುದು. ಮತ್ತೊಂದು ಚಿತ್ರದಲ್ಲಿ ದಸಂಸ ಕಾರ್ಯಕರ್ತರು ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ತಿ.ನರಸೀಪುರ, ಸೆ.8– ಕ್ಷುಲ್ಲಕ ಕಾರಣಕ್ಕೆ ನಡೆದ ದಾಯಾದಿ ಕಲಹ ಸಂಬಂಧ ವಿಚಾರಣೆಗೆ ಕರೆದೊಯ್ದು ಐವರು ಯುವಕರ ಮೇಲೆ ಹಲ್ಲೆ ನಡೆಸಿರುವ ಪೊಲೀಸರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ದಲಿತ ಸಂಘರ್ಷ ಸಮಿತಿ ಹಾಗೂ ಸಂತ್ರಸ್ತ ಯುವಕರು ಹಿರಿಯ ಪೊಲೀಸ್ ಅಧಿಕಾರಿಗಳು ಮತ್ತು ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ.

ಯಾವುದೇ ಲಿಖಿತ ದೂರು ದಾಖಲಾಗದಿದ್ದರೂ ಪೊಲೀಸರು ವಿಚಾರಣೆ ನೆಪದಲ್ಲಿ ತಾಲೂಕಿನ ತುಂಬಲ ಗ್ರಾಮದ ಆನಂದ್, ಅರ್ಜುನ್, ಪೃಥ್ವಿ, ಪ್ರವೀಣ್ ಹಾಗೂ ಅಪ್ಪು ಎಂಬ ಯುವಕರನ್ನು ಪೊಲೀಸ್ ಠಾಣೆಗೆ ಕರೆದೊಯ್ದು ಅಮಾನುಷವಾಗಿ ಹಲ್ಲೆ ನಡೆಸಿದ್ದಾರೆ. ಈ ಪೈಕಿ ಆನಂದ್ ಹಾಗೂ ಅರ್ಜುನ್ ಅವರ ದೇಹದ ಭಾಗಗಳು ಪೊಲೀಸರ ಏಟಿನಿಂದಾಗಿ ನೀಲಿಗಟ್ಟಿದ್ದು, ಪೃಥ್ವಿಯ ಬೆನ್ನು ಹಾಗೂ ಪ್ರವೀಣ್ ತೊಡೆಗೆ ತೀವ್ರ ಪೆಟ್ಟಾಗಿ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆದಿದ್ದಾರೆ. ಠಾಣೆಯ ಇನ್ಸ್‌ಪೆಕ್ಟರ್ ಧನಂಜಯ, ಎಸ್‌ಐ ಜಗದೀಶ್ ಧೂಳ್‌ಶೆಟ್ಟಿ, ಎಎಸ್‌ಐ ಶಂಕರ್ ಹಾಗೂ ಇಬ್ಬರು ಪೇದೆಗಳ ವಿರುದ್ಧ ನಂಜನಗೂಡು ಉಪವಿಭಾಗದ ಡಿವೈಎಸ್‌ಪಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ದೂರು ನೀಡಲಾಗುವುದು ಎಂದು ಹಲ್ಲೆಗೊಳಗಾದ ಯುವಕರು ತಿಳಿಸಿದ್ದಾರೆ.

ಪಟ್ಟಣದ ಅಂಬೇಡ್ಕರ್ ಸಮುದಾಯ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ದಸಂಸ ಜಿಲ್ಲಾ ಆಲಗೂಡು ಶಿವಕುಮಾರ್, ಆ.28ರಂದು ಕ್ಷುಲ್ಲಕ ಕಾರಣಕ್ಕೆ ನಡೆದ ದಾಯಾದಿಗಳ ಕಲಹ ನೆಪವಾಗಿಟ್ಟುಕೊಂಡು ವಾರಗಳ ಕಾಲ ಯುವಕರನ್ನು ಪೊಲೀಸ್ ಠಾಣೆಗೆ ಅಲೆದಾಡಿಸಿದ ಪೊಲೀಸರು ಶುಕ್ರವಾರ ಠಾಣೆಯಲ್ಲಿ ಮನಸೋಇಚ್ಛೆ ಥಳಿಸಿ, ಅಮಾನುಷವಾಗಿ ನಡೆದುಕೊಂಡಿದ್ದಾರೆ. ಸಿಎಂ ಸಿದ್ದರಾಮಯ್ಯ ಪ್ರತಿನಿಧಿಸುವ ವರುಣ ಕ್ಷೇತ್ರದ ತುಂಬಲ ಗ್ರಾಮದ ಐವರು ದಲಿತ ಯುವಕರ ಮೇಲೆ ಪೊಲೀಸರು ದೌರ್ಜನ್ಯ ನಡೆಸಿರುವುದು ಅಕ್ಷಮ್ಯವಾಗಿದೆ. ಈ ವೇಳೆ ಯುವಕರ ಜಾತಿ ನಿಂದಿಸಲಾಗಿದೆ. ಹೀಗಾಗಿ ಸಿಪಿಐ, ಎಸ್‌ಐ, ಎಎಸ್‌ಐ ಸೇರಿದಂತೆ ಪೊಲೀಸ್ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೇ ಹೋರಾಟ ನಡೆಸಲಾಗುವುದು ಎಂದರು.

ಸಂತ್ರಸ್ತ ಯುವಕ ಆನಂದ್ ಮಾತನಾಡಿ, ಏಳೆಂಟು ದಿನಗಳ ಕಾಲ ನಮ್ಮನ್ನು ಪೊಲೀಸ್ ಠಾಣೆಗೆ ಅಲೆದಾಡಿಸಿದರಲ್ಲದೇ, ಯಾವುದೇ ದೂರು ಇಲ್ಲದಿದ್ದರೂ ನಮ್ಮ ಮೇಲೆ ಇನ್ಸ್‌ಪೆಕ್ಟರ್ ಧನಂಜಯ, ಎಸ್‌ಐ ಜಗದೀಶ್ ಧೂಳಶೆಟ್ಟಿ, ಎಎಸ್‌ಐ ಶಂಕರ್ ಹಾಗೂ ಇಬ್ಬರು ಪೇದೆಗಳು ನಮ್ಮ ಮೇಲೆ ಮನಬಂದಂತೆ ಹಲ್ಲೆ ನಡೆಸಿದ್ದಾರೆ. ಈ ವೇಳೆ ಜಗದೀಶ ಧೂಳಶೆಟ್ಟಿ ಜಾತಿ ನಿಂದಿಸಿದರು. ಕುಡಿಯಲು ನೀರು ಕೊಡದೆ ನೆಲಕ್ಕೆ ನೀರು ಸುರಿದು ಬರಿಗೈನಲ್ಲಿ ಒರೆಸುವಂತೆ ಹಿಂಸೆ ನೀಡಿದರು. ಅನಗತ್ಯವಾಗಿ ನಮ್ಮ ಮೇಲಾಗಿರುವ ದೌರ್ಜನ್ಯಕ್ಕೆ ಹಿರಿಯ ಅಧಿಕಾರಿಗಳು ನ್ಯಾಯ ನೀಡಬೇಕೆಂದು ಮನವಿ ಮಾಡಿದರು.

ದಲಿತ ಸಂಘರ್ಷ ಸಮಿತಿ ತಾಲೂಕು ಸಂಚಾಲಕ ಕುಕ್ಕೂರು ರಾಜು ಮಾತನಾಡಿದರು. ಸುದ್ದಿಗೋಷ್ಠಿಯಲ್ಲಿ ಸಂತ್ರಸ್ತ ಯುವಕನ ತಾಯಿ ರಾಜೇಶ್ವರಿ, ಸೇವಾಶ್ರಯ ಫೌಂಡೇಶನ್ ಟ್ರಸ್ಟ್ ಅಧ್ಯಕ್ಷ ಆರ್.ಮಣಿಕಂಠ ರಾಜ್‌ಗೌಡ, ಮುಖಂಡರಾದ ಗಾಂಧಿನಗರ ಮಂಜುನಾಥ್, ಆಲಗೂಡು ನಾಗರಾಜಮೂರ್ತಿ, ಶಾಂತಕುಮಾರ್, ಬಿಳಿಗೆರೆ ಹುಂಡಿ ಶಿವಕುಮಾರ್, ಸಿದ್ದರಾಜು, ಉಕ್ಕಲಗೆರೆ ರಾಜು, ಹೊನ್ನಯ್ಯ ಹಾಗೂ ಇತರರಿದ್ದರು.

ಛಾಯಾಚಿತ್ರಗಳು ವೈರಲ್

ನ್ಯಾಯ ಎಲ್ಲಿದೆ? ಎಂಬ ಶೀರ್ಷಿಕೆ ಅಡಿ ಸಾಮಾಜಿಕ ಜಾಲತಾಣ ದಲ್ಲೂ ತಿ.ನರಸೀಪುರ ಪೊಲೀಸರು ತುಂಬಲ ಗ್ರಾಮದ ಐವರು ಯುವಕರ ಮೇಲೆ ಕ್ಷುಲ್ಲಕ ಕಾರಣಕ್ಕೆ ಹಲ್ಲೆ ನಡೆಸಿ ಗಾಯಗೊಳಿಸಿರುವ ಛಾಯಾಚಿತ್ರಗಳು ಸಾಮಾಜಿಕ ಜಾಲತಾಣದಲ್ಲಿ ಕಳೆದ 2 ದಿನಗಳಿಂದ ವೈರಲ್ ಆಗಿವೆ. ಈ ವಿಚಾರ ಸಿಎಂ ಸಿದ್ದರಾಮಯ್ಯ, ಎಂಎಲ್‌ಸಿ ಡಾ.ಯತೀಂದ್ರ ಹಾಗೂ ಹಿರಿಯ ಪೊಲೀಸ್ ಅಧಿಕಾರಿಗಳ ಗಮನಕ್ಕೂ ಹೋಗಿದೆ ಎನ್ನಲಾಗಿದೆ.

ಮೀನುಗಾರರ ಸಮಸ್ಯೆ ಆಲಿಸಿದ ಅಧಿಕಾರಿಗಳು


ಅಧಿಕಾರಿಗಳು ಮೀನುಗಾರರ ಸಮಸ್ಯೆ ಆಲಿಸಿದರು.

ಸರಗೂರು, ಸೆ.8– ತಾಲೂಕಿನ ಹುಸ್ಕೂರು ಹಾಡಿ ಗ್ರಾಮದ ನುಗು ಜಲಾಶಯದ ಹಿನ್ನೀರಿನ ಶ್ರೀನೂರಾಳೇಶ್ವರ ಮೀನುಗಾರರ ಸಹಕಾರ ಸಂಘಕ್ಕೆ ಅಧಿಕಾರಿಗಳಾದ ಖೋಡೆ ಸಮೀರ್ ಪ್ರಕಾಶ್, ಮೈಸೂರು ಜಿಲ್ಲಾ ಉಪ ನಿರ್ದೇಶಕ ಮಂಜುನಾಥ್ ಭೇಟಿ ನೀಡಿ ಮೀನುಗಾರರ ಸಮಸ್ಯೆ ಆಲಿಸಿದರು.

ಈ ವೇಳೆ ಸಂಘದ ಅಧ್ಯಕ್ಷ ಎಸ್.ಆರ್.ಮಣಿಕಂಠ ಮಾತನಾಡಿ, ಹುಸ್ಕೂರು ಹಾಡಿ ರಸ್ತೆ ದುರಸ್ತಿ, ಮೀನುಗಾರಿಗೆ ಇಲಾಖೆ ವತಿಯಿಂದ ದೊರೆಯುವ ಸೌಲಭ್ಯಗಳಾದ ಬಲೆಗಳು, ಹರಿಗೋಲುಗಳು, ಮೀನು ಸರಬರಾಜು ಮಾಡಲು 4 ಚಕ್ರದ ವಾಹನ, ವಸತಿ, ಸಹಕಾರ ಬ್ಯಾಂಕ್‌ನಿಂದ ಸಾಲ ಸೌಲಭ್ಯವಿಲ್ಲದೇ ಮೀನುಗಾರರು ಸಂಕಷ್ಟದಲ್ಲಿದ್ದಾರೆ. ಹೀಗಾಗಿ ಈ ಎಲ್ಲಾ ಸೌಲಭ್ಯಗಳನ್ನು ಕಲ್ಪಿಸಲು ಮುಂದಾಗಬೇಕು. ಸ್ಥಳೀಯ ಮೀನುಗಾರರಿಗೆ ಅರಣ್ಯ ಅಧಿಕಾರಿಗಳಿಂದ ಆಗುತ್ತಿರುವ ತೊಂದರೆ ತಪ್ಪಿಸಬೇಕು ಎಂದು ಮನವಿ ಮಾಡಿದರು.

ಈ ವೇಳೆ ಮಾತನಾಡಿದ ಅಧಿಕಾರಿಗಳು ತಮ್ಮ ಮನವಿ ಪತ್ರವನ್ನು ಮೇಲಾಧಿಕಾರಿಗಳಿಗೆ ಕಳುಹಿಸಿ, ಸೌಲಭ್ಯ ದೊರೆಯುವಂತೆ ಮಾಡಲಾಗುವುದು ಎಂದು ಭರವಸೆ ನೀಡಿದರು.

ಈ ವೇಳೆ ಸಂಘದ ಉಪಾಧ್ಯಕ್ಷ ನಿಂಗನಾಯಕ, ನಿರ್ದೇಶಕರಾದ ಕಾಳಭಟ್ಟಿ, ಸುನೀಲ್ ಹಾಗೂ ಸಲಹೆಗಾರ ಕೃಷ್ಣಮೂರ್ತಿ, ಸಂಘದ ಸದಸ್ಯರು ಉಪಸ್ಥಿತರಿದ್ದರು.

ಮೈಸೂರು ಮಿತ್ರ

ಪೊಲೀಸ್ ಪ್ರಶಿಕ್ಷಣಾರ್ಥಿಗಳಿಗೆ ಹೊಸ ಹೊಸ ತಂತ್ರಜ್ಞಾನ ಆಧಾರಿತ ತರಬೇತಿ ಅಗತ್ಯ

●ಕರ್ನಾಟಕ ಪೊಲೀಸ್ ಅಕಾಡೆಮಿ ನಿರ್ದೇಶಕ ಎಸ್.ಎಲ್. ಚೆನ್ನಬಸವಣ್ಣ ಸಮರ್ಥನೆ ●ಜಾಗತಿಕ ಮಟ್ಟದ ತಂತ್ರಜ್ಞಾನ ಆಧಾರಿತ ವಿಧಾನ, ಪರಿಕರಗಳ ಬಳಕೆಯ ಅನಿವಾರ್ಯತೆ ಬಗ್ಗೆಯೂ ಪ್ರತಿಪಾದನೆ



ಮೈಸೂರಿನ ಕರ್ನಾಟಕ ಪೊಲೀಸ್ ಅಕಾಡೆಮಿಯಲ್ಲಿ ರಾಜ್ಯದ 11 ಪೊಲೀಸ್ ತರಬೇತಿ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಒಳಾಂಗಣ ವಿಭಾಗದ ಪೊಲೀಸ್ ಅಧಿಕಾರಿ ಹಾಗೂ ಬೋಧಕರಿಗೆ ಆಯೋಜಿಸಿದ್ದ 'ಕ್ರಿಯೇಟಿಂಗ್ ದಿ ಫ್ಯೂಚರ್–ಟ್ರಾನ್ಸ್‌ಫಾರ್ಮಿಂಗ್ ಪೊಲೀಸ್ ಟ್ರೈನಿಂಗ್ ಇನ್ ಕರ್ನಾಟಕ' ವಿಷಯ ಕುರಿತು ಮೂರು ದಿನಗಳ ಕಾರ್ಯಾಗಾರದಲ್ಲಿ ಪಾಲ್ಗೊಂಡಿರುವ ಸಿಬ್ಬಂದಿ ತಂಡ.

ಮೈಸೂರು,ಸೆ.8(ಎಂಟಿವೈ)– ಜಗತ್ತಿನಲ್ಲಾಗುತ್ತಿರುವ ಬದಲಾವಣೆಗಳಿಗೆ ಅನುಗುಣವಾಗಿ ಪೊಲೀಸ್ ತರಬೇತಿ ಕೇಂದ್ರಗಳಲ್ಲಿ ಹೊಸ ಹೊಸ ತಂತ್ರಜ್ಞಾನ ಬಳಸಿಕೊಂಡು ಪ್ರಶಿಕ್ಷಣಾರ್ಥಿಗಳಿಗೆ ತರಬೇತಿ ನೀಡುವ ಅವಶ್ಯಕತೆ ಇದೆ ಎಂದು ಕರ್ನಾಟಕ ಪೊಲೀಸ್ ಅಕಾಡೆಮಿಯ ನಿರ್ದೇಶಕ ಎಸ್.ಎಲ್. ಚೆನ್ನಬಸವಣ್ಣ ಹೇಳಿದರು.

ಮೈಸೂರಿನ ಕರ್ನಾಟಕ ಪೊಲೀಸ್ ಅಕಾಡೆಮಿಯಲ್ಲಿ ರಾಜ್ಯದ 11 ಪೊಲೀಸ್ ತರಬೇತಿ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಒಳಾಂಗಣ ವಿಭಾಗದ ಪೊಲೀಸ್ ಅಧಿಕಾರಿ ಹಾಗೂ ಬೋಧಕರಿಗೆ 'ಕ್ರಿಯೇಟಿಂಗ್ ದಿ ಫ್ಯೂಚರ್–ಟ್ರಾನ್ಸ್‌ಫಾರ್ಮಿಂಗ್ ಪೊಲೀಸ್ ಟ್ರೈನಿಂಗ್ ಇನ್ ಕರ್ನಾಟಕ' ವಿಷಯ ಕುರಿತು ಮೂರು ದಿನಗಳ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ರಾಜ್ಯದ ಪೊಲೀಸ್ ತರಬೇತಿ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ತರಬೇತಿದಾರರಿಗೆ ಮೈಸೂರಿನಲ್ಲಿರುವ ಕರ್ನಾಟಕ ಪೊಲೀಸ್ ಅಕಾಡೆಮಿಯಲ್ಲಿ ಮೊಟ್ಟ ಮೊದಲ ಬಾರಿಗೆ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ಬದಲಾವಣೆ ಜಗತ್ತಿನ ನಿಯಮ. ಜಗತ್ತು ಬದಲಾದಂತೆ, ಹೊಸ ಹೊಸ ವಿಷಯ ನಮ್ಮನ್ನು ಆವರಿಸಿಕೊಳ್ಳುತ್ತದೆ. ಹೊಸ ಜಗತ್ತಿಗೆ ಹೊಂದಿಕೊಳ್ಳದ ವ್ಯಕ್ತಿ ಅಥವಾ ಸಮಾಜ ಮೌಲ್ಯ ಕಳೆದುಕೊಳ್ಳುತ್ತದೆ ಎಂದರು.

ದೇಶದ ಅಭಿವೃದ್ಧಿಗೆ ಮಾನವ ಸಂಪನ್ಮೂಲ ಬಹುಮುಖ್ಯ ಪಾತ್ರವಹಿಸುತ್ತದೆ. ಈ ಹಿನ್ನೆಲೆಯಲ್ಲಿ ಹೊಸತನಕ್ಕೆ ಅನುಗುಣವಾದ ಬೋಧನೆ ಹಾಗೂ ತರಬೇತಿಯ ವ್ಯವಸ್ಥೆ ಕಂಡುಕೊಂಡು, ಬದಲಾವಣೆಗಳಿಗೆ ತಕ್ಕಂತೆ ಶಿಬಿರಾರ್ಥಿಗಳನ್ನು ಸಜ್ಜುಗೊಳಿಸಬೇಕಾಗಿದೆ. ಇಂದಿನ ಮಾಹಿತಿ ಹಾಗೂ ತಂತ್ರಜ್ಞಾನ ಯುಗದಲ್ಲಿ, ಬೋಧನೆ ಮತ್ತು ತರಬೇತಿ ವ್ಯವಸ್ಥೆಯಲ್ಲಿ ಹೊಸ ಮಾದರಿ ಮತ್ತು ವಿಧಾನಗಳು ಚಾಲ್ತಿಯಲ್ಲಿವೆ.

ಪೊಲೀಸ್ ಇಲಾಖೆಗೆ ಹೊಸದಾಗಿ ನೇಮಕವಾಗುವ ಹಾಗೂ ಕರ್ತವ್ಯನಿರತ ಪೊಲೀಸ್ ಅಧಿಕಾರಿಗಳಿಗೆ ಗುಣಮಟ್ಟದ ಹಾಗೂ ನವೀನ ರೀತಿಯ ತರಬೇತಿ ನೀಡುವುದಕ್ಕಾಗಿ ರಾಜ್ಯದ ವಿವಿಧ ಪೊಲೀಸ್ ತರಬೇತಿ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಒಳಾಂಗಣ ವಿಭಾಗದ ಪೊಲೀಸ್ ಅಧಿಕಾರಿಗಳಿಗೆ ಜಾಗತಿಕ ಮಟ್ಟದಲ್ಲಿ ಪ್ರಚಲಿತದಲ್ಲಿರುವ ಬೋಧನಾ ಹಾಗೂ ತರಬೇತಿಯ ಕೌಶಲ್ಯದ ಬಗ್ಗೆ ಮನವರಿಕೆ ಮಾಡಿಕೊಡಲು ಕಾರ್ಯಾಗಾರ ಆಯೋಜಿಸಲಾಗಿದೆ ಎಂದರು.

ಈ ಕಾರ್ಯಾಗಾರದಲಿ ಜಾಗತಿಕ ಮಟ್ಟದಲ್ಲಿ ಪ್ರಚಲಿತದಲ್ಲಿರುವ ಹೊಸ ಬಗೆಯ ಬೋಧನಾ ಹಾಗೂ ತರಬೇತಿ ವಿಧಾನಗಳಾದ ಪರಿಕರಗಳ ಬಳಕೆ, ಗುಂಪು ಚರ್ಚೆ ವಿಧಾನ, ಪಾತ್ರದ ಅಭಿನಯ ವಿಧಾನ, ಪ್ರಕರಣ ಅಧ್ಯಯನ ವಿಧಾನಗಳು, ಪರಿಣಾಮಕಾರಿ ಪಠ್ಯಕ್ರಮದ ರಚನೆ, ಪೊಲೀಸ್ ಅಧಿಕಾರಿಗಳ ವ್ಯಕ್ತಿತ್ವ ವಿಕಸನ, ವೃತ್ತಿಪರ ಅಭಿವೃದ್ಧಿ ಹಾಗೂ ಸಾರ್ವಜನಿಕರೊಂದಿಗೆ ಸಂವಹನ ಕೌಶಲ್ಯಗಳ ಬಗ್ಗೆ ಚರ್ಚಿಸಿ, ತರಬೇತಿ ನೀಡಲಾಗುತ್ತದೆ. ಉತ್ತಮ ತರಬೇತುದಾರರಾಗುವ ಜೊತೆಗೆ, ತಮ್ಮ ಘಟಕಗಳಿಗೆ ತರಬೇತಿಗೆ ಬರುವ ಪ್ರಶಿಕ್ಷಣಾರ್ಥಿಗಳಿಗೆ ಹಾಗೂ ಕರ್ತವ್ಯ ನಿರತ ಪೊಲೀಸ್ ಅಧಿಕಾರಿಗಳಿಗೆ ಗುಣಮಟ್ಟದ ತರಬೇತಿ ನೀಡಿ ಅವರನ್ನು ಉತ್ತಮ ಪೊಲೀಸ್ ಅಧಿಕಾರಿಗಳನ್ನಾಗಿ ಮಾಡಬೇಕು ಎಂದು ಸಲಹೆ ನೀಡಿದರು.

ವಿಚಾರ ಸಂಕಿರಣದಲ್ಲಿ ಇಂಟರಾಕ್ಟಿವ್ ಮ್ಯಾನೇಜ್ಮೆಂಟ್ ಡೆವಲಪ್‌ಮೆಂಟ್ ಸಂಸ್ಥೆಯ ಸಂಸ್ಥಾಪಕ ಮತ್ತು ಸಲಹೆಗಾರ ಪ್ರೊ. ಆಶಿಶ್ ಮೋಹನ್, ಭಾರತೀಯ ಭಾಷಾ ಸಂಸ್ಥಾನದ ಮಾಜಿ ನಿರ್ದೇಶಕರು ಹಾಗೂ ರೀಜನಲ್ ಇನ್ಸ್ಟಿಟ್ಯೂಟ್ ಆಫ್ ಎಜುಕೇಶನ್‌ನ ವಿಶ್ರಾಂತ ಪ್ರಾಧ್ಯಾಪಕರಾದ ಪ್ರೊ.ಸಿ.ಜಿ ವೆಂಕಟೇಶಮೂರ್ತಿ, ಸೈಬರ್ ತಜ್ಞ ತೇಜಸ್, ಕರ್ನಾಟಕ ಪೊಲೀಸ್ ಅಕಾಡೆಮಿಯ ಮನೋವಿಜ್ಞಾನ ವಿಷಯದ ಪ್ರಾಧ್ಯಾಪಕ ಡಾ.ಡಿ.ಚಂದ್ರಶೇಖರ, ಪೊಲೀಸ್ ಅಕಾಡೆಮಿಯ ಸೈಬರ್ ಭದ್ರತೆ ವಿಷಯದ ಪ್ರಾಧ್ಯಾಪಕರಾದ ನವೀನ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಪಾಲ್ಗೊಂಡು, ಅಧಿಕಾರಿಗಳಿಗೆ ತರಬೇತಿ ನೀಡಿದರು. ಕರ್ನಾಟಕ ಪೊಲೀಸ್ ಅಕಾಡೆಮಿಯ ಸಹಾಯಕ ನಿರ್ದೇಶಕ ಎಸ್.ಎನ್. ಸಂದೇಶ್ ಕುಮಾರ್ ಅವರು ಸಂಯೋಜನಾಧಿಕಾರಿಯಾಗಿದ್ದು, ಉತ್ತಮವಾಗಿ ಆಯೋಜನೆ ಮಾಡಿದ್ದರು. ಸದರಿ ವಿಚಾರ ಸಂಕಿರಣಕ್ಕೆ ರಾಜ್ಯದ ವಿವಿಧ ಪೊಲೀಸ್ ತರಬೇತಿ ಘಟಕಗಳಿಂದ 40 ಪೊಲೀಸ್ ಅಧಿಕಾರಿಗಳು ಹಾಗೂ ಬೋಧಕ ವರ್ಗದವರು ಪಾಲ್ಗೊಂಡಿದ್ದರು.

ಒಳಮೀಸಲಾತಿ ವಿರೋಧಿಸಿ ನಾಳೆ ಬಂಜಾರ ಸೇವಾ ಸಂಘದಿಂದ ಬೆಂಗಳೂರು ಚಲೋ

ಮೈಸೂರು,ಸೆ.8(ಎಂಟಿವೈ)– ಒಳ ಮೀಸಲಾತಿ ವರ್ಗೀಕರಣ ವಿರೋಧಿಸಿ ಬಂಜಾರ (ಲಂಬಾಣಿ) ಸೇವಾ ಸಂಘದ ವತಿಯಿಂದ ಸೆ.10 ರಂದು ಬೆಂಗಳೂರು ಚಲೋ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಜಿಲ್ಲಾಧ್ಯಕ್ಷ ಎಂ. ಸುಂದರ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೆ.10ರಂದು ಬೆಳಗ್ಗೆ 10.30ಕ್ಕೆ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಸಮಾವೇಶ ನಡೆಯಲಿದೆ. ಬೆಂಗಳೂರು ಚಲೋದಲ್ಲಿ ಪಾಲ್ಗೊಳ್ಳಲು ಮೈಸೂರು ಜಿಲ್ಲೆಯಿಂದ ನೂರಾರು ಮಂದಿ ತೆರಳಲಿದ್ದಾರೆ. ಬೆಂಗಳೂರಲ್ಲಿ ಒಂದು ಲಕ್ಷಕ್ಕೂ ಅಧಿಕ ಮಂದಿ ಸೇರಲಿದ್ದಾರೆ. ಪರಿಶಿಷ್ಟ ಜಾತಿಗಳಲ್ಲಿ ಒಳ ಮೀಸಲಾತಿ ಕಲ್ಪಿಸಲು ರಚನೆಯಾಗಿದ್ದ ನಿವೃತ್ತ ನ್ಯಾ. ನಾಗಮೋಹನ್ ದಾಸ್ ಏಕ ಸದಸ್ಯ ಆಯೋಗ ಇತ್ತೀಚೆಗೆ ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ ಕೆಲ ಬದಲಾವಣೆಯೊಂದಿಗೆ ರಾಜ್ಯ ಸರ್ಕಾರ ಜಾರಿಗೊಳಿಸಿರುವುದು ಆತಂಕಕ್ಕೆ ಕಾರಣವಾಗಿದೆ ಎಂದರು.

ಈ ವರದಿಯ ಸಾರಾಂಶಗಳು ವಾಸ್ತವ ಅಂಕಿ ಸಂಖ್ಯೆಗಳಿಂದ ದೂರವಾಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತಿದೆ. ಶಿಕ್ಷಣ, ಉದ್ಯೋಗ, ಸಾಮಾಜಿಕ ಹಾಗೂ ಆರ್ಥಿಕ ಸ್ಥಿತಿಗತಿಯ ಅಂಕಿ ಅಂಶಗಳು ದಮನಿತ ಸಮುದಾಯಗಳ ಅನುಮಾನಕ್ಕೆ ಕಾರಣವಾಗಿದೆ. ಕೆಲ ಇಲಾಖೆಗಳು ಪರಿಶಿಷ್ಟ ಜಾತಿ ಅಂಕಿ ಸಂಖ್ಯೆ ನೀಡಿಲ್ಲ. ಉದ್ಯೋಗಕ್ಕಾಗಿ ದೂರದ ಊರುಗಳಿಗೆ ಗುಳೇ ಹೋಗಿರುವ ಸಮುದಾಯದವರನ್ನು ಪರಿಗಣಿಸಿಲ್ಲ. ರಾಜ್ಯ ಸರ್ಕಾರ ಅಲೆಮಾರಿ ಸಮುದಾಯವನ್ನು ಯಾವುದೇ ದೃಷ್ಟಿಕೋನದಿಂದಲೂ ಹೊಂದಾಣಿಕೆ ಆಗದ ಬಂಜಾರ, ಭೋವಿ, ಕೊರಚ, ಕೊರಮ ಸಮುದಾಯದ ಸಿ ವರ್ಗದೊಡನೆ ಸೇರಿಸಿ ಅಲೆಮಾರಿಗಳಿಗೆ ಮೀಸಲಾತಿಯಿಂದ ವಂಚನೆ ಮಾಡಲು ಮುಂದಾಗಿದೆ ಎಂದು ಆರೋಪಿಸಿದರು.

ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಹೆಚ್ಚಿಸಿ ಸಿ ವರ್ಗದಲ್ಲಿ ಬರುವ ಬಂಜಾರ, ಕೊರಚ, ಕೊರಮ ಸಮುದಾಯದವರಿಗೂ ಶೇ. 7 ರಷ್ಟು ಮೀಸಲಾತಿ ನಿಗದಿಗೊಳಿಸಲು ಸರ್ಕಾರ ಮುಂದಾಗಬೇಕು ಎಂಬಿವೇ ಮೊದಲಾದ ಬೇಡಿಕೆ ಈಡೇರಿಕೆಗೆ ಅಂದು ಸಮಾವೇಶ ನಡೆಯಲಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಬಂಜಾರ (ಲಂಬಾಣಿ) ಸೇವಾ ಸಂಘದ ಪದಾಧಿಕಾರಿಗಳಾದ ರವಿಕುಮಾರ್ ನಾಯಕ್ ಚೌಹ್ವಾಣ್, ಎಂ. ಅನಿಲ್, ಕೃಷ್ಣನಾಯ್ಕ್ ಉಪಸ್ಥಿತರಿದ್ದರು.

ಸೌಜನ್ಯ ಮೇಲೆ ಅತ್ಯಾಚಾರವೆಸಗಿ ಕೊಲೆ ಮಾಡಿದ್ದು ಮಾವ ವಿಠಲಗೌಡ

●ಸ್ನೇಹಮಯಿ ಕೃಷ್ಣ ಸ್ಫೋಟಕ ಹೇಳಿಕೆ ●ದಕ್ಷಿಣ ಕನ್ನಡ ಎಸ್‌ಪಿಗೆ ದೂರು ಸಲ್ಲಿಸಿದ ಸಾಮಾಜಿಕ ಹೋರಾಟಗಾರ

ಮಂಗಳೂರು: ಸೌಜನ್ಯ ಕೊಲೆ ಮಾಡಿದ್ದು ಆಕೆಯ ಮಾವ ವಿಠಲ ಗೌಡ ಎಂದು ಮೈಸೂರಿನ ಸಾಮಾಜಿಕ ಹೋರಾಟಗಾರ ಸ್ನೇಹಮಯಿ ಕೃಷ್ಣ ಆರೋಪಿಸಿದ್ದಾರೆ. ಈ ಕುರಿತು ದಕ್ಷಿಣ ಕನ್ನಡ ಎಸ್‌ಪಿ ಡಾ.ಅರುಣ್ ಕುಮಾರ್‌ಗೆ ದೂರು ಅರ್ಜಿ ಸಲ್ಲಿಸಿದ್ದಾರೆ.



ಸೌಜನ್ಯಳ ಮೇಲೆ ಸೋದರಮಾವ ವಿಠಲ ಗೌಡಗೆ ಕೆಟ್ಟ ದೃಷ್ಟಿ ಇತ್ತು. ಆಕೆಯನ್ನು ಬಳಸಿಕೊಳ್ಳಲು ಬಹಳ ಸಮಯದಿಂದ ಹವಣಿಸುತ್ತಿದ್ದ. ಒಪ್ಪದೇ ಇದ್ದಂತ ಸಂದರ್ಭದಲ್ಲಿ ಆಕೆ ಮೇಲೆ ಅತ್ಯಾಚಾರ ಮಾಡಿ ಕೊಲೆಗೈದ ಎಂದು ಆರೋಪಿಸಿದ್ದಾರೆ.

ಸಾಂದರ್ಭಿಕ ಸಾಕ್ಷಿಗಳನ್ನು ಇಟ್ಟುಕೊಂಡು ದಕ್ಷಿಣ ಕನ್ನಡ ಎಸ್ಪಿ ತನಿಖೆ ನಡೆಸಬೇಕೆಂದು ಸ್ನೇಹ ಮಯಿ ಕೃಷ್ಣ ದೂರಿನ ಮೂಲಕ ಆಗ್ರಹಿಸಿದ್ದಾರೆ.

ಸೌಜನ್ಯ ತಾಯಿ ಕುಸುಮಾವತಿಗೂ ಸಹೋದರ ವಿಠಲಗೌಡನ ಮೇಲೆ ಸಂಶಯವಿತ್ತು ಸೌಜನ್ಯ ಮೃತದೇಹವನ್ನು ನೋಡಲು ಕುಸುಮಾವತಿ ಹೋಗಿರಲಿಲ್ಲ. ಸಂತೋಷ್ ರಾವ್ ಅವರನ್ನು ಈ ಕೃತ್ಯಕ್ಕೆ ಬಳಸಿ ಕೊಂಡಿರಬಹುದು. ಈ ಬಗ್ಗೆ ನಾನು ಬಹಳ ದಿನಗಳಿಂದ ಮಾಹಿತಿಗಳನ್ನು ಕಲೆ ಹಾಕುತ್ತಿದ್ದೇನೆ ಎಂದು ತಿಳಿಸಿದ್ದಾರೆ.

ಸಂಪೂರ್ಣ ಮರುತನಿಖೆ ನಡೆಸಿ ಆರೋಪಿಗೆ ಶಿಕ್ಷೆ ವಿಧಿಸಬೇಕು. ವಿಠಲ ಗೌಡನ ಮಂಪರು ಪರೀಕ್ಷೆ ಮಾಡಬೇಕು. ಮಂಪರು ಪರೀಕ್ಷೆಯಿಂದ ಸತ್ಯ ಬಹಿರಂಗವಾಗಲಿದೆ ಎಂದು ಹೇಳಿದ್ದಾರೆ.

ಇನ್ನೆರಡು ದಿನ ರಾಜ್ಯಾದ್ಯಂತ ವರ್ಷಧಾರೆ

ಯೆಲ್ಲೋ ಅಲರ್ಟ್ ಘೋಷಣೆ

ಬೆಂಗಳೂರು, ಸೆ.8– ಇತ್ತೀಚೆಗೆ ತಣ್ಣಗಾಗಿದ್ದ ಮಳೆರಾಯ ಮತ್ತೆ ಅಬ್ಬರಿಸಲು ಸಜ್ಜಾಗಿದ್ದು, ಮುಂದಿನ 3 ದಿನಗಳ ಕಾಲ ರಾಜ್ಯಾದ್ಯಂತ ಮಳೆ ಚುರುಕು ಪಡೆಯುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ.

ಕರ್ನಾಟಕದಲ್ಲಿ ಮುಂದಿನ ಮೂರು ದಿನ ಮತ್ತೆ ಮಳೆ ಹೆಚ್ಚಾಗಲಿದೆ. ಕರಾವಳಿಯಲ್ಲಿ ಸಾಧಾರಣ ಮಳೆಯಾಗಲಿದ್ದು, ಉತ್ತರ ಹಾಗೂ ದಕ್ಷಿಣ ಒಳನಾಡಿನ ಸಾಕಷ್ಟು ಕಡೆ ಭಾರಿ ಮಳೆಯಾಗಲಿದೆ. ಈ ಭಾಗಗಳಲ್ಲಿ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.



ಸೆ.8 ರಿಂದ 10ರವರೆಗೂ ರಾಜ್ಯದ ಸಾಕಷ್ಟು ಕಡೆಗಳಲ್ಲಿ ಮತ್ತೆ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದ್ದು, ರಾಜ್ಯದ ವಿಜಯನಗರ, ಶಿವಮೊಗ್ಗ, ಮೈಸೂರು, ಮಂಡ್ಯ, ಕೊಡಗು, ಹಾಸನ, ದಾವಣಗೆರೆ, ಚಿತ್ರದುರ್ಗ, ಚಿಕ್ಕಮಗಳೂರು, ಚಾಮರಾಜನಗರ, ಯಾದಗಿರಿ, ರಾಯಚೂರು, ಕೊಪ್ಪಳ, ಗದಗ, ಧಾರವಾಡ, ಬೆಳಗಾವಿ, ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿಯಲ್ಲಿ ಸಾಧಾರಣ ಮಳೆಯಾಗಲಿದೆ.

ತೊಗರಿಬೆಳೆ ಹಾನಿ: ದುಃಖ ಹೇಳಿಕೊಳ್ಳಲು ಬಂದ ರೈತನ ಮೇಲೆ ಮಲ್ಲಿಕಾರ್ಜುನ ಖರ್ಗೆ ದರ್ಪ

●ಬಿಜೆಪಿ–ಜೆಡಿಎಸ್ ನಾಯಕರಿಂದ ತರಾಟೆ ●ನಿಮ್ಮ ನಡವಳಿಕೆ ಭಾರತ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಪರಂಪರಾಗತ ದರ್ಪಕ್ಕೆ ಸಾಕ್ಷಿ

ಬೆಂಗಳೂರು, ಸೆ. 8(ಕೆಎಂಶಿ)–ತೊಗರಿ ಬೆಳೆ ಹಾನಿಯ ದುಃಖ ತೋಡಿಕೊಳ್ಳಲು ಬಂದ ಬಡ ರೈತನ ಮೇಲೆ ಎಐಸಿಸಿ ಅಧ್ಯಕ್ಷ ಹಾಗೂ ರಾಜ್ಯಸಭೆ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ಹರಿಹಾಯ್ದಿದ್ದಕ್ಕೆ ಬಿಜೆಪಿ ಮತ್ತು ಜೆಡಿಎಸ್ ನಾಯಕರು ಕಾಂಗ್ರೆಸ್ ನಾಯಕನನ್ನು ಹಿಗ್ಗಾಮುಗ್ಗಾ ತರಾಟೆಗೆ ತೆಗೆದುಕೊಂಡಿದ್ದಾರೆ.



ತೊಗರಿ ಬೆಳೆ ಹಾನಿ ದುಃಖ ತೋಡಿಕೊಳ್ಳಲು ಬಂದಂತಹ ಬಡ ರೈತನನ್ನು ಉದ್ದೇಶಿಸಿ ಮಲ್ಲಿಕಾರ್ಜುನ ಖರ್ಗೆ, ನಿನ್ನದು 4 ಎಕ್ರೆ ಹಾಳಾಗಿದೆ. ನನ್ನದು 40 ಎಕ್ರೆ ಹಾಳಾಗಿದೆ, ಪ್ರಚಾರಕ್ಕಾಗಿ ತೊಗರಿ ತೆಗೆದುಕೊಂಡು ಬಂದಿದ್ದೀಯಾ, ತೊಗರಿ ಅಷ್ಟೆ ಅಲ್ಲ, ಉದ್ದು, ಹೆಸರು ಕೂಡ ಹಾಳಾಗಿರುವುದು ನನಗೆ ಗೊತ್ತಿದೆ. ಆರು ಹಡೆದವಳ ಮುಂದೆ ಮೂರು ಹಡೆದವಳು ಹೇಳಿದಂತಾಯಿತು ಎಂದು ರೇಗಾಡಿದ್ದಾರೆ.

ದರ್ಪ ಸರಿಯಲ್ಲ: ಈ ಸಂಬಂಧ ಟ್ವೀಟ್ ಮಾಡಿರುವ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ರಾಜ್ಯಸಭೆ ಪ್ರತಿಪಕ್ಷ ನಾಯಕ ಹಾಗೂ ಅಖಿಲ ಭಾರತ ಕಾಂಗ್ರೆಸ್ ಸಮಿತಿ ಅಧ್ಯಕ್ಷರು ಎಂಬುದನ್ನೂ ಮರೆತು ಬಡ ರೈತನ ಬಗ್ಗೆ ಖರ್ಗೆ ಮಾತನಾಡಿರುವುದನ್ನು ಕಂಡು ಬಹಳ ಬೇಸರವಾಯಿತು, ಇದು ತಮಗೆ ಭೂಷಣವಲ್ಲ.

ರೈತರ ಬಗ್ಗೆ ನಿಮ್ಮಂತಹ ಹಿರಿಯರಿಂದ ಇಂಥ ವರ್ತನೆ ಖಂಡಿತ ನಿರೀಕ್ಷೆ ಮಾಡಿರಲಿಲ್ಲ, ಕಷ್ಟದಲ್ಲಿರುವ ರೈತ ನಿಮ್ಮಂಥವರ ಬಳಿ ಬಂದು ದುಃಖ ತೋಡಿಕೊಳ್ಳದೆ, ಇನ್ನು ಯಾರ ಬಳಿ ಹೋಗಿ ಹೇಳಿಕೊಳ್ಳಬೇಕು.

ದುಃಖ ಹೇಳಿಕೊಳ್ಳಲು ಬಂದ ರೈತನ ಮೇಲೆ ಈ ಪರಿಯ ದರ್ಪ ಅಗತ್ಯವಿರಲಿಲ್ಲ, ನೀವೂ ತೊಗರಿ ರೈತರೇ ಆಗಿರಬಹುದು. ಆದರೆ 40 ಎಕರೆಯಲ್ಲಿ ಬೆಳೆಯುವ ತಮಗೂ, ಒಂದು ಅಥವಾ ಎರಡು ಎಕರೆಯಲ್ಲಿ ಬೆಳೆಯುವ ಆ ಬಡ ರೈತನಿಗೂ ಹೋಲಿಕೆಯೇ, ನಷ್ಟವನ್ನು ಭರಿಸುವ ಶಕ್ತಿ ನಿಮಗಿರುತ್ತದೆ, ರೈತನಿಗೆ ಆ ಶಕ್ತಿ ಇರಬೇಕಲ್ಲವೇ.

ಖರ್ಗೆಯವರೇ, ಹಿರಿಯರಾದ ತಾವು ರೈತನನ್ನು ಅಪಮಾನಿಸಿದ್ದೀರಿ. ಜೊತೆಗೆ ತಾಯಿಯನ್ನೂ ಅಪಮಾನಿಸಿದ್ದೀರಿ, ಇದು ಸರಿಯಲ್ಲ. ಕೊನೇ ಪಕ್ಷ ಆ ವ್ಯಕ್ತಿಗೆ ಸಾಂತ್ವನ ಹೇಳಿ, ಆತನ ಕಣ್ಣೀರು ಒರೆಸಬಹುದಿತ್ತು.

ನಿಮ್ಮ ನಡವಳಿಕೆ ಭಾರತ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಪರಂಪರಾಗತ ದರ್ಪ, ಅಹಂಗೆ ಸಾಕ್ಷಿಯಾಗಿದೆ ಎಂದು ಕಟು ಶಬ್ದಗಳಲ್ಲಿ ಟೀಕಿಸಿದ್ದಾರೆ.

ಉಡಾಫೆ ಧೋರಣೆ: ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಟ್ವೀಟ್ ಮಾಡಿ, ಬೆಳೆ ಹಾನಿಯಿಂದ ಕಂಗೆಟ್ಟು ಹೋದ ಯುವ ರೈತನೊಬ್ಬ ಖರ್ಗೆ ಬಳಿ ನೋವು ತೋಡಿಕೊಳ್ಳಲು ಬಂದಾಗ 'ತೊಗರಿ ಬೆಳೆ ಹಾನಿಯಾಗಿದ್ದನ್ನು ನನ್ನ ಬಳಿ ತೋರಿಸಲು ಬಂದಿದ್ದೀಯಾ' ಎಂದು ಏರು ಧ್ವನಿಯಲ್ಲಿ ಗದರಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಹಾಗೂ ಅಮಿತ್ ಷಾ ಅವರ ಬಳಿ ಕೇಳಿ ಪರಿಹಾರ ತೆಗೆದುಕೊಳ್ಳಿ ಎಂಬ ಬೇಜವಾಬ್ದಾರಿ ಮಾತುಗಳನ್ನಾಡಿದ್ದಾರೆ.

ಯುವ ರೈತನನ್ನು ಅಪಮಾನಿಸಿರುವ ಘಟನೆ ಖರ್ಗೆ ಅವರಿಗೆ ಸಂಕಷ್ಟದಲ್ಲಿರುವ ರೈತರ ಬಗ್ಗೆ ಇರುವ ಅಸಹನೆ ಹಾಗೂ ಉಡಾಫೆ ಧೋರಣೆ ಪ್ರತಿಬಿಂಬಿಸುತ್ತದೆ.

ಖರ್ಗೆ ಅವರ ಈ ನಡೆ ಅವರ ಹಿರಿತನ ಹಾಗೂ ಸುದೀರ್ಘ ರಾಜಕೀಯ ಅನುಭವದ ಘನತೆಯನ್ನು ತಗ್ಗಿಸಿದೆ, ಪ್ರಧಾನಿ ನರೇಂದ್ರ ಮೋದಿಗೆ ಅಹಂಕಾರವೇ ಮುಳ್ಳು ಎನ್ನುವ ಖರ್ಗೆ, ಕಲಬುರಗಿಯಲ್ಲಿ ಯುವ ರೈತನ ಬಗ್ಗೆ ನಡೆದುಕೊಂಡ ರೀತಿಯನ್ನು ಏನೆಂದು ವ್ಯಾಖ್ಯಾನಿಸಬೇಕು, ಯಾರಿಗೆ ಮುಳ್ಳು ಎನ್ನಬೇಕು.

ಸ್ವಾತಂತ್ರ್ಯ ನಂತರ ಭಾರತ ರಾಷ್ಟ್ರೀಯ ಕಾಂಗ್ರೆಸ್, ರೈತನನ್ನು ಸಂಕಷ್ಟ ಪರಿಸ್ಥಿತಿಯಿಂದ ಮೇಲೆತ್ತುವ ಕೆಲಸ ಎಂದೂ ಮಾಡಲಿಲ್ಲ, ಬಡ ರೈತನ ಬಗ್ಗೆ ಮೊಸಳೆ ಕಣ್ಣೀರು ಸುರಿಸಿದ್ದೇ ಹೆಚ್ಚು, ಇದು ನಿಜ ಎಂಬುದಕ್ಕೆ ಅವರು ನಡೆದುಕೊಂಡ ರೀತಿಯೇ ಸಾಕ್ಷಿಯಾಗಿದೆ. ಖರ್ಗೆ ಅವರ ರೈತ ವಿರೋಧಿ ನಡೆಯನ್ನು ಬಿಜೆಪಿ ಖಂಡಿಸುತ್ತದೆ ಎಂದಿದ್ದಾರೆ.

ರೈತರ ಶಾಪ ತಟ್ಟದೇ ಇರದು: ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ್ ಟ್ವೀಟ್ ಮಾಡಿ, ಅಧಿಕಾರದ ಮದದಿಂದ ಕಾಂಗ್ರೆಸ್ ನಾಯಕರು ರೈತರ ಮೇಲೆ ದಬ್ಬಾಳಿಕೆ ಮಾಡಿರುವುದು, ಅನ್ನದಾತರಿಗೆ ಅಪಮಾನ ಮಾಡಿರುವುದು ಇದೇನು ಮೊದಲಲ್ಲ. ಆ ಪಟ್ಟಿ ಬಹಳ ದೊಡ್ಡದಿದೆ. ಆದರೆ ಹಿರಿಯರು, ಎಐಸಿಸಿ ಅಧ್ಯಕ್ಷರೂ ಆದ ಮಲ್ಲಿಕಾರ್ಜುನ ಖರ್ಗೆ ಸಹ ಈಗ ಈ ಪಟ್ಟಿಯಲ್ಲಿ ಸೇರ್ಪಡೆಗೊಂಡಿರುವುದು ಕನ್ನಡ ನಾಡಿನ ಕೃಷಿಕರ ದುರಂತ.

ತೊಗರಿ ಬೇಳೆ ಹಾಳಾಗಿ ನಷ್ಟವಾಗಿದೆ ಎಂಬ ಅಳಲು ತೋಡಿಕೊಳ್ಳಲು ಬಂದ ನೊಂದ ರೈತರ ಬಳಿ ಈ ರೀತಿ ವ್ಯವಹರಿಸುವುದು ಸರಿಯೇ, ರೈತನನ್ನು ಗದರಿಸಿ ಕಳಿಸಿದ್ದೀರಲ್ಲ ಇದೇನಾ ಕಾಂಗ್ರೆಸ್ ಪಕ್ಷ ರೈತರಿಗೆ ಕೊಡುವ ಗೌರವ.

ಸಿದ್ದರಾಮಯ್ಯ ಮೊದಲ ಬಾರಿ ಮುಖ್ಯಮಂತ್ರಿ ಆಗಿದ್ದಾಗ ಕಳಸಾ–ಬಂಡೂರಿ ಅನುಷ್ಠಾನಕ್ಕೆ ಒತ್ತಾಯಿಸಿ ರೈತರು ಪ್ರತಿಭಟನೆ ನಡೆಸಿದಾಗ, ಕಾಂಗ್ರೆಸ್ ಸರ್ಕಾರ ಹಳ್ಳಿ ಹಳ್ಳಿಗೆ ಪೊಲೀಸರನ್ನು ನುಗ್ಗಿಸಿ ರೈತರ ಮೇಲೆ ಲಾಠಿ ಬೀಸಿದ್ದನ್ನು ನಾಡಿನ ರೈತರು ಇನ್ನೂ ಮರೆತಿಲ್ಲ.

ಬೆಳಗಾವಿಯಲ್ಲಿ ರೈತ ವಿಠಲ್ ಅರಬಾವಿ ಆತ್ಮಹತ್ಯೆ ಮಾಡಿಕೊಂಡಾಗ, ಕುಡಿದು ಸತ್ತ ಎಂದು ವ್ಯಂಗ್ಯವಾಡಿದ್ದನ್ನೂ ನಾಡಿನ ರೈತರು ಮರೆತಿಲ್ಲ.

ಸಾಲ ಮನ್ನಾ ಆಸೆಗಾಗಿ ರೈತರು ಬರಗಾಲ ಬರಲಿ ಎಂಬುದಾಗಿ ಆಶಿಸುತ್ತಾರೆ ಎಂಬ ಸಚಿವ ಶಿವಾನಂದ ಪಾಟೀಲ್ ರೈತರಿಗೆ ಅಪಮಾನ ಮಾಡಿದ್ದನ್ನೂ ರೈತರು ಮರೆತಿಲ್ಲ.

ರೈತರ ಸರಣಿ ಆತ್ಮಹತ್ಯೆ ವಿಷಯದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, 'ಎಲ್ಲಿದೆ ಆತ್ಮಹತ್ಯೆ, ಸ್ವಂತಕ್ಕೆ ಆತ್ಮಹತ್ಯೆ ಮಾಡಿಕೊಂಡವರನ್ನೆಲ್ಲಾ ರೈತರು ಅನ್ನೋಕಾಗುತ್ತಾ, ಅದೆಲ್ಲಾ ಸುಳ್ಳು, ರೈತರು ಧಿಕ್ಕಾರ ಕೂಗೋದು ಬಿಟ್ಟು ಬೇರೇನೂ ಮಾಡೋಕ್ಕಾಗಲ್ಲ?' ಎಂದು ರೈತರ ಬಗ್ಗೆ ತುಚ್ಛವಾಗಿ ಮಾತನಾಡಿದ್ದನ್ನೂ ಮರೆತಿಲ್ಲ.

ರೈತ ವಿರೋಧಿ ಕಾಂಗ್ರೆಸ್ ಪಕ್ಷಕ್ಕೆ ನಾಡಿನ ಅನ್ನದಾತರ ಶಾಪ ತಟ್ಟದೇ ಇರದು ಎಂದಿದ್ದಾರೆ.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಮದ್ರಾಸಿ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಮದರಾಸಿ(ತ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಬಾಘಿ–4 (ಹಿಂ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ರುಧಿರಂ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಕೂಲಿ (ಕ)	4 ಪ್ರದರ್ಶನಗಳು
ರಾಜಕಮಲ್	
ಘಾಟಿ (ತ+ತೆ)	2+2 ಪ್ರದರ್ಶನಗಳು
ಸಂಗಂ	
ಸು ಫ್ರಮ್ ಸೋ (ಕ)	4 ಪ್ರದರ್ಶನಗಳು
ಲಿಡೋ	
ನಮೋ ವೆಂಕಟೇಶ(ಕ) + ಬ್ಯಾಡ್‌ಗರ್ಲ್(ತ)	2+2 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ರುಧಿರಂ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಕೂಲಿ (ತ): ಬೆ.7ಕ್ಕೆ, ಮ.3ಕ್ಕೆ, ರಾ.10.15ಕ್ಕೆ, ವಾರ್ –2 (ಹಿಂ): ಬೆ.10.45ಕ್ಕೆ, ಸಂ.6.40ಕ್ಕೆ.
ಸ್ಕ್ರೀನ್ 2	ಕೂಲಿ (ತ): ಬೆ.7ಕ್ಕೆ, ಸು ಫ್ರಂ ಸೋ (ಕ): ಬೆ.10.20ಕ್ಕೆ, ಮ.1.15ಕ್ಕೆ, ಸಂ.4.10ಕ್ಕೆ, ರಾ.7ಕ್ಕೆ, ವಾರ್ –2 (ಹಿಂ): ರಾ.9.50ಕ್ಕೆ.
ಸ್ಕ್ರೀನ್ 3	ಕೂಲಿ (ತ): ಬೆ.7.05ಕ್ಕೆ, ರಾ.8.15ಕ್ಕೆ, ಕೂಲಿ (ಕ): ಬೆ.10.30ಕ್ಕೆ, ಮಹಾವತಾರ ನರಸಿಂಹ (3ಡಿ)(ಕ): ಮ.1.50ಕ್ಕೆ, ವಾರ್ –2 (ಹಿಂ): ಸಂ.4.35ಕ್ಕೆ.
ಸ್ಕ್ರೀನ್ 4	ಕೂಲಿ (ತ): ಬೆ.7ಕ್ಕೆ, ಬೆ.11.55ಕ್ಕೆ, ಮ.3.25ಕ್ಕೆ, ಸಂ.6.45ಕ್ಕೆ, ರಾ.10.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಸು ಫ್ರಂ ಸೋ (ಕ): ಬೆ.10ಕ್ಕೆ, ಮ.3.55ಕ್ಕೆ, ವಾರ್–2 (ಹಿಂ): ಮ.12.40ಕ್ಕೆ, ಕೂಲಿ (ಕ): ಸಂ.6.35ಕ್ಕೆ, ಕೂಲಿ (ತ): ರಾ.9.40ಕ್ಕೆ.
ಸ್ಕ್ರೀನ್ 2	ಕೂಲಿ (ತ): ಬೆ.6.45ಕ್ಕೆ, ಬೆ.10ಕ್ಕೆ, ಸಂ.4.35ಕ್ಕೆ, ರಾ.7.50ಕ್ಕೆ, ವಾರ್–2 (ಹಿಂ): ಮ.1.15ಕ್ಕೆ.
ಸ್ಕ್ರೀನ್ 3	ವಾರ್–2 (ಹಿಂ): ಬೆ.10.05ಕ್ಕೆ, ಸು ಫ್ರಂ ಸೋ (ಕ): ಮ.1.20ಕ್ಕೆ, ರಾ.7.10ಕ್ಕೆ, ಕೂಲಿ (ಕ): ಸಂ.4ಕ್ಕೆ, ಕೂಲಿ (ತ): ರಾ.9.50ಕ್ಕೆ.
ಸ್ಕ್ರೀನ್ 4	ಕೂಲಿ (ತ): ಬೆ.7ಕ್ಕೆ, ಮಹಾವತಾರ ನರಸಿಂಹ (3ಡಿ)(ಕ): ಬೆ.10.15ಕ್ಕೆ, ಸಂ.4ಕ್ಕೆ, ಕೂಲಿ (ಕ): ಮ.12.45ಕ್ಕೆ, ವಾರ್–2 (ಹಿಂ): ಸಂ.6.35ಕ್ಕೆ, ರಾ.9.55ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ಪ್ರತಿಭೆ ಮೆರೆದು ಜಿಲ್ಲಾ ಮಟ್ಟಕ್ಕೆ ಆಯ್ಕೆ



ಮೈಸೂರು ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಮಿಂಚಿನ ಪ್ರದರ್ಶನ ನೀಡುತ್ತಿರುವ ಕ್ರೀಡಾಪಟುಗಳನ್ನು ಕಾಣಬಹುದು

ಮೈಸೂರು, ಆ.8(ಎಂಕೆ)– ಮೈಸೂರು ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಅಪ್ರತಿಮ ಪ್ರತಿಭೆ ಮೆರೆದ ಕ್ರೀಡಾಪಟುಗಳು ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟಕ್ಕೆ ಆಯ್ಕೆಯಾದರು.

ಮೈಸೂರಿನ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಪಂ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ಕ್ರೀಡಾ ಪ್ರಾಧಿಕಾರದ ವತಿಯಿಂದ ಆಯೋಜಿಸಿದ್ದ ಮೈಸೂರು ತಾಲೂಕು ಮಟ್ಟದ ದಸರಾ ಕ್ರೀಡಾಕೂಟದ ಪುರುಷರ ವಿಭಾಗದಲ್ಲಿ 100, 200, 400, 800, 1500, 5000 ಮತ್ತು 10000 ಮೀಟರ್ ಓಟ, ಎತ್ತರ ಜಿಗಿತ, ಗುಂಡು ಎಸೆತ, ಟ್ರಿಪಲ್ ಜಂಪ್, ಜಾವಲೀನ್ ಥ್ರೋ, ಡಿಸ್ಕಸ್ ಥ್ರೋ, 110 ಮೀ. ಹರ್ಡಲ್ಸ್, 4X100 ರಿಲೇ ಮತ್ತು 4X400 ರಿಲೇ ಅಥ್ಲೆಟಿಕ್ಸ್‌ನಲ್ಲಿ ಪರಾಕ್ರಮ ಮೆರೆದರು.

ಮಹಿಳೆಯರು 100, 200, 400, 800, 1500, ಮತ್ತು 3000 ಮೀಟರ್ ಓಟ , ಗುಂಡು ಎಸೆತ, ಟ್ರಿಪಲ್ ಜಂಪ್, ಜಾವಲೀನ್ ಥ್ರೋ, ಡಿಸ್ಕಸ್ ಥ್ರೋ, 100 ಮೀ. ಹರ್ಡಲ್ಸ್, 4X100 ಮತ್ತು 4X400 ಮೀಟರ್ ರಿಲೇ ಸ್ಪರ್ಧೆಗಳಲ್ಲಿ ಭಾಗಹಿಸಿ, ಗೆದ್ದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾದರು.

ಹಾಗೆಯೇ ಗುಂಪು ಪಂದ್ಯಗಳಲ್ಲಿ ವಾಲಿಬಾಲ್, ಫುಟ್‌ಬಾಲ್, ಖೋ–ಖೋ, ಕಬಡ್ಡಿ, ಥ್ರೋಬಾಲ್, ಯೋಗಾಸನ (ವೀರಭದ್ರಾಸನ, ಜಾನು ಶಿರ್ಶಾಸನ, ಹಲಾಸನ ಮತ್ತು ಧನುರಾಸನ) ಸ್ಪರ್ಧೆಗಳು ನಡೆದವು.

ಇ–ರಿಜಿಸ್ಟರ್ ಕಡ್ಡಾಯ: ಇದಕ್ಕೂ ಮುನ್ನ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಕ್ರೀಡಾಕೂಟ ಉದ್ಘಾಟಿಸಿದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಭಾಸ್ಕರ್ ನಾಯಕ್ ಮಾತನಾಡಿ, ಕ್ರೀಡಾಪಟುಗಳು ಕಡ್ಡಾಯವಾಗಿ ಇ–ರಿಜಿಸ್ಟರ್ ಮಾಡಿಸಬೇಕು. ಇಲ್ಲದಿದ್ದರೆ ಜಿಲ್ಲಾ ಮಟ್ಟದಲ್ಲಿ ಭಾಗವಹಿಸಲು ಸಾಧ್ಯವಾಗುವುದಿಲ್ಲ. ಯಾವುದೇ ಗೊಂದಲಗಳಿದ್ದರೂ ನೇರವಾಗಿ ಸಂಪರ್ಕಿಸಿ ಪರಿಹರಿಸಿಕೊಳ್ಳುವಂತೆ ತಿಳಿಸಿದರು. ವಿವಿಧ ಕ್ರೀಡೆಗಳ ತರಬೇತುದಾರರು ಉಪಸ್ಥಿತರಿದ್ದರು.

27ನೇ ವರ್ಷದ ಸವಿನೆನಪು



ನಿಮ್ಮ ಆತ್ಮಕ್ಕೆ ಚಿರಶಾಂತಿ ಬಯಸುವವರು
ಸರೋಜಮ್ಮ, ಡಿ.ವಿಷಕಂಠೇಗೌಡ ಮತ್ತು ಕುಟುಂಬ ವರ್ಗದವರು ಬೆಳಗೊಳ

ಬಿ.ವಿ.ರಾಜೇಂದ್ರಕುಮಾರ್
ನಿಧನ: 09.09.1998 ಬೆಳಗೊಳ

REQUIRE
A mid-size firm required
ACCOUNTANT
with minimum 2 to 3 years experience. Salary commensurate with the skill and experience will be paid. Contact
Mob: 9611418342

ಮೈಸೂರು ಮಿತ್ರ
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

DOCUMENT LOST
I, **Srikanta Murthy,** Resident of Banavadi Village, Chamarajanagar-571127, have lost the Title Deed of Site No. 3149, 12x18 Mtrs, Vijayanagar 2nd Stage, Mysore on 5/5/2025 vide complaint No. 1593645/2025.
Finders Please Contact :
96867 79810

ಹಸಿರು ನಮ್ಮ ಉಸಿರು

WANTED ADVOCATE
Reputed company looking for advocate who can handle civil legal matters, Draft suits and deeds, Legal documentation, Title flow of properties, Case Monitoring, etc.
Location: Mysore
Interested people can
Contact: 9611132076
Mail us resume:
mysore.bbl@thebharathgroup.com

LOOKING FOR SALES EXECUTIVES AND MANAGERS
- **SALES EXECUTIVES :** 2 Nos (1 Year Exp)
- **SALES MANAGER :** 1 No (5 Years Exp)
- **ACCOUNTS & STORES :** 2 Nos (1 Year Exp)
- **SITE ENGINEER :** 2 Nos (1 Year Exp)
- **INTERIOR DESIGNER :** 2 Nos (1 Year Exp)
- **PRODUCTION MANAGER :** 1 No (Interiors with 5 Years Exp)
- **GENERAL MANAGER -** 1 No. (10 Years Exp)

Above positions are vacant in UPVC Windows & Modular Interiors Manufacturing Unit.
INNOVATIVE FENESTRATION SOLUTIONS
Hootagalli Industrial Area, Mysore
Contact : 9900716198 / 9632301790

ಸಾರ್ವಜನಿಕ ಪ್ರಕಟಣೆ

ನಮ್ಮ ಕಕ್ಷಿದಾರರು ಈ ಕೆಳಕಂಡ ಷೆಡ್ಯೂಲ್ ಸ್ವತ್ತನ್ನು ಅದರ ಮಾಲೀಕರಾದ ಮೈಸೂರು ಸಿಟಿ, ತಿಲಕ್‌ನಗರ, ಉಮರ್ ಖಯ್ಯಂ ರಸ್ತೆ, ಸಂಕಲ್ಪ್ ಅಪಾರ್ಟ್‌ಮೆಂಟ್, ಮನೆ ನಂ. ಬಿ–3ರಲ್ಲಿ ವಾಸವಾಗಿರುವ ಲೇಟ್ ಸೈಯದ್ ಮುಮ್ತಾಜ್ ಅಹಮದ್ ರವರ ಮಗಳಾದ ಸುಮಾರು 51 ವರ್ಷ ವಯಸ್ಸಿನ **ಶ್ರೀಮತಿ ಅಂಜುಂ ಅಫ್ಶಾನ್** ಮತ್ತು ಮೈಸೂರು ಸಿಟಿ, ತಿಲಕ್‌ನಗರ, ಲಯನ್ಸ್ ಭವನ್ ರೋಡ್, 2ನೇ ಕ್ರಾಸ್, ಮನೆ ನಂ. 3688/55ರಲ್ಲಿ ವಾಸವಾಗಿರುವ ಲೇಟ್ ಸೈಯದ್ ಮುಮ್ತಾಜ್ ಅಹಮದ್ ರವರ ಮಗನಾದ ಸುಮಾರು 48 ವರ್ಷ ವಯಸ್ಸಿನ **ಶ್ರೀ ಸೈಯದ್ ಮುದಾಸಿರ್ ಅಹಮದ್** ರವರಿಂದ ಖರೀದಿಸಲು ಇಚ್ಛಿಸಿದ್ದು, ಸದರಿ ಷೆಡ್ಯೂಲ್ ಸ್ವತ್ತಿಗೆ ಸಂಬಂಧಪಟ್ಟಂತೆ ಯಾರಿಗಾದರೂ ಹಕ್ಕು, ಬಾಧ್ಯತೆ, ಹಿತಾಸಕ್ತಿ ಇದ್ದಲ್ಲಿ ಹಾಗೂ ತಕರಾರು, ಆಕ್ಷೇಪಣೆಗಳಿದ್ದಲ್ಲಿ ಈ ಪ್ರಕಟಣೆಯಾದ 7 ದಿನಗಳೊಳಗಾಗಿ ಕೆಳಕಂಡ ವಿಳಾಸದಲ್ಲಿ ತಿಳಿಸಿರುವ ವಕೀಲರಿಗೆ ಸಂಬಂಧಪಟ್ಟ ದಾಖಲಾತಿಗಳೊಂದಿಗೆ ತಕರಾರು ಸಲ್ಲಿಸತಕ್ಕದ್ದು, ತಪ್ಪಿದಲ್ಲಿ ನಮ್ಮ ಕಕ್ಷಿದಾರರು ಶುದ್ಧ ಕ್ರಯ ಮಾಡಿಕೊಳ್ಳಲು ಹಕ್ಕುಳ್ಳವರಾಗಿದ್ದು ನಂತರ ಬರುವ ತಕರಾರುಗಳನ್ನು ಪರಿಗಣಿಸುವುದಿಲ್ಲವೆಂದು ಸಮಸ್ತ ಸಾರ್ವಜನಿಕರಿಗೆ ತಿಳಿಸಲಾಗಿದೆ.

: ಷೆಡ್ಯೂಲ್ ಸ್ವತ್ತಿನ ವಿವರ :

ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ಕಸಬಾ ಹೋಬಳಿ, ಆಲನಹಳ್ಳಿ ಗ್ರಾಮದ ಸರ್ವೆ 22. 16/4–2, 16/4–5. 17, 18/1, 18/2, 19/2 505 19/4. 20. 23/1 50 23/4 & 28ರ ಜಮೀನಿನಲ್ಲಿ ಕರ್ನಾಟಕ ಪೊಲೀಸ್ ಗೃಹ ನಿರ್ಮಾಣ ಸಹಕಾರ ಸಂಘ(ನಿ), ಮೈಸೂರು (ಈ ಹಿಂದಿನ PTC and KARP Mounted Company, Mysore Employees Housing Co-Operative Society Ltd., Mysore) ಇವರು ಅಭಿವೃದ್ಧಿಪಡಿಸಿ ನಿರ್ಮಿಸಿರುವ ನೇತಾಜಿನಗರ, ಪೊಲೀಸ್ ಲೇಔಟ್ 1ನೇ ಹಂತ, ರಮ್ಮನಹಳ್ಳಿ, ಪಟ್ಟಣ ಪಂಚಾಯಿತಿಯಿಂದ ಪಡೆದಿರುವ ನಮೂನೆ–3 (ನಿಯಮ 20) ಪ್ರಕಾರ ದಾಖಲೆ ಸಂಖ್ಯೆ : 24349307 ಸ್ವತ್ತಿನ ಸಂಖ್ಯೆ : 6972248093, ನಿರ್ಧರಣಾ ಸಂಖ್ಯೆ : 101/101/59, ನಿವೇಶನ ಸಂಖ್ಯೆ 59 ಉಳ್ಳ ಸ್ವತ್ತಿಗೆ ಚಕ್ಕುಬಂಧಿ:– ಪೂರ್ವಕ್ಕೆ : ನಿವೇಶನ ಸಂಖ್ಯೆ 76, ಪಶ್ಚಿಮಕ್ಕೆ : ರಸ್ತೆ, ಉತ್ತರಕ್ಕೆ : ನಿವೇಶನ ಸಂಖ್ಯೆ 58, ದಕ್ಷಿಣಕ್ಕೆ : ನಿವೇಶನ ಸಂಖ್ಯೆ 60 ಈ ಮಧ್ಯೆ ಇರುವ ಪೂರ್ವ ಪಶ್ಚಿಮ : 60 ಅಡಿ/ 18.288 ಮೀಟರ್ ಮತ್ತು ಉತ್ತರ ದಕ್ಷಿಣ : 40 ಅಡಿ / 12.192 ಮೀಟರ್ ಒಟ್ಟು 2400 ಚದರ ಅಡಿ / 222.9673 ಚದರ ಮೀಟರ್ ಅಳತೆಯುಳ್ಳ ನಿವೇಶನ.

ಸಹಿ/– ಟಿ. ಪೂರ್ಣಕುಮಾರ್, ವಕೀಲರು, ನಂ. 51, 4ನೇ ಮೇನ್, 5ನೇ ಕ್ರಾಸ್, ಜಯನಗರ, ಮೈಸೂರು–570014. ಫೋ.: 8618912513
ದಿನಾಂಕ : 02–09–2025

ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ.,
ನೆಹರು ವೃತ್ತ ಅಶೋಕ ರಸ್ತೆ, ಮೈಸೂರು –570001
ದೂರವಾಣಿ: 2520836,2436460,2421047 ಫ್ಯಾಕ್ಸ್ ನಂ: 0821–2520836

71 ನೇ ವಾರ್ಷಿಕ ಮಹಾಸಭೆಯ ಆಹ್ವಾನ ಪತ್ರಿಕೆ

ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ.. ಮೈಸೂರು ಇದರ 2024–25 ನೇ ಸಾಲಿನ 71 ನೇ ವಾರ್ಷಿಕ ಮಹಾಸಭೆಯನ್ನು ದಿನಾಂಕ: 12.09.2025 ರ ಶುಕ್ರವಾರ ಬೆಳಗ್ಗೆ 11.00 ಗಂಟೆಗೆ ಬ್ಯಾಂಕಿನ ಆಡಳಿತಾಧಿಕಾರಿಯವರಾದ ಶ್ರೀಮತಿ ಕೆ.ಎಂ.ಆಶಾ ರವರ ಅಧ್ಯಕ್ಷತೆಯಲ್ಲಿ ಘಟಿಕೋತ್ಸವ ಭವನ. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮುಕ್ತ ಗಂಗೋತ್ರಿ, ಹುಣಸೂರು ರಸ್ತೆ, ಮೈಸೂರು ಇದರ ಸಂಭಾಗಣದಲ್ಲಿ ಏರ್ಪಡಿಸಲಾಗಿದೆ. ಮಾನ್ಯ ಸದಸ್ಯರೆಲ್ಲರಿಗೂ ಆಹ್ವಾನ ಪತ್ರಿಕೆಯನ್ನು ಅಂಚೆ ಮೂಲಕ ಈಗಾಗಲೇ ಕಳುಹಿಸಿದ್ದು, ಆಹ್ವಾನ ಪತ್ರಿಕೆ ತಲುಪದೇ ಇರುವ ಸದಸ್ಯರು ಈ ಜಾಹೀರಾತನ್ನೇ ಆಹ್ವಾನ ಪತ್ರಿಕೆಯೆಂದು ಪರಿಗಣಿಸಿ ಬ್ಯಾಂಕಿನ ಎಲ್ಲಾ ಸದಸ್ಯರು ಮಹಾಸಭೆಗೆ ಹಾಜರಾಗಿ ಯಶಸ್ವಿಗೊಳಿಸಬೇಕಾಗಿ ಕೋರಿದೆ.

ಸೂಚನೆ:
ಮಹಾಸಭೆಗೆ ಪ್ರತಿನಿಧಿಯಾಗಿ ಭಾಗವಹಿಸುವ ಸದಸ್ಯ ಸಹಕಾರ ಸಂಘಗಳು ಮಹಾಸಭೆಯ ಆಹ್ವಾನ ಪುಸ್ತಕದಲ್ಲಿ ಲಗತ್ತಿಸಿರುವ ನಮೂನೆಯಲ್ಲಿ ಆಡಳಿತ ಮಂಡಳಿಯಲ್ಲಿ ನಿರ್ಣಯ ಕೈಗೊಂಡು ಪ್ರತಿನಿಧಿಯ ವಿವರಗಳನ್ನು ಭರ್ತಿ ಮಾಡಿದ ನಮೂನೆಯೊಂದಿಗೆ ಮಹಾಸಭೆಗೆ ಹಾಜರಾಗತಕ್ಕದ್ದು.

ಸಹಿ/–
ಮುಖ್ಯ ಕಾರ್ಯನಿರ್ವಹಣಾಧಿಕಾರಿ
ಎಂ ಸಿ ಡಿ ಸಿ ಸಿ ಬ್ಯಾಂಕ್ ನಿ., ಮೈಸೂರು

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ,
ಜಿಲ್ಲಾ ಕಾರ್ಯಕ್ರಮ ನಿರ್ವಹಣ ಘಟಕ
ಚಾಮರಾಜನಗರ ಜಿಲ್ಲೆ, ಚಾಮರಾಜನಗರ
308, ಮೂರನೇ ಮಹಡಿ, ಜಿಲ್ಲಾಡಳಿತ ಭವನ, ಶ್ರೀ ಬಿ.ರಾಚಯ್ಯ ಜೋಡಿ ರಸ್ತೆ, ಚಾಮರಾಜನಗರ ಜಿಲ್ಲೆ, ಚಾಮರಾಜನಗರ.
E-Mail ID: dtokacrn@rntcp.org Ph. No: 08226-355162.

ಸಂಖ್ಯೆ ಜಿಆಕುಕಸೊ/ಚಾ.ನ/ಎನ್.ಹೆಚ್.ಎಂ/ಎಂ.ಎಂ.ಯು/ನೇಮಕಾತಿ/01/2025–26 ದಿನಾಂಕ: 08–09–2025

–: ಪ್ರಕಟಣೆ:–

ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಸಂಚಾರಿ ಆರೋಗ್ಯ ಘಟಕಗಳಿಗೆ ಈ ಕೆಳಕಂಡಂತೆ ವಿವರಿಸಿರುವ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನಿಯಮಾನುಸಾರ ರೋಸ್ಟರ್ ಮತ್ತು ಮೆರಿಟ್ ಆಧಾರದಲ್ಲಿ ನೇಮಕಾತಿ ಮಾಡಿಕೊಳ್ಳುವ ಸಂಬಂಧ ನೇರ ಸಂದರ್ಶನಕ್ಕೆ ಕರೆಯಲಾಗಿದ್ದು, ಸದರಿ ಹುದ್ದೆಗಳಿಗೆ ಆಸಕ್ತರು ದಿನಾಂಕ: 16–09–2025 ರಂದು ಬೆಳಿಗ್ಗೆ 11–00 ಗಂಟೆ ಯಿಂದ ಸಂಜೆ 4–00 ಗಂಟೆಯವರೆಗೆ ನಡೆಯುವ ನೇರ ಸಂದರ್ಶನದಲ್ಲಿ ಹಾಜರಾಗುವುದು ಅರ್ಜಿಗಳನ್ನು, ಬೆಳಿಗ್ಗೆ 10–00 ಗಂಟೆಯಿಂದ ಮಧ್ಯಾಹ್ನ 1–00 ಗಂಟೆಯವರೆಗೆ ಮಾತ್ರ ನೀಡಲಾಗುವುದು, ನಂತರ ಬಂದ ಅಭ್ಯರ್ಥಿಗಳಿಗೆ ಅರ್ಜಿಗಳನ್ನು ನೀಡಲಾಗುವುದಿಲ್ಲ.

ಕ್ರ.ಸಂ.	ಹುದ್ದೆ	ಮೀಸಲಾತಿ	ವಿದ್ಯಾರ್ಹತೆ ಹಾಗೂ ಅನುಭವ	ವಯೋಮಿತಿ
1	ಎಂ.ಬಿ.ಬಿ.ಎಸ್ ವೈದ್ಯರು (4 ಹುದ್ದೆ)	ಪ.ಜಾತಿ (ಪ್ರ.ಎ)–01 ಸಾ.ಅ (ಮಹಿಳೆ) – 01 ಪ.ಪಂ. (ಗ್ರಾ.ಅ)–01 ಸಾ.ಅ. (ಅಂಗವಿಕಲ)–01	* ಎಂ.ಬಿ.ಬಿ.ಎಸ್ ಉತ್ತೀರ್ಣರಾಗಿರಬೇಕು ಹಾಗೂ ಕಡ್ಡಾಯವಾಗಿ Internship ಪೂರೈಸಿರಬೇಕು. * ಕಡ್ಡಾಯವಾಗಿ ಕೆ.ಎಂ.ಸಿ ನೊಂದಣಿಯಾಗಿರಬೇಕು. * ಸಂಬಂಧಪಟ್ಟ ವಿಶ್ವವಿದ್ಯಾನಿಲಯದಿಂದ Convocation / Degree Certificate ಹೊಂದಿರಬೇಕು.	65
2	ಶುಶ್ರೂಷಕ (4 ಹುದ್ದೆ)	ಸಾ.ಅ (ಮಹಿಳೆ) – 01 ಪ್ರವರ್ಗ–2ಎ (ಗ್ರಾ.ಅ)–01 ಸಾ.ಅ. (ಮಾ.ಸೈ)–01 ಪ.ಪಂ. (ಇತರೆ)–01	* ಜಿ.ಎನ್.ಎಂ ನರ್ಸಿಂಗ್/ ಬಿ.ಎಸ್ಸಿ ನರ್ಸಿಂಗ್ * ಕಡ್ಡಾಯವಾಗಿ ನರ್ಸಿಂಗ್ ಕೌನ್ಸಿಲ್‌ನಲ್ಲಿ ನೊಂದಣಿಯಾಗಿರಬೇಕು.	45
3	ಪ್ರಯೋಗಶಾಲ ತಂತ್ರಜ್ಞರು / ವ್ಯವಸ್ಥಾಪಕರು (4 ಹುದ್ದೆ)	ಪ.ಪಂ (ಗ್ರಾ.ಅ)–01 ಸಾ.ಅ (ಅಂಗವಿಕಲ)–01 ಪ್ರವರ್ಗ–1 (ಮಹಿಳೆ)–01 ಸಾ.ಅ (ಗ್ರಾ.ಅ)–01	* ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆಯನ್ನು ಹೊಂದಿರಬೇಕು ಮತ್ತು ಕರ್ನಾಟಕ ರಾಜ್ಯ ಅರೆ ವೈದ್ಯಕೀಯ ಮಂಡಳಿಯು ನಡೆಸುವ ಪ್ರಯೋಗ ಶಾಲಾ ತಂತ್ರಜ್ಞತೆಯಲ್ಲಿ ಮೂರು ವರ್ಷದ ಡಿಪ್ಲೋಮಾ ಹೊಂದಿರಬೇಕು ಅಥವಾ * ದ್ವಿತೀಯ ಪಿ.ಯು.ಸಿ.ಯಲ್ಲಿ ವಿಜ್ಞಾನ ವಿಷಯದಲ್ಲಿ ಉತ್ತೀರ್ಣ ಮತ್ತು ಕರ್ನಾಟಕ ರಾಜ್ಯ ಅರೆ ವೈದ್ಯಕೀಯ ಮಂಡಳಿಯು ನಡೆಸುವ ಪ್ರಯೋಗ ಶಾಲಾ ತಂತ್ರಜ್ಞತೆಯಲ್ಲಿ ಎರಡು ವರ್ಷದ ಡಿಪ್ಲೋಮಾ ಹೊಂದಿರಬೇಕು. * ಪ್ರಯೋಗ ಶಾಲಾ ತಂತ್ರಜ್ಞರು ಕಡ್ಡಾಯವಾಗಿ ಕರ್ನಾಟಕ ರಾಜ್ಯ ಅರೆ ವೈದ್ಯಕೀಯ ಮಂಡಳಿಯ ನೋಂದಣಿ ಹೊಂದಿರಬೇಕು.	45

ಷರತ್ತು ಮತ್ತು ನಿಬಂಧನೆಗಳು : 1) ಮೇಲ್ಕಂಡ ಎಲ್ಲಾ ಹುದ್ದೆಗಳಿಗೂ ಕನಿಷ್ಠ 2 ವರ್ಷಗಳ ಸೇವೆ ಸಲ್ಲಿಸಿರುವ ಅನುಭವವನ್ನು ಹೊಂದಿರಬೇಕು. 2) ಈ ಹುದ್ದೆಗಳು 7 ತಿಂಗಳುಗಳ ಅವಧಿಗೆ ಮಾತ್ರ ಸೀಮಿತವಾಗಿರುತ್ತದೆ. 3) ನೇಮಕಾತಿಯನ್ನು ರೋಸ್ಟರ್ ಕಂ ಮೆರಿಟ್ ಆಧಾರದ ಮೇಲೆ ಮಾಡಲಾಗುತ್ತದೆ. 4) ಆಯ್ಕೆಯಾದ ಅಭ್ಯರ್ಥಿಗಳಿಗೆ ವೇತನವನ್ನು ಕಾರ್ಮಿಕ ಇಲಾಖೆಯು ನಿಗಧಿಪಡಿಸಿರುವ ವಲಯವಾರು ಕನಿಷ್ಠ ವೇತನವನ್ನು ಪಾವತಿಸಲಾಗುವುದು 5) ಮೇಲ್ಕಂಡ ಎಲ್ಲಾ ಹುದ್ದೆಗಳಿಗೆ ಸರ್ಕಾರದಿಂದ ಮಾನ್ಯತೆ ಪಡೆದ ಸಂಸ್ಥೆಗಳಿಂದ ಕಂಪ್ಯೂಟರ್ ಸರ್ಟಿಫಿಕೇಟ್ ಕಡ್ಡಾಯವಾಗಿ ಲಗತ್ತಿಸಬೇಕು. 6) ಎನ್.ಹೆಚ್.ಎಂ ಷರತ್ತು ಮತ್ತು ನಿಬಂಧನೆಗಳು ಅನ್ವಯಿಸುತ್ತದೆ. 7) **Karnataka State Health & HWF Unit RCH, SBI MADHAVANAGAR, Bangalore** ಹೆಸರಲ್ಲಿ ರೂ. **50/-** ಗಳ **Registration Fee** ಡಿಡಿಯನ್ನು ಸಲ್ಲಿಸಿ ನೇರ ಸಂದರ್ಶನಕ್ಕೆ ಹಾಜರಾಗುವುದು (ಡಿಡಿ ಎಸ್.ಬಿ.ಐ ಬ್ಯಾಂಕ್‌ನಿಂದ ಪಡೆದಿರಬೇಕು.). 8) ಅಭ್ಯರ್ಥಿಗಳು ಸಂದರ್ಶನದ ಸಮಯದಲ್ಲಿ ಈ ಕೆಳಕಂಡ ಮೂಲ ದಾಖಲಾತಿಗಳು ಹಾಗೂ ಅವುಗಳ ಜೆರಾಕ್ಸ್ ಪ್ರತಿಗಳನ್ನು ಸ್ವಯಂ ದೃಢೀಕರಿಸಿ ಸಂದರ್ಶನ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸುವುದು. ಅ) ವಿದ್ಯಾರ್ಹತೆಯ ಪ್ರಮಾಣ ಪತ್ರ ಆ) ಎಲ್ಲಾ ವರ್ಷಗಳ ಸೆಮಿಸ್ಟರ್ ಅಂಕಪಟ್ಟಿ ಇ) ರಾಜ್ಯ ಬೋರ್ಡ್‌ನಿಂದ ಪಡೆದಿರುವ ನೋಂದಣಿ ಪ್ರಮಾಣ ಪತ್ರ ಈ) ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ. ಉ) ಗುರುತಿನ ಚೀಟಿ (ಚುನಾವಣೆ ಗುರುತಿನ ಚೀಟಿ / ಆಧಾರ್ ಕಾರ್ಡ್). ಊ) ಚಾಲ್ತಿ ಯಲ್ಲಿರುವ ಜಾತಿ ಪ್ರಮಾಣ ಪತ್ರವನ್ನು ಲಗತ್ತಿಸಬೇಕು. ಋ) ಹುದ್ದೆಗೆ ಸಂಬಂಧಿಸಿದ ಎಲ್ಲಾ ಪೂರಕ ಚಾಲ್ತಿಯಲ್ಲಿರುವ ದಾಖಲೆಗಳನ್ನು ಸಲ್ಲಿಸುವುದು. 9) ಅರ್ಹ ಮೀಸಲಾತಿ ಅಭ್ಯರ್ಥಿಗಳು ದೊರೆಯದೇ ಇದ್ದ ಸಂದರ್ಭಗಳಲ್ಲಿ ಸಾಮಾನ್ಯ ಅಭ್ಯರ್ಥಿಗಳನ್ನು ನೇಮಕ ಮಾಡಿಕೊಳ್ಳ ಲಾಗುವುದು. 10) ಮೀಸಲಾತಿ ಪಡೆಯಲು ಇಚ್ಛಿಸುವವರು ಸಂಬಂಧಪಟ್ಟ ಆಯಾಯ ಇಲಾಖೆ/ ಸಂಸ್ಥೆಯವರಿಂದ ಪಡೆದ ಚಾಲ್ತಿಯಲ್ಲಿರುವ ಪ್ರಮಾಣಪತ್ರಗಳನ್ನು ಕಡ್ಡಾಯವಾಗಿ ಸಲ್ಲಿಸಬೇಕು (ಅಂಗವಿಕಲ, ಗ್ರಾಮೀಣ, ಮಾಜಿ ಸೈನಿಕ). 11) ದಿನಾಂಕ : 16–09–2025 ರಂದು ನಡೆಯುವ ನೇರ ಸಂದರ್ಶನ ಪ್ರಕ್ರಿಯೆಯು ಮುಗಿದ ಬಳಿಕವೂ ವೈದ್ಯರು ಹುದ್ದೆಯು ಭರ್ತಿಯಾಗದಿದ್ದಲ್ಲಿ ಸದರಿ ಹುದ್ದೆಯನ್ನು ಮೇಲೆ ನಿಗಧಿಪಡಿಸಿರುವ ಅವಧಿಗೆ ನೇರ ಸಂದರ್ಶನ ಮೂಲಕ ಭರ್ತಿ ಮಾಡಿಕೊಳ್ಳಲಾಗುವುದು ಹಾಗೂ ಪ್ರಕಟಣೆಯಲ್ಲಿ ಹೊರಡಿಸಿರುವ ಹುದ್ದೆಗಳ ಪೈಕಿ ಖಾಲಿಯಾದ ಪಕ್ಷದಲ್ಲಿ ಕಾಯ್ದಿರಿಸಿದ ಪಟ್ಟಿಯಲ್ಲಿರುವ ಅಭ್ಯರ್ಥಿಗಳನ್ನು ನಿಯಾಮಾನುಸಾರ ನೇಮಕಾತಿಗೆ ಪರಿಗಣಿಸಲಾಗುವುದು. 12) ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.

ಸಹಿ/– ಸದಸ್ಯ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿಗಳು, ನೇಮಕಾತಿ ಸಮಿತಿ, ಚಾಮರಾಜನಗರ ಜಿಲ್ಲೆ, ಚಾಮರಾಜನಗರ.
ಸಂ:ವಾಸಾಸಂಇ:ಚಾನಗರ:329:2025–26

ಪಿ ಎಂ ಶ್ರೀ ಕೇಂದ್ರೀಯ ವಿದ್ಯಾಲಯ, ಮಾದಾಪುರ ಚಾಮರಾಜನಗರ
पीएम श्री केंद्रीय विद्यालय, मादापुरा पोस्ट,चामराजनगर-५७१३१३
PM SHRI KENDRIYA VIDYALAYA CHAMARAJANAGAR
Madapura Post, Chamarajanagar, - 571313 (Karnataka)
ई-मेल/e-mail:kvchamarajanagaramedia@gmail.com दूरभाष/Tele. No.: 08226-297179

WALK-IN-INTERVIEW

Walk-In-Interview for the following post will be conducted on 15/09/2025 at 9 am for the Academic Year 2025-26

Post	Qualification	Roles and Responsibilities	Consolidated Salary/Monthly
ATL Instructor	• B.E, B Tech Electronics & Communication Engineering • Minimun One Year Experience	• Functioning: To take care of the functioning of ATL Lab • Monitoring the ATL Lab Activities and train the students	25000/-

1. Eligible candidates may attend interview with complete Bio-Data, Original documents and one set of self-attested qualification certificates.
2. Candidates from the selected panel will be appointed on need basis.
3. The posts are purely contractual and other terms & conditions applicable as per KVS rules.
4. No TA/DA will be admissible for interview.

Sd/-
प्राचार्य